(ಆ) ಮುಳಬಾಗಿಲು ವಿಧಾನಸಭಾ ಕ್ಷೇತ್ರವು ಪ.ಜಾ. ಮೀಸಲು ವಿಧಾನಸಭಾ ಕ್ಷೇತ್ರವಾಗಿದ್ದು, ಈ ಕ್ಷೇತ್ರಕ್ಕೆ ಬಸವ ವಸತಿ ಯೋಜನೆಯಡಿ ೨ ಸಾವಿರ ಹಾಗೂ ಡಾ॥ ಬಿ.ಆರ್. ಅಂಬೇಡ್ಕರ್ ನಿವಾಸ್ ಗ್ರಾಮೀಣ ವಸತಿ ಯೋಜನೆಯಡಿ ೪ ಸಾವಿರ ಮನೆಗಳನ್ನು ಮಂಜೂರು ಮಾಡುವಂತೆ ಕೋರಿ ಹಲವು ಬಾರಿ ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಕ್ಷೇತ್ರಕ್ಕೆ ಪ್ರಸ್ತಾವನೆಯಲ್ಲಿ ಕೋರಿರುವ ೬ ಸಾವಿರ ಮನೆಗಳನ್ನು ಯಾವ ಕಾಲಮಿತಿಯೊಳಗೆ ಮಂಜೂರು ಮಾಡಲಾಗುವುದು ? (ವಿವರ ನೀಡುವುದು)

## ಬೆಳೆ ಪರಿಹಾರ

**ಶ್ರೀ ದರ್ಶನ್ ಧ್ರುವನಾರಾಯಣ (ನಂಜನಗೂಡು) –**

೧೨ (೪೧೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೨೪–೨೫ ಮತ್ತು ೨೦೨೫–೨೬ನೇ ಸಾಲಿನ ಮುಂಗಾರಿನಲ್ಲಿ ಸುರಿದ ಭಾರಿ ಮಳೆಯಿಂದಾಗಿ ನಂಜನಗೂಡು ತಾಲ್ಲೂಕಿನ ರೈತರು ಬೆಳೆ ಹಾನಿ ಪರಿಹಾರ ಕೋರಿ ಪರಿಹಾರ ತಂತ್ರಾಂಶದಲ್ಲಿ ಅರ್ಜಿಯನ್ನು ಸಲ್ಲಿಸಿದ್ದು, ಈ ಪೈಕಿ ಎಷ್ಟು ಅರ್ಜಿದಾರರಿಗೆ ಪರಿಹಾರ ವಿತರಿಸಲಾಗಿದೆ ;

(ಆ) ಈ ಸಾಲುಗಳಲ್ಲಿ ಸರ್ಕಾರದ ಪರಿಹಾರ ತಂತ್ರಾಂಶದಲ್ಲಿ ೨೨೨ ಸಂತ್ರಸ್ಥ ರೈತರುಗಳು ಬೆಳೆಗಳು ಹಾಳಾಗಿರುವ ಬಗ್ಗೆ ನಮೂದು ಮಾಡಿದ್ದು, ಈ ಪೈಕಿ ೮೨ ರೈತರಿಗೆ ಮಾತ್ರ ಪರಿಹಾರ ವಿತರಿಸಿದ್ದು, ಉಳಿದ ೧೪೦ ಅರ್ಜಿದಾರರುಗಳಿಗೆ ಈವರೆಗೂ ಪರಿಹಾರ ವಿತರಿಸದಿರಲು ಕಾರಣಗಳೇನು ;

(ಇ) ಬಾಕಿ ಉಳಿದ ಅರ್ಜಿದಾರರುಗಳಿಗೆ ಯಾವ ಕಾಲಮಿತಿಯಲ್ಲಿ ಪರಿಹಾರ ವಿತರಿಸಲು ಸರ್ಕಾರ ಕ್ರಮ ಕೈಗೊಳ್ಳುವುದು ? (ವಿವರ ನೀಡುವುದು)

## ಮನೆಗಳ ಹಂಚಿಕೆ

**ಶ್ರೀಮತಿ ಕರೆಮ್ಮ (ದೇವದುರ್ಗ) –**

೧೩ (೯೭) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ದೇವದುರ್ಗ ವಿಧಾನಸಭಾ ಕ್ಷೇತ್ರಕ್ಕೆ ಕಳೆದ ಮೂರು ವರ್ಷಗಳಲ್ಲಿ ವಿವಿಧ ಯೋಜನೆಗಳಡಿ ಎಷ್ಟು ಮನೆಗಳನ್ನು ಹಂಚಿಕೆ ಮಾಡಲಾಗಿದೆ ; (ಪಂಚಾಯ್ತಿವಾರು ವಿವರಗಳನ್ನು ನೀಡುವುದು)

(ಆ) ಪಂಚಾಯ್ತಿಗಳಿಗೆ ವಸತಿ ಗುರಿಗಳನ್ನು ನಿಗದಿ ಮಾಡಿ ಹಂಚಿಕೆ ಮಾಡುವಾಗ ಯಾವ ಮಾನದಂಡಗಳನ್ನು ಅನುಸರಿಸಲಾಗಿದೆ ;

(ಇ) ಕಳೆದ ಮೂರು ವರ್ಷಗಳಲ್ಲಿ ಯಾರ ಶಿಫಾರಸ್ಸಿನ ಮೇರೆಗೆ ದೇವದುರ್ಗಕ್ಕೆ ವಸತಿಗಳನ್ನು ಹಂಚಿಕೆ ಮಾಡಲಾಗಿದೆ ; (ಪೂರ್ಣ ಮಾಹಿತಿಯನ್ನು ಒದಗಿಸುವುದು)

(ಈ) ಕಳೆದ ೩ ವರ್ಷಗಳಲ್ಲಿ ಜಿ.ಪಿ.ಎಸ್. ಮಾಡಿರುವ ಮತ್ತು ಮಾಡದೇ ಇರುವ ಮನೆಗಳ ಸಂಖ್ಯೆ ಎಷ್ಟು ; (ವಿವರಗಳನ್ನು ನೀಡುವುದು)

(ಉ) ಜಿ.ಪಿ.ಎಸ್. ಮಾಡಿದ್ದರೂ ಈವರೆಗೆ ಫಲಾನುಭವಿಗಳ ಖಾತೆಗೆ ಅನುದಾನದ ಹಣ ಜಮೆಯಾಗದಿರಲು ಕಾರಣವೇನು ; ಯಾವ ಕಾಲಮಿತಿಯಲ್ಲಿ ಫಲಾನುಭವಿಗಳ ಖಾತೆಗೆ ಅನುದಾನದ ಹಣ ಜಮಾ ಮಾಡಲಾಗುವುದು ;

(ಊ) ಜಿ.ಪಿ.ಎಸ್. ಮಾಡದೇ ಇರುವ ಫಲಾನುಭವಿಗಳ ಕಾಮಗಾರಿಗಳ ಜಿ.ಪಿ.ಎಸ್. ಯಾವಾಗ ಮಾಡಲಾಗುವುದು ? (ಮಾಹಿತಿ ನೀಡುವುದು)

## ಕಾಮಗಾರಿಗೆ ಅನುದಾನ

**ಶ್ರೀ ಲಕ್ಷ್ಮಣ ಸಂಗಪ್ಪ ಸವದಿ (ಅಥಣಿ) –**

೧೪ (೪೨೦) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ಪಶು ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಈಗಾಗಲೇ ಪ್ರಥಮ ವರ್ಷಕ್ಕೆ ಪ್ರವೇಶಾತಿ ಪಡೆದು ಶೈಕ್ಷಣಿಕ ತರಗತಿಗಳು ಪ್ರಾರಂಭಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಮಹಾವಿದ್ಯಾಲಯದ ಪ್ರಾಂಶುಪಾಲರು ಹಾಗೂ ಸಿಬ್ಬಂದಿಗಳಿಗೆ ವಸತಿ ಗೃಹಗಳು ಮತ್ತು ಎರಡನೇ ಮತ್ತು ಮೂರನೇ ವರ್ಷದ ವಿದ್ಯಾರ್ಥಿ–ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ವಸತಿ ನಿಲಯಗಳ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಈ ವಸತಿ ಗೃಹ ಹಾಗೂ ಪ್ರತ್ಯೇಕ ವಸತಿ ನಿಲಯಗಳ ನಿರ್ಮಾಣ ಕಾಮಗಾರಿಗಳನ್ನು ಯಾವಾಗ ಪ್ರಾರಂಭಿಸಲಾಗುವುದು ;

(ಈ) ಈ ಪಶು ವೈದ್ಯಕೀಯ ಮಹಾವಿದ್ಯಾಲಯದ ಕಾಲೇಜು ಆವರಣದೊಳಗಿನ ರಸ್ತೆ ನಿರ್ಮಾಣ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಉ) ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಈ ರಸ್ತೆ ನಿರ್ಮಾಣ ಕಾಮಗಾರಿಗೆ ಅನುದಾನ ಮಂಜೂರು ಮಾಡಿ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು ? (ವಿವರ ನೀಡುವುದು)

## ವಸತಿ ಯೋಜನೆ

**ಶ್ರೀ ಸಿಮೆಂಟ್ ಮಂಜು (ಸಕಲೇಶಪುರ) –**

೧೫ (೩೩೬) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೨೩–೨೪ ಹಾಗೂ ೨೦೨೪–೨೫ನೇ ಸಾಲಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ರಾಜ್ಯದ ವಸತಿ ರಹಿತರಿಗೆ ಮಂಜೂರಾದ ಮನೆಗಳೆಷ್ಟು ; (ಯೋಜನೆವಾರು ಮನೆಗಳ ಮಾಹಿತಿ ಒದಗಿಸುವುದು)

(ಆ) ಈ ಪೈಕಿ ಕಳೆದ ೨ ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ವಿವಿಧ ವಸತಿ ಯೋಜನೆಯಡಿ ಸರ್ಕಾರ ಮಂಜೂರು ಮಾಡಿರುವ ಮನೆಗಳೆಷ್ಟು ; (ತಾಲ್ಲೂಕುವಾರು, ವರ್ಷವಾರು ಮಾಹಿತಿ ಒದಗಿಸುವುದು)

(ಇ) ಸಕಲೇಶಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಅನೇಕ ಕುಟುಂಬಗಳು ಕಚ್ಚಾ ಮನೆಗಳಲ್ಲಿ ವಾಸವಾಗಿದ್ದು ವಸತಿ ಮಂಜೂರಾತಿಗಾಗಿ ಅರ್ಜಿ ಸಲ್ಲಿಸಿ ಮಂಜೂರಾತಿಯು ನಿರೀಕ್ಷೆಯಲ್ಲಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಈ) ಸಕಲೇಶಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸ್ಲಂ ಬೋರ್ಡ್ ವತಿಯಿಂದ ನಿರ್ಮಾಣವಾಗುತ್ತಿರುವ ಮನೆಗಳ ಪ್ರಸ್ತುತ ಭೌತಿಕ ಮತ್ತು ಆರ್ಥಿಕ ಪ್ರಗತಿಗಳೇನು ; (ವಿವರ ನೀಡುವುದು)

(ಉ) ಕೊಳಚೆ ನಿರ್ಮೂಲನಾ ಮಂಡಳಿಯಿಂದ ವಿವಿಧ ಯೋಜನೆಯಡಿಯಲ್ಲಿ ನಿರ್ಮಿಸುತ್ತಿರುವ ಮನೆಗಳ ಕಾಮಗಾರಿ ಪೂರ್ಣಗೊಳ್ಳದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಯೋಜನಾವಾರು ವಿವರ ನೀಡುವುದು)

(ಊ) ಹಾಗಿದ್ದಲ್ಲಿ, ಈ ಕಾಮಗಾರಿ ವಿಳಂಬವಾಗುವುದಕ್ಕೆ ಹಾಗೂ ಅಪೂರ್ಣಗೊಂಡಿರುವುದಕ್ಕೆ ಕಾರಣಗಳೇನು ; ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ?

**ಎಂ.ಕೆ. ವಿಶಾಲಾಕ್ಷಿ**
ಕಾರ್ಯದರ್ಶಿ
ಕರ್ನಾಟಕ ವಿಧಾನಸಭೆ

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು ಕಾ.ಸೂ. 205 – ಪಿ2

**List of Questions for Oral Answers**

**Total No. of Questions - 15**

# LIST - 01

# KARNATAKA LEGISLATIVE ASSEMBLY

## SIXTEENTH ASSEMBLY

## SEVENTH SESSION

## Monday, 11th August, 2025

---

### GROUP - A

1. Minister for Transport and Muzrai
2. Minister for Public Works
3. Minister for Revenue
4. Minister for Housing, Wakf and Minority Welfare
5. Minister for Animal Husbandry and Sericulture
6. Minister for Fisheries, Ports and Inland Water Transport

---

### COMMENCEMENT OF WORKS

**SRI VISHWANATH S. R (YELAHANKA) -**

01 (432) Will the Minister for Public Works be pleased to state:-

(a) the reasons for the halting of works on the State Highways in Dabaspet, Rajanukunte and Airport road; the time by when these works would be restarted;

(b) the reasons for suspension of Rajanukunte flyover work;

(c) if so, the time by when this flyover work will be commence, as inconvenience is being caused to the commuters ? (details be furnished)

## KHATA FOR CULTIVATION CHITS

**SRI SUBBAREDDY S. N. (BAGEPALLI) -**

02 (118) Will the Minister for Revenue be pleased to state :-

(a) the number of cases are pending for khata related to cultivation chits issued to farmers by the Government under Form–50 and 53 in Bagepalli Assembly Constituency; (details be furnished)

(b) the time limit by when these pending khatas would be cleared, thereby benefiting the farmers ? (details be furnished)

## DEVELOPMENT OF LAYOUT

**SRI NARENDRA SWAMY P. M. (MALAVALLI) -**

03 (46) Will the Minister for Housing, Waqf and Minority Welfare be pleased to state:-

(a) whether a proposal has been submitted to the Government to formulate and develop the sites on 33 acres of Government land opposite to Shanthi college in the limits of Malavalli town; if so, the present status of the proposal;

(b) whether the Government is committed to releasing the funds during the current year for the development works to be undertaken immediately for allocation of sites on this land to the site-less beneficiaries;

(c) if so, the particulars of works the Government intends to undertake; the quantum of grant fixed for these works ?

## RECRUITMENT OF DRIVERS POSTS

**SRI MAHESH TENGINAKAI (HUBBALLI-DHARWAD CENTRAL) -**

04 (10) Will the Minister for Transport and Muzrai be pleased to state :-

(a) as per 2019 notification issued by NWKRTC, only 1000 posts have been recruited so far, out of 2814 driver posts, the reasons for cancellation of the remaining 1814 posts; (details be furnished)

(b) what is the future of the eligible candidates who have completed the technical test and driving test in the recruitment drive and are awaiting for appointment; whether the Government will give priority to them in future recruitments;

(c) if so, whether the Government has formulated a plan to provide justice to the candidates who are qualified for these 1814 posts and have been waiting for their appointment for past five years;

(d) whether the Government has taken note that minimizing driver posts, despite shortage in the transport corporation, is causing difficulties for the public and adversely affecting service delivery;

(e) if so, the name of the official who have taken the decision in respect of this recruitment process; whether the Government is ready to initiate comprehensive investigation in this regard ? (details be furnished)

## DISPOSAL OF APPLICATIONS

**SRI ARAGA JNANENDRA (THIRTHAHALLI) -**

05 (365) Will the Minister for Revenue be pleased to state:-

(a) out of the applications received for Bagair hukum cultivation chits under Form 50 and 53 across the State, the number of applications approved, rejected and are still pending; (district-wise statistics be furnished)

(b) the measures likely to be taken by the Government to dispose applications, if applicant dies before his application is approved;

(c) out of it, the number of applications for cultivation chits are pending for approval and pending for settlement in Shivamogga district; (taluk-wise details be furnished)

(d) the steps taken by the Government to dispose of the pending application in Thirthahalli taluk;

(e) the number of cultivation chits have been issued in this taluk since the formation of Bagair hukum committee; the number of applications rejected; the reasons for rejection ? (details be furnished)

## HOUSING SCHEME

**SRI PRAKASH KOLIWAD (RANEBENNUR) -**

06 (156) Will the Minister for Housing, Waqf and Minority Welfare be pleased to state:-

(a) the particulars of housing schemes of the Central and State Government currently implemented in the state;

(b) the number of houses that have been allocated under the various housing schemes since last three years; (assembly constituency-wise information, along with statistics be furnished)

(c) the quantum of unit cost being provided for various housing schemes since last three years; (information along with comparative statement be furnished)

(d) whether it is possible for very poor people to construct the houses within the unit cost being provided for various housing schemes at present; if not, the proposal regarding the extent to which the existing unit cost should be increased is currently under consideration by the Government; if so, the time limit within which the action will be taken ?

## COMPENSATION FOR LAND ACQUISION

**DR. AJAY DHARAM SINGH (JEWARGI) -**

07 (114) Will the Minster for Public Works be pleased to state:-

a) the extant of acres of land that has been acquired for construction of bridge across the Bhima River in Chamanuru-Naribola and undertake works near Naribola village in Jewargi taluk of Kalaburgi District;

b) the particulars of survey numbers of Naribola village where land has been acquired; the quantum of compensation that has been provided to the farmers according to the extent of area;

c) the time limit within which the work would be completed under the proposed scheme in acquired lands;

d) the present stage of the process for providing employment to the children of farmers whose land has been acquired; the number of people who have been provided with employment so far ? (details be furnished)

## ENCROACHMENT OF GOVERNMENT LAND

**SRI MUNIRAJU.S (DASARAHALLI) -**

08 (57) Will the Minster for Revenue be pleased to state:-

a) the extant of Government land in survey No. 11 of Sidedahalli village coming in the limits of Dasarahalli assembly constituency;

b) various purposes for which the land has been granted in the Government land of survey no. 11; the total extant of land that has been granted; (details be furnished)

c) whether it has come to the notice of the Government that the private persons are encroached this Government land and Constructing buildings;

d) if so, the extant of this property and the market value of the land encroached upon; (details be furnished)

e) the action taken by the Government to acquire this encroached land; the time limit within which this encroachment would be cleared ? (details be furnished)

## CONSTRUCTION OF SATELLITE BUS STATION

**SRI ALLAMA PRABHU PATIL (GULBARGA SOUTH) -**

09 (52) Will the Minister for Transport and Muzari be pleased to state:-

a) whether there is a proposal before the Government to develop the urban transport system in Kalaburgi city; if so, the particulars of plans that have been formulated;

b) whether it has come to the notice of the Government that there is a public demand to increase the number of Tunga buses currently operating in kalburgi city;

c) whether it has come to the notice of the Government that there is a demand to construct the satellite bus stations in four directions of Kalaburgi City in the light of increasing traffic congestion in Kalaburgi City;

d) if so, whether the Government will take action for construction of these satellite bus stations ?

## CONSTRUCTION OF LINK ROAD

**SMT. JOLLE SHASHIKALA ANNASAHEB (NIPPANI) -**

10 (69) Will the Minister for Public Works be pleased to state:-

a) the quantum of grant released for the construction of a bridge across the Dudhaganga river near Bhoja-Karadaga villages in the limits of Nippani assembly constituency; by when was this grant released; the present stage of this work;

b) whether it has come to the notice of Government that during the construction of link roads to the bridge being built across the Dudhaganga River near Bhoja-Karadaga

village, pillars or columns have not been erected, as a result, these two villages are affected during floods; if so, the steps taken by the Government;

c) whether the grant has been released for the construction of this Link road; if not, the action taken by the Government to release the grant immediately ?

## SANCTION OF HOUSES

**SRI SAMRUDDHI V. MANJUNATH (MULBAGAL) -**

11 (439) Will the Minister for Housing, Waqf and Minority Welfare be pleased to state:-

a) the number of houses have been sanctioned by the Housing department under Basava housing scheme, Dr. B.R. Ambedkar rural housing scheme and other housing schemes to various Gram Panchayats of the State since 20.05.2023 to till date; (taluk-wise information be furnished)

b) whether it has come to the notice of the Government that Mulbagalu assembly constituency is scheduled castes reserved constituency, and many proposals have been submitted for sanction of two thousand houses under Basava housing scheme and four thousand houses under Dr. B.R. Ambedkar rural housing scheme;

c) if so, the time limit within which the six thousand houses sought in the proposal would be sanctioned for this constituency ? (details be furnished)

## COMPENSATION FOR CROPS

**SRI DARSHAN DHRUVA NARAYANA (NANJANAGUD) -**

12 (410) Will the Minister for Revenue be pleased to state:-

a) the farmers of Nanjangud taluk sustained crop losses due to heavy rainfall during the monsoon seasons of 2024-25 and 2025-26 and applied for compensation

through the software, among them, the number of applicants received compensation;

b) during said year's total 222 affected farmers have submitted applications regarding the crop loss in the Government software, out of which, only 82 farmers received compensation, the reasons for not distributing compensation to the remaining 140 farmers so far;

c) the time limit within which the Government would take action to distribute compensation to the remaining applicants ? (details be furnished)

## ALLOCATION OF HOUSES

**SMT. KAREMMA (DEVADURGA) -**

13 (97) Will the Minister for Housing, Waqf and Minority Welfare be pleased to state:-

a) the number of houses allotted to Devadurga assembly constituency under various schemes during the last three years; (panchayat – wise details be furnished)

b) the criteria followed while setting housing targets and allocating them to the Panchyats;

c) on whose recommendation houses have been allocated to Devadurga during the last three years; (complete information be furnished)

d) the number of houses for which GPS mapping has been done and the number of houses for which it has not done during the last three years; (details be furnished)

e) the reason why the grant has not been credited to the beneficiary accounts so far even though GPS mapping has been completed; the time limit within which the amount would be credited to the beneficiary accounts;

f) the time by when the GPS mapping would be completed for the pending houses ? (information be furnished)

## GRANTS FOR WORKS

**SRI LAXMAN SANGAPPA SAVADI (ATHANI) -**

14 (420) Will the Minister for Animal Husbandry and Sericulture be pleased to state:-

a) whether it has come to the notice of the Government that admission process has been completed, and academic classes have already commenced at the Veterinary college in the Athani taluk of Belagavi District;

b) if so, whether it has come to the notice of the Government that there is a need of quarters for the principal and staff of this college and separate hostels for the second and third year girl and boys students;

c) if so, the time by when the construction work of said quarters and hostels would be commenced;

d) whether there is a proposal before the Government for the construction of roads and provision of basic amenities within the Veterinary college campus;

e) if so, the time limit within which the grant would be sanctioned and start the road construction works ? (details be furnished)

## HOUSING SCHEME

**SRI CEMENT MANJU (SAKALESHPUR) -**

15 (336) Will the Minister for Housing, Waqf and Minority Welfare be pleased to state:-

a) the number of houses sanctioned to the homeless people in the state by the Central and State Government during the years 2023-24 and 2024-25; (scheme-wise information be furnished)

b) out of it, the number of houses have been sanctioned by the Government under various housing schemes in Hassan District during the last 2 years; (taluk-wise, year-wise information be furnished)

c) whether Government has noticed that several families in Sakaleshpur Assembly Constituency are living in Kacha houses and have applied and awaiting for sanction of houses;

d) the present physical and financial progress of the houses being constructed by the slum board in Sakaleshpur Assembly Constituency; (details be furnished)

e) whether it has come to the notice of the Government that the work of houses being constructed under various schemes by the slum board is not completed; (scheme-wise details be furnished)

f) if so, the reasons for the delay and incompletion of said works; the steps taken by the Government in this regard ?

**M.K. Vishalakshi**
Secretary
Karnataka Legislative Assembly

Government Press, Vikasa Soudha Unit, Bengaluru, WD- Copies

ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೨೩೦

**ಪಟ್ಟಿ – ೦೧**

# ಕರ್ನಾಟಕ ವಿಧಾನಸಭೆ

**ಹದಿನಾರನೇ ವಿಧಾನಸಭೆ**

**ಏಳನೇ ಅಧಿವೇಶನ**

**ಸೋಮವಾರ, ದಿನಾಂಕ : ೧೧ನೇ ಆಗಸ್ಟ್, ೨೦೨೫**

---

## ಸಮೂಹ ‘ ಅ – A’

೧. ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

೨. ಮಾನ್ಯ ಲೋಕೋಪಯೋಗಿ ಸಚಿವರು

೩. ಮಾನ್ಯ ಕಂದಾಯ ಸಚಿವರು

೪. ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

೫. ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು

೬. ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

---

## ಸಾರಿಗೆ ಬಸ್‌ಗಳ ದುರಸ್ತಿ

**ಶ್ರೀ ಅನಿಲ್ ಚಿಕ್ಕಮಾದು (ಹೆಚ್.ಡಿ. ಕೋಟೆ) :–**

೧ (೩೮೨) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆ, ಹೆಚ್.ಡಿ ಕೋಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಿಗೆ ಇರುವ ಹಲವಾರು ಬಸ್ ಮಾರ್ಗಗಳಲ್ಲಿ ಸಂಚರಿಸುವ ಬಸ್ಸುಗಳು ದಾರಿ ಮಧ್ಯೆಯೇ ಕೆಟ್ಟು ನಿಲ್ಲುತ್ತಿದ್ದು, ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಹೆಚ್.ಡಿ ಕೋಟೆ ವಿಧಾನಸಭಾ ಕ್ಷೇತ್ರಕ್ಕೆ ಎಷ್ಟು ಹೊಸ ಬಸ್‌ಗಳನ್ನು ನೀಡಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಈ) ಹಲವಾರು ಗ್ರಾಮಗಳಿಗೆ ಬಸ್ ಮಾರ್ಗಗಳಿಲ್ಲದೇ ಜನರಿಗೆ ತೊಂದರೆಯಾಗುತ್ತಿದ್ದು, ಹೊಸ ಬಸ್ ಮಾರ್ಗಗಳನ್ನು ರೂಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಉ) ಹೆಚ್.ಡಿ ಕೋಟೆ ಹಾಗೂ ಸರಗೂರು ತಾಲ್ಲೂಕುಗಳಲ್ಲಿನ ಬಸ್ ಘಟಕಗಳಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಮನೆಗಳ ಮಂಜೂರಾತಿ

**ಶ್ರೀ ಅನಿಲ್ ಚಿಕ್ಕಮಾದು (ಹೆಚ್.ಡಿ. ಕೋಟೆ) :–**

೨ (೩೮೩) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೩ ವರ್ಷಗಳಲ್ಲಿ ಮೈಸೂರು ಜಿಲ್ಲೆ, ಹೆಚ್.ಡಿ ಕೋಟೆ ವಿಧಾನಸಭಾ ಕ್ಷೇತ್ರಕ್ಕೆ ವಿವಿಧ ವಸತಿ ಯೋಜನೆಯಡಿಯಲ್ಲಿ ಮಂಜೂರಾದ ವಸತಿಗಳು ಎಷ್ಟು; (ಯೋಜನೆವಾರು ಮನೆಗಳ ವಿವರ ಒದಗಿಸುವುದು)

(ಆ) ಹೆಚ್.ಡಿ ಕೋಟೆ ಹಾಗೂ ಸರಗೂರು ತಾಲ್ಲೂಕುಗಳಲ್ಲಿ ಮನೆಗಳು ಮಂಜೂರಾಗಿ ಸಹಾಯಧನ ಪಾವತಿಯಾಗದೇ ಇರುವ ಪ್ರಕರಣಗಳೆಷ್ಟು; ಅವು ಯಾವುವು; (ಪ್ರಕರಣವಾರು ವಿವರ ನೀಡುವುದು)

(ಇ) ಪ್ರಸ್ತುತ ಜಾರಿಯಲ್ಲಿರುವ ಸಹಾಯಧನ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಈ) ಇದ್ದಲ್ಲಿ, ಎಷ್ಟು ಸಹಾಯಧನ ಹೆಚ್ಚಿಸಲಾಗುವುದು? (ವಿವರ ಒದಗಿಸುವುದು)

## ಮೀನುಗಾರಿಕೆ ಯೋಜನೆ

**ಶ್ರೀ ಅನಿಲ್ ಚಿಕ್ಕಮಾದು (ಹೆಚ್.ಡಿ. ಕೋಟೆ) :–**

೩ (೩೮೪) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಮೈಸೂರು ಜಿಲ್ಲೆ ಹೆಚ್.ಡಿ ಕೋಟೆ ವಿಧಾನಸಭಾ ಕ್ಷೇತ್ರಕ್ಕೆ ಮೀನುಗಾರಿಕೆ ಇಲಾಖೆಯಿಂದ ಕೈಗೊಂಡಿರುವ ಯೋಜನೆಗಳಾವುವು ; ಕೈಗೊಂಡ ಯೋಜನೆಗಳಿಗೆ ಅರ್ಹ ಫಲಾನುಭವಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ೦೩ ವರ್ಷಗಳಲ್ಲಿ ಹೆಚ್.ಡಿ ಕೋಟೆ ವಿಧಾನಸಭಾ ಕ್ಷೇತ್ರದ ಮೀನುಗಾರರಿಗೆ ಮಂಜೂರಾದ ಮನೆಗಳು ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಮನೆ ನಿರ್ಮಾಣದ ಕಾಮಗಾರಿಯ ಹಂತಗಳೇನು ; ಮೀನುಗಾರರ ಮನೆಗಳ ನಿರ್ಮಾಣದ ಅಂದಾಜು ವೆಚ್ಚ ಎಷ್ಟು? (ಸಂಪೂರ್ಣ ವಿವರ ನೀಡುವುದು)

## ವಿಶೇಷ ಅನುದಾನ

**ಶ್ರೀ ಅಪ್ಪಾಜಿ ಸಿ ಎಸ್ ನಾಡಗೌಡ (ಮುದ್ದೇಬಿಹಾಳ) :–**

೪ (೬೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆಯಲ್ಲಿ ವಿಶೇಷ ಅನುದಾನವನ್ನು ರಾಜ್ಯದಲ್ಲಿ ನೀಡಲಾಗಿದೆಯೆ ;

(ಆ) ಹಾಗಿದಲ್ಲಿ, ವಿಜಯಪುರ ಜಿಲ್ಲೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ಮತಕ್ಷೇತ್ರವಾರು ವಿವರ ನೀಡುವುದು)

(ಇ) ಈ ವಿಶೇಷ ಅನುದಾನದಲ್ಲಿ ಮುದ್ದೇಬಿಹಾಳ ಮತಕ್ಷೇತ್ರದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಹಾಗಿದ್ದಲ್ಲಿ, ಪ್ರಸ್ತುತ ಸಾಲಿನಲ್ಲಿ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗುವುದು ? (ಸಂಪೂರ್ಣ ವಿವರವನ್ನು ನೀಡುವುದು)

## ಮೌಲಾನಾ ಆಜಾದ್ ಭವನ

**ಶ್ರೀ ಅಪ್ಪಾಜಿ ಸಿ ಎಸ್ ನಾಡಗೌಡ (ಮುದ್ದೇಬಿಹಾಳ) :–**

೫ (೬೫) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಮೌಲಾನಾ ಆಜಾದ್ ಭವನಗಳನ್ನು ಎಷ್ಟು ಜಿಲ್ಲೆಗಳಲ್ಲಿ ನಿರ್ಮಿಸಲಾಗಿದೆ ; (ವಿವರ ನೀಡುವುದು)

(ಆ) ಹಾಗಾದರೆ, ಮೌಲಾನಾ ಆಜಾದ್ ಭವನಗಳನ್ನು ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ಮತಕ್ಷೇತ್ರದಲ್ಲಿ ನಿರ್ಮಿಸಲಾಗಿದೆಯೆ ; (ವಿವರ ನೀಡುವುದು)

(ಇ) ಹಾಗಿಲ್ಲದಿದ್ದಲ್ಲಿ ಯಾವಾಗ ಮೌಲಾನಾ ಆಜಾದ್ ಭವನವನ್ನು ನಿರ್ಮಿಸಲಾಗುವುದು ? (ವಿವರ ನೀಡುವುದು)

## ರಸ್ತೆ ಅಗಲೀಕರಣ

**ಶ್ರೀ ಅಬ್ಬಯ್ಯ ಪ್ರಸಾದ್ (ಹುಬ್ಬಳ್ಳಿ–ಧಾರವಾಡ ಪೂರ್ವ) :–**

೬ (೧೭೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹುಬ್ಬಳ್ಳಿ–ಧಾರವಾಡ ಪೂರ್ವ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸಂಗೊಳ್ಳಿ ರಾಯಣ್ಣ ಸರ್ಕಲ್‌ನಿಂದ ದಾಜಿಬಾನ ಪೇಟ ಮುಖಾಂತರ ಬಂಕಾಪುರ ಚೌಕದವರೆಗಿನ ರಸ್ತೆಯಲ್ಲಿ ಪ್ರತಿ ನಿತ್ಯ ವಾಹನ ದಟ್ಟಣೆಯಿಂದ ಅಪಘಾತಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ರಸ್ತೆಯನ್ನು ಅಗಲೀಕರಣಗೊಳಿಸಿ ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ;

(ಇ) ಯಾವ ಕಾಲಮಿತಿಯೊಳಗೆ ರಸ್ತೆ ಅಗಲೀಕರಣಗೊಳಿಸಿ, ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಾಗುವುದು ?

## ದೇವಸ್ಥಾನಗಳ ಜೀರ್ಣೋದ್ಧಾರ

**ಶ್ರೀ ಅಭಯ ಪಾಟೀಲ್ (ಬೆಳಗಾವಿ ದಕ್ಷಿಣ) :–**

೭ (೪೩೪) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸನ್ ೨೦೨೨–೨೩ನೇ ಸಾಲಿನಿಂದ ೨೦೨೫–೨೬ನೇ ಸಾಲಿನ ಅವಧಿಯಲ್ಲಿ ರಾಜ್ಯದ ವಿವಿಧ ದೇವಸ್ಥಾನದ ಅಭಿವೃದ್ಧಿಗೆ ಮಂಜೂರಾಗಿರುವ ಅನುದಾನ ಎಷ್ಟು; ಮಂಜೂರಾದ ಆದೇಶಗಳಂತೆ ಸರ್ಕಾರದಿಂದ ಎಷ್ಟು ಹಂತಗಳಲ್ಲಿ ಎಷ್ಟು ಅನುದಾನ ಯಾರಿಗೆ ಬಿಡುಗಡೆಯಾಗಿರುತ್ತದೆ ; ಬಿಡುಗಡೆಗಾಗಿ ಬಾಕಿ ಇರುವ ಅನುದಾನ ಎಷ್ಟು ; (ಆದೇಶದ ಪ್ರತಿಗಳೊಂದಿಗೆ ಮತಕ್ಷೇತ್ರವಾರು, ವರ್ಷವಾರು, ವಿವರಗಳನ್ನು ನೀಡುವುದು)

(ಆ) ದೇವಸ್ಥಾನಗಳ ಜೀರ್ಣೋದ್ಧಾರ ಮತ್ತು ಅಭಿವೃದ್ಧಿಗೆ ಬೆಳಗಾವಿ ದಕ್ಷಿಣ ಮತಕ್ಷೇತ್ರಕ್ಕೆ ೧೦,೦೦ ಕೋಟಿ ೦೨.೦೦ ಕೋಟಿ, ೧೦.೦೦ಕೋಟಿ ೦.೧೦ ಕೋಟಿ ರೂಪಾಯಿಗಳಂತೆ ಹಂತ ಹಂತವಾಗಿ ಮಂಜೂರಾದ ಅನುದಾನಕ್ಕೆ ಸಂಬಂಧಪಟ್ಟಂತೆ ಎಷ್ಟು ಅನುದಾನವು ಯಾವಾಗ ಮತ್ತು ಯಾರಿಗೆ ಬಿಡುಗಡೆಯಾಗಿದೆ ;

(ಇ) ಬಾಕಿ ಹಣ ಬಿಡುಗಡೆಗಾಗಿ ಹಣ ಬಳಕೆ ಪ್ರಮಾಣ ಪತ್ರವು ಯಾರು ಸಲ್ಲಿಸಬೇಕಾಗಿತ್ತು ಸರ್ಕಾರಕ್ಕೆ ಸಲ್ಲಿಕೆಯಾಗಿದೆಯೇ ; ಸಲ್ಲಿಸಿದ್ದಲ್ಲಿ ಯಾವಾಗ ಮತ್ತು ಯಾರಿಂದ ಸಲ್ಲಿಕೆಯಾಗಿದೆ ; (ವಿವರ ನೀಡುವುದು)

(ಈ) ಬಾಕಿ ಹಣದ ಬಿಡುಗಡೆಗಾಗಿ ಶಾಸಕರು ಪತ್ರ ಮುಖೇನ ಅನೇಕ ಬಾರಿ ವಿನಂತಿಸಿದ್ದರೂ ಕೂಡ ಈವರೆಗೂ ಯಾವುದೇ ಕ್ರಮ ಕೈಗೊಳ್ಳದೇ ಇರಲು ಕಾರಣವೇನು ;

(ಉ) ಹಣ ಬಳಕೆ ಪ್ರಮಾಣ ಪತ್ರವು ಡಿಸೆಂಬರ್ ೨೦೨೪ರಲ್ಲಿಯೇ ಸಲ್ಲಿಕೆಯಾಗಿದ್ದರೂ ಕೂಡ ಈವರೆಗೆ ಬಾಕಿ ಅನುದಾನ ಬಿಡುಗಡೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಊ) ಸರ್ಕಾರದಲ್ಲಿ ಅನುದಾನ ಕೊರತೆಯಿದೆಯೇ ; ಇಲ್ಲವಾದಲ್ಲಿ ಬಾಕಿ ಅನುದಾನ ಯಾವಾಗ ಬಿಡುಗಡೆ ಮಾಡಲಾಗುವುದು ? (ವಿವರ ನೀಡುವುದು)

## ಕೊಳಚೆ ಪ್ರದೇಶಗಳ ಘೋಷಣೆ

**ಶ್ರೀ ಅಭಯ ಪಾಟೀಲ್ (ಬೆಳಗಾವಿ ದಕ್ಷಿಣ) :–**

೮ (೪೩೫) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಕೊಳಚೆ ಪ್ರದೇಶಗಳು ಎಷ್ಟು ಅವು ಯಾವುವು; ಹೊಸದಾಗಿ ಕೊಳಚೆ ಪ್ರದೇಶಗಳ ಘೋಷಣೆಗೆ ಇರುವ ಮಾನದಂಡಗಳೇನು ;

(ಆ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಅವುಗಳ ಅಭಿವೃದ್ಧಿಗೆ ಬಿಡುಗಡೆಗೊಳಿಸಿದ ಅನುದಾನ ಎಷ್ಟು ; (ಮತಕ್ಷೇತ್ರವಾರು/ಕೊಳಚೆ ಪ್ರದೇಶವಾರು ವಿವರ ನೀಡುವುದು)

(ಇ) ಸನ್ ೨೦೦೮ ರಿಂದ ೨೦೨೪ರ ಅವಧಿಯಲ್ಲಿ ಬೆಳಗಾವಿ ದಕ್ಷಿಣ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಎಷ್ಟು ಕೊಳಚೆ ಪ್ರದೇಶಗಳನ್ನು ಘೋಷಿಸಲು ಪ್ರಸ್ತಾವನೆ ಸಲ್ಲಿಕೆಯಾಗಿದ್ದವು ; (ಪ್ರಸ್ತಾವನೆ ಸಲ್ಲಿಕೆಯಾದ, ಘೋಷಣೆಯಾದ ದಿನಾಂಕ, ಕೊಳಚೆ ಪ್ರದೇಶಗಳ ಹೆಸರು, ಅಲ್ಲಿರುವ ಕುಟುಂಬಗಳು, ಮನೆಗಳ ವಿವರಗಳನ್ನು ಕೊಳಚೆ ಪ್ರದೇಶವಾರು ನೀಡುವುದು)

(ಈ) ಬೆಳಗಾವಿ ದಕ್ಷಿಣ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಹೊಸದಾಗಿ ಎಷ್ಟು ಕೊಳಚೆ ಪ್ರದೇಶಗಳನ್ನು ಘೋಷಣೆ ಮಾಡಲು ಪ್ರಸ್ತಾವನೆ ಸಲ್ಲಿಕೆಯಾಗಿದೆ ; ಯಾವ ಮಾನ್ಯ ಶಾಸಕರು ಕೋರಿದ್ದಾರೆ; ಅವು ಯಾವುವು ; (ವಿವರ ನೀಡುವುದು)

(ಉ) ಹಾಗಿದ್ದಲ್ಲಿ ಪ್ರಸ್ತಾವನೆಗಳು ಯಾವ ಹಂತದಲ್ಲಿ ಎಷ್ಟು ವರ್ಷಗಳಿಂದ ಬಾಕಿ ಇರುತ್ತದೆ; ಕೊಳಚೆ ಪ್ರದೇಶಗಳೆಂದು ಘೊಷಣೆಗೆ ಅವಧಿಯ ಅವಶ್ಯಕತೆ ಇದೆಯೇ; ಇಲ್ಲವಾದಲ್ಲಿ ಯಾವ ಕಛೇರಿ ವಿಳಂಬವಾಗಿದೆ ; ಅನಾವಶ್ಯಕವಾಗಿ ವಿಳಂಬ ಮಾಡಿದವರು ಯಾರು; ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಊ) ಕೊಳಚೆ ಪ್ರದೇಶಗಳ ಘೋಷಣೆ ಜಿಲ್ಲಾಧಿಕಾರಿಗಳ ಯಾರು ಎಷ್ಟು ಬಾರಿ ವಿನಂತಿಸಿದ್ದಾರೆ; ಈವರೆಗೆ ಘೊಷಣೆ ಮಾಡದೇ ಇರುವುದಕ್ಕೆ ಕಾರಣಗಳೇನು, ಕೊಳಚೆ ಪ್ರದೇಶಗಳೆಂದು ಘೋಷಣೆಗೆ ಇನ್ನೂ ಎಷ್ಟು ವರ್ಷಗಳ ಕಾಲಾವಕಾಶದ ಅವಶ್ಯಕತೆ ಇರುತ್ತದೆ ? (ವಿವರ ನೀಡುವುದು)

## ಸಾಮಾಜಿಕ ಭದ್ರತೆಯ ಪಿಂಚಣಿ

**ಶ್ರೀ ಅಭಯ ಪಾಟೀಲ್ (ಬೆಳಗಾವಿ ದಕ್ಷಿಣ) :–**

೯ (೪೩೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಂದಾಯ ಇಲಾಖೆಯಲ್ಲಿರುವ ಸಾಮಾಜಿಕ ಭದ್ರತಾ ಯೋಜನೆಯಲ್ಲಿರುವ ವಿವಿಧ ಪಿಂಚಣಿ ಸೌಲಭ್ಯಗಳು ಯಾವುವು ; ಅವುಗಳಿಗೆ ಇರುವ ಮಾನದಂಡಗಳೇನು ;

(ಆ) ದಿನಾಂಕ: ೦೧.೦೧.೨೦೨೩ ರಿಂದ ೨೦.೦೬.೨೦೨೫ರವರೆಗೆ ಬೆಳಗಾವಿ ಜಿಲ್ಲೆಯಲ್ಲಿ ವಿವಿಧ ಪಿಂಚಣಿಗಾಗಿ ಸಲ್ಲಿಸಿದ ಅರ್ಜಿಗಳು, ಮಂಜೂರು ಮಾಡಿರುವ ಹಾಗೂ ತಿರಸ್ಕೃತಗೊಂಡಿರುವ ಫಲಾನುಭವಿಗಳೆಷ್ಟು ; (ಮತಕ್ಷೇತ್ರವಾರು, ಯೋಜನೆವಾರು, ವರ್ಷವಾರು, ಹೆಸರು, ವಿಳಾಸ, ದೂರವಾಣಿ ಸಂಖ್ಯೆ, ಅರ್ಜಿ ಹಾಗೂ ಮಂಜೂರಾತಿ ದಿನಾಂಕಗಳನ್ನು ಒಳಗೊಂಡಿರುವ ವಿವರಗಳನ್ನು ನೀಡುವುದು)

(ಇ) ಅನಧಿಕೃತವಾಗಿ ಬೆಳಗಾವಿ ತಾಲ್ಲೂಕಿನಲ್ಲಿ ಅಲ್ಪಾವಧಿ ಪಿಂಚಣಿಗಳನ್ನು ಮಂಜೂರು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಇದರಿಂದ ಸರ್ಕಾರದ ಬೊಕ್ಕಸಕ್ಕೆ ಆರ್ಥಿಕ ಹಾನಿಯಾಗಿರುವ ಪ್ರಮಾಣವೆಷ್ಟು ; (ವಿವರ ನೀಡುವುದು)

(ಉ) ದಿನಾಂಕ ೦೧.೦೫.೨೦೨೩ ರಿಂದ ೨೦.೦೬.೨೦೨೫ರ ಅವಧಿಯಲ್ಲಿ ಅಲ್ಪಾವಧಿ ಪಿಂಚಣಿಗಾಗಿ ಸಲ್ಲಿಕೆಯಾಗಿರುವ ಪ್ರಸ್ತಾವನೆಗಳು ಎಷ್ಟು ; (ಹೆಸರು, ವಿಳಾಸ, ದೂರವಾಣಿ ಸಂಖ್ಯೆ ಮುಂತಾದ ವಿವರಗಳನ್ನು ನೀಡುವುದು)

(ಊ) ರಾಜ್ಯದಲ್ಲಿ ಹೆಚ್‌ಆರ್‌ಎಂಎಸ್ ಗಳ ಮೂಲಕ ವೇತನ/ಪಿಂಚಣಿ ಪಡೆಯುತ್ತಿರುವವರಿಗೆ ಸರ್ಕಾರದ ಸಾಮಾಜಿಕ ಭದ್ರತಾ ಯೋಜನೆಯಲ್ಲಿ ಪಿಂಚಣಿ ಸೌಲಭ್ಯಗಳನ್ನು ಒದಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಖ) ಬಂದಿದ್ದಲ್ಲಿ, ಅಂತಹ ಪ್ರಕರಣಗಳು ಎಷ್ಟು; (ತಪ್ಪಿತಸ್ಥರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮತಕ್ಷೇತ್ರವಾರು ಯೋಜನೆವಾರು ವಿವರಗಳನ್ನು ನೀಡುವುದು)

## ಉತ್ತರ ಜೀವಿತರ ಪ್ರಮಾಣ ಪತ್ರ

**ಶ್ರೀ ಅಭಯ ಪಾಟೀಲ್ (ಬೆಳಗಾವಿ ದಕ್ಷಿಣ) :–**

೧೦ (೪೩೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇಲಾಖೆಯಲ್ಲಿ ಉತ್ತರ ಜೀವಿತರ ಪ್ರಮಾಣ ಪತ್ರವನ್ನು ಪಡೆಯಲು ಫಲಾನುಭವಿಗಳು ಯಾವ ದಾಖಲೆಗಳನ್ನು ನೀಡಬೇಕಾಗಿರುತ್ತದೆ; ಅದಕ್ಕೆ ಇರುವ ಮಾನದಂಡಗಳೇನು ; ಫಲಾನುಭವಿಗಳು ಅರ್ಜಿ ಸಲ್ಲಿಸಿದ ನಂತರ ಪ್ರಮಾಣ ಪತ್ರವನ್ನು ಎಷ್ಟು ದಿನದಲ್ಲಿ ವಿತರಿಸಬೇಕು ; ಈ ಪ್ರಮಾಣ ಪತ್ರವು ಎಷ್ಟು ವರ್ಷಗಳ ಅವಧಿಗೆ ಚಾಲ್ತಿಯಲ್ಲಿರುತ್ತದೆ ; (ವಿವರ ನೀಡುವುದು)

(ಆ) ತಹಶೀಲ್ದಾರರ ಕಛೇರಿಯಿಂದ ಪಡೆದ ಉತ್ತರ ಜೀವಿತರ ಪ್ರಮಾಣ ಪತ್ರದಲ್ಲಿ ೨ ವರ್ಷ ಅವಧಿಗೆ ಸೀಮಿತವಾಗಿದೆ ಎಂದು ನಮೂದಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಅವಧಿ ಅತೀ ಕಡಿಮೆ ಅವಧಿಯಾಗಿದ್ದು, ಇದನ್ನು ೧೦ ವರ್ಷಗಳ ಅವಧಿಗೆ ಮುಂದುವರೆಸುವ ಕುರಿತು ಸರ್ಕಾರದ ನಿಲುವೇನು ; ಇದು ಬೆಳಗಾವಿ ತಾಲ್ಲೂಕಿಗೆ ಮಾತ್ರ ಸೀಮಿತವಾಗಿದೆಯೇ ;

(ಈ) ದಿನಾಂಕ:೦೧.೦೧.೨೦೨೧ ರಿಂದ ೨೦.೦೭.೨೦೨೫ ರವರೆಗೆ ಬೆಳಗಾವಿ ಜಿಲ್ಲೆಯಲ್ಲಿ ಉತ್ತರ ಜೀವಿತರ ಪ್ರಮಾಣ ಪತ್ರಗಳಿಗೆ

ಸಲ್ಲಿಕೆಯಾಗಿರುವ ಮನವಿಗಳೆಷ್ಟು; ಅವುಗಳಲ್ಲಿ ಪುರಸ್ಕೃತ ಮತ್ತು ತಿರಸ್ಕೃತಗೊಂಡಿರುವ ಅರ್ಜಿಗಳ ಸಂಖ್ಯೆ ಎಷ್ಟು; (ಹೆಸರು, ವಿಳಾಸಗಳ ಮತಕ್ಷೇತ್ರವಾರು ವಿವರ ನೀಡುವುದು)

(ಉ) ಸುಮಾರು ೧೫ ರಿಂದ ೨೦ ವರ್ಷಗಳ ಹಿಂದಿನ ಅವಧಿಗೆ ಸಂಬಂಧಪಟ್ಟಂತೆ ಉತ್ತರ ಜೀವಿತರ ಪ್ರಮಾಣ ಪತ್ರ ಒದಗಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು ;

(ಊ) ಇಲ್ಲವಾದಲ್ಲಿ ಬೆಳಗಾವಿ ತಹಶೀಲ್ದಾರ ಕಛೇರಿಯಲ್ಲಿ ಸಿವಿಲ್ ನ್ಯಾಯಾಲಯದಲ್ಲಿ ಮೊಕದ್ದಮೆ ದಾಖಲಿಸಿ ಉತ್ತರ ಜೀವಿತರ ಪ್ರಮಾಣ ಪತ್ರಗಳನ್ನು ಪಡೆಯಲು ಸೂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಋ) ಬೆಳಗಾವಿ ತಾಲ್ಲೂಕಿನಲ್ಲಿ ಉತ್ತರ ಜೀವಿತರ ಪ್ರಮಾಣ ಪತ್ರಗಳನ್ನು ಸಿವಿಲ್ ನ್ಯಾಯಾಲಯದಿಂದ ಪಡೆಯಲು ಫಲಾನುಭವಿಗಳಿಗೆ ಹಿಂಬರಹ ನೀಡಿರುವ ಪ್ರಕರಣಗಳು ಎಷ್ಟು? (ಅವುಗಳ ಹೆಸರು, ವಿಳಾಸ ಮುಂತಾದ ವಿವರಗಳನ್ನು ನೀಡುವುದು)

## ಕಾನೂನು ಬಾಹಿರ ಉಪ ವಿಭಾಗಗಳು

**ಶ್ರೀ ಅಭಯ ಪಾಟೀಲ್ (ಬೆಳಗಾವಿ ದಕ್ಷಿಣ) :–**

೧೧ (೪೩೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಿನಾಂಕ:೦೧.೦೧.೨೦೨೩ ರಿಂದ ೨೦.೦೭.೨೦೨೫ರ ಅವಧಿಯಲ್ಲಿ ಭೂದಾಖಲೆಗಳ ವಿಭಾಗದಲ್ಲಿ (ನಗರ/ಗ್ರಾಮೀಣ ಪ್ರದೇಶಗಳಲ್ಲಿ) ವಾರಸಾ, ವಾಟ್ನಿ, ಖರೀದಿ ಹಾಗೂ ಇತರ ವಿವಿಧ

ಕಾರಣಗಳಿಗಾಗಿ ಬಾಕಿ ಇರುವ ಪ್ರಕರಣಗಳು ಎಷ್ಟು; (ದಿನಾಂಕವಾರು, ಮತಕ್ಷೇತ್ರವಾರು, ಕಾರಣವಾರು, ಬಾಕಿಯಿರುವ ಪ್ರಕರಣಗಳಲ್ಲಿ ಹೆಸರು, ವಿಳಾಸ, ಸರ್ವೆ ನಂ. ಕ್ಷೇತ್ರದ ವಿವರಗಳನ್ನು ಒದಗಿಸುವುದು)

(ಆ) ಜಿಲ್ಲೆಯಲ್ಲಿ ಉಪವಿಭಾಗ, ಕ್ಷೇತ್ರವನ್ನು ಒಟ್ಟುಗೂಡಿಸುವುದು, ಮೋಜಣಿ ಮಾಡುವುದು, ಹದ್ದುಬಸ್ತುಗೊಳಿಸುವುದು ಮುಂತಾದ ಪ್ರಕರಣಗಳು ಬಾಕಿ ಇರುವುದರಿಂದ ಸಾರ್ವಜನಿಕರುಗಳಿಗೆ ಆಗುತ್ತಿರುವ ತೊಂದರೆಯು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರದ ಕೈಗೊಂಡಿರುವ ಕ್ರಮಗಳೇನು ;

(ಇ) ದಾಖಲೆಯಲ್ಲಿರುವ ಕೆಜೆಪಿ ನಕ್ಷೆಗೂ ಜಮೀನಿಗೂ ವ್ಯತ್ಯಾಸ ಇದ್ದಗ್ಯೂ ಕೂಡಾ ಕೆಲವು ಗ್ರಾಮಗಳಲ್ಲಿ ಅನಧೀಕೃತವಾಗಿ ಭೂಮಾಪನ ಕಛೇರಿಯಲ್ಲಿ ಕಾನೂನು ಬಾಹಿರವಾಗಿ ಹೆಸರುಗಳನ್ನು ಆಸ್ತಿ ಕಾರ್ಡುಗಳಲ್ಲಿ ದಾಖಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರದ ಕೈಗೊಂಡಿರುವ ಕ್ರಮಗಳೇನು ;

(ಈ) ಬೆಳಗಾವಿ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಸಿಟಿಎಸ್ ನಂ.೧೫೯೪/೧ರಲ್ಲಿ ಕ್ಷೇತ್ರಕ್ಕೆ ಪ್ರಾಧಿಕಾರದಿಂದ ಏಕ ನಿವೇಶನ ಮಂಜೂರಿ ಇದ್ದರೂ ಕೂಡಾ ನಿಯಮಗಳನ್ನು ಉಲ್ಲಂಘಿಸಿ ಇಲ್ಲಿನ ಸಿಬ್ಬಂದಿಗಳು ಭೂ ಮಾಲೀಕರೊಂದಿಗೆ ಶಾಮಿಲಾಗಿ ಹಲವು ಉಪ ವಿಭಾಗಗಳನ್ನು ಮಾಡಿ, ಸರ್ಕಾರಕ್ಕೆ ಸುಮಾರು ೦೮.೦೦ ಕೋಟಿ ರೂಪಾಯಿಗಳಷ್ಟು ಆರ್ಥಿಕ ನಷ್ಟ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ ಸರ್ಕಾರ ಕಾನೂನು ಕ್ರಮ ಕೈಗೊಳ್ಳಲಾಗಿದೆಯೇ; ಇಲ್ಲವಾದಲ್ಲಿ ಯಾವಾಗ ಕೈಗೊಳ್ಳಲಾಗುವುದು ?

## ಸಿಬ್ಬಂದಿ ಕೊರತೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಕಲಬುರಗಿ ದಕ್ಷಿಣ) :–**

೧೨ (೪೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ದಕ್ಷಿಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ನಾಡ ಕಛೇರಿಗಳ ಸಂಖ್ಯೆ ಎಷ್ಟು; ಈ ನಾಡ ಕಛೇರಿಗಳಲ್ಲಿ ಸಿಬ್ಬಂದಿಗಳ ಕೊರತೆ ಇದ್ದು ರೈತರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ರೈತರು ತಮ್ಮ ದಿನನಿತ್ಯದ ಕೆಲಸ–ಕಾರ್ಯಗಳನ್ನು ಬದಿಗೆ ಹೊತ್ತಿ ನಾಡ ಕಛೇರಿಗೆ ಅಲೆದಾಡಿದರು ಸರ್ವರ್ ಸಮಸ್ಯೆಯಿಂದ ರೈತರಿಗೆ ಯಾವುದೇ ಕೆಲಸಗಳು ಆಗದೇ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಇ) ಬಂದಿದ್ದರೆ, ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಮೂಲಭೂತ ಸೌಲಭ್ಯಗಳು

**ಶ್ರೀ ಅಲ್ಲಮಪ್ರಭು ಪಾಟೀಲ್ (ಕಲಬುರಗಿ ದಕ್ಷಿಣ) :–**

೧೩ (೫೦) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿರುವ ಅಲ್ಪಸಂಖ್ಯಾತರ ವಸತಿ ನಿಲಯಗಳ ಸಂಖ್ಯೆ ಎಷ್ಟು ;

(ಆ) ಈ ವಸತಿ ನಿಲಯುಗಳಲ್ಲಿ ಕಳಪೆ ಮಟ್ಟದ ಆಹಾರ ಪೂರೈಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಈ ವಸತಿ ನಿಲಯಗಳಲ್ಲಿ ಶೌಚಾಲಯ, ಕುಡಿಯುವ ನೀರು ಹಾಗೂ ಮೂಲಭೂತ ಸೌಲಭ್ಯಗಳಿಲ್ಲದೇ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ?

## ಆಸ್ತಿ ನೋಂದಣಿ ಪ್ರಕ್ರಿಯೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಕಲಬುರಗಿ ದಕ್ಷಿಣ) :–**

೧೪ (೫೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ಆಸ್ತಿ ನೋಂದಣಿ ಪ್ರಕ್ರಿಯೆಗಳಲ್ಲಿ ಉಂಟಾಗುತ್ತಿದ್ದ ಅವ್ಯವಹಾರಗಳಿಂದ ನೋಂದಣಿ ಪ್ರಕ್ರಿಯೆಯು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ಈ ಅವ್ಯವಹಾರಗಳಿಂದ ನೋಂದಣಿ ಪ್ರಕ್ರಿಯೆಗಳು ವಿಳಂಬವಾಗುತ್ತಿರುವ ಬಗ್ಗೆ ಸರ್ಕಾರಕ್ಕೆ ದೂರುಗಳು ಬಂದಿರುವುದು ನಿಜವೇ ;

(ಇ) ಹಾಗಿದ್ದಲ್ಲಿ, ಈ ಅವ್ಯವಹಾರ ಹಾಗೂ ವಿಳಂಬವನ್ನು ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಇತ್ತೀಚಿನ ದಿನಗಳಲ್ಲಿ ಉಪ ನೋಂದಣಾಧಿಕಾರಿಗಳ ಕಛೇರಿಗಳಲ್ಲಿ ಮಧ್ಯವರ್ತಿಗಳ ಹಾವಳಿ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಉ) ಹಾಗಿದ್ದಲ್ಲಿ. ಮಧ್ಯವರ್ತಿಗಳ ಹಾವಳಿ ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಿಂಗ್ ರೋಡ್

**ಶ್ರೀ ಅಶೋಕ್ ಕುಮಾರ್ ರೈ (ಪುತ್ತೂರು) :–**

೧೫ (೩೪೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನ ಪುತ್ತೂರು ರಿಂಗ್ ರೋಡ್ ಕಾಮಗಾರಿಯ ಪ್ರಸ್ತಾವನೆಯು ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ಪುತ್ತೂರು ರಿಂಗ್ ರೋಡ್ ಕಾಮಗಾರಿಗೆ ಅನುದಾನ ಯಾವಾಗ ಮಂಜೂರು ಮಾಡಲಾಗುವುದು ? (ವಿವರ ನೀಡುವುದು)

## ದೇವಸ್ಥಾನಗಳಲ್ಲಿ ಸಂಗ್ರಹವಾಗಿರುವ ಹಣ

**ಶ್ರೀ ಅಶೋಕ್ ಕುಮಾರ್ ರೈ (ಪುತ್ತೂರು) :–**

೧೬ (೩೪೭) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಮುಜರಾಯಿ ಇಲಾಖೆಯ ವಶದಲ್ಲಿರುವ ವಿವಿಧ ದೇವಸ್ಥಾನಗಳಲ್ಲಿ ಈವರೆಗೆ ಸಂಗ್ರಹವಾಗಿರುವ ಹಣ ಎಷ್ಟು ; (ದೇವಸ್ಥಾನವಾರು ಸಂಪೂರ್ಣ ವಿವರಗಳನ್ನು ನೀಡುವುದು)

(ಆ) ಹಾಗಿದ್ದಲ್ಲಿ, ಆಯಾ ದೇವಸ್ಥಾನಗಳಲ್ಲಿ ಸಂಗ್ರಹವಾದ ಹಣವನ್ನು ಅದೇ ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ/ ಅಭಿವೃದ್ಧಿ ಕಾಮಗಾರಿಗಳಿಗೆ ಬಳಸಲಾಗುವುದೇ ಅಥವಾ ಬೇರೆ ಬೇರೆ ಉದ್ದೇಶಕ್ಕೆ/ಬೇರೆ ದೇವಸ್ಥಾನಗಳಿಗೆ ಬಳಸಲಾಗುವುದೇ ; (ವಿವರ ನೀಡುವುದು)

(ಇ) ಕಳೆದ ಎರಡು ವರ್ಷಗಳಲ್ಲಿ ದಕ್ಷಿಣ ಕನ್ನಡ ಜಿಲ್ಲೆಗೆ ದೇವಸ್ಥಾನಗಳ ಸಮಗ್ರ ಅಭಿವೃದ್ಧಿಗೆ ಮಂಜೂರಾದ ಅನುದಾನವೆಷ್ಟು ?

## ಬಸ್ ನಿಲ್ದಾಣಕ್ಕೆ ಜಾಗ

**ಶ್ರೀ ಅಶೋಕ್ ಕುಮಾರ್ ರೈ (ಪುತ್ತೂರು) :–**

೧೭ (೩೪೮) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪುತ್ತೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ಉಪ್ಪಿನಂಗಡಿ ಬಸ್ ನಿಲ್ದಾಣಕ್ಕೆ ಜಾಗ ನೀಡುವ ಕುರಿತು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ ;

(ಆ) ಪ್ರಸ್ತುತ ಉಪ್ಪಿನಂಗಡಿ ಬಸ್ ನಿಲ್ದಾಣ ಕಿರಿದಾಗಿದ್ದು, ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈಗಾಗಲೇ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು ಪ್ರಸ್ತುತ ಯಾವ ಹಂತದಲ್ಲಿದೆ ? (ಸಂಪೂರ್ಣ ವಿವರಗಳನ್ನು ನೀಡುವುದು)

## ದೇವಸ್ಥಾನಕ್ಕೆ ಅನುದಾನ

**ಶ್ರೀ ಅಶೋಕ್ ಕುಮಾರ್ ರೈ (ಪುತ್ತೂರು) :–**

೧೮ (೩೪೯) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪುತ್ತೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಪ್ರಸಿದ್ಧ ಪುತ್ತೂರು ಮಹಾಲಿಂಗೇಶ್ವರ ದೇವಸ್ಥಾನದ ಜೀರ್ಣೋದ್ಧಾರ ಕಾಮಗಾರಿ ಯಾವ ಹಂತದಲ್ಲಿದೆ ;

(ಆ) ಈ ದೇವಸ್ಥಾನದ ಕಾಮಗಾರಿಗೆ ೫೦ ಕೋಟಿ ಮೊತ್ತ ಅಂದಾಜಿಸಲಾಗಿದ್ದು, ಸರ್ಕಾರ ಯಾವಾಗ ಅನುದಾನ ನೀಡಲಾಗುವುದು ?

## ವಸತಿ ಯೋಜನೆಗಳು

**ಶ್ರೀ ಅಶೋಕ್ ಕುಮಾರ್ ರೈ (ಪುತ್ತೂರು) :–**

೧೯ (೩೫೦) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ಪುತ್ತೂರು ವಿಧಾನಸಭಾ ಕ್ಷೇತ್ರಕ್ಕೆ ವಿವಿಧ ವಸತಿ ಯೋಜನೆಯಡಿಯಲ್ಲಿ ಮಂಜೂರಾದ ಮನೆಗಳೆಷ್ಟು ; (ವಿವಿರ ನೀಡುವುದು)

(ಆ) ವಿವಿಧ ವಸತಿ ಯೋಜನೆಯಲ್ಲಿ ಮಂಜೂರಾದ ಮನೆಗಳಿಗೆ ಈಗಾಗಲೇ ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ೧,೨೦,೦೦೦ ಹಾಗೂ ಪರಿಶಿಷ್ಠ ಜಾತಿ ಮತ್ತು ಪಂಗಡದವರಿಗೆ ೧,೭೦,೦೦೦ ಲಕ್ಷ ನೀಡುತ್ತಿದ್ದು ಈ ಮೊತ್ತವನ್ನು ೫,೦೦,೦೦೦ ಲಕ್ಷಕ್ಕೆ ಏರಿಸುವ ಕುರಿತು ಸರ್ಕಾರದ ನೀಲುವೇನು ;

(ಇ) ೨೦೨೫–೨೬ ನೇ ಸಾಲಿನಲ್ಲಿ ವಿವಿಧ ವಸತಿ ಯೋಜನೆಯಡಿಯಲ್ಲಿ ಎಷ್ಟು ಮನೆಗಳನ್ನು ನಿರ್ಮಾಣ ಮಾಡುವ ಗುರಿಯನ್ನು ಸರ್ಕಾರ ಹಮ್ಮಿಕೊಂಡಿವೆ ? (ಸಂಪೂರ್ಣ ವಿವರಗಳನ್ನು ನೀಡುವುದು)

## ಗುಡ್ಡ ಕುಸಿತ

**ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ) :–**

೨೦ (೩೬೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೀರ್ಥಹಳ್ಳಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಹೊಸನಗರ ತಾಲ್ಲೂಕು, ಅರಮನೆ ಕೊಪ್ಪ ಗ್ರಾಮ ಪಂಚಾಯತಿಯ ಕುಂದಗಲ್

ಗ್ರಾಮದ ಸುತ್ತಮುತ್ತ ಇತ್ತೀಚಿಗೆ ಸುರಿದ ಭಾರಿ ಮಳೆಯಿಂದಾಗಿ ಭಯಾನಕ ರೀತಿಯಲ್ಲಿ ಗುಡ್ಡಕುಸಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ಒದಗಿಸುವುದು)

(ಆ) ಬಂದಿದ್ದಲ್ಲಿ ಸದರಿ ಗ್ರಾಮದ ಸುತ್ತಮುತ್ತ ೨೫ ಎಕರೆಗೂ ಹೆಚ್ಚು ಪ್ರದೇಶದ ಫಸಲು ಬರುವ ಅಡಿಕೆ ತೋಟ ಹಾಳಾಗಿ ಹಾಗೂ ಈ ಗ್ರಾಮದ ಸಂಪರ್ಕ ರಸ್ತೆ ಸಂಪೂರ್ಣ ಕುಸಿದು ಹೋಗಿದ್ದು, ನಾಗರೀಕರ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ಸದರಿ ಸಂಪರ್ಕ ರಸ್ತೆಯನ್ನು ಸರಿಪಡಿಸಿ ರೈತರಿಗೆ ಪರಿಹಾರ ಒದಗಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು ? (ಸಂಪೂರ್ಣ ವಿವರ ಒದಗಿಸುವುದು)

## ರಸ್ತೆ ಸೇತುವೆಗಳ ದುರಸ್ತಿ

**ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ) :–**

೨೧ (೩೬೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲೆಯಲ್ಲಿ ಇತ್ತೀಚಿಗೆ ಸುರಿದ ಭಾರಿ ಮಳೆಯಿಂದಾಗಿ ಲೋಕೋಪಯೋಗಿ ಇಲಾಖೆಯಡಿ ಬರುವ ರಸ್ತೆಗಳು ಹಾಳಾಗಿ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ಸಂಚರಿಸಲು ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಎಷ್ಟು ಕಿ.ಮೀ.ರಸ್ತೆಗಳು ಹಾಳಾಗಿದೆ ; (ವಿಧಾನಸಭಾ ಕ್ಷೇತ್ರವಾರು ವಿವರ ಒದಗಿಸುವುದು)

(ಇ) ಸದರಿ ರಸ್ತೆಗಳನ್ನು ದುರಸ್ತಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಯಾವಾಗ ರಸ್ತೆಗಳನ್ನು ದುರಸ್ತಿಪಡಿಸಲಾಗುವುದು ; (ಸಂಪೂರ್ಣ ವಿವರ ಒದಗಿಸುವುದು)

(ಈ) ಈ ಜಿಲ್ಲೆಯ ವ್ಯಾಪ್ತಿಯಲ್ಲಿ ಇತ್ತೀಚಿಗೆ ಸುರಿದ ಭಾರಿ ಮಳೆಯಿಂದಾಗಿ ಸೇತುವೆಗಳು, ರಸ್ತೆಗಳು ದುರಸ್ತಿಯಾಗಿದ್ದು ಅವುಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ? (ವಿಧಾನಸಭಾ ಕ್ಷೇತ್ರವಾರು ವಿವರ ಒದಗಿಸುವುದು)

## ವಕ್ಫ್ ಸಂಸ್ಥೆಗಳು

**ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ) :–**

೨೨ (೩೬೮) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಕ್ಫ್ ಸಂಸ್ಥೆ ಸರ್ಕಾರದ ಅಧೀನದ ಸಂಸ್ಥೆಯೇ ; ವಕ್ಫ್ ಸಂಸ್ಥೆ ಮೇಲೆ ಕೇಂದ್ರ/ರಾಜ್ಯ ಸರ್ಕಾರಕ್ಕೆ ಇರುವ ಅಧಿಕಾರಗಳೇನು ;

(ಆ) ರಾಜ್ಯದಲ್ಲಿ ವಕ್ಫ್ ಸಂಸ್ಥೆ ಹೊಂದಿರುವ ಆಸ್ತಿಗಳು ಎಷ್ಟು; ಈ ಆಸ್ತಿಗಳಿಂದ ಪ್ರತಿ ವರ್ಷ ಬರುತ್ತಿರುವ ಆದಾಯ ಎಷ್ಟು; ಈ ಆದಾಯ ಯಾವ ಉದ್ದೇಶಕ್ಕೆ ಬಳಕೆಯಾಗುತ್ತಿದೆ ; (ಸಮಗ್ರ ವಿವರ ನೀಡುವುದು)

(ಇ) ವಕ್ಫ್‌ಕಾಯ್ದೆ ಜಾರಿಗೆ ಬಂದಿದ್ದು ಯಾವಾಗ ; ವಕ್ಫ್ ಆಸ್ತಿ ಎಂದರೇನು ; ಈ ಆಸ್ತಿಗಳು ವಕ್ಫ್ ಸಂಸ್ಥೆಗೆ ಯಾವ ರೂಪದಲ್ಲಿ ಬಂದಿದೆ ; (ದಾನ, ಗ್ರಾಂಟ್, ಖರೀದಿ ಅಥವಾ ಇತರೆ ಮೂಲಗಳ ವಿವರ ನೀಡುವುದು)

(ಈ) ವಕ್ಫ್ ಆಸ್ತಿಯಿಂದ ಬರುವ ಆದಾಯವು ಆ ಸಮುದಾಯದ ಅಭಿವೃದ್ಧಿ /ಆರ್ಥಿಕ ಪುನಃಶ್ಚೇತನಕ್ಕೆ ಬಳಕೆ ಆಗಿದೆಯೇ ; ಬಳಕೆ ಮಾಡಿಕೊಳ್ಳುವ ಕುರಿತು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಗೋಶಾಲೆಗಳ ನಿರ್ಮಾಣ

**ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ) :–**

೨೩ (೩೬೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೨–೨೩ನೇ ಸಾಲಿನ ಆಯವ್ಯಯದಲ್ಲಿ ಪ್ರತಿ ಜಿಲ್ಲೆಗೊಂದರಂತೆ ೩೫ ಹೊಸ ಗೋಶಾಲೆ ನಿರ್ಮಿಸಲು ಘೋಷಣೆ ಮಾಡಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ಹಾಗಿದ್ದಲ್ಲಿ, ಈ ಉದ್ದೇಶಕ್ಕೆ ಮೀಸಲಿಟ್ಟಿದ್ದ ಅನುದಾನ ಎಷ್ಟು; ಈವರೆಗೆ ಬಿಡುಗಡೆ ಮಾಡಿರುವ ಮತ್ತು ವೆಚ್ಚ ಮಾಡಿರುವ ಅನುದಾನ ಎಷ್ಟು ; ಈವರೆಗೆ ಎಷ್ಟು ಗೋಶಾಲೆಗಳನ್ನು ನಿರ್ಮಿಸಲಾಗಿದೆ; ಪ್ರಗತಿಯಲ್ಲಿರುವ ಮತ್ತು ಪೂರ್ಣಗೊಂಡಿರುವ ಗೋಶಾಲೆಗಳೆಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಪ್ರತಿ ಜಿಲ್ಲೆಯಲ್ಲಿ ಹೊಸ ಗೋಶಾಲೆ ನಿರ್ಮಿಸುವ ಕುರಿತು ಸರ್ಕಾರದ ನಿಲುವೇನು ;

(ಈ) ಕಳೆದ ೨ ವರ್ಷದಿಂದ ರಾಜ್ಯದಲ್ಲಿ, ಅಕ್ರಮವಾಗಿ ಕಸಾಯಿಖಾನೆ ನಡೆಸುತ್ತಿರುವ ಕುರಿತು ದಾಖಲಾದ ಪ್ರಕರಣಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಉ) ಕಸಾಯಿಖಾನೆ ನಡೆಸುತ್ತಿರುವವರ ವಿರುದ್ಧ ಸರ್ಕಾರವು ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

# ಎಲೆಕ್ಟ್ರಿಕ್ ಬಸ್‌ಗಳ ಸುವ್ಯವಸ್ಥೆ

**ಶ್ರೀ ಉಮಾನಾಥ್ ಎ.ಕೋಟ್ಯಾನ್ (ಮೂಡಬಿದ್ರೆ) :-**

೨೪ (೩೨೬) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಧಾನ ಮಂತ್ರಿ ಇ-ಡ್ರೈವ್ ಯೋಜನೆಯಡಿ ರಾಜ್ಯ ಪಡೆದಿರುವ ಎಲಕ್ಟ್ರಿಕ್ ಬಸ್‌ಗಳು ಮತ್ತು ಅವುಗಳ ಸುವ್ಯವಸ್ಥಿತ ಬಳಕೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಅವುಗಳಲ್ಲಿ ಖಾಸಗಿ ಚಾಲಕರ ಬದಲು ರಾಜ್ಯ ಸಾರಿಗೆ ಸಂಸ್ಥೆಯ ಚಾಲಕರನ್ನೇ ಬಳಸಿಕೊಳ್ಳಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆಯೇ ; ಈ ಕುರಿತು ಕೇಂದ್ರ ಸರ್ಕಾರದ ಕ್ರಮಗಳೇನು ; (ವಿವರ ನೀಡುವುದು)

(ಇ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಗೆ ಅತಿ ಹೆಚ್ಚು ಎಲೆಕ್ಟ್ರಿಕ್ ಬಸ್‌ಗಳ ಅಗತ್ಯವಿದ್ದು ಕೇಂದ್ರ ಸರ್ಕಾರ ರಾಜ್ಯದ ಬೇಡಿಕೆಯನ್ನು ಪೂರೈಸುವಲ್ಲಿ ನೀಡಿದ ಭರವಸೆಗಳಾವುವು ;

(ಈ) ಹಾಗಿದ್ದಲ್ಲಿ, ಸಂಚಾರ ಸುವ್ಯವಸ್ಥೆಗೆ ಕೇಂದ್ರ ಸರ್ಕಾರದ ಇನ್ನಿತರ ಸಹಕಾರ ಮತ್ತು ಮಾರ್ಗದರ್ಶನಗಳು ಯಾವುವು ; (ವಿವರ ನೀಡುವುದು)

(ಉ) ಪರಿಸರ ಮಾಲಿನ್ಯ / ಶಬ್ದ ಮಾಲಿನ್ಯವನ್ನು ತಡೆಗಟ್ಟಲು ಹಾಗೂ ಸಾರ್ವಜನಿಕರಿಗೆ ಸುಲಭಸಾಧ್ಯ ನಗರ ಸಂಚಾರ ವ್ಯವಸ್ಥೆಗೊಳಿಸುವಲ್ಲಿ ಎಲೆಕ್ಟ್ರಿಕ್ ಬಸ್‌ಗಳ ಸೇವೆಯೊಂದಿಗೆ ರಾಜ್ಯ ಸರ್ಕಾರದ ಮಾದರಿ ನಗರ ಸಂಚಾರ ಸುವ್ಯವಸ್ಥೆಗೆ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

# ಮನೆ ನಿವೇಶನ

**ಶ್ರೀ ಉಮಾನಾಥ್ ಎ. ಕೋಟ್ಯಾನ್ (ಮೂಡಬಿದ್ರೆ) :–**

೨೫ (೩೨೭) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ಕರ್ನಾಟಕ ಗೃಹ ಮಂಡಳಿ ವ್ಯಾಪ್ತಿಯಿಂದ ಒದಗಿಸಿರುವ ಮನೆ ನಿವೇಶನಗಳೆಷ್ಟು ; (ಜಿಲ್ಲಾವಾರು, ಸಂಖ್ಯಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಗೃಹ ಮಂಡಳಿ ವ್ಯಾಪ್ತಿಯಲ್ಲಿ ಅರ್ಹ ಫಲಾನುಭವಿಗಳಿಗೆ ಮನೆ/ನಿವೇಶನಗಳನ್ನು ಅಧಿಕೃತ ಹಂಚಿಕೆ ಮಾಡಿದ್ದರೂ ನೋಂದಣಿ ಮಾಡುವ ಕುರಿತು ವಿಳಂಬವಾಗುತ್ತಿರುವುದನ್ನು ಪರಿಹರಿಸಿ ಸಕಾಲಿಕ ನೋಂದಣಿಯೊಂದಿಗೆ ಮೂಲಸೌಲಭ್ಯಗಳನ್ನು ಒದಗಿಸಿಕೊಡುವ ಮೂಲಕ ಗೃಹ ಮಂಡಳಿಯ ಧ್ಯೇಯೋದ್ದೇಶಗಳು ಪರಿಪೂರ್ಣವಾಗಿ ಜಾರಿಗೊಳಿಸಲು ಮಂಡಳಿಯ ಸಕಾಲಿಕ ಕ್ರಮಗಳು ಯಾವುವು ;

(ಇ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಅರ್ಹ ಫಲಾನುಭವಿಗಳಿಗೆ ಮನೆ/ನಿವೇಶನಗಳನ್ನು ಸುವ್ಯವಸ್ಥಿತ ನಿಯಮಗಳ ಮೂಲಕ ಒದಗಿಸಿಕೊಡುವಲ್ಲಿ ಮಂಡಳಿಯವರ ಕ್ರಮಗಳು ಯಾವುವು ;

(ಈ) ಬೆಂಗಳೂರು ಮಹಾನಗರ, ರಾಜ್ಯದ ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ವಸತಿ ಸೌಲಭ್ಯಗಳನ್ನು ಜನಸಾಮನ್ಯರಿಗೂ ಒದಗಿಸಿಕೊಡುವಲ್ಲಿ ಗೃಹ ಮಂಡಳಿಯವರ ಮಾದರಿ ಮತ್ತು ಅನುಕ್ರಮಣೀಯ ಕ್ರಮಗಳೇನು ? (ವಿವರ ನೀಡುವುದು)

# ಗೇಣಿ ಜಮೀನಿನ ಹಕ್ಕುಬಾಧ್ಯತೆಗಳ ಸಂರಕ್ಷಣೆ

**ಶ್ರೀ ಉಮಾನಾಥ್ ಎ ಕೋಟ್ಯಾನ್ (ಮೂಡಬಿದ್ರೆ) :–**

೨೬ (೩೨೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕುಂಬಾರರ ಗೃಹ ಕೈಗಾರಿಕಾ ಸಹಕಾರ ಸಂಘ, ಕುಳಾಯಿ, ಮಂಗಳೂರು–ಇವರು ಮಂಗಳೂರು ತಾಲ್ಲೂಕಿನ ಪಕ್ಷಿಕೆರೆ ಗ್ರಾಮದ ಸರ್ವೆ ನಂಬರ್ ೭೦ರ ಗೇಣಿ ಹಕ್ಕನ್ನು ೨೦೦೫ರಲ್ಲಿ ಯಾವ ಕಾರಣಕ್ಕಾಗಿ ಹಾಗೂ ಯಾವ ಕಂದಾಯ ಇಲಾಖಾ ಕಾನೂನು ನಿಯಮಗಳಡಿಯಲ್ಲಿ ಸರ್ಕಾರ ತನ್ನ ವಶಕ್ಕೆ ಪಡೆದಿದೆ ;

(ಆ) ಈ ಕುರಿತು ಫಲಾನುಭವಿ ಸಂಘವು ಇಲ್ಲಿಯ ತನಕ ಸದರಿ ಜಮೀನಿನ ಗೇಣಿ ಕಾಲಾವಧಿಯನ್ನು ವಿಸ್ತರಿಸಲು ಅರ್ಜಿ/ಮನವಿಗಳ ಸಲ್ಲಿಕೆ ಆಧರಿಸಿ, ಆ ಕುರಿತು ಸರ್ಕಾರದ ಪ್ರತ್ಯುತ್ತರ ನೀಡಿಕೆ ಮತ್ತು ಅವರ ಗೇಣಿ ಹಕ್ಕನ್ನು ಯಾವಾಗ ಸರ್ಕಾರ ರದ್ದಪಡಿಸಿದೆ ;

(ಇ) ೧೯೯೫ರಲ್ಲಿ ನಮೂದಿತ ಜಮೀನನ್ನು ಉಲ್ಲೇಖಿತ ಸಂಘಕ್ಕೆ ಗೋಮಾಳ ಶೀರ್ಷಿಕೆಯಿಂದ ತೆಗೆದು ಹಾಕಲಾಗಿದೆಯೇ ; ೨೦೦೫ರ ನಂತರ ಈ ಜಮೀನಿನ ಕಂದಾಯ ಅಥವಾ ಪಶುವೈದ್ಯಕೀಯ ಇಲಾಖೆಯಿಂದ ಸದರಿ ಗೋಮಾಳ ಅಭಿವೃದ್ಧಿಗಾಗಿ ಖರ್ಚು ಮಾಡಿದ ಮೊತ್ತವೆಷ್ಟು ; (ಲೆಕ್ಕ ಶೀರ್ಷಿಕೆವಾರು, ಇಸವಿವಾರು ವಿವರ ನೀಡುವುದು)

(ಈ) ೧೯೯೫ರಲ್ಲಿ ಈ ಜಮೀನು ಆಗಿನ ನಗರ ವ್ಯಾಪ್ತಿಗಿಂತ ಎಷ್ಟು ಕೀ.ಮಿ ಅಂತರದಲ್ಲಿತ್ತು ; ಮಂಗಳೂರು ನಗರ ವ್ಯಾಪ್ತಿಯ ಪ್ರದೇಶಗಳಲ್ಲಿ ಕೈಗಾರಿಕೆಗಳಿಗೆ ಸರ್ಕಾರಿ ಮತ್ತು ಖಾಸಗಿ

ಜಮೀನುಗಳನ್ನು ವಶಪಡಿಸಿಕೊಂಡು ಮಧ್ಯಮ/ಬೃಹತ್ ಕೈಗಾರಿಕೆಗಳಿಗೆ/ಖಾಸಗಿ ಸಂಸ್ಥೆಗಳಿಗೆ ನೀಡಲಾಗಿದೆಯೇ ; (ನಗರ ಸಭಾವಾರು ವಿವರ ನೀಡುವುದು)

(ಉ) ಅರ್ಹ ಫಲಾನುಭವಿ ಕುಂಬಾರರ ಗೃಹ ಕೈಗಾರಿಕಾ ಸಹಕಾರ ಸಂಘ, ಕುಳಾಯಿ ಇವರ ಅರ್ಹತಾನುಸಾರದ ಬೇಡಿಕೆ, ಅವಶ್ಯಕತೆ, ಹಾಗೂ ಅವರಿಗೆ ಈ ಕುರಿತಾದ ಅನ್ಯಾಯ ಮತ್ತು ಗುಡಿಕೈಗಾರಿಕೆಗೆ ಸರ್ಕಾರದ ಅಸಹಕಾರಗಳನ್ನು ಗಮನಿಸಿ ಸಂಬಂಧಿತರ ನ್ಯಾಯಯುತ ಮನವಿಯನ್ನು ಪರಿಗಣಿಸುವ ಮೂಲಕ ಪ್ರೋತ್ಸಾಹ ನೀಡಲು ಸರ್ಕಾರದ ಕಾಲನಿಗದಿತ ತುರ್ತು ಆದ್ಯತಾ ಕ್ರಮಗಳು ಯಾವುವು ? (ವಿವರ ನೀಡುವುದು)

## ಬೆಳೆವಿಮೆ ಸೌಲಭ್ಯ

**ಶ್ರೀ ಉಮಾನಾಥ್ ಎ ಕೋಟ್ಯಾನ್ (ಮೂಡಬಿದ್ರೆ) :–**

೨೭ (೩೨೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೃಷಿಕರ ಬೆಳೆ ನಾಶವಾಗುತ್ತಿರುವುದನ್ನು ಸರ್ಕಾರ ಗಮನಿಸಿ ಕೈಗೊಂಡ ಪರಿಹಾರ ಕ್ರಮಗಳು ಯಾವುವು ;

(ಆ) ಹಾಗಿದ್ದಲ್ಲಿ ಕಳೆದ ಎರಡು ವರ್ಷಗಳಲ್ಲಿ ಇಂಥ ಎಷ್ಟು ಪ್ರಕರಣಗಳನ್ನು ಗಮನಿಸಿ ಪರಿಹಾರ ಮತ್ತಿತರ ಸೌಲಭ್ಯಗಳನ್ನು ಕೃಷಿಕರಿಗೆ ಒದಗಿಸಿಕೊಡಲಾಗಿದೆ ; ( ವಿವರ ನೀಡುವುದು)

(ಇ) ರಾಜ್ಯದಲ್ಲಿ ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ ಇಳುವರಿ ಆಧಾರಿತ ಬೆಳೆವಿಮಾ ಯೋಜನೆ ಹಾಗೂ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆಯೇ ; (ವಿವರ ನೀಡುವುದು)

(ಈ) ಕಳೆದ ಎರಡು ವರ್ಷಗಳಲ್ಲಿ ಎಷ್ಟು ಜನ ಫಲನುಭವಿಗಳಿಗೆ ವಿಮಾ ಯೋಜನಾ ಸೌಲಭ್ಯಗಳನ್ನು ಒದಗಿಸಿಕೊಡಲಾಗಿದೆ ;

(ಉ) ಜಾರಿಯಲ್ಲಿರುವ ವಿಮಾ ಯೋಜನೆ ಸೌಲಭ್ಯವು ವನ್ಯಜೀವಿಗಳಿಂದ ಆದ ಬೆಳೆಹಾನಿಗೆ ಪರಿಹಾರ ನೀಡಿಕೆಗೆ ಅನ್ವಯವಾಗದ ಕಾರಣ ನೊಂದ ರೈತರಿಗೆ ಉಂಟಾಗಿರುವ ಬೆಳೆಹಾನಿಗೆ ಸರ್ಕಾರದ ಪರಿಹಾರ ನೀಡಿಕೆ ಕುರಿತು ಕ್ರಮಗಳೇನು ;

(ಊ) ವನ್ಯ ಜೀವಿಗಳಿಂದ ಉಂಟಾಗುವ ಬೆಳೆನಷ್ಟ ಪರಿಹರಿಸಲು ಸರ್ಕಾರದ ಮುಂಜಾಗರೂಕತೆ ಕ್ರಮಗಳೇನು ? (ವಿವರ ಒದಗಿಸುವುದು)

## ಖಾಲಿ ಇರುವ ಹುದ್ದೆ

**ಶ್ರೀ ಎಸ್.ಎನ್. ನಾರಾಯಣಸ್ವಾಮಿ ಕೆ.ಎಂ. (ಬಂಗಾರಪೇಟೆ) :–**

೨೮ (೧೫೭೭) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲೆಯುಲ್ಲಿ ಪಶುಸಂಗೋಪನಾ ಇಲಾಖೆಗೆ ಮಂಜೂರಾದ, ಭರ್ತಿಯಾದ ಹಾಗೂ ಖಾಲಿ ಇರುವ ಹುದ್ದೆಗಳೆಷ್ಟು ; (ತಾಲ್ಲೂಕುವಾರು, ಹುದ್ದೆವಾರು ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಬಂಗಾರಪೇಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿರುವ ಪಶು ಆಸ್ಪತ್ರೆ/ ಪಶು ಚಿಕಿತ್ಸಾಲಯ/ಪ್ರಾಥಮಿಕ ಚಿಕಿತ್ಸಾಲಯಗಳಲ್ಲಿ ವೈದ್ಯರ ಮತ್ತು ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಆಸ್ಪತ್ರೆ / ಚಿಕಿತ್ಸಾಲಯುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರ, ಸಿಬ್ಬಂದಿಗಳ ಸಂಖ್ಯೆ ಎಷ್ಟು ? (ಆಸ್ಪತ್ರೆಗಳ ಸಂಪೂರ್ಣ ಮಾಹಿತಿ ಒದಗಿಸುವುದು)

## ಮನೆಗಳ ಹಂಚಿಕೆ

**ಶ್ರೀ ಎಸ್.ಎನ್. ನಾರಾಯಣಸ್ವಾಮಿ ಕೆ.ಎಂ. (ಬಂಗಾರಪೇಟೆ) :–**

೨೯ (೧೫೪೮) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಬಂಗಾರಪೇಟೆ ವಿಧಾನಸಭಾ ಮತಕ್ಷೇತ್ರಕ್ಕೆ ಹಂಚಿಕೆಯಾದ ಮನೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಬಾಕಿ ಇರುವ ಮನೆಗಳನ್ನು ಯಾವಾಗ ಹಂಚಿಕೆ ಮಾಡಲಾಗುವುದು ? (ಗ್ರಾಮವಾರು ಸಂಪೂರ್ಣ ವಿವರ ನೀಡುವುದು)

## ಅನುದಾನ

**ಶ್ರೀ ಎಸ್.ಎನ್. ನಾರಾಯಣಸ್ವಾಮಿ ಕೆ.ಎಂ. (ಬಂಗಾರಪೇಟೆ) :–**

೩೦ (೧೫೪೯) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಂಗಾರಪೇಟೆ ವಿಧಾನಸಭಾ ಕ್ಷೇತ್ರದಲ್ಲಿ ಇರುವ ಘೋಷಿತ ಕೊಳಗೇರಿ ಪ್ರದೇಶಗಳು ಎಷ್ಟು; (ವಿವರ ನೀಡುವುದು)

(ಆ) ಕೊಳಗೇರಿ ಪ್ರದೇಶಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಕಳೆದ ೩ ವರ್ಷಗಳಲ್ಲಿ ಕೊಳಗೇರಿ ಪ್ರದೇಶಗಳ ಅಭಿವೃದ್ಧಿಗೆ ಮಂಜೂರು ಮಾಡಿರುವ ಅನುದಾನ ಎಷ್ಟು? (ವಿವರ ನೀಡುವುದು)

## ಇಂದಿರಾ ಆವಾಸ್ ಯೋಜನೆ

**ಶ್ರೀ ಎಸ್.ಎನ್. ನಾರಾಯಣಸ್ವಾಮಿ ಕೆ.ಎಂ. (ಬಂಗಾರಪೇಟೆ) :–**

೩೧ (೧೬೦) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲೆಯಲ್ಲಿ ಇಂದಿರಾ ಆವಾಸ್ ಯೋಜನೆಯಡಿ ಮನೆ ದುರಸ್ತಿಗಾಗಿ ಸಹಾಯಧನ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಫಲಾನುಭವಿಗಳ ವಿವರದೊಂದಿಗೆ ಕಳೆದ ಮೂರು ವರ್ಷಗಳ ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಇಂದಿರಾ ಆವಾಸ್ ಯೋಜನೆಯಡಿ ನೆರೆ ಸಂತ್ರಸ್ಥರು ಮನೆ ದುರಸ್ತಿ ಪಡೆದ ಫಲಾನುಭವಿಗಳಿಗೆ ಪ್ರಸ್ತುತ ಮನೆ ನಿರ್ಮಾಣಕ್ಕೆ ಆಯ್ಕೆ ಮಾಡಲು ಸಾಧ್ಯವಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಬಸ್ ಡಿಪೋ ನಿರ್ಮಾಣ

**ಶ್ರೀ ಎಸ್.ಎನ್. ನಾರಾಯಣಸ್ವಾಮಿ ಕೆ.ಎಂ. (ಬಂಗಾರಪೇಟೆ) :–**

೩೨ (೨೧೩) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಂಗಾರಪೇಟೆ ವಿಧಾನಸಭಾ ಕ್ಷೇತ್ರದಲ್ಲಿ ಪ್ರತ್ಯೇಕ ಕ.ರಾ.ರ.ಸಾ.ಸಂಸ್ಥೆ ಡಿಪೋ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ತಾಲ್ಲೂಕಿನಲ್ಲಿ ಸುಮಾರು ೪೦೦ ಹಳ್ಳಿಗಳಿದ್ದು ೩.೫೦ ಲಕ್ಷ ಜನ ಸಂಖ್ಯೆಯ ಗಡಿ ತಾಲ್ಲೂಕಿಗೆ ಡಿಪೋ ಮಂಜೂರು ಮಾಡಲು ಈಗಾಗಲೇ ಪ್ರಸ್ತಾವನೆ ಸಲ್ಲಿಸಿದ್ದು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಈ ತಾಲ್ಲೂಕಿನ ಬೂದಿಕೋಟೆ ಹೋಬಳಿ ಬೂದಿಕೋಟೆಯಲ್ಲಿ ಈಗಾಗಲೆ ಖಾಲಿ ಜಾಗ ಇದ್ದು ಸದರಿ ಸ್ಥಳದಲ್ಲಿ ಬಸ್ ನಿಲ್ದಾಣ ನಿರ್ಮಾಣ ಮಾಡುವ ಪ್ರಸ್ತಾವನೆ ಸಲ್ಲಿಸಿದ್ದು ಇದುವರೆಗೂ ಕ್ರಮ ಕೈಗೊಳ್ಳದಿರಲು ಕಾರಣವೇನು ?

## ಜೈನ ಅಭಿವೃದ್ಧಿ ನಿಗಮ ಸ್ಥಾಪನೆ

**ಶ್ರೀ ಐಹೊಳೆ ದುರ್ಯೋಧನ ಮಹಾಲಿಂಗಪ್ಪ (ರಾಯಬಾಗ) :–**

೩೩ (೧೦೦) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜೈನ ಸಮಾಜದವರು ಪ್ರತ್ಯೇಕ ಜೈನ ಅಭಿವೃದ್ಧಿ ನಿಗಮ ಸ್ಥಾಪನೆ ಮಾಡುವಂತೆ ಬಹಳ ವರ್ಷಗಳಿಂದ ಬೇಡಿಕೆ ಇಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಸಮಾಜವು ಆರ್ಥಿಕವಾಗಿ ಹಿಂದುಳಿದಿದ್ದು, ಅವರ ಅಭಿವೃದ್ಧಿಗಾಗಿ ಪ್ರತ್ಯೇಕ ಜೈನ ಅಭಿವೃದ್ಧಿ ನಿಗಮ ಸ್ಥಾಪಿಸುವ ಆಲೋಚನೆ ಸರ್ಕಾರಕ್ಕಿದೆಯೇ ;

(ಇ) ಹಾಗಿದ್ದಲ್ಲಿ, ಪ್ರತ್ಯೇಕ ಜೈನ ಅಭಿವೃದ್ಧಿ ನಿಗಮ ಯಾವ ಕಾಲಮಿತಿಯಲ್ಲಿ ಸ್ಥಾಪಿಸಲಾಗುವುದು ;

(ಈ) ರಾಜ್ಯದಲ್ಲಿ ಅಲ್ಪಸಂಖ್ಯಾತರ ಕಾಲೋನಿಗಳ ಸಮಗ್ರ ಅಭಿವೃದ್ಧಿ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಸಲುವಾಗಿ ೨೦೨೩–೨೪ ಮತ್ತು ೨೦೨೪–೨೫ನೇ ಸಾಲಿನಲ್ಲಿ ಎಷ್ಟು ಅನುದಾನವನ್ನು ನಿಗದಿಪಡಿಸಿ ಆದೇಶ ಹೊರಡಿಸಲಾಗಿರುತ್ತದೆ ; ಈ ಪೈಕಿ ಬೆಳಗಾವಿ ಜಿಲ್ಲೆಗೆ ಎಷ್ಟು ಅನುದಾನವನ್ನು ಹಂಚಿಕೆ ಮಾಡಲಾಗಿರುತ್ತದೆ ; (ಮಾಹಿತಿ ನೀಡುವುದು)

(ಉ) ಬೆಳಗಾವಿ ಜಿಲ್ಲೆ ರಾಯಬಾಗ ಹಾಗೂ ಚಿಕ್ಕೋಡಿ ತಾಲೂಕಿನಲ್ಲಿರುವ ಬಹುತೇಕ ಅಲ್ಪಸಂಖ್ಯಾತರ ಕಾಲೋನಿಗಳು ಅಭಿವೃದ್ಧಿ ವಂಚಿತರಾಗಿರುವ ಹಿನ್ನಲೆಯಲ್ಲಿ ಈ ಕಾಲೋನಿಗಳನ್ನು ಅಭಿವೃದ್ಧಿಪಡಿಸಲು ಮಂಜೂರಾದ ಅನುದಾನ ಎಷ್ಟು; ಮಂಜೂರಾದ ಅನುದಾನದಲ್ಲಿ ಎಷ್ಟು ಬಿಡುಗಡೆಗೊಳಿಸಲಾಗಿದೆ ; (ವಿವರ ನೀಡುವುದು)

(ಊ) ಬಿಡುಗಡೆ ಮಾಡದೆ ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಅನುದಾನ ಬಿಡುಗಡೆ ಮಾಡಲಾಗುವುದು ? (ವಿವರ ನೀಡುವುದು)

## ದೇವಸ್ಥಾನಗಳ ಜೀರ್ಣೋದ್ಧಾರ

**ಶ್ರೀ ಐಹೊಳೆ ದುರ್ಯೋಧನ ಮಹಾಲಿಂಗಪ್ಪ (ರಾಯಬಾಗ) :–**

೩೪ (೧೦೧) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ತೀರ್ಥಹಳ್ಳಿ ಕ್ಷೇತ್ರದ ವ್ಯಾಪ್ತಿಯಲ್ಲಿನ ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ಮುಜರಾಯಿ ಇಲಾಖೆಯಿಂದ ಬಿಡುಗಡೆಯಾದ ಅನುದಾನವೆಷ್ಟು ; ಯಾವ ಯಾವ ದೇವಸ್ಥಾನಗಳಿಗೆ ಎಷ್ಟೆಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಜೀರ್ಣೋದ್ಧಾರ ಕಾಮಗಾರಿ ಯಾವ ಹಂತದಲ್ಲಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ದೇವಸ್ಥಾನಗಳನ್ನು ಮುಜರಾಯಿ ಇಲಾಖೆಯ ವ್ಯಾಪ್ತಿಗೆ ಒಳಪಡಿಸಲು ಇರುವ ನಿಯಮಗಳೇನು ;

(ಇ) ತೀರ್ಥಹಳ್ಳಿ ಕ್ಷೇತ್ರದ ಯಾವ ಯಾವ ದೇವಸ್ಥಾನಗಳನ್ನು ಮುಜರಾಯಿ ಇಲಾಖೆಯ ವ್ಯಾಪ್ತಿಗೆ ಒಳಪಡಿಸಲಾಗಿದೆ ; (ಸಂಪೂರ್ಣ ವಿವರ ಒದಗಿಸುವುದು)

(ಈ) ದೇವಸ್ಥಾನಗಳಿಗೆ ಪೂಜಾ ಸಾಮಗ್ರಿಗಳನ್ನು ಒದಗಿಸಲು ಅರ್ಚಕರುಗಳಿಗೆ ಇಂತಿಷ್ಟು ಹಣವನ್ನೇನಾದರು ನಿಗದಿಪಡಿಸಲಾಗಿದೆಯೇ ; (ವಿವರ ನೀಡುವುದು)

(ಉ) ಅರ್ಚಕರುಗಳಿಗೆ ನೀಡಲಾಗುತ್ತಿರುವ ಗೌರವ ಧನದಲ್ಲಿ ಪೂಜಾ ಸಾಮಗ್ರಿಗಳನ್ನು ಖರೀದಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ?

## ಮೀನುಗಾರಿಕೆ ಉತ್ತೇಜನ

**ಶ್ರೀ ಐಹೊಳೆ ದುರ್ಯೋಧನ ಮಹಾಲಿಂಗಪ್ಪ (ರಾಯಬಾಗ) :–**

೩೫ (೧೦೨) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿ ಮೀನುಗಾರಿಕೆ ಉತ್ತೇಜಿಸಲು ವಿಪುಲ ಅವಕಾಶಗಳಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ಹಾಗಿದ್ದಲ್ಲಿ, ಈ ಜಿಲ್ಲೆಯಲ್ಲಿ ಮೀನುಗಾರಿಕೆ ಮಾಡುವವರಿಗೆ ಸರ್ಕಾರದಿಂದ ಯಾವ ಯಾವ ಸೌಲಭ್ಯ ಹಾಗೂ ಸಹಾಯ ಧನ ನೀಡಲಾಗುವುದು ? (ವಿವರ ನೀಡುವುದು)

## ಯೋಜನೆಗಳು

**ಶ್ರೀ ಐಹೊಳೆ ದುರ್ಯೋಧನ ಮಹಾಲಿಂಗಪ್ಪ (ರಾಯಬಾಗ) :–**

೩೬ (೧೦೩) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ರೈತರಿಗೆ ಪಶುಸಂಗೋಪನೆ ಇಲಾಖೆಯ ವತಿಯಿಂದ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ;

(ಆ) ಸದರಿ ಯೋಜನೆಗಳಡಿ ರೈತರ ವಂತಿಕೆ ಮತ್ತು ಸರ್ಕಾರದ ಸಹಾಯಧನವೆಷ್ಟು; (ಯೋಜನೆವಾರು ಮಾಹಿತಿ ನೀಡುವುದು)

(ಇ) ೨೦೨೩-೨೪ನೇ ಸಾಲಿನ ಯೋಜನೆಗಳಿಗೆ ಒದಗಿಸಲಾಗಿರುವ ಅನುದಾನವೆಷ್ಟು; (ಯೋಜನೆವಾರು ಮಾಹಿತಿ ನೀಡುವುದು)

(ಈ) ಎಷ್ಟು ರೈತರು ಈ ಯೋಜನೆಗಳ ಸೌಲಭ್ಯಗಳನ್ನು ಪಡೆದುಕೊಂಡಿರುತ್ತಾರೆ ? (ಯೋಜನೆವಾರು ಮಾಹಿತಿ ನೀಡುವುದು)

## ವೇತನ ನಿಗದಿ

**ಶ್ರೀ ಐಹೊಳೆ ದುರ್ಯೋಧನ ಮಹಾಲಿಂಗಪ್ಪ (ರಾಯಬಾಗ) :-**

೩೭ (೨೧೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರಾಮ ಆಡಳಿತಾಧಿಕಾರಿಗಳ ಸಂಖ್ಯೆ ಎಷ್ಟು;

(ಆ) ಈ ಗ್ರಾಮ ಆಡಳಿತಾಧಿಕಾರಿಗಳು ವೆಬ್ ತಂತ್ರಾಂಶಗಳಾದ ಇ-ಆಫೀಸ್, ಬಗರ್ ಹುಕುಂ, ಭೂಮಿ ಗರುಡ ಆಪ್, ಪೌತಿ ಆಂದೋಲನ ಆಪ್ ಹಾಗೂ ಇನ್ನಿತರ ತಾಂತ್ರಿಕ ಕೆಲಸ ಕಾರ್ಯಗಳನ್ನು ನಿರ್ವಹಿಸುತ್ತಿರುವುದರಿಂದ ಇವರಿಗೆ ತಾಂತ್ರಿಕ ಹುದ್ದೆಗಳಿಗೆ ನೀಡುವ ವೇತನ ಶ್ರೇಣಿಯನ್ನು ನಿಗಧಿಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಇ) ಗ್ರಾಮ ಆಡಳಿತಾಧಿಕಾರಿಗಳ ವಿವಿಧ ಬೇಡಿಕೆಗಳಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಕಾಮಗಾರಿಯ ಪ್ರಗತಿ

**ಶ್ರೀಮತಿ ಕರೆಮ್ಮ (ದೇವದುರ್ಗ) :–**

೩೮ (೯೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೇವದುರ್ಗ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಇಂಜಿನಿಯರಿಂಗ್ ಕಾಲೇಜ್ ಮಂಜೂರಾಗಿ, ಕಾಮಗಾರಿಯು ನಡೆಯುತ್ತಿರುವುದು ಸರ್ಕಾರ ಗಮನಕ್ಕೆ ಬಂದಿದೆಯೆ ;

(ಆ) ಬಂದಿದ್ದಲ್ಲಿ, ಸದರಿ ಕಾಮಗಾರಿಯು ತುಂಬಾ ಮಂದಗತಿಯಲ್ಲಿ ನಡೆಯುತ್ತಿರುವುದರಿಂದ ಯಾವ ವರ್ಷದಿಂದ ಕಾಲೇಜ್ ಪ್ರಾರಂಭವಾಗುತ್ತದೆ ;

(ಇ) ಸದರಿ ಕಾಮಗಾರಿಗೆ ಸರ್ಕಾರದಿಂದ ಬಿಡುಗಡೆಯದ ಅನುದಾನ ಎಷ್ಟು, ಇದುವರೆಗೂ ಖರ್ಚಾದ ಅನುದಾನವೆಷ್ಟು ; ( ಪೂರ್ಣ ಮಾಹಿತಿ ನೀಡುವುದು)

(ಈ) ಮಂದಗತಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಗುತ್ತಿಗೆದಾರರು ಮತ್ತು ಅಧಿಕಾರಿಗಳು ಶೀಘ್ರವಾಗಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದೇ ?

## ಅನುದಾನ ಬಿಡುಗಡೆ

**ಶ್ರೀಮತಿ ಕರೆಮ್ಮ (ದೇವದುರ್ಗ) :–**

೩೯ (೯೮) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೇವದುರ್ಗ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಹಿಂದಿನ ಸರ್ಕಾರದಲ್ಲಿ ದೇವಸ್ಥಾನಗಳ ಜೀರ್ಣೋದ್ಧಾರಕ್ಕಾಗಿ ಬಿಡುಗಡೆಯಾದ ಅನುದಾನವೆಷ್ಟು; ಯಾವ ಯಾವ ದೇವಸ್ಥಾನಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಸದರಿ ದೇವಸ್ಥಾನಗಳಿಗೆ ಬಿಡುಗಡೆಯಾದ ಅನುದಾನದಲ್ಲಿ ಕಾಮಗಾರಿಯನ್ನು ನಡೆಸದೆ ಬಿಲ್ಲನ್ನು ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಬಗ್ಗೆ ತನಿಖೆ ನಡೆಸುವಂತೆ ಸರ್ಕಾರದ ಗಮನಕ್ಕೆ ತರಲಾಗಿದ್ದು, ತನಿಖೆ ಯಾವ ಹಂತದಲ್ಲಿ ಇರುತ್ತದೆ ; (ಮಾಹಿತಿ ನೀಡುವುದು)

(ಈ) ತನಿಖೆ ಮಾಡದಿದ್ದಲ್ಲಿ ಪ್ರಸ್ತುತ ಅನುದಾನ ದುರುಪಯೋಗವಾಗಿರುವ ಸಂಬಂಧ ಪೂರ್ಣವಾಗಿ ತನಿಖೆ ಮಾಡಲು ಸರ್ಕಾರ ಯಾವ ಕ್ರಮವಹಿಸುವುದು; ಯಾವ ಕಾಲಮಿತಿಯೊಳಗೆ ತನಿಖೆ ಪೂರ್ಣಗೊಳಿಸಿ ನ್ಯಾಯ ಒದಗಿಸಲಾಗುವುದು ? (ಮಾಹಿತಿ ನೀಡುವುದು)

## ರುದ್ರಭೂಮಿಗೆ ಜಾಗ ಒದಗಿಸುವುದು

**ಶ್ರೀಮತಿ ಕರೆಮ್ಮ (ದೇವದುರ್ಗ) :–**

೪೦ (೯೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೇವದುರ್ಗ ಪಟ್ಟಣವು ವೇಗವಾಗಿ ಬೆಳೆಯುತ್ತಿದ್ದು ಹಿಂದೂಗಳು ಮರಣ ಹೊಂದಿದ್ದಲ್ಲಿ ಅವರುಗಳಿಗೆ ದೇವದುರ್ಗ ಪಟ್ಟಣದಲ್ಲಿ ರುದ್ರಭೂಮಿಯು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರುದ್ರಭೂಮಿಯನ್ನು ಗುರುತಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ; ಯಾವ ಕಾಲಮಿತಿಯೊಳಗೆ ಹೊಸ ರುದ್ರಭೂಮಿ ಗುರುತಿಸಿ, ಮಂಜೂರು ಮಾಡಲಾಗುವುದು ;

(ಇ) ದೇವದುರ್ಗ ವಿಧಾನಸಭಾ ಕ್ಷೇತ್ರದಲ್ಲಿ ಯಾವ ಯಾವ ಗ್ರಾಮಗಳಲ್ಲಿ ರುದ್ರಭೂಮಿಯು ಇರುವುದಿಲ್ಲ ; (ಮಾಹಿತಿ ನೀಡುವುದು)

(ಈ) ರುದ್ರಭೂಮಿ ಇಲ್ಲದಿರುವ ಕಡೆ ರುದ್ರಭೂಮಿಯನ್ನು ಗುರುತಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ; ಯಾವ ಕಾಲಮಿತಿಯೊಳಗೆ ರುದ್ರಭೂಮಿಯನ್ನು ಗುರುತಿಸಲಾಗುವುದು ;

(ಉ) ಹೊಸದಾಗಿ ಗುರುತಿಸುವ ರುದ್ರಭೂಮಿಗಳಲ್ಲಿ ಮೂಲಭೂತ ಸೌಲಭ್ಯ ಕಲ್ಪಿಸಲು ಅನುದಾನ ಬಿಡುಗಡೆಗೆ ಸರ್ಕಾರ ಯಾವ ಕ್ರಮಕೈಗೊಳ್ಳುವುದು ?

## ಗೇರು ಲೀಸ್ ಮಂಜೂರಾತಿ

**ಶ್ರೀ ಕಿರಣ್ ಕುಮಾರ್ ಕೊಡ್ಗಿ ಎ. (ಕುಂದಾಪುರ) :–**

೪೧ (೧೬೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯ ವ್ಯಾಪ್ತಿಯಲ್ಲಿ ಗೇರು ಲೀಸ್‌ಗಾಗಿ ಅರ್ಜಿ ಸಲ್ಲಿಸಿದವರ ಸಂಖ್ಯೆ ಎಷ್ಟು ; (ಫಲಾನುಭವಿವಾರು ಅರ್ಜಿದಾರರ ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಅರ್ಜಿ ಸಲ್ಲಿಸಿದವರಲ್ಲಿ ಮಾರ್ಗಸೂಚಿ ದರ ಪಾವತಿಸಿ ಮಂಜೂರಾತಿ ಪಡೆದವರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಅರ್ಜಿ ಸಲ್ಲಿಸಿ ಮಂಜೂರಾತಿ ಆಗದೇ ಇರುವವರಿಗೆ ಮಂಜೂರಾತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಮತ್ಸ್ಯಾಶ್ರಯ ಯೋಜನೆ

**ಶ್ರೀ ಕಿರಣ್ ಕುಮಾರ್ ಕೊಡ್ಗಿ ಎ. (ಕುಂದಾಪುರ) :–**

೪೨ (೧೬೯) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕುಂದಾಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ೨೦೧೮–೧೯ನೇ ಸಾಲಿನಲ್ಲಿ ಮತ್ಸ್ಯಾಶ್ರಯ ಯೋಜನೆಗೆ ಮಂಜೂರಾದ ಫಲಾನುಭವಿಗಳಲ್ಲಿ ಅನುದಾನ ಪಾವತಿಗೆ ಬಾಕಿ ಇರುವವರ ಸಂಖ್ಯೆ ಎಷ್ಟು; (ಫಲಾನುಭವಿವಾರು ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ೨೦೧೮–೧೯ ನೇ ಸಾಲಿನ ಮತ್ಸ್ಯಾಶ್ರಯ ಯೋಜನೆಯ ಮನೆಗಳ ಪ್ರಗತಿಯನ್ನು ನಿಗದಿತ ಕಾಲಮಿತಿಯಲ್ಲಿ ಪೂರ್ಣಗೊಳಿಸಿಲ್ಲ ಎನ್ನುವ ಕಾರಣ ನೀಡಿ ಅನುದಾನ ಬಿಡುಗಡೆಗೊಳಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ನಿಗದಿತ ಕಾಲಮಿತಿಯಲ್ಲಿ ಮನೆ ಪೂರ್ಣಗೊಳಿಸಲು ಮಾಹಿತಿ/ ತಿಳುವಳಿಕೆ ನೀಡಿದ ಫಲಾನುಭವಿಗಳ ಸಂಖ್ಯೆ ಎಷ್ಟು; (ದಾಖಲೆಯೊಂದಿಗೆ ಮಾಹಿತಿ ಒದಗಿದುವುದು)

(ಈ) ೨೦೧೮–೧೯ನೇ ಸಾಲಿನ ಮನೆ ಪೂರ್ಣಗೊಳಿಸಿದ ಫಲಾನುಭವಿಗಳಿಗೆ ಯಾವ ಕಾಲಮಿತಿಯಲ್ಲಿ ಅನುದಾನ ಬಿಡುಗಡೆಗೊಳಿಸಲಾಗುವುದು ?

## ಜಂಟಿ ಸರ್ವೆ ಮಾಡುವುದು

**ಶ್ರೀ ಕಿರಣ್ ಕುಮಾರ್ ಕೊಡ್ಗಿ ಎ. (ಕುಂದಾಪುರ) :–**

೪೩ (೧೭೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ ಈಗಾಗಲೇ ಪರಿಭಾವಿತ ಅರಣ್ಯ ಪ್ರದೇಶದಿಂದ ವಿರಹಿತಗೊಂಡು ಅಂತಿಮ ಪರಿಭಾವಿತ ಅರಣ್ಯ (ಡೀಮ್ಡ್ ಫಾರೆಸ್ಟ್) ಪ್ರದೇಶಗಳೆಷ್ಟು ; (ತಾಲ್ಲೂಕುವಾರು ಪಟ್ಟಿಯ ಸ್ಥಳ ಸರ್ವೆ ನಂಬರ್‌ಗಳ ವಿವರದೊಂದಿಗೆ ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಕುಂದಾಪುರ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಪರಿಭಾವಿತ ಅರಣ್ಯ ಪ್ರದೇಶದ ವಿರಹಿತಗೊಂಡ ಸ್ಥಳಗಳನ್ನು ಗುರುತಿಸಲು ಕಂದಾಯ ಹಾಗೂ ಅರಣ್ಯ ಇಲಾಖೆಯ ಜಂಟಿ ಸರ್ವೆಯ ಕಾರ್ಯ ಯಾವ ಹಂತದಲ್ಲಿದೆ ; (ಸರ್ವೆ ನಡೆಸಿದ ಗ್ರಾಮವಾರು ಸರ್ವೇ ನಂಬರ್‌ಗಳ ವಿವರದೊಂದಿಗೆ ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಕಂದಾಯ ಹಾಗೂ ಅರಣ್ಯ ಇಲಾಖೆಯವರು ಜಂಟಿ ಅಳತೆಯ ಕಾರ್ಯವನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ;

(ಈ) ಪರಿಭಾವಿತ ಅರಣ್ಯ ಪ್ರದೇಶದಿಂದ ವಿರಹಿತಗೊಂಡ ಸ್ಥಳಗಳಲ್ಲಿ ವಾಸ್ತವ್ಯಹೊಂದಿರುವ ಅರ್ಹ ಫಲಾನುಭವಿಗಳಿಗೆ ೯೪ ಸಿ ಹಾಗೂ ೯೪ ಸಿಸಿ ಯನ್ನು ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಬಸ್ಸುಗಳನ್ನು ಒದಗಿಸುವುದು

**ಶ್ರೀ ಕಿರಣ್ ಕುಮಾರ್ ಕೊಡ್ಗಿ ಎ. (ಕುಂದಾಪುರ) :–**

೪೪ (೧೭೧) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕುಂದಾಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮಂಜೂರಾದ ಕೆ.ಎಸ್.ಆರ್.ಟಿ.ಸಿ. ರೂಟ್ ಪರ್ಮಿಟ್‌ಗಳು ಯಾವುವು ; (ವಿವರ ಒದಗಿಸುವುದು)

(ಆ) ಈ ಕ್ಷೇತ್ರ ವ್ಯಾಪ್ತಿಯಲ್ಲಿ ಮಂಜೂರಾದ ಕೆ.ಎಸ್.ಆರ್.ಟಿ.ಸಿ. ರೂಟ್ ಪರ್ಮಿಟ್‌ಗಳ ಅನುಸಾರವಾಗಿ ಸಂಚಾರ ಮಾಡದೇ ಸ್ಥಗಿತ ಮಾಡಿರುವ ರೂಟ್‌ಗಳು ಯಾವುವು ; (ವಿವರ ಒದಗಿಸುವುದು)

(ಇ) ಈ ಕ್ಷೇತ್ರ ವ್ಯಾಪ್ತಿಯ ಗ್ರಾಮೀಣ ಭಾಗದಲ್ಲಿ ಓಡಾಡುತ್ತಿರುವ ಕೆಲವು ಕೆ.ಎಸ್.ಆರ್.ಟಿ.ಸಿ. ಬಸ್ಸುಗಳನ್ನು ಸ್ಥಗಿತಗೊಳಿಸಿರುವುದಕ್ಕೆ ಕಾರಣಗಳೇನು ;

(ಈ) ಈ ಕ್ಷೇತ್ರ ವ್ಯಾಪ್ತಿಯ ಅಗತ್ಯ ರೂಟ್‌ಗಳ ಬಸ್ ಸ್ಥಗಿತಗೊಳಿಸಿರುವುದರಿಂದ ಗ್ರಾಮೀಣ ಪ್ರದೇಶದಲ್ಲಿನ ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಹುದ್ದೆಗಳ ಭರ್ತಿ

**ಶ್ರೀ ಕೃಷ್ಣ ನಾಯಕ (ಹಡಗಲಿ) :–**

೪೫ (೧೭೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೂವಿನ ಹಡಗಲಿ ವಿಧಾನಸಭಾ ಕ್ಷೇತ್ರದಲ್ಲಿ ಕಂದಾಯ ಇಲಾಖೆಗೆ ಮಂಜೂರಾದ ಹುದ್ದೆಗಳು ಎಷ್ಟು ; ಅದರಲ್ಲಿ ಎಷ್ಟು ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ ;

(ಆ) ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು ಸರ್ಕಾರ ಯಾವಾಗ ಭರ್ತಿ ಮಾಡಲು ಕ್ರಮ ಕೈಗೊಳ್ಳುವುದು ? (ಮಾಹಿತಿ ನೀಡುವುದು)

## ಸೇತುವೆ ಹಾಗೂ ರಸ್ತೆಗಳ ದುರಸ್ತಿ

**ಶ್ರೀ ಕೃಷ್ಣ ನಾಯಕ (ಹಡಗಲಿ) :–**

೪೬ (೧೭೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೂವಿನ ಹಡಗಲಿ ವಿಧಾನಸಭಾ ಕ್ಷೇತ್ರದಲ್ಲಿ ತುರ್ತಾಗಿ ಎಷ್ಟು ಸೇತುವೆ ನಿರ್ಮಾಣಗಳ ಅವಶ್ಯಕತೆ ಇದೆ ;

(ಆ) ಹಾಗಿದ್ದಲ್ಲಿ, ಇಲ್ಲಿಯವರೆಗೆ ಸೇತುವೆ ನಿರ್ಮಾಣ ಮಾಡದಿರಲು ಕಾರಣಗಳೇನು ; (ವಿವರ ನೀಡುವುದು)

(ಇ) ರಾಜ್ಯ ಹೆದ್ದಾರಿ ಜಿಲ್ಲಾ ಮುಖ್ಯ ರಸ್ತೆಗಳು ದುರಸ್ತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಇದೆಯೇ ; ಇದ್ದರೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ?

## ಹಂಚಿಕೆ

**ಶ್ರೀ ಕೃಷ್ಣ ನಾಯಕ (ಹಡಗಲಿ) :–**

೪೭ (೧೭೫) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೂವಿನ ಹಡಗಲಿ ವಿಧಾನಸಭಾ ಕ್ಷೇತ್ರದಲ್ಲಿರುವ ನಿವೇಶನ ರಹಿತ ಹಾಗೂ ವಸತಿ ರಹಿತ ಕುಟುಂಬಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಕಳೆದ ೨ ವರ್ಷಗಳಲ್ಲಿ ಎಷ್ಟು ನಿವೇಶನ ಹಾಗೂ ವಸತಿ ಗೃಹಗಳನ್ನು ಹಂಚಿಕೆ ಮಾಡಲಾಗಿದೆ ; ಇನ್ನೂ ಹಂಚಿಕೆ ಆಗದಿರುವುದಕ್ಕೆ ಕಾರಣಗಳೇನು ?

## ಬಸ್ ನಿಲ್ದಾಣ ಕಾಮಗಾರಿ

**ಶ್ರೀ ಕೃಷ್ಣ ನಾಯಕ (ಹಡಗಲಿ) :–**

೪೮ (೧೭೬) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೂವಿನ ಹಡಗಲಿ ಪಟ್ಟಣದಲ್ಲಿರುವ ಬಸ್ ನಿಲ್ದಾಣ ಕಾಮಗಾರಿಯು ಅಪೂರ್ಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರವು ತೆಗೆದುಕೊಂಡ ಕ್ರಮಗಳೇನು;

(ಆ) ಹಾಗಿದ್ದಲ್ಲಿ, ಬಸ್ ನಿಲ್ದಾಣದ ಉದ್ಘಾಟನೆ ಇಲ್ಲಿಯವರೆಗೂ ಸಹ ಕೈಗೊಳ್ಳದಿರಲು ಕಾರಣಗಳೇನು ?

## ಹೊಸದಾಗಿ ಹೋಬಳಿ ರಚನೆ ಮಾಡುವುದು

**ಶ್ರೀ ಗುರುರಾಜ್ ಶೆಟ್ಟಿ ಗಂಟಿಹೊಳೆ (ಬೈಂದೂರು) :–**

೪೯ (೯೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೊಸದಾಗಿ ಹೋಬಳಿ ರಚನೆ ಮಾಡಲು ಸರ್ಕಾರದ ಮುಂದೆ ಎಷ್ಟು ಪ್ರಸ್ತಾವನೆಗಳಿವೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಕುಂದಾಪುರ ತಾಲ್ಲೂಕಿನ ಶಂಕರನಾರಾಯಣ ಭಾಗದ ಗ್ರಾಮಗಳನ್ನು ಸೇರಿಸಿಕೊಂಡು ಆಡಳಿತಾತ್ಮಕ ಹಿತದೃಷ್ಟಿಯಿಂದ ಪ್ರತ್ಯೇಕವಾದ ಶಂಕರನಾರಾಯಣ ಹೋಬಳಿ ರಚನೆ ಮಾಡುವ ಬಗ್ಗೆ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿದೆಯೇ ; ಹಾಗಿದ್ದಲ್ಲಿ ಉಡುಪಿ ಜಿಲ್ಲೆಯಲ್ಲಿ ಆಡಳಿತಾತ್ಮಕ ಹಿತದೃಷ್ಟಿಯಿಂದ ಹೊಸದಾಗಿ ಶಂಕರನಾರಾಯಣ ಹೋಬಳಿಯನ್ನು ಯಾವಾಗ ರಚಿಸಲಾಗುವುದು ;

(ಇ) ಇಲ್ಲದಿದ್ದಲ್ಲಿ, ಕುಂದಾಪುರ ತಾಲ್ಲೂಕಿನ ಗ್ರಾಮೀಣ ಭಾಗವಾದ ಶಂಕರನಾರಾಯಣ ಕೇಂದ್ರೀಕೃತವಾಗಿ ಸುತ್ತಮುತ್ತಲಿನ ಗ್ರಾಮಗಳು ಪ್ರಸ್ತುತ ೬೦ ಕಿ.ಮೀ ದೂರದ ಹೋಬಳಿ ಕೇಂದ್ರಕ್ಕೆ

ತೆರಳಬೇಕಾಗಿರುವುದರಿಂದ ಶಂಕರನಾರಾಯಣ ಕೇಂದ್ರೀಕೃತವಾಗಿ ಹೊಸದಾಗಿ ಶಂಕರನಾರಾಯಣ ಹೋಬಳಿ ಕೇಂದ್ರ ರಚನೆ ಮಾಡಲು ಸರ್ಕಾರ ಕ್ರಮವಹಿಸುವುದೇ ?

## ಸಕ್ಷಮ ಅಧಿಕಾರಿಯ ಡಿಜಿಟಲ್ ಸಹಿ ನಕಲು ಮಾಡಿರುವುದು

**ಶ್ರೀ ಗುರುರಾಜ್ ಶೆಟ್ಟಿ ಗಂಟಿಹೊಳೆ (ಬೈಂದೂರು) :–**

೫೦ (೯೩) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜೀವ್ ಗಾಂಧಿ ವಸತಿ ನಿಗಮದಲ್ಲಿ ವಸತಿ ಅನುಮೋದನೆ ಸಲುವಾಗಿ ಇರುವ ಸಕ್ಷಮ ಅಧಿಕಾರಿಯ ಡಿಜಿಟಲ್ ಸಹಿಯನ್ನು ನಕಲು ಮಾಡಿರುವುದು ಸರ್ಕಾರದ ಗಮನದಲ್ಲಿದೆಯೇ ; ಇದ್ದಲ್ಲಿ, ಯಾವ ಜಿಲ್ಲೆಗೆ ಹಾಗೂ ಯಾವ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಎಷ್ಟು ವಸತಿಗಳಿಗೆ ಈ ರೀತಿ ನಕಲಿ ಸಹಿ ಬಳಸಿ ಎಷ್ಟು ವಸತಿ ಅನುಮೋದನೆ ನೀಡಲಾಗಿದೆ ; (ಸಂಪೂರ್ಣ ವಿವರ ಒದಗಿಸುವುದು)

(ಆ) ಸಕ್ಷಮ ಅಧಿಕಾರಿಯ ಡಿಜಿಟಲ್ ಸಹಿಯನ್ನು ನಕಲು ಮಾಡಿರುವ ಬಗ್ಗೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗಿದೆಯೇ ; (ಈ ಬಗ್ಗೆ ದೂರು ದಾಖಲಿಸಿರುವ ಪತ್ರದ ಪ್ರತಿ ಹಾಗೂ ಎಫ್.ಐ.ಆರ್. ಪ್ರತಿ ಒದಗಿಸುವುದು)

(ಇ) ಸಕ್ಷಮ ಅಧಿಕಾರಿಯ ಅನುಮೋದನೆ ಇಲ್ಲದೇ ಅಂದಾಜು ಎಷ್ಟು ಮೊತ್ತದ ವಸತಿ ಯೋಜನೆ ಮನೆಗಳು ಅನುಮೋದನೆ ಆಗಿವೆ ; ಈಗಾಗಲೇ ಫಲಾನುಭವಿಗಳ ಖಾತೆಗೆ ಬಿಡುಗಡೆ ಆಗಿರುವ ಮೊತ್ತವೆಷ್ಟು ;

(ಈ) ೨೦೨೩-೨೪ ಹಾಗೂ ೨೦೨೪-೨೫ ನೇ ಸಾಲಿನಲ್ಲಿ ಸಚಿವರ ವಿವೇಚನೆಯಡಿ ಹಿಂದಿನ ಸಾಲಿನ ಮನೆಗಳನ್ನು ಹೊರತುಪಡಿಸಿ ಹೊಸದಾಗಿ ರಾಜ್ಯದಲ್ಲಿ ಎಷ್ಟು ಗ್ರಾಮೀಣ ಬಸವ ವಸತಿ, ಅಂಬೇಡ್ಕರ್ ವಸತಿ ಯೋಜನೆ ಮನೆಗಳು ಹಂಚಿಕೆ ಆಗಿವೆ ? (ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು)

## ಮೀನುಗಾರರಿಗೆ ಲೈಫ್ ಜಾಕೆಟ್ ಒದಗಿಸುವುದು

**ಶ್ರೀ ಗುರುರಾಜ್ ಶೆಟ್ಟಿ ಗಂಟಿಹೊಳೆ (ಬೈಂದೂರು) :-**

೫೧ (೯೪) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಮುದ್ರ ಮೀನುಗಾರಿಕೆಯಲ್ಲಿ ತೊಡಗಿರುವ ಒಟ್ಟು ಎಷ್ಟು ನಾಡ ದೋಣಿಗಳಿವೆ ; ಒಟ್ಟು ಎಷ್ಟು ಜನ ಮಳೆಗಾಲದಲ್ಲಿ ಸಾಂಪ್ರಾದಾಯಿಕ ನಾಡ ದೋಣಿ ಮೀನುಗಾರಿಕೆಯುಲ್ಲಿ ನಿರತರಾಗಿದ್ದಾರೆ ; (ಜಿಲ್ಲಾವಾರು ಹಾಗೂ ಬೈಂದೂರು ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಪ್ರತ್ಯೇಕ ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಿಂದ ಈವರೆಗೆ ಮಳೆಗಾಲದಲ್ಲಿ ಸಮುದ್ರ ಮೀನುಗಾರಿಕೆ ನಡೆಸುತ್ತಿದ್ದ ಸಂದರ್ಭದಲ್ಲಿ ಎಷ್ಟು ಮಂದಿ ಮೀನುಗಾರರು ಮೃತ ಪಟ್ಟಿರುತ್ತಾರೆ ; ಮೃತ ಕುಟುಂಬಗಳ ಅವಲಂಬಿತರಿಗೆ ನೀಡಲಾದ ಪರಿಹಾರ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಕಳೆದ ೨ ವರ್ಷಗಳಿಂದ ರಾಜ್ಯದಲ್ಲಿ ಮಳೆಗಾಲದ ಸಮಯದಲ್ಲಿ ಸಮುದ್ರ ಮೀನುಗಾರಿಕೆಯಲ್ಲಿ ನಿರತರಾಗಿರುವ ಒಟ್ಟು ಎಷ್ಟು ಮಂದಿ ಮೀನುಗಾರರಿಗೆ ಲೈಫ್ ಜಾಕೆಟ್ ಒದಗಿಸಲಾಗಿದೆ; ಸಮುದ್ರ

ಮೀನುಗಾರಿಕೆಯಲ್ಲಿ ನಿರತರಾಗಿರುವ ಎಲ್ಲಾ ನಾಡ ದೋಣಿ ಮೀನುಗಾರರಿಗೆ ಸರ್ಕಾರದಿಂದ ಲೈಫ್ ಜಾಕೆಟ್ ಒದಗಿಸಲು ಕ್ರಮವಹಿಸಲಾಗುವುದೇ ;

(ಈ) ಮಳೆಗಾಲದಲ್ಲಿ ಸಮುದ್ರ ಮೀನುಗಾರಿಕೆ ನಡೆಸುವವರಿಗೆ ಲೈಫ್ ಜಾಕೆಟ್ ಬಳಸುವುದನ್ನು ಕಡ್ಡಾಯ ಮಾಡಲಾಗಿದೆಯೇ ; ಹಾಗಿಲ್ಲದ್ದಿದ್ದಲ್ಲಿ ಮಳೆಗಾಲದ ನಾಡ ದೋಣಿ ಮೀನುಗಾರಿಕೆ ಸಂದರ್ಭದಲ್ಲಿ ನಾಡ ದೋಣಿಗಳು ಅಳಿವೆಯಿಂದ ಹಾಗೂ ಸಮುದ್ರ ತೀರದಿಂದ ಹೋಗುವ ಹಾಗೂ ಒಳ ಬರುವ ಸಮಯದಲ್ಲಿ ಲೈಫ್ ಜಾಕೆಟ್ ಬಳಸುವುದನ್ನು ಕಡ್ಡಾಯಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಹೆದ್ದಾರಿ ರಸ್ತೆ ದುರಸ್ತಿ

**ಶ್ರೀ ಗುರುರಾಜ್ ಶೆಟ್ಟಿ ಗಂಟಿಹೊಳೆ (ಬೈಂದೂರು) :-**

೫೨ (೯೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗ ಜಿಲ್ಲೆಯನ್ನು ಸಂಪರ್ಕಿಸುವ ಉಡುಪಿ ಜಿಲ್ಲೆಯ ಗಡಿ ಭಾಗದಲ್ಲಿರುವ ಹುಲಿಕಲ್ ಅಥವಾ ಬಾಳೆಬರೆ ಘಾಟ್ ಪ್ರದೇಶ ಹಾಗೂ ಘಾಟಿ ಸಂಪರ್ಕಿಸುವ ಉಡುಪಿ ಭಾಗದ ರಾಜ್ಯ ಹೆದ್ದಾರಿ ರಸ್ತೆಯು ಹದಗೆಟ್ಟಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ಹಾಗಿದ್ದಲ್ಲಿ, ಈ ರಾಜ್ಯ ಹೆದ್ದಾರಿ ರಸ್ತೆ ಅಭಿವೃದ್ದಿಗೆ ಇಲಾಖೆಯಿಂದ ಅಂದಾಜು ಪಟ್ಟಿ ತಯಾರಿಸಲಾಗಿದೆಯೇ ; ಎಷ್ಟು ಮೊತ್ತಕ್ಕೆ ತಯಾರಿಸಲಾಗಿದೆ ;

(ಇ) ಅವಿಭಜಿತ ದಕ್ಷಿಣ ಕನ್ನಡ ಜಿಲ್ಲೆಯನ್ನು ಶಿವಮೊಗ್ಗ ಜಿಲ್ಲೆಗೆ ಬೆಸೆಯುವ ಹಾಗೂ ಕರಾವಳಿಗೆ ಸಂಪರ್ಕಿಸುವ ಇತರೆ ಘಾಟಿಗಳು ವಾಹನಗಳ ಸಂಚಾರಕ್ಕೆ ಮುಚ್ಚಿದಾಗಲೂ ಇರುವ ಏಕೈಕ ಘಾಟ್ ಇದಾಗಿದ್ದು, ಪ್ರಸ್ತುತ ತೀರಾ ಹದಗೆಟ್ಟಿರುವ ಕಾರಣ ಆದ್ಯತೆಯಲ್ಲಿ ಅಭಿವೃದ್ಧಿ ಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಬಗರ್ ಹುಕುಂ ಸಾಗುವಳಿ ಚೀಟಿ ವಿತರಣೆ

**ಶ್ರೀ ಗುರುರಾಜ್ ಶೆಟ್ಟಿ ಗಂಟಿಹೊಳೆ (ಬೈಂದೂರು) :–**

೫೩ (೨೨೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೨೪–೨೫ನೇ ಸಾಲಿನಿಂದ ಈವರೆಗೆ ಒಟ್ಟು ಎಷ್ಟು ಮಂದಿಗೆ ಬಗರ್ ಹುಕುಂ ಸಾಗುವಳಿ ಚೀಟಿ ವಿತರಿಸಲಾಗಿದೆ ; (ಜಿಲ್ಲಾವಾರು ಅಂಕಿ–ಅಂಶ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ೨೦೨೪–೨೫ನೇ ಸಾಲಿನಿಂದ ಈವರೆಗೆ ಒಟ್ಟು ಎಷ್ಟು ಮಂದಿಗೆ ಬಗರ್ ಹುಕುಂ ಸಾಗುವಳಿ ಚೀಟಿ ವಿತರಿಸಲಾಗಿದೆ ; (ವಿಧಾನಸಭಾ ಕ್ಷೇತ್ರವಾರು ಅಂಕಿ–ಅಂಶ ನೀಡುವುದು)

(ಇ) ರಾಜ್ಯದಲ್ಲಿ ೨೦೨೪–೨೫ ನೇ ಸಾಲಿನಲ್ಲಿ ನಮೂನೆ ೫೦, ೫೩ ಮತ್ತು ೫೭ ರಡಿ ತಿರಸ್ಕೃತಗೊಳಿಸಲಾದ ಒಟ್ಟು ಬಗರ್ ಹುಕುಂ ಅರ್ಜಿಗಳೆಷ್ಟು ; ಯಾವ ಕಾರಣಗಳಿಗಾಗಿ ತಿರಸ್ಕರಿಸಲಾಗಿದೆ; (ನಮೂನೆವಾರು ಹಾಗೂ ಜಿಲ್ಲಾವಾರು ಪ್ರತ್ಯೇಕ ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಉಡುಪಿ ಜಿಲ್ಲೆಯಲ್ಲಿ ೨೦೨೪-೨೫ನೇ ಸಾಲಿನಲ್ಲಿ ತಿರಸ್ಕೃತಗೊಳಿಸಲಾದ ಒಟ್ಟು ಬಗರ್ ಹುಕುಂ ಅರ್ಜಿಗಳೆಷ್ಟು; ತಿರಸ್ಕರಿಸಲು ಕಾರಣಗಳೇನು ; (ನಮೂನೆವಾರು ಹಾಗೂ ತಾಲ್ಲೂಕುವಾರು ಪ್ರತ್ಯೇಕವಾಗಿ ಸಂಪೂರ್ಣ ಮಾಹಿತಿ ಒದಗಿಸುವುದು)

(ಉ) ೨೦೨೪-೨೫ ನೇ ಸಾಲಿನಲ್ಲಿ ಉಡುಪಿ ಜಿಲ್ಲೆ ಬೈಂದೂರು ವಿಧಾನಸಭಾ ಕ್ಷೇತ್ರದ ಬೈಂದೂರು ಹಾಗೂ ವಂಡ್ಸೆ ಹೋಬಳಿಗೆ ಸಂಬಂಧಿಸಿದಂತೆ ತಿರಸ್ಕರಿಸಲಾದ ಬಗರ್ ಹುಕುಂ ಒಟ್ಟು ಆರ್ಜಿಗಳೆಷ್ಟು ; ತಿರಸ್ಕರಿಸಲು ಕಾರಣಗಳೇನು ? (ನಮೂನೆವಾರು ಹಾಗೂ ಹೋಬಳಿವಾರು ಪ್ರತ್ಯೇಕವಾಗಿ ಸಂಪೂರ್ಣ ಮಾಹಿತಿ ಒದಗಿಸುವುದು)

## ಜಿಲ್ಲಾ ಮುಖ್ಯ ರಸ್ತೆಗಳಿಗೆ ಕಟ್ಟಡ ರೇಖೆಯ ಅಂತರ ಗುರುತಿಸುವುದು

**ಶ್ರೀ ಗುರ್ಮೆ ಸುರೇಶ್ ಶೆಟ್ಟಿ (ಕಾಪು) :-**

೫೪ (೩೯೦) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಆದೇಶ ಸಂಖ್ಯೆ ಲೊ.ಇ :೮೪: ಸಿ.ಆರ್.ಎಂ೨೦೨೫(ಇ) ದಿನಾಂಕ: ೧೭.೦೨.೨೦೨೫ ರನ್ವಯ ಸ್ಥಳೀಯ ಸಂಸ್ಥೆಗಳ ಪರಿಮಿತಿಯಲ್ಲಿ ರಾಜ್ಯ ಹೆದ್ದಾರಿಗೆ ಅನ್ವಯಿಸಿದಂತೆ ಜಿಲ್ಲಾ ಮುಖ್ಯ ರಸ್ತೆಗಳಿಗೂ ದಾಖಲಿತ ರಸ್ತೆಯ ಭೂ ಗಡಿ ಅಂಚನ್ನು ಗುರುತಿಸುವ ಬಗ್ಗೆ ಆದೇಶವಾಗಿದ್ದು, ಭೂ ಗಡಿಯ ಅಂಚನ್ನು ಗುರುತಿಸುವವರು ಯಾರು ಎಂಬುದರ ಬಗ್ಗೆ ಗೊಂದಲವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಭೂ ಪರಿವರ್ತಿತ ಪ್ರದೇಶಗಳಲ್ಲಿ ಏಕ ವಿನ್ಯಾಸ ಅನುಮೋದನೆಯನ್ನು ಪಡೆಯುವಾಗ ನಗರ ಹಾಗೂ ಗ್ರಾಮಾಂತರ ಯೋಜನಾ ಪ್ರಾಧಿಕಾರ ರಸ್ತೆ ಮಾರ್ಜಿನ್ ನಿಂದ ಕಟ್ಟಡ ರೇಖೆಯ ಅಂತರವನ್ನು ಗುರುತಿಸುವಾಗ ಯಾವ ಪ್ರಾಧಿಕಾರ ಭೂ ಗಡಿಯ ಅಂಚನ್ನು ಗುರುತಿಸಿ ನಿರಾಕ್ಷೇಪಣಾ ಪತ್ರವನ್ನು ನೀಡುವ ಸಕ್ಷಮ ಪ್ರಾಧಿಕಾರ ಯಾವುದು ;

(ಇ) ನಗರ ಹಾಗೂ ಗ್ರಾಮಾಂತರ ಯೋಜನಾ ಪ್ರಾಧಿಕಾರದ ಅಧಿಕಾರಿಯುವರಲ್ಲಿ (ಟಿ.ಪಿ.ಎಂ ಹಾಗೂ ಯೋಜನಾ ನಿರ್ದೇಶಕರು) ಭೂ ಗಡಿ ಅಂಚನ್ನು ಗುರುತಿಸುವಿಕೆಯಲ್ಲಿ ಗೊಂದಲವಿದ್ದು, ಇದನ್ನು ನಿವಾರಿಸುವಲ್ಲಿ ಸೂಕ್ತ ನಿರ್ದೇಶನ ನೀಡಲು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಮೀನುಗಾರರ ಜೀವ ರಕ್ಷಣೆ

**ಶ್ರೀ ಗುರ್ಮೆ ಸುರೇಶ್ ಶೆಟ್ಟಿ (ಕಾಪು) :–**

೫೫ (೩೯೧) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರಾವಳಿ ಜಿಲ್ಲೆಯ ಮೀನುಗಾರಿಕಾ ಬಂದರು ಪ್ರದೇಶಗಳಲ್ಲಿ ಹೂಳುಗಳು ತುಂಬಿ ಹಾಗೂ ಮೀನುಗಾರಿಕಾ ಬಂದರು ಪ್ರವೇಶಿಸುವ ಅಳಿವೆ ಬಾಗಿಲಲ್ಲಿ ಬ್ರೇಕ್ ವಾಟರ್ ವಿಸ್ತರಣೆಯಾಗದೆ ಮೀನುಗಾರಿಕಾ ದೋಣಿ ಹಾಗೂ ಬೋಟುಗಳು ಅವಘಡಕ್ಕೆ ತುತ್ತಾಗಿ ಮೀನುಗಾರರು ಪ್ರಾಣ ಕಳೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ ;

(ಆ) ವಿಪರೀತ ಮಳೆ ಹಾಗೂ ಸಮುದ್ರದ ಅಲೆಗಳು ಪ್ರಕ್ಷುದ್ದತೆ ಇರುವ ಸಂದರ್ಭದಲ್ಲಿ ಮೀನುಗಾರರು ಕಡಲಿಗಿಳಿಯದಂತೆ ಮುನ್ನೆಚ್ಚರಿಕೆ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳು ಯಾವುವು ;

(ಇ) ಪ್ರತಿ ಮೀನುಗಾರರಿಗೆ ಜೀವ ರಕ್ಷಕ ಜಾಕೆಟ್‌ಗಳನ್ನು ಇಲಾಖೆಯಿಂದ ಒದಗಿಸಲಾಗಿದೆಯೇ ;

(ಈ) ಇಲಾಖಾವತಿಯಿಂದ ನೀಡದೇ ಇದ್ದಲ್ಲಿ ಮೀನುಗಾರರಿಗೆ ಇದನ್ನು ಬಳಸುವಂತೆ ಸಂಬಂಧಪಟ್ಟ ಇಲಾಖೆ ನಿರ್ದೇಶನ ನೀಡುತ್ತಿದೆಯೇ ;

(ಉ) ಕರಾವಳಿ ಜಿಲ್ಲೆಯ ಮೀನುಗಾರಿಕಾ ಬಂದರು ಪ್ರದೇಶದಲ್ಲಿ ತುಂಬಿದ ಹೂಳುಗಳು ಹಾಗೂ ಬಂದರು ಪ್ರವೇಶಿಸುವ ಅಳಿವೆ ಬಾಗಿಲಿನಲ್ಲಿ ಬ್ರೇಕ್ ವಾಟರ್ ವಿಸ್ತರಣೆಗೆ ಸರ್ಕಾರದ ಯೋಜನೆಗಳು ಯಾವುವು ;

(ಊ) ಹಾಗಿದ್ದಲ್ಲಿ ಸದರಿ ಹೂಳು ಮತ್ತು ಬ್ರೇಕ್ ವಾಟರ್ ವಿಸ್ತರಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ನಿವೇಶನ ಹಾಗೂ ವಸತಿ ಸೌಲಭ್ಯ

**ಶ್ರೀ ಗುರ್ಮೆ ಸುರೇಶ್ ಶೆಟ್ಟಿ (ಕಾಪು) :-**

೫೬ (೩೯೨) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉಡುಪಿ ಜಿಲ್ಲೆಯಲ್ಲಿ ವಿವಿಧ ಗ್ರಾಮ ಪಂಚಾಯತ್‌ಗಳಲ್ಲಿ ಹಾಗೂ ನಗರಸಭೆ ಹಾಗೂ ಪುರಸಭೆಗಳಲ್ಲಿ ನಿವೇಶನ ನೀಡುವ ಬಗ್ಗೆ ಬಂದಿರುವ ನಿವೇಶನ ರಹಿತರ ಅರ್ಜಿಗಳ ಸಂಖ್ಯೆ ಎಷ್ಟು ;

(ಆ) ಸದರಿ ನಿವೇಶನ ರಹಿತರಿಗೆ ನಿವೇಶನಗಳನ್ನು ಹಂಚಿಕೆ ಮಾಡುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಕಳೆದ ೨ ವರ್ಷಗಳಲ್ಲಿ ಗ್ರಾಮ ಪಂಚಾಯತ್ ಹಾಗೂ ಪುರಸಭೆ ವ್ಯಾಪ್ತಿಗಳಲ್ಲಿ ವಸತಿ ರಹಿತರಿಗೆ ವಿವಿಧ ವಸತಿ ಯೋಜನೆಗಳಡಿ ಹಂಚಿಕೆಯಾದ ಮನೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ವಸತಿ ಮನೆಗಳ ಬೇಡಿಕೆ ಇದ್ದರೂ ವಸತಿ ಮನೆಗಳ ಹಂಚಿಕೆಯಲ್ಲಿ ವಿಳಂಬವಾಗುತ್ತಿರಲು ಕಾರಣಗಳೇನು ? (ವಿವರ ನೀಡುವುದು)

## ಯೋಜನೆಗಳು

**ಶ್ರೀ ಗುರ್ಮೆ ಸುರೇಶ್ ಶೆಟ್ಟಿ (ಕಾಪು) :–**

೫೭ (೩೯೩) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಶುಸಂಗೋಪನೆ ಇಲಾಖೆ ಅಡಿಯಲ್ಲಿರುವ ಫಲಾನುಭವಿ ಆಧಾರಿತ ಯೋಜನೆಗಳಾವುವು ; (ವಿವರ ನೀಡುವುದು)

(ಆ) ಫಲಾನುಭವಿ ಆಧಾರಿತ ಯೋಜನೆಗಳಲ್ಲಿ ಇಲಾಖೆಯ ಸಬ್ಸಿಡಿ ದರ ಹಾಗೂ ಬ್ಯಾಂಕ್ ನಿಂದ ಸಿಗುವ ಸಾಲ ಸೌಲಭ್ಯವೆಷ್ಟು; (ಪೂರ್ಣ ಮಾಹಿತಿ ನೀಡುವುದು)

(ಇ) ಕಳೆದ ೨ ವರ್ಷಗಳಲ್ಲಿ ಕಾಪು ವಿಧಾನಸಭಾ ಕ್ಷೇತ್ರ (ಕಾಪು ತಾಲ್ಲೂಕು ಹಾಗೂ ಉಡುಪಿ ತಾಲ್ಲೂಕು ಒಳಗೊಂಡಂತೆ) ದಲ್ಲಿ ಸದರಿ ಯೋಜನೆಯಡಿಯಲ್ಲಿ ಫಲಾನುಭವಿಗಳಿಗೆ ನೀಡಿದ ಯೋಜನೆಗಳಾವುವು ? (ವಿವರವನ್ನು ನೀಡುವುದು)

## ಅಕ್ರಮ–ಸಕ್ರಮ ಯೋಜನೆ

**ಶ್ರೀ ಗುರ್ಮೆ ಸುರೇಶ್ ಶೆಟ್ಟಿ (ಕಾಪು) :–**

೫೮ (೩೯೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ ಅಕ್ರಮ–ಸಕ್ರಮ ನಮೂನೆ–೫೩/೫೭ರಡಿಯಲ್ಲಿ ಪ್ರಸ್ತುತ ಅರ್ಜಿ ಸಲ್ಲಿಸಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; (ತಾಲ್ಲುಕುವಾರು ಮಾಹಿತಿ ನೀಡುವುದು)

(ಆ) ಕಳೆದ ೨ ವರ್ಷಗಳಲ್ಲಿ ಅಕ್ರಮ–ಸಕ್ರಮ ಯೋಜನೆಯಡಿಯಲ್ಲಿ ಜಿಲ್ಲೆಯಲ್ಲಿ ಅಕ್ರಮ–ಸಕ್ರಮ ಸಮಿತಿಯಲ್ಲಿ ಪುರಸ್ಕೃತಗೊಂಡ ಅರ್ಜಿಗಳೆಷ್ಟು ; (ತಾಲ್ಲುಕುವಾರು ಮಾಹಿತಿ ನೀಡುವುದು)

(ಇ) ಪುರಸ್ಕೃತಗೊಂಡ ಅರ್ಜಿಗಳಲ್ಲಿ ಫಲಾನುಭವಿಗಳಿಗೆ ಹಕ್ಕು ಪತ್ರ ನೀಡಿದ ಪ್ರಕರಣಗಳೆಷ್ಟು ; (ವಿವರ ನೀಡುವುದು)

(ಈ) ಅಕ್ರಮ–ಸಕ್ರಮ ಸಮಿತಿಯಲ್ಲಿ ಪುರಸ್ಕೃತಗೊಂಡ ಅರ್ಜಿಯ ವಿಲೆಗೆ ತಂತ್ರಾಂಶದಲ್ಲಿ ಇರುವ ತಾಂತ್ರಿಕ ತೊಡಕುಗಳೇನು ;

(ಉ) ತಾಂತ್ರಿಕ ತೊಡಕುಗಳಿದ್ದಲ್ಲಿ ಈ ತಾಂತ್ರಿಕ ತೊಡಕುಗಳನ್ನು ಸರಿಪಡಿಸಿ ಫಲಾನುಭವಿಗಳಿಗೆ ಹಕ್ಕು ಪತ್ರ ನೀಡುವಲ್ಲಿ ಸರ್ಕಾರದ ನಿಲುವೇನು ?

## ಸಾರಿಗೆ ಸೌಲಭ್ಯ ಕೊರತೆ

**ಶ್ರೀ ಗೋಪಾಲಕೃಷ್ಣ ಬೇಳೂರು (ಸಾಗರ) :–**

೫೯ (೬೦) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾಗರ ತಾಲ್ಲೂಕಿನಲ್ಲಿ ಸಿಗಂದೂರು ಸೇತುವೆ ಲೋಕಾರ್ಪಣೆಯಾಗಿರುವ ಹಿನ್ನಲೆಯಲ್ಲಿ ಆ ಭಾಗದಲ್ಲಿ ಸಾರಿಗೆ ಸೌಲಭ್ಯಗಳ ಕೊರತೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸಾರ್ವಜನಿಕರು ಸಾರಿಗೆ ಸೌಲಭ್ಯ ಕೋರಿ ಮನವಿ ಸಲ್ಲಿಸುತ್ತಿದ್ದು, ಸಿಗಂದೂರು ಸೇತುವೆ ಮಾರ್ಗವಾಗಿ ಈಗಿರುವ ಸಾರಿಗೆಯನ್ನು ಕರೂರು ಹೋಬಳಿಗೆ ಹೆಚ್ಚಿಸಲು ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳೇನು ? (ವಿವರ ನೀಡುವುದು)

## ಜಮೀನಿನ ಪೋಡಿ

**ಶ್ರೀ ಗೋಪಾಲಕೃಷ್ಣ ಬೇಳೂರು (ಸಾಗರ) :–**

೬೦ (೬೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾಗರ ವಿಧಾನಸಭಾ ವ್ಯಾಪ್ತಿಯಲ್ಲಿ ಜಮೀನಿನ ಪೋಡಿ ಮಾಡುವಾಗ ಕಂದಾಯ ಇಲಾಖೆಯಿಂದ ಅರಣ್ಯ ಇಲಾಖೆಗೆ ಅಭಿಪ್ರಾಯಕ್ಕೆ ಕಳುಹಿಸಿದಾಗ ಅದು ಕಂದಾಯ ಭೂಮಿ ಆಗಿದ್ದರೂ ಸಹ ಜಾಡು ಎಂದು ಅರಣ್ಯ ಇಲಾಖೆಯುವರು ಅಭಿಪ್ರಾಯ ನೀಡುತ್ತಿರುವುದರಿಂದ ಕಂದಾಯ ಇಲಾಖೆಯವರು ಜಾಡು ನೀಡಿರುವುದರಿಂದ ಪೋಡಿ ಮಾಡಲು ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ಮಂಜೂರಾತಿಯಾದ ಭೂಮಿಯನ್ನು ಪೋಡಿ ಮಾಡುವಾಗ ಮಾತ್ರ ಮಲೆನಾಡು ವ್ಯಾಪ್ತಿಯಲ್ಲಿ ಜಾಡು, ಕಾನು ಇವುಗಳಿಗೆ ವಿನಾಯಿತಿ ನೀಡಿದರೆ ರೈತರಿಗೆ ಅನುಕೂಲವಾಗುವುದರಿಂದ ಸರ್ಕಾರವು ತೆಗೆದುಕೊಳ್ಳುವ ಕ್ರಮಗಳೇನು ?

## ಭೂಮಿ ಮಂಜೂರಾತಿ

**ಶ್ರೀ ಗೋಪಾಲಕೃಷ್ಣ ಬೇಳೂರು (ಸಾಗರ) :–**

೬೧ (೬೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾಗರ–ಹೊಸನಗರ ತಾಲ್ಲೂಕುಗಳಲ್ಲಿ ರೈತರಿಗೆ ಸುಮಾರು ೩೦ ವರ್ಷಗಳ ಹಿಂದೆ ಬಗರ್ ಹುಕುಂ ಹಾಗೂ ಇತರೆ ಮಂಜೂರಾತಿಯಾದ ಭೂಮಿಗಳಲ್ಲಿ ರೈತರು ಕೃಷಿ

ಚಟುವಟಿಕೆಗಳನ್ನು ನಡೆಸಿಕೊಂಡು ಜೀವನ ಸಾಗಿಸುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ; ಭೂಮಿ ಮಂಜೂರಾತಿ ಮಾಡುವಾಗ ಅರಣ್ಯ ಇಲಾಖೆಯ ಅಭಿಪ್ರಾಯ ಪಡೆದಿಲ್ಲವೆಂದು ಮಂಜೂರಾತಿಯನ್ನು ಪ್ರಶ್ನಿಸಿ ಉಪವಿಭಾಗಾಧಿಕಾರಿಗಳ ಕಛೇರಿಯಲ್ಲಿ ವಿಚಾರಣೆಗೆ ರೈತರಿಗೆ ತಿಳುವಳಿಕೆ ನೋಟಿಸ್ ನೀಡುತ್ತಿರುವುದು (ವಾದಿಗಳು, ಮೇಲ್ಮನವಿದಾರರು, ವಲಯ ಅರಣ್ಯಾಧಿಕಾರಿಗಳು, ಪ್ರತಿವಾದಿಗಳು/ಎದುರುದಾರರು, ತಹಶೀಲ್ದಾರ್ ಮತ್ತು ಸಂತ್ರಸ್ಥ ರೈತರು) ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ಒದಗಿಸುವುದು)

## ಬಗರ್ ಹುಕುಂ ತಂತ್ರಾಂಶ

**ಶ್ರೀ ಗೋಪಾಲಕೃಷ್ಣ ಬೇಳೂರು (ಸಾಗರ) :–**

೬೨ (೬೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾಗುವಳಿ ಭೂಮಿಯನ್ನು ಸಕ್ರಮಗೊಳಿಸಲು ಬಡವರಿಗೆ ಅನುಕೂಲವಾಗಲೆಂದು ಪ್ರತ್ಯೇಕ ಅಪ್ಲಿಕೇಷನ್ ಅನ್ನು ಕಂದಾಯ ಇಲಾಖೆಯು ರೂಪಿಸಿದ್ದರೂ, ಶಿವಮೊಗ್ಗ ಜಿಲ್ಲೆಯಲ್ಲಿ ಅಪ್ಲಿಕೇಷನ್ ಸರ್ವರ್ ಲೋಪದೋಷಗಳಿಂದ ರೈತರಿಗೆ, ಸಾರ್ವಜನಿಕರಿಗೆ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ಒದಗಿಸುವುದು)

(ಇ) ಸಾಗುವಳಿ ಭೂಮಿಯನ್ನು ಬಗರ್ ಹುಕುಂ ತಂತ್ರಾಂಶದ ಮೂಲಕ ಯಾವಾಗ ಸಕ್ರಮಗೊಳಿಸಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ವೃದ್ಧಾಪ್ಯ ವೇತನ ಮಂಜೂರಾತಿ

**ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮಿ ಲೇಔಟ್) :–**

೬೩ (೮೬೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸುಮಾರು ೬೦ ರಿಂದ ೬೫ ವರ್ಷ ಮೇಲ್ಪಟ್ಟ ಹಿರಿಯ ನಾಗರೀಕರಿಗೆ ನೀಡಲಾಗುವ ವೃದ್ಧಾಪ್ಯ ವೇತನಕ್ಕೆ ಅರ್ಜಿ ಸಲ್ಲಿಸಲು ಸರ್ಕಾರ ನಿಗದಿಪಡಿಸಿರುವ ಮಾನದಂಡಗಳೇನು ; ಸಲ್ಲಿಸಬೇಕಾಗಿರುವ ದಾಖಲೆಗಳ ವಿವರ ಒದಗಿಸುವುದು ;

(ಆ) ವೃದ್ಧಾಪ್ಯ ವೇತನಕ್ಕೆ ಅರ್ಜಿ ಸಲ್ಲಿಸಲು ಪಿ.ಹೆಚ್.ಹೆಚ್ (ಬಿ.ಪಿ.ಎಲ್) ಕಾರ್ಡ್ ಜೊತೆಗೆ ಆದಾಯ ಪ್ರಮಾಣ ಪತ್ರ ಸಲ್ಲಿಕೆ ಕಡ್ಡಾಯವೇ ;

(ಇ) ಆದಾಯ ಪ್ರಮಾಣ ಪತ್ರದಲ್ಲಿ ವಾರ್ಷಿಕ ರೂ.೩೨,೦೦೦/– ಕ್ಕಿಂತ ಕಡಿಮೆ ಆದಾಯ ಇರಬೇಕೆಂದು ಕಡ್ಡಾಯಗೊಳಿಸಿರುವುದು ನಿಜವೇ ;

(ಈ) ಇಲ್ಲವಾದಲ್ಲಿ, ಇಲಾಖೆಯ ಅಧಿಕಾರಿಗಳು ಪಿ.ಹೆಚ್.ಹೆಚ್ ಪಡಿತರ ಚೀಟಿಯ ಜೊತೆಗೆ ರೂ.೩೨,೦೦೦/– ಒಳಗೆ ಆದಾಯ ಮಿತಿಯಿರುವ ಆದಾಯ ಪ್ರಮಾಣ ಪತ್ರವಿದ್ದಲ್ಲಿ ಮಾತ್ರ ಅರ್ಜಿ ಸ್ವೀಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಈ ಸಂಬಂಧ ಕೂಡಲೇ ಅಧಿಕಾರಿಗಳಿಗೆ ಸರಿಯಾದ ಮಾರ್ಗದರ್ಶನ ನೀಡಲು ಕ್ರಮ ಕೈಗೊಳ್ಳಲಾಗುವುದೇ ?

## ಮನೆಗಳ ಮಂಜೂರು

**ಶ್ರೀ ಜಯಚಂದ್ರ ಟಿ.ಬಿ. (ಶಿರಾ) :–**

೬೪ (೧೬೭) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿರಾ ವಿಧಾನಸಭಾ ಕ್ಷೇತ್ರದ ಶಿರಾ ನಗರದಲ್ಲಿ ಕೊಳಚೆ ನಿರ್ಮೂಲನಾ ಮಂಡಳಿ ವತಿಯಿಂದ ೧೦೦೮ ಮನೆಗಳು ಮಂಜೂರು ಆಗಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಯಾವಾಗ ಮಂಜೂರು ಮಾಡಲಾಗಿದೆ ; (ದಿನಾಂಕ ಸಹಿತ ಮಂಜೂರು ಆದೇಶ ಪ್ರತಿ ಒದಗಿಸುವುದು)

(ಇ) ಮಂಜೂರಾಗಿರುವ ೧೦೦೮ ಮನೆಗಳಿಗೆ ಮಂಜೂರು ಮಾಡಿರುವ ಅನುದಾನದ ಒಟ್ಟು ಮೊತ್ತವೆಷ್ಟು ; ಈ ಪೈಕಿ ಬಿಡುಗಡೆಯಾದ ಮತ್ತು ಖರ್ಚಾದ ಮೊತ್ತವೆಷ್ಟು ;

(ಈ) ಈ ಮನೆಗಳ ಕಟ್ಟಡ ಕಾಮಗಾರಿಯು ಈವರೆವಿಗೂ ಪೂರ್ಣಗೊಳ್ಳದಿರಲು ಮತ್ತು ಫಲಾನುಭವಿಗಳಿಗೆ ಹಂಚಿಕೆ ಮಾಡದಿರಲು ಕಾರಣಗಳೇನು ;

(ಉ) ಯಾವ ಕಾಲಮಿತಿಯೊಳಗೆ ಕಟ್ಟಡ ಕಾಮಗಾರಿ ಪೂರ್ಣಗೊಳಿಸಿ ಫಲಾನುಭವಿಗಳಿಗೆ ಹಂಚಿಕೆ ಮಾಡಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಚಿಕ್ಕೋಡಿ ಜಿಲ್ಲಾ ರಚನೆ ಕುರಿತು

**ಶ್ರೀಮತಿ ಜೊಲ್ಲೆ ಶಶಿಕಲಾ ಅಣ್ಣಾಸಾಹೇಬ (ನಿಪ್ಪಾಣಿ) :–**

೬೫ (೬೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿಯೇ ಬೆಳಗಾವಿ ಜಿಲ್ಲೆಯು ೧೫ ತಾಲ್ಲೂಕುಗಳನ್ನು ಹೊಂದಿದ ಅತೀ ದೊಡ್ಡ ಜಿಲ್ಲೆಯಾಗಿದ್ದು ಆಡಳಿತಾತ್ಮಕ ಹಿತದೃಷ್ಟಿಯಿಂದ ಬೆಳಗಾವಿ ಜಿಲ್ಲೆಯನ್ನು ವಿಭಜಿಸಿ ಚಿಕ್ಕೋಡಿ ಜಿಲ್ಲೆಯನ್ನು ಮಾಡುವ ಪ್ರಸ್ತಾವನೆ ಸರ್ಕಾರದ ಹಂತದಲ್ಲಿ ಇದೆಯೇ ;

(ಆ) ಇದ್ದಲ್ಲಿ ಬೆಳಗಾವಿ ಜಿಲ್ಲೆಯನ್ನು ವಿಭಜಿಸಿ ಚಿಕ್ಕೋಡಿಯನ್ನು ಜಿಲ್ಲೆಯನ್ನಾಗಿ ಯಾವಾಗ ಘೋಷಣೆ ಮಾಡಲಾಗುವುದು ;

(ಇ) ಕೇಂದ್ರ ಸರ್ಕಾರ ಜನಗಣತಿ–೨೦೨೬ ನ್ನು ಪ್ರಾರಂಭಿಸಲಾಗುತ್ತಿದ್ದು ಡಿಸೆಂಬರ್–೨೦೨೫ ರೊಳಗಾಗಿ ಗ್ರಾಮ, ತಾಲ್ಲೂಕು/ಜಿಲ್ಲಾ ಗಡಿಗಳನ್ನು ಗುರುತಿಸುವ ಸಲುವಾಗಿ ಹೊಸ ಗ್ರಾಮ/ತಾಲ್ಲೂಕು/ ಜಿಲ್ಲೆಗಳನ್ನು ರಚನೆ ಮಾಡಲು ರಾಜ್ಯ ಸರ್ಕಾರಗಳಿಗೆ ಇತ್ತೀಚಿಗೆ ನಿರ್ದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ಬಸ್ ಸಂಚಾರ

**ಶ್ರೀಮತಿ ಜೊಲ್ಲೆ ಶಶಿಕಲಾ ಅಣ್ಣಾಸಾಹೇಬ (ನಿಪ್ಪಾಣಿ) :–**

೬೬ (೬೭) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಚಿಕ್ಕೋಡಿ ವಿಭಾಗದಲ್ಲಿ ದಿನನಿತ್ಯದ ಬಸ್ ಸಂಚಾರಗಳಲ್ಲಿ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು ;

(ಆ) ಚಿಕ್ಕೋಡಿ ವಿಭಾಗದಿಂದ ಪಲ್ಲಕ್ಕಿ ಬಸ್ ಸೇವೆಯುನ್ನು ಹಿಂಪಡೆದಿರುವುದರಿಂದ ಬೆಂಗಳೂರಿಗೆ ತೆರಳಲು ಸಾರ್ವಜಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ; ಪುನಃ ಪಲ್ಲಕ್ಕಿ ಬಸ್ ಸೇವೆಯನ್ನು ಯಾವಾಗ ಪ್ರಾರಂಭಿಸಲಾಗುವುದು ;

(ಇ) ನಿಪ್ಪಾಣಿ ಘಟಕದಿಂದ ಅಂತರ ರಾಜ್ಯ ಸಾರಿಗೆಯ ಬಸ್ಸುಗಳು ಯಾವ ಯಾವ ನಗರಗಳಿಗೆ ಸಂಚರಿಸಲಾಗುತ್ತಿವೆ ? (ವಿವರ ನೀಡುವುದು)

## ಭೂಮಾಪಕ ಕೊರತೆ

**ಶ್ರೀಮತಿ ಜೊಲ್ಲೆ ಶಶಿಕಲಾ ಅಣ್ಣಾಸಾಹೇಬ (ನಿಪ್ಪಾಣಿ) :–**

೬೭ (೬೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಭೂಮಾಪಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ರಾಜ್ಯದಲ್ಲಿ ಮಂಜೂರಾದ ಭೂಮಾಪಕರ ಸಂಖ್ಯೆ ಎಷ್ಟು; ಭರ್ತಿಯಾದ ಹಾಗೂ ಖಾಲಿ ಹುದ್ದೆಗಳು ಎಷ್ಟು;

(ಇ) ಭೂಮಾಪಕರ ಕೊರತೆಯಿಂದಾಗಿ ರೈತರು ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು ಭೂಮಾಪಕರ ನೇಮಕಾತಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ನಿಪ್ಪಾಣಿ ತಾಲ್ಲೂಕಿಗೆ ಹೊಸ ಸಹಾಯಕ ನಿರ್ದೇಶಕರ ಕಾರ್ಯಾಲಯವನ್ನು ಯಾವಾಗ ಪ್ರಾರಂಭಿಸಲಾಗುವುದು ?

## ಮನೆಗಳ ಮಂಜೂರಾತಿ

**ಶ್ರೀಮತಿ ಜೊಲ್ಲೆ ಶಶಿಕಲಾ ಅಣ್ಣಾಸಾಹೇಬ (ನಿಪ್ಪಾಣಿ) :–**

೬೮ (೨೨೪) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರ ವಿವಿಧ ವಸತಿ ಯೋಜನೆಯಡಿ ಸಾಮಾಜಿಕವಾಗಿ, ಆರ್ಥಿಕವಾಗಿ ತೀರಾ ಹಿಂದುಳಿದಿರುವ ಬಡ ಕುಟುಂಬಗಳಿಗೆ ಸ್ವಂತ ಸೂರು ನಿರ್ಮಿಸಿಕೊಳ್ಳಲು ಮನೆಗಳನ್ನು ಮಂಜೂರು ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೨೦೨೪-೨೦೨೫ ಹಾಗೂ ೨೦೨೫-೨೬ ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಗೆ ವಿವಿಧ ವಸತಿ ಯೋಜನೆಯಡಿ ವಿವಿಧ ಗ್ರಾಮ ಪಂಚಾಯಿತಿ/ಪಟ್ಟಣ ಪಂಚಾಯಿತಿ/ನಗರಸಭೆಗಳಿಗೆ ಮನೆಗಳ ಗುರಿ ಹಾಗೂ ಹಂಚಿಕೆ ಮಂಜೂರು ಮಾಡಲಾಗಿದೆಯೆ ; (ಬೆಳಗಾವಿ ಜಿಲ್ಲೆಯ ತಾಲ್ಲೂಕುವಾರು ಗ್ರಾಮ ಪಂಚಾಯಿತಿ/ಪಟ್ಟಣ ಪಂಚಾಯಿತಿ/ನಗರಸಭೆವಾರು ವಿವರ ನೀಡುವುದು)

(ಇ) ಯಾವ ಕಾಲಮಿತಿಯೊಳಗೆ ಮನೆಗಳನ್ನು ನಿರ್ಮಾಣ ಮಾಡಲಾಗುತ್ತದೆ ; ಅವುಗಳಿಗೆ ಅನುದಾನ ಹೇಗೆ ಬಿಡುಗಡೆ ಮಾಡಲಾಗುತ್ತದೆ ?

## ವಿದ್ಯುತ್ ಚಾಲಿತ ಬಸ್‌ಗಳು

**ಶ್ರೀ ಜ್ಯೋತಿ ಗಣೇಶ್ ಜಿ.ಬಿ. (ತುಮಕೂರು ನಗರ) :-**

೬೯ (೪೩೩) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯ ಸಾರಿಗೆ ನಿಗಮದಿಂದ ತುಮಕೂರು ನಗರದಲ್ಲಿ ನಗರ ಸಾರಿಗೆ ವ್ಯವಸ್ಥೆ ಜಾರಿಯಲ್ಲಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ಹಾಗಿದ್ದಲ್ಲಿ ಪಿ.ಎಂ ಇ-ಸೇವಾ ಯೋಜನೆ ಅಡಿ ವಿದ್ಯುತ್ ಚಾಲಿತ ಬಸ್‌ಗಳನ್ನು ಒದಗಿಸುವಂತೆ ಅಗತ್ಯ ಪ್ರಸ್ತಾವನೆ, ಮಾಹಿತಿಗಳನ್ನು

ತುಮಕೂರು ವಿಭಾಗದಿಂದ ಕೇಂದ್ರ ಕಛೇರಿಗೆ ಕಳುಹಿಸಲಾಗಿದ್ದು ಪ್ರಸ್ತುತ ಯಾವ ಹಂತದಲ್ಲಿದೆ ;

(ಇ) ತುಮಕೂರು ನಗರ ಸಾರಿಗೆಗೆ ವಿದ್ಯುತ್ ಚಾಲಿತ ಬಸ್‌ಗಳನ್ನು ಯಾವಾಗ ಒದಗಿಸಲಾಗುತ್ತದೆ ? (ವಿವರ ನೀಡುವುದು)

## Laptop ವಿತರಣೆ

**ಡಾ. ಅಜಯ್ ಧರ್ಮಸಿಂಗ್ (ಜೇವರ್ಗಿ) :–**

೭೦ (೧೧೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆ ಜೇವರ್ಗಿ ಮತ್ತು ಯಡ್ರಾಮಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಗ್ರಾಮ ಆಡಳಿತ ಅಧಿಕಾರಿ ಹುದ್ದೆ ಖಾಲಿ ಇರುವ ಕಾರಣ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಜೇವರ್ಗಿ ತಾಲ್ಲೂಕಿನ ಅಂದೋಲಾ ಹಾಗೂ ನೆಲೋಗಿ ನಾಡ ಕಛೇರಿಗಳು ನವೀಕರಣ ಅಥವಾ ನೂತನ ಕಟ್ಟಡದ ನಿರ್ಮಾಣದ ಕಾಮಗಾರಿಗಳನ್ನು ಯಾವ ಕಾಲಮಿತಿಯಲ್ಲಿ ಸರ್ಕಾರ ಕೈಗೊಳ್ಳಲಾಗುವುದು ;

(ಇ) ೨೦೨೪–೨೫ನೇ ಸಾಲಿನ 'ಡಿಜಿ ಕಂದಾಯ ಯೋಜನೆ' ಯಡಿಯಲ್ಲಿ ಯಾವ ಯಾವ ಗ್ರಾಮಗಳಲ್ಲಿ ತಂತ್ರಾಂಶಗಳನ್ನು ಅಳವಡಿಸಿ ಆಡಳಿತ ಅಧಿಕಾರಿಗಳಿಗೆ ಎಷ್ಟು LAPTOP ವಿತರಣೆ ಮಾಡಲಾಗಿದೆ ;

(ಈ) ಇತರೆ ಗ್ರಾಮಗಳಲ್ಲಿ ಆಡಳಿತ ಅಧಿಕಾರಿಗಳಿಗೆ LAPTOP ವಿತರಣೆ ಮಾಡದಿರಲು ಕಾರಣವೇನು ; ಯಾವ ಕಾಲಮಿತಿಯಲ್ಲಿ ವಿತರಣೆ ಮಾಡಲಾಗುವುದು ?

## ಮತ್ಸ್ಯ ಉದ್ಯಮ ಯೋಜನೆ

**ಡಾ. ಅಜಯ್ ಧರ್ಮಸಿಂಗ್ (ಜೇವರ್ಗಿ) :–**

೭೧ (೧೧೬) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಪ್ರದೇಶದ ಜಿಲ್ಲೆಗಳಲ್ಲಿ ಮತ್ಸ್ಯ ಉದ್ಯಮ ಯೋಜನೆಯಲ್ಲಿ ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ ಮನೆ ಮಂಜೂರು ಸೇರಿದಂತೆ ಇತರೆ ಯೋಜನೆಗಳಿಗೆ ಪ್ರೋತ್ಸಾಹ/ ಸಹಾಯಧನ ಕೋರಿ ಸಲ್ಲಿಕೆ ಆಗಿರುವ ಅರ್ಜಿಗಳ ಸಂಖ್ಯೆ ಎಷ್ಟು ;

(ಆ) ಸದರಿ ಯೋಜನೆಗಳಿಗೆ ಸ್ವೀಕೃತಿಗೊಂಡ ಹಾಗೂ ತಿರಸ್ಕೃತಗೊಂಡ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಪ್ರಸ್ತುತ ಸಾಲಿನವರೆಗೆ ಕಲ್ಯಾಣ ಕರ್ನಾಟಕ ಪ್ರದೇಶದ ಜಿಲ್ಲೆಗಳಲ್ಲಿ ಸರ್ಕಾರ ರೂಪಿಸಿರುವ ವಿಶೇಷ ಯೋಜನೆಗಳಾವುವು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ನದಿ ಮತ್ತು ಹೊಳೆ ವ್ಯಾಪ್ತಿಯ ಮೀನುಗಾರರಿಗೆ ಅನುಕೂಲವಾಗುವಂತೆ ಜೇವರ್ಗಿ ಮತಕ್ಷೇತ್ರದಲ್ಲಿ ಸಹಾಯಕ ನಿರ್ದೇಶಕರ ಕಛೇರಿ ಅವಶ್ಯಕವಾಗಿದ್ದು, ಈ ಬಗ್ಗೆ ಸರ್ಕಾರದ ನಿಲುವೇನು ?

## ಪ್ರಧಾನ ಮಂತ್ರಿ ಆವಾಸ್ ಯೋಜನೆ

**ಡಾ. ಅಜಯ್ ಧರ್ಮಸಿಂಗ್ (ಜೇವರ್ಗಿ) :–**

೭೨ (೧೧೭) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ವ್ಯಾಪ್ತಿಯ ಜಿಲ್ಲೆಗಳಲ್ಲಿ ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ) ಅಡಿಯಲ್ಲಿ ಸಲ್ಲಿಕೆ ಆಗಿರುವ ಅರ್ಜಿಗಳೆಷ್ಟು ;

(ಆ) ಸದರಿ ಯೋಜನೆಯಡಿಯಲ್ಲಿ ಸ್ವೀಕೃತಿಗೊಂಡ ಹಾಗೂ ತಿರಸ್ಕೃತಗೊಂಡಿರುವ ಅರ್ಜಿಗಳೆಷ್ಟು ;

(ಇ) ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ) ಯಡಿ ಮನೆ ನಿರ್ಮಾಣಕ್ಕಾಗಿ ಎಷ್ಟು ಸಹಾಯಧನ ನೀಡಲಾಗುತ್ತಿದೆ ;

(ಈ) ಸದರಿ ಯೋಜನೆ ಅಡಿಯಲ್ಲಿ ಈ ಸಾಲಿನವರೆಗೆ ಎಷ್ಟು ಫಲಾನುಭವಿಗಳು ಸದುಪಯೋಗ ಪಡೆದುಕೊಂಡಿರುತ್ತಾರೆ ? (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

## ರಸ್ತೆ ಅಭಿವೃದ್ಧಿ

**ಡಾ. ಅವಿನಾಶ್ ಉಮೇಶ್ ಜಾಧವ್ (ಚಿಂಚೋಳಿ) :–**

೭೩ (೪೨೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಂಚೋಳಿ ತಾಲ್ಲೂಕಿನಲ್ಲಿ ರಾಜ್ಯ ಹೆದ್ದಾರಿ ೧೫ರಲ್ಲಿ ಬರುವ ಚಿಮ್ಮಾಈದಲಾಯಿ ಸುಲೇಪೇಟ ರಸ್ತೆ, ರಾಜ್ಯ ಹೆದ್ದಾರಿ ೭೫ರ ಐನಾಪುರ ಚಿಮ್ಮಾಈದಲಾಯಿ ಕ್ರಾಸ್ ರಸ್ತೆ, ರಾಜ್ಯ ಹೆದ್ದಾರಿ ೧೪೯ರ ಕುಂಚಾವರಂ ಕ್ರಾಸ್ ಶಾದಿಪುರ ಹೆದ್ದಾರಿಗಳು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಹೆದ್ದಾರಿಗಳಿಗೆ ಕಾಯಕಲ್ಪ ನೀಡಲು ಕೈಗೊಂಡ ಕ್ರಮಗಳೇನು ;

(ಇ) ಕಳೆದ ಎರಡು ವರ್ಷಗಳಲ್ಲಿ ಚಿಂಚೋಳಿ ವಿಧಾನಭಾ ಮತಕ್ಷೇತ್ರದಲ್ಲಿ ಹೆದ್ದಾರಿ ಅಭಿವೃದ್ಧಿಗೆ ಸರ್ಕಾರ ನೀಡಿದ ಅನುದಾನ ಎಷ್ಟು ? (ಸಂಪೂರ್ಣ ಮಾಹಿತಿ ಒದಗಿಸುವುದು)

## KSRTC ಮತ್ತು BMTC ಬಸ್ಸುಗಳು

**ಡಾ. ಅಶ್ವಥ್‌ನಾರಾಯಣ ಸಿ.ಎನ್. (ಮಲ್ಲೇಶ್ವರಂ) :–**

೭೪ (೩೩೯) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಇರುವ ಕೆ.ಎಸ್.ಆರ್.ಟಿ.ಸಿ ಹಾಗೂ ಬಿ.ಎಂ.ಟಿ.ಸಿ ಬಸ್ಸುಗಳ ಸಂಖ್ಯೆ (Fleet Size) ಎಷ್ಟು ; (೨೦೨೦ ರಿಂದ ೨೦೨೪ನೇ ಸಾಲಿನಲ್ಲಿ ಇದ್ದ ಬಸ್ಸುಗಳ ಸಂಖ್ಯೆ (Fleet Size) ವಿವರವನ್ನು ವರ್ಷವಾರು ನೀಡುವುದು)

(ಆ) ರಾಜ್ಯ ಸರ್ಕಾರದಿಂದ "ಶಕ್ತಿ ಯೋಜನೆ"ಯನ್ನು ಜಾರಿಗೆ ತಂದ ಬಳಿಕ ಬಸ್ ಪ್ರಯಾಣಿಕರ ಸಂಖ್ಯೆಯಲ್ಲಿ ಉಂಟಾಗಿರುವ ವ್ಯತ್ಯಾಸವೆಷ್ಟು ; ಯೋಜನೆಯ ಜಾರಿಗೂ ಮುನ್ನ ಇದ್ದ ಪ್ರಯಾಣಿಕರ ಸಂಖ್ಯೆ ಎಷ್ಟು ;

(ಇ) "ಶಕ್ತಿ ಯೋಜನೆ" ಇಂದ ನಿಗಮಕ್ಕೆ ಉಂಟಾಗಿರುವ ಆರ್ಥಿಕ ಲಾಭ/ನಷ್ಟ ಎಷ್ಟು ; (ಅಂಕಿ–ಅಂಶಗಳೊಂದಿಗೆ ವಿವರ ನೀಡುವುದು)

(ಈ) ರಾಜ್ಯದಲ್ಲಿ "ಶಕ್ತಿ ಯೋಜನೆ" ಜಾರಿಗೆ ಬಂದ ನಂತರ ಪ್ರಯಾಣಿಕರ ಸುಗಮ ಸಂಚಾರಕ್ಕೆ ಹಾಲಿ ಇರುವ ಬಸ್ಸುಗಳ ಸಂಖ್ಯೆ (Fleet Size) ಕಡಿಮೆ ಆಗಿದೆಯೇ ; ಆಗಿದ್ದಲ್ಲಿ, ಈ ಕುರಿತು ಕೈಗೊಂಡಿರುವ ಕ್ರಮಗಳೇನು ; (ಆದೇಶಗಳೊಂದಿಗೆ ವಿವರ ನೀಡುವುದು)

(ಉ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಕೆ.ಎಸ್.ಆರ್.ಟಿ.ಸಿ ಹಾಗೂ ಬಿ.ಎಂ.ಟಿ.ಸಿ ಬಸ್ಸುಗಳಿಂದ ಉಂಟಾಗಿರುವ ರಸ್ತೆ ಅಪಘಾತಗಳೆಷ್ಟು ; ಅಪಘಾತಕ್ಕೀಡಾದವರಿಗೆ ನೀಡಿರುವ ಪರಿಹಾರವೆಷ್ಟು ; (ವರ್ಷವಾರು ಹಾಗೂ ಜಿಲ್ಲಾವಾರು ಪ್ರಕರಣಗಳ ವಿವರ ನೀಡುವುದು)

(ಊ) ರಾಜ್ಯದಲ್ಲಿ ಮೆಟ್ರೋ ಪ್ರಯಾಣ/ಟಿಕೆಟ್ ದರವನ್ನು ಏರಿಸಲಾಗಿದ್ದು, ಇದರಿಂದ ಬಸ್ ಪ್ರಯಾಣಿಕರ ಸಂಖ್ಯೆಯಲ್ಲಿ ಉಂಟಾಗಿರುವ ವ್ಯತ್ಯಾಸವೆಷ್ಟು ? (ದರ ಏರಿಕೆ ಮುನ್ನ ಹಾಗೂ ನಂತರದ ತುಲನಾತ್ಮಕ ವಿವರವನ್ನು ಸರ್ಕಾರಿ ಆದೇಶಗಳೊಂದಿಗೆ ನೀಡುವುದು)

## ನಿವೇಶನ ಹಾಗೂ ವಸತಿ ರಹಿತ

**ಡಾ. ಅಶ್ವಥ್‌ನಾರಾಯಣ ಸಿ.ಎನ್. (ಮಲ್ಲೇಶ್ವರಂ) :–**

೭೫ (೩೪೦) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಇರುವ ಒಟ್ಟು ನಿವೇಶನವಿಲ್ಲದ (Site-less) ಹಾಗೂ ವಸತಿ–ರಹಿತ (House-less) ಫಲಾನುಭವಿಗಳೆಷ್ಟು; (ಜಿಲ್ಲಾವಾರು ಹಾಗೂ ವಿಧಾನಸಭಾ ಮತಕ್ಷೇತ್ರವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತದಿಂದ ಹಂಚಿಕೆ ಮಾಡಲಾಗಿರುವ ನಿವೇಶನಗಳು ಹಾಗೂ ವಸತಿಗಳೆಷ್ಟು ; (ಜಿಲ್ಲಾವಾರು ಹಾಗೂ ವಿಧಾನಸಭಾ ಮತಕ್ಷೇತ್ರವಾರು ವಿವರ ನೀಡುವುದು)

(ಇ) "ಮುಖ್ಯಮಂತ್ರಿಗಳ ಬಹುಮಹಡಿ ಬೆಂಗಳೂರು ವಸತಿ" ಯೋಜನೆ ಜಾರಿಗೆ ತರಲಾಗಿದ್ದು, ಕಳೆದ ಮೂರು ವರ್ಷಗಳಿಂದ ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತದಿಂದ ಹಂಚಿಕೆ ಮಾಡಲಾಗಿರುವ ನಿವೇಶನಗಳು ಹಾಗೂ ವಸತಿಗಳೆಷ್ಟು; (ವಾರ್ಡ್‌ವಾರು ವಿವರ ನೀಡುವುದು)

(ಈ) ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ ಹಾಗೂ ಸ್ಥಳೀಯ ಸಂಸ್ಥೆಗಳ ಸಹಭಾಗಿತ್ವದ ಮೂಲಕ ವಸತಿ ಯೋಜನೆಗಳನ್ನು ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತ ಅನುಷ್ಠಾನಗೊಳಿಸಬೇಕಾಗಿದ್ದು, ಬೆಂಗಳೂರು ನಗರ ಜಿಲ್ಲೆಯಲ್ಲಿ ಸ್ಥಳೀಯ ಬಿ.ಬಿ.ಎಂ.ಪಿಯನ್ನು ಯೋಜನೆಯಲ್ಲಿ ಪರಿಗಣನೆಗೆ ತೆಗೆದುಕೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಆದೇಶಗಳೊಂದಿಗೆ ವಿವರ ನೀಡುವುದು)

## ಪ್ರಮಾಣ ಪತ್ರ ನೀಡುವುದು

**ಡಾ. ಚಂದ್ರು ಲಮಾಣಿ (ಶಿರಹಟ್ಟಿ) :-**

೭೬ (೩೭೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದ ಯೋಜನೆಗಳ ಅನುಷ್ಠಾನಕ್ಕಾಗಿ ಭೂ ಸ್ವಾಧೀನಗೊಂಡ ಮನೆ ಅಥವಾ ಜಮೀನನ್ನು ಕಳೆದುಕೊಂಡ ನಿರಾಶ್ರಿತರಿಗೆ ಕೊಡಮಾಡುವ ಯೋಜನಾ ನಿರಾಶ್ರಿತ ಪ್ರಮಾಣ ಪತ್ರವನ್ನು ವಿತರಿಸಲು ಇರುವ ಮಾನದಂಡಗಳೇನು ;

(ಆ) ಗದಗ ಜಿಲ್ಲೆಯ ಮುಂಡರಗಿ ತಾಲ್ಲೂಕಿನ ಮುಂಡರಗಿ ಹೋಬಳಿಯ ಹಮ್ಮಿಗಿ ಹಾಗೂ ಗುಮ್ಮಗೋಳ ಗ್ರಾಮಗಳು ಸಂಪೂರ್ಣವಾಗಿ ಮುಳುಗಡೆಯಾಗಿದ್ದು ನವಗ್ರಾಮಗಳು ನಿರ್ಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಮ್ಮಿಗಿ ಹಾಗೂ ಗುಮ್ಮಗೋಳ ಗ್ರಾಮಗಳಲ್ಲಿ ಮನೆ ಕಳೆದುಕೊಂಡ ನಿರಾಶ್ರಿತರಿಗೆ ಪ್ರಮಾಣ ಪತ್ರ ವಿತರಿಸಲಾಗುತ್ತಿದೆಯೇ ;

(ಈ) ಯೋಜನಾ ನಿರಾಶ್ರಿತರ ಪ್ರಮಾಣ ಪತ್ರಗಳನ್ನು ಕೋರಿ ಸಲ್ಲಿಸಿದ ಅರ್ಜಿಗಳ ಸಂಖ್ಯೆ ಎಷ್ಟು ; ಅವುಗಳು ಯಾವುವು ; ಅರ್ಜಿಗಳನ್ನು

ಮುಂಡರಗಿ ತಹಶೀಲ್ದಾರ್ ಕಾರ್ಯಾಲಯದಲ್ಲಿ ಬಾಕಿ ಇರಿಸಿಕೊಂಡಿರುವುದು ಸರ್ಕಾರದ ಗಮನದಲ್ಲಿ ಇದೆಯೇ ; ಇದ್ದರೆ ಬಾಕಿ ಇರಿಸಿಕೊಳ್ಳಲು ಕಾರಣಗಳೇನು ;

(ಉ) ಯಾವಾಗ ಈ ನಿರಾಶ್ರಿತರಿಗೆ ಪ್ರಮಾಣ ಪತ್ರವನ್ನು ನೀಡಲಾಗುವುದು ? (ವಿವರ ನೀಡುವುದು)

## ಪೀಠೋಪಕರಣಗಳಿಗೆ ಅನುದಾನ

**ಡಾ. ಚಂದ್ರು ಲಮಾಣಿ (ಶಿರಹಟ್ಟಿ) :–**

೭೭ (೩೭೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಂದಾಯ ಇಲಾಖೆಯ ಗ್ರಾಮ ಆಡಳಿತ ಅಧಿಕಾರಿಗಳು ಕಾರ್ಯನಿರ್ವಹಿಸುವ ಸ್ಥಳಗಳಲ್ಲಿ ಕಛೇರಿ ಇಲ್ಲದೆ ಸಾರ್ವಜನಿಕ ಸ್ಥಳಗಳು, ದೇವಸ್ಥಾನಗಳು, ಕಟ್ಟೆಗಳು ಹಾಗೂ ಸಾರ್ವಜನಿಕರ ಮನೆಗಳಲ್ಲಿ ಕುಳಿತು ಕರ್ತವ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ ಈ ಕುರಿತು ಸರ್ಕಾರದ ಕ್ರಮವೇನು ;

(ಇ) ಶಿರಹಟ್ಟಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಶಿರಹಟ್ಟಿ ಲಕ್ಷ್ಮೇಶ್ವರ ಹಾಗೂ ಮುಂಡರಗಿ ತಾಲ್ಲೂಕಗಳ ಗ್ರಾಮ ಆಡಳಿತ ಅಧಿಕಾರಿಗಳಿಗೆ ಸರ್ಕಾರದಿಂದ ಕಛೇರಿ ಪೀಠೋಪಕರಣಗಳು ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ನೀಡಿದ ಅನುದಾನವೆಷ್ಟು ;

(ಈ) ಈ ಅನುದಾನದ ಸದ್ಬಳಕೆ ಮಾಡಲಾಗಿದೆಯೆ ? (ವಿವರ ನೀಡುವುದು)

## ಬಸ್‌ಗಳ ಸೌಲಭ್ಯ

**ಡಾ. ಚಂದ್ರು ಲಮಾಣಿ (ಶಿರಹಟ್ಟಿ) :–**

೭೮ (೩೭೭) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿರಹಟ್ಟಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯ ಲಕ್ಷ್ಮೇಶ್ವರ, ಮುಂಡರಗಿ, ಹಾಗೂ ಶಿರಹಟ್ಟಿ ತಾಲ್ಲೂಕುಗಳಲ್ಲಿ ದಿನನಿತ್ಯ ಸಂಚರಿಸುವ ಸಾರಿಗೆ ಬಸ್‌ಗಳ ಸಂಖ್ಯೆ ಎಷ್ಟು;

(ಆ) ಅವು ಯಾವುವು ; ಎಲ್ಲೆಲ್ಲಿ ಎಷ್ಟು ಗಂಟೆಗೆ ಸಂಚರಿಸುತ್ತವೆ ; (ಗ್ರಾಮಗಳವಾರು ಎಲ್ಲಾ ಬಸ್‌ಗಳ ಮಾಹಿತಿಯನ್ನು ನೀಡುವುದು)

(ಇ) ಇಲ್ಲಿ ಕಾರ್ಯನಿರ್ವಹಿಸುತ್ತಿರುವವರ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವೃಂದವಾರು ವಿವರ ನೀಡುವುದು)

(ಈ) ಕಳೆದ ೨ ವರ್ಷಗಳಿಂದ ಶಿರಹಟ್ಟಿ ವಿಧಾನಸಭಾ ಕ್ಷೇತ್ರದಲ್ಲಿನ ಹಳ್ಳಿಗಳ ಜನರಿಗೆ ವಿದ್ಯಾರ್ಥಿಗಳಿಗೆ ಸರಿಯಾದ ಸಮಯಕ್ಕೆ ಬಸ್‌ಗಳು ಸಂಚರಿಸದೆ ತೀವ್ರ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಉ) ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು ;

(ಊ) ಕಳೆದ ಒಂದು ವರ್ಷದಲ್ಲಿ ಎಷ್ಟು ಬಸ್‌ಗಳನ್ನು ಹೊಸದಾಗಿ ನೀಡಲಾಗಿದೆ ; ಎಷ್ಟು ಬಸ್‌ಗಳನ್ನು ಹಿಂಪಡೆಯಲಾಗಿದೆ ? (ವಿವರ ನೀಡುವುದು)

## ವಸತಿ ರಹಿತರಿಗೆ ಮನೆಗಳು

**ಡಾ. ಶೈಲೇಂದ್ರ ಬೆಲ್ದಾಳೆ (ಬೀದರ್ ದಕ್ಷಿಣ) :–**

೭೯ (೪೧೫) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩-೨೪, ೨೦೨೪-೨೫, ೨೦೨೫-೨೬ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಹೊಸ ಮನೆಗಳನ್ನು ಮಂಜೂರು ಮಾಡಲಾಗಿದೆ ; (ವಿಧಾನಸಭಾ ಕ್ಷೇತ್ರವಾರು ಮಾಹಿತಿ ಒದಗಿಸುವುದು)

(ಆ) ಬೀದರ್ ದಕ್ಷಿಣ ಕ್ಷೇತ್ರದಲ್ಲಿ ವಸತಿ ರಹಿತರು ಹೆಚ್ಚು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ವಿಧಾನಸಭಾ ಕ್ಷೇತ್ರದಲ್ಲಿರುವ ವಸತಿ ರಹಿತರ ಸಂಖ್ಯೆ ಎಷ್ಟು; (ಗ್ರಾಮ ಪಂಚಾಯತಿವಾರು ಮತ್ತು ವರ್ಗಾವಾರು ಮಾಹಿತಿ ನೀಡುವುದು)

(ಈ) ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ವಸತಿ ರಹಿತರಿಗೆ ವಿವಿಧ ಆಶ್ರಯ ಯೋಜನೆಗಳಡಿ ಮನೆ ಮಂಜೂರು ಮಾಡುವ ಉದ್ದೇಶ ಸರ್ಕಾರಕ್ಕಿದೆಯೇ ;

(ಉ) ಇದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ಎಷ್ಟು ಮನೆಗಳನ್ನು ಯಾವ ಕಾಲಮಿತಿಯಲ್ಲಿ ಮಂಜೂರು ಮಾಡಲಾಗುವುದು ; ಯಾವಾಗ ಕ್ರಮ ಕೈಗೊಳ್ಳಲಾಗುವುದು ?

## ಸಬ್ ರಿಜಿಸ್ಟ್ರಾರ್ ಕಛೇರಿ ತೆರೆಯುವುದು

**ಡಾ. ಶೈಲೇಂದ್ರ ಬೆಲ್ದಾಳೆ (ಬೀದರ್ ದಕ್ಷಿಣ) :-**

೮೦ (೪೧೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ತಾಲ್ಲೂಕಿನ ಸಬ್ ರಿಜಿಸ್ಟ್ರಾರ್ ಕಛೇರಿಯ ಕಾರ್ಯಭಾರ ಹೆಚ್ಚಿದ್ದು ಮತ್ತು ಚಿಟಗುಪ್ಪಾ ತಾಲ್ಲೂಕಿನಲ್ಲಿ ಸಬ್ ರಿಜಿಸ್ಟ್ರಾರ್ ಕಛೇರಿ ಇಲ್ಲದೇ ಹುಮನಾಬಾದ್ ತಾಲ್ಲೂಕಿನಲ್ಲಿರುವ ಸಬ್ ರಿಜಿಸ್ಟ್ರಾರ್ ಕಛೇರಿಗೆ ತೆರಳಿ ದೂರದ ಪ್ರಯಾಣದಿಂದ ಸಾರ್ವಜನಿಕರಿಗೆ ತುಂಬಾ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರಕ್ಕೆ ಹೊಸ ಸಬ್ ರಿಜಿಸ್ಟ್ರಾರ್ ಕಛೇರಿಯನ್ನು ತೆರೆಯಲು ಸರ್ಕಾರವು ಕ್ರಮ ಕೈಗೊಳ್ಳುವುದೇ ? (ವಿವರ ಒದಗಿಸುವುದು)

## ಹುದ್ದೆಗಳ ಭರ್ತಿ

**ಡಾ. ಶೈಲೇಂದ್ರ ಬೆಲ್ದಾಳೆ (ಬೀದರ್ ದಕ್ಷಿಣ) :–**

೮೧ (೪೧೭) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪಶುಸಂಗೋಪನೆ ಇಲಾಖೆಯಲ್ಲಿ ಖಾಲಿ ಇರುವ ಗ್ರೂಪ್ ಸಿ ಮತ್ತು ಡಿ ದರ್ಜೆಯ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಗ್ರೂಪ್ ಸಿ ಮತ್ತು ಡಿ ದರ್ಜೆಯ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆಯೇ ; ಹಾಗಿದ್ದಲ್ಲಿ, ಎಷ್ಟು ವರ್ಷಗಳಿಂದ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ ; (ವಿವರ ಒದಗಿಸುವುದು)

(ಈ) ಕಳೆದ ೨ ವರ್ಷಗಳಿಂದ ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಯಾವ ಯಾವ ಏಜೆನ್ಸಿಯವರು ಪಾಲ್ಗೊಂಡಿದ್ದಾರೆ ; ಯಾವ ಏಜೆನ್ಸಿಗೆ ನೀಡಲಾಗಿದೆ ;

(ಉ) ಟೆಂಡರ್ ಪ್ರಕ್ರಿಯೆ ಮಾಡಿ ಏಜೆನ್ಸಿಯನ್ನು ನೇಮಕ ಮಾಡಲಾಗಿದೆಯೇ ;

(ಊ) ಹಾಗಿದ್ದಲ್ಲಿ, ಟೆಂಡರ್ ಅವಧಿ ಮುಗಿದ ಮೇಲೆ ಹೊರಗುತ್ತಿಗೆ ನೌಕರರನ್ನು ಯಾವ ರೀತಿ ನೇಮಕಾತಿ ಮಾಡಿಕೊಳ್ಳಲಾಗಿದೆ ? (ಸಂಪೂರ್ಣ ವಿವರ ಒದಗಿಸುವುದು)

## ರಸ್ತೆಗಳ ಅಭಿವೃದ್ಧಿ

**ಡಾ. ಶೈಲೇಂದ್ರ ಬೆಲ್ದಾಳೆ (ಬೀದರ್ ದಕ್ಷಿಣ) :–**

೮೨ (೪೧೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪, ೨೪–೨೫ ಮತ್ತು ೨೦೨೫–೨೬ ನೇ ಸಾಲಿನಲ್ಲಿ ರಾಜ್ಯದಲ್ಲಿ ಲೋಕೋಪಯೋಗಿ ಇಲಾಖೆಯಿಂದ ಯಾವ ಯಾವ ಯೋಜನೆಯಡಿ ಎಷ್ಟೆಷ್ಟು ಅನುದಾನವನ್ನು ಅಭಿವೃದ್ಧಿಗಾಗಿ ಬಿಡುಗಡೆ ಮಾಡಲಾಗಿದೆ ; (ವಿಧಾನಸಭಾ ಕ್ಷೇತ್ರವಾರು ಹಾಗೂ ಯೋಜನೆವಾರು ವಿವರ ಒದಗಿಸುವುದು)

(ಆ) ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಲೋಕೋಪಯೋಗಿ ಇಲಾಖೆ ವ್ಯಾಪ್ತಿಯಲ್ಲಿ ಬರುವ ಜಿಲ್ಲಾ ಮುಖ್ಯ ರಸ್ತೆಗಳು, ರಾಜ್ಯ ಹೆದ್ದಾರಿಗಳು ಮತ್ತು ಪ್ರಮುಖ ಸಂಪರ್ಕ ರಸ್ತೆಗಳು ಹಾಳಾಗಿದ್ದು, ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ತುಂಬಾ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಯಾವ ಕಾಲಮಿತಿಯೊಳಗೆ ರಸ್ತೆ ಅಭಿವೃದ್ಧಿ ಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದು ; (ಯೋಜನಾವಾರು ಮತ್ತು ಲೆಕ್ಕ ಶೀರ್ಷಿಕೆವಾರು ಸಂಪೂರ್ಣ ವಿವರ ಒದಗಿಸುವುದು)

(ಈ) ಕಳೆದ ೨ ವರ್ಷಗಳಿಂದ PRAMC ಮತ್ತು ಕರ್ನಾಟಕ ರಾಜ್ಯ ರಸ್ತೆ ಅಭಿವೃದ್ಧಿ ನಿಗಮದಿಂದ ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ರಸ್ತೆ ಮತ್ತು ಸೇತುವೆ ಕಾಮಗಾರಿಗಳನ್ನು ಕೈಗೊಳ್ಳಲು ಜಾಗವನ್ನು ಗುರುತಿಸಲಾಗಿದೆಯೇ ;

(ಉ) ಗುರುತಿಸಿದ್ದಲ್ಲಿ, ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಗುರುತಿಸದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಗುರುತಿಸಿ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳಲಾಗುವುದು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಮೂಲ ಸೌಕರ್ಯಗಳು

**ಡಾ. ಶೈಲೇಂದ್ರ ಬೆಲ್ದಾಳೆ (ಬೀದರ್ ದಕ್ಷಿಣ) :–**

೮೩ (೪೧೯) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಚಿಟ್ಟ, ಗುನ್ನಳ್ಳಿ, ಗ್ವಾರ್ನಳ್ಳಿ ಗ್ರಾಮಗಳಲ್ಲಿ ಕರ್ನಾಟಕ ಗೃಹ ಮಂಡಳಿ ವತಿಯಿಂದ ಯಾವಾಗ ಬಡಾವಣೆ ರಚಿಸಲಾಗಿದೆ ;

(ಆ) ಸದರಿ ಬಡಾವಣೆಗೆ ಅಗತ್ಯ ಮೂಲ ಸೌಕರ್ಯ ಒದಗಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಮೂಲ ಸೌಕರ್ಯಗಳನ್ನು ಒದಗಿಸಲಾಗುವುದು ; (ಸಂಪೂರ್ಣ ವಿವರ ಒದಗಿಸುವುದು)

(ಈ) ಹಾಗಿದ್ದಲ್ಲಿ, ಸದರಿ ಬಡಾವಣೆಯಲ್ಲಿ ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ; ಹಂಚಿಕೆಯಾಗದೆ ಇರುವ ನಿವೇಶನಗಳು ಎಷ್ಟು ? (ವಿವರ ಒದಗಿಸುವುದು)

## ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ ನಿರ್ಮಿಸಿರುವ ಮನೆಗಳು

**ಶ್ರೀ ತನ್ವೀರ್ ಸೇಠ್ (ನರಸಿಂಹರಾಜ) :–**

೮೪ (೧೦೪) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನರಸಿಂಹರಾಜ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸರ್ಕಾರದ ವಿವಿಧ ಯೋಜನೆಯಡಿ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ ನಿರ್ಮಿಸಿರುವ ಮನೆಗಳು ಶಿಥಿಲಗೊಂಡಿದ್ದು ದುರಸ್ತಿ / ಮರು ನಿರ್ಮಾಣ ಮಾಡಲು ಇಲಾಖೆಯಿಂದ ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಮಾಹಿತಿ ನೀಡುವುದು)

(ಆ) ಬಂದಿದ್ದಲ್ಲಿ, ಈ ಕಾಮಗಾರಿಗೆ ಅನುದಾನ ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಇಲ್ಲದಿದ್ದಲ್ಲಿ, ಅನುದಾನ ಬಿಡುಗಡೆ ವಿಳಂಬಕ್ಕೆ ಕಾರಣಗಳೇನು ? (ಮಾಹಿತಿ ನೀಡುವುದು)

## ಮೂಲ ಸೌಕರ್ಯಗಳನ್ನು ಒದಗಿಸುವುದು

**ಶ್ರೀ ತನ್ವೀರ್ ಸೇಠ್ (ನರಸಿಂಹರಾಜ) :–**

೮೫ (೧೦೫) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನರಸಿಂಹರಾಜ ವಿಧಾನಸಭಾ ಕ್ಷೇತ್ರದ ಆಶ್ರಯ ಬಡಾವಣೆಗಳಲ್ಲಿ (ಮೈಸೂರು ನಗರ ಪಾಲಿಕೆ ವ್ಯಾಪ್ತಿಯಿಂದ ಹೊರಗಿರುವ) ಮೂಲ ಸೌಕರ್ಯ (ಕುಡಿಯುವ ನೀರು, ವಿದ್ಯುತ್, ಒಳಚರಂಡಿ, ರಸ್ತೆ) ಒದಗಿಸಲು ಫಲಾನುಭವಿಗಳು ಪಾವತಿಸಿರುವ ವಂತಿಗೆ / ಬಡ್ಡಿಯಿಂದ ಭರಿಸಲು ಪಾಲಿಕೆಯಿಂದ ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಮಾಹಿತಿ ನೀಡುವುದು)

(ಆ) ಅನುದಾನ ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಇಲ್ಲದಿದ್ದಲ್ಲಿ, ಕಾರಣಗಳೇನು ? (ವಿವರ ನೀಡುವುದು)

## ಬಸ್ಸುಗಳ ಪೂರೈಕೆ

**ಶ್ರೀ ದರ್ಶನ್ ಧ್ರುವನಾರಾಯಣ (ನಂಜನಗೂಡು) :–**

೮೬ (೪೧೧) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಂಜನಗೂಡು ಕೆ.ಎಸ್.ಆರ್.ಟಿ.ಸಿ ಘಟಕದಲ್ಲಿ ಬಸ್ಸುಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಹಾಲಿ ಇರುವ ಕೆ.ಎಸ್.ಆರ್.ಟಿ.ಸಿ. ಬಸ್ಸುಗಳು ಎಷ್ಟು ಕಾರ್ಯನಿರ್ವಹಿಸುತ್ತಿವೆ ; ಎಷ್ಟು ಬಸ್ಸುಗಳ ಅವಶ್ಯಕತೆ/ಬೇಡಿಕೆ ಇದೆ, ಬೇಡಿಕೆ ಇರುವಷ್ಟು ಬಸ್ಸುಗಳನ್ನು ನಂಜನಗೂಡು ಘಟಕಕ್ಕೆ ಪೂರೈಸಲಾಗುವುದೇ ; ಯಾವಾಗ ಪೂರೈಸಲಾಗುವುದು ; (ಮಾಹಿತಿ ನೀಡುವುದು)

(ಇ) ಈ ಘಟಕದಲ್ಲಿ ಚಾಲಕರು/ ನಿರ್ವಾಹಕರು ಹಾಗೂ ತಾಂತ್ರಿಕ ಸಿಬ್ಬಂದಿಗಳ ಕೊರತೆ ಇರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ ; ಹಾಗಿದ್ದಲ್ಲಿ, ಹಾಲಿ ಎಷ್ಟು ಜನ ಚಾಲಕರು/ ನಿರ್ವಾಹಕರು ಹಾಗೂ ತಾಂತ್ರಿಕ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ ; ಎಷ್ಟು ಜನ ಚಾಲಕರು/ ನಿರ್ವಾಹಕರು ಹಾಗೂ ತಾಂತ್ರಿಕ ಸಿಬ್ಬಂದಿಗಳ ಅವಶ್ಯಕತೆ/ಬೇಡಿಕೆ ಇದೆ ; (ಮಾಹಿತಿ ನೀಡುವುದು)

(ಈ) ಬೇಡಿಕೆ ಇರುವಷ್ಟು ಸಿಬ್ಬಂದಿಗಳನ್ನು ಹೊರಗುತ್ತಿಗೆ ಆಧಾರದಲ್ಲಿ ನೇಮಕ ಮಾಡಿಕೊಳ್ಳಲ್ಲಾಗಿದೆಯೇ ; ಯಾವ ಯಾವ ಮತ್ತು ಎಷ್ಟು ಸಿಬ್ಬಂದಿಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗಿದೆ ;

(ಉ) ಖಾಯಂ ಆಗಿ ವಾಹನ ಚಾಲಕರು ಮತ್ತು ನಿರ್ವಾಹಕರನ್ನು ನೇಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಈ ಕುರಿತು ಸರ್ಕಾರದ ನಿಲುವೇನು ; (ಪೂರ್ಣ ಮಾಹಿತಿ ನೀಡುವುದು)

(ಊ) ಹಾಗಿದ್ದಲ್ಲಿ, ಈ ಘಟಕದಲ್ಲಿ ಬೇಡಿಕೆ ಇರುವಷ್ಟು ಬಸ್ಸುಗಳನ್ನು ಪೂರೈಸುವ ಕುರಿತು ಮತ್ತು ಕೊರತೆ ಇರುವಷ್ಟು ಚಾಲಕರು/ ನಿರ್ವಾಹಕರು ಹಾಗೂ ತಾಂತ್ರಿಕ ಸಿಬ್ಬಂದಿಗಳನ್ನು ನೇಮಕಾತಿ ಮಾಡುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ; ಈ ಬಗ್ಗೆ ಸರ್ಕಾರ ಯಾವಾಗ ಕ್ರಮ ವಹಿಸಲಾಗುವುದು ? (ಮಾಹಿತಿ ನೀಡುವುದು)

## ಆಟೋರಿಕ್ಷಾ ದರಗಳ ನಿಗದಿ

**ಶ್ರೀ ದರ್ಶನ್ ಧ್ರುವನಾರಾಯಣ (ನಂಜನಗೂಡು) :–**

೮೭ (೪೧೨) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆಟೋರಿಕ್ಷಾ ದರಗಳನ್ನು ಏಕರೂಪದಲ್ಲಿ ನಿಗದಿಪಡಿಸದೇ ಇರುವುದರಿಂದ ವಯೋವೃದ್ಧರಿಗೆ, ರೋಗಿಗಳಿಗೆ, ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೆ ;

(ಆ) ಹಾಗಿದ್ದಲ್ಲಿ, ರಾಜ್ಯದಲ್ಲಿ ಆಟೋರಿಕ್ಷಾ ದರಗಳನ್ನು ಏಕರೂಪದಲ್ಲಿ ನಿಗದಿಪಡಿಸುವ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ನೀಡುವುದು)

(ಇ) ಬೆಂಗಳೂರು ನಗರ ಜಿಲ್ಲೆಯಲ್ಲಿ ದಿನಾಂಕ:೦೧/೦೮/೨೦೨೫ರಿಂದ ಜಾರಿಗೆ ಬರುವಂತೆ ದಿ:೧೪/೦೭/೨೦೨೫ರಂದು ಹೊರಡಿಸಿರುವ ಅಧಿಸೂಚನೆಯ ಮಾದರಿಯಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅಧಿಸೂಚನೆ ಹೊರಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಈ) ಹಾಗಿದ್ದಲ್ಲಿ, ರಾಜ್ಯದಾದ್ಯಂತ ಜಿಲ್ಲಾ ಕೇಂದ್ರ ಹಾಗೂ ತಾಲ್ಲೂಕು ಕೇಂದ್ರಗಳಿಗೆ ಮತ್ತು ಗ್ರಾಮೀಣ ಪ್ರದೇಶಗಳಿಗೆ ಅನ್ವಯವಾಗುವಂತೆ ಏಕರೂಪದಲ್ಲಿ ಆಟೋರಿಕ್ಷಾ ದರಗಳನ್ನು ನಿಗದಿಪಡಿಸುವ ಕುರಿತು ಸರ್ಕಾರ ಅಧಿಸೂಚನೆಯನ್ನು ಹೊರಡಿಸಲಾಗುವುದೇ ; ಈ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ; ಹಾಗಿದ್ದಲ್ಲಿ; ಯಾವಾಗ ಹೊರಡಿಸಲಾಗುವುದು ; ಅಧಿಸೂಚನೆ ಹೊರಡಿಸುವ ಬಗ್ಗೆ ಸರ್ಕಾರದ ನಿಲುವೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಜಿಲ್ಲಾ, ತಾಲ್ಲೂಕು ಕೇಂದ್ರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ವಯೋವೃದ್ಧರು, ರೋಗಿಗಳು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಂದ ಆಟೋರಿಕ್ಷಾ ದರಗಳನ್ನು ಹೆಚ್ಚಿನ ರೂಪದಲ್ಲಿ ಪಡೆಯುತ್ತಿರುವುದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ನೀಡುವುದು)

(ಊ) ಮೀಟರ್‌ಗಳನ್ನು ಹಾಕದೇ ಆಟೋ ಓಡಿಸುವುದು ಹಾಗೂ ನಿಗದಿತ ಪರಿಷ್ಕೃತ ದರಗಳನ್ನು ಆಟೋ ರಿಕ್ಷಾದ ಪ್ರಮುಖ ಸ್ಥಾನದಲ್ಲಿ ಪ್ರದರ್ಶಿಸದೇ ಇರುವಂತಹ ಆಟೋ ಚಾಲಕರುಗಳ ವಿರುದ್ಧ ಸರ್ಕಾರ ಕಾನೂನು ರೀತ್ಯಾ ಕ್ರಮ ಕೈಗೊಳ್ಳುವುದೇ ; ಹಾಗಿದ್ದಲ್ಲಿ, ಯಾವ ರೀತಿ ಕ್ರಮ ಕೈಗೊಳ್ಳಲಾಗುವುದು ? (ಮಾಹಿತಿ ನೀಡುವುದು)

## ರಸ್ತೆಗಳ ಅಭಿವೃದ್ಧಿ

**ಶ್ರೀ ದರ್ಶನ್ ಧ್ರುವನಾರಾಯಣ (ನಂಜನಗೂಡು) :–**

೮೮ (೪೧೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮೀಣ ರಸ್ತೆ ಸಂಪರ್ಕವು ಗ್ರಾಮೀಣ ಕ್ಷೇತ್ರದ ಆರ್ಥಿಕ ಹಾಗೂ ಸಾಮಾಜಿಕ ಅಭಿವೃದ್ಧಿಯನ್ನು ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಅನೇಕ ವರ್ಷಗಳಿಂದ ಸಮರ್ಪಕವಾಗಿ ಗ್ರಾಮೀಣ ರಸ್ತೆಗಳು ಅಭಿವೃದ್ಧಿಯಾಗದೇ ಇರಲು ಕಾರಣಗಳೇನು ;

(ಇ) ಗ್ರಾಮೀಣ ರಸ್ತೆಗಳ ನಿರ್ವಹಣೆ ಮತ್ತು ಅಭಿವೃದ್ಧಿಗಾಗಿ ತುರ್ತಾಗಿ ಹೆಚ್ಚು ಪ್ರಮಾಣದ ಬಂಡವಾಳ ಹೂಡಬೇಕಿರುವ ಅಂಶವನ್ನು ಸರ್ಕಾರ ಪರಿಗಣಿಸಿದೆಯೇ ;

(ಈ) ಹಾಗಿದ್ದಲ್ಲಿ, ನಂಜನಗೂಡು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿರುವ ಲೋಕೋಪಯೋಗಿ ಇಲಾಖೆಗೆ ಸೇರಿದ ರಸ್ತೆಗಳಿಗೆ ಎಷ್ಟು ಪ್ರಮಾಣದ ಬಂಡವಾಳ ಹೂಡಲಾಗಿದೆ ; ( ಸಂಪೂರ್ಣ ವಿವರ ನೀಡುವುದು)

(ಉ) ಪ್ರಸಕ್ತ ಸಾಲಿನಲ್ಲಿ ಯಾವ ಅನುದಾನಗಳಡಿ ಮತ್ತು ಯಾವ ಯೋಜನೆಗಳಡಿಯಲ್ಲಿ ಲೋಕೋಪಯೋಗಿ ಇಲಾಖೆಗೆ ಸೇರಿದ ರಸ್ತೆಗಳನ್ನು ನಿರ್ವಹಣೆ ಮಾಡಲಾಗುತ್ತಿದೆ ; (ಯೋಜನಾವಾರು ಅನುದಾನದ ಮಾಹಿತಿಯನ್ನು ನೀಡುವುದು)

(ಊ) ಗ್ರಾಮೀಣ ಪ್ರದೇಶಗಳಲ್ಲಿ ಜನವಸತಿ ಕೇಂದ್ರದ ಕೆಲವು ಪ್ರಮುಖ ಗ್ರಾಮೀಣ ಸಂಪರ್ಕ ರಸ್ತೆಗಳನ್ನು ಸಮರ್ಪಕವಾಗಿ ಜಿಲ್ಲಾ ಗ್ರಾಮೀಣ ರಸ್ತೆಯ ನಕ್ಷೆಗಳಲ್ಲಿ ಗುರುತಿಸದೇ ಇರುವುದರಿಂದ ಹಲವು ಗ್ರಾಮೀಣ ರಸ್ತೆಗಳ ಕಾಮಗಾರಿಗಳು ಆಗದೇ ರೈತರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಹಾಗಿದ್ದಲ್ಲಿ, ನಂಜನಗೂಡು ವಿಧಾನಸಭಾ ಕ್ಷೇತ್ರದಲ್ಲಿ ಇಂತಹ ಸಮಸ್ಯೆಗಳಿವೆಯೇ ; ಈ ಸಮಸ್ಯೆಗಳನ್ನು ಬಗೆಹರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; (ಮಾಹಿತಿ ನೀಡುವುದು)

(ಋ) ಒಂದು ಹಳ್ಳಿಗಳಿಂದ ಮತ್ತೊಂದು ಹಳ್ಳಿಗೆ ಜಿಲ್ಲಾ ಮುಖ್ಯ ರಸ್ತೆಗೆ ರಾಜ್ಯ ಹೆದ್ದಾರಿಗೆ ಹಾಗೂ ರಾಷ್ಟ್ರೀಯ ಹೆದ್ದಾರಿಗಳಿಗೆ ಸಂಪರ್ಕ ಕಲ್ಪಿಸುವ ಗ್ರಾಮೀಣ ರಸ್ತೆಗಳನ್ನು ನಕ್ಷೆಗಳಲ್ಲಿ ಗುರುತಿಸಲಾಗುವುದೇ ; ಹಾಗಿದ್ದಲ್ಲಿ, ನಂಜನಗೂಡು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹೊಸದಾಗಿ ಎಷ್ಟು ಗ್ರಾಮೀಣ ಸಂಪರ್ಕ ರಸ್ತೆಗಳನ್ನು ನಕ್ಷೆಗಳಲ್ಲಿ ಗುರುತಿಸಲಾಗಿದೆ ? (ನಕ್ಷೆಯೊಂದಿಗೆ ಪೂರ್ಣ ವಿವರ ನೀಡುವುದು)

## ಮೀನು ಸಾಕಾಣಿಕೆಗೆ ಉತ್ತೇಜನ

**ಶ್ರೀ ದರ್ಶನ್ ಧ್ರುವನಾರಾಯಣ (ನಂಜನಗೂಡು) :–**

೮೯ (೪೧೪) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಮೀನುಗಾರಿಕೆ ಇಲಾಖೆಯಿಂದ ಮೈಸೂರು ಜಿಲ್ಲೆಗೆ ಬಿಡುಗಡೆ ಮಾಡಲಾದ ಅನುದಾನವೆಷ್ಟು; (ಕಾರ್ಯಕ್ರಮವಾರು ಹಾಗೂ ವಿಧಾನಸಭಾ ಕ್ಷೇತ್ರವಾರು ವಿವರವಾದ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ಯಾವ ಯಾವ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಅನುದಾನ ಬಿಡುಗಡೆ ಮಾಡಲಾಗುತ್ತಿದೆ ;

(ಇ) ಮೀನುಗಾರಿಕೆ ಇಲಾಖೆಯಿಂದ ನಂಜನಗೂಡು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಎಷ್ಟು ಕೆರೆಗಳಲ್ಲಿ ಮೀನುಗಳನ್ನು

ಸಾಕಾಣಿಕೆ ಮಾಡಲಾಗುತ್ತಿದೆ ; ಇದರಿಂದ ಆಗುತ್ತಿರುವ ಉತ್ಪತ್ತಿ ಎಷ್ಟು ; ಇದಕ್ಕಾಗಿ ಎಷ್ಟು ಹಣ ಖರ್ಚು ಮಾಡಲಾಗುತ್ತಿದೆ ; ಇದರಿಂದ ಬರುತ್ತಿರುವ ಲಾಭ ಎಷ್ಟು ; (ಕಳೆದ ಮೂರು ವರ್ಷಗಳ ಮಾಹಿತಿಯನ್ನು ಕೆರೆವಾರು, ವರ್ಷವಾರು ನೀಡುವುದು)

(ಈ) ಸರ್ಕಾರಿ ಹಾಗೂ ಖಾಸಗಿ ಕೆರೆಗಳಲ್ಲಿ ಮೀನು ಸಾಕಾಣಿಕೆ ಮಾಡಲು ಸರ್ಕಾರ ನಿಗದಿಪಡಿಸಿರುವ ನಿಯಮಗಳೇನು ; ಮೀನು ಸಾಕಾಣಿಕೆಗೆ ಯಾವ ರೀತಿ ಅನುಮತಿ ನೀಡಲಾಗುತ್ತಿದೆ ; (ಮಾಹಿತಿ ನೀಡುವುದು)

(ಉ) ಗುತ್ತಿಗೆದಾರರಿಗೆ ಕೆರೆಗಳನ್ನು ಹಂಚಿಕೆ ಮಾಡುವಾಗ ಸರ್ಕಾರವು ಪರಿಗಣಿಸುತ್ತಿರುವ ಅಂಶಗಳೇನು ; ಈ ಕುರಿತು ಸರ್ಕಾರ ನಿಗದಿಪಡಿಸಿರುವ ಮಾನದಂಡಗಳೇನು ? (ಸರ್ಕಾರದ ಆದೇಶಗಳೊಂದಿಗೆ ಸಂಪೂರ್ಣ ಮಾಹಿತಿಯನ್ನು ನೀಡುವುದು)

## ಬಿ.ಎಂ.ಟಿ.ಸಿ. ಬಸ್ ನಿಲ್ದಾಣಕ್ಕೆ ಜಾಗ

**ಶ್ರೀ ಧೀರಜ್ ಮುನಿರಾಜು (ದೊಡ್ಡಬಳ್ಳಾಪುರ) :–**

೯೦ (೩೬೦) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೊಡ್ಡಬಳ್ಳಾಪುರ ನಗರದಲ್ಲಿ ಸರ್ಕಾರಿ ಬಿ.ಎಂ.ಟಿ.ಸಿ ಬಸ್ ನಿಲ್ದಾಣ ಇದೆಯೇ ; ಸುಸಜ್ಜಿತ ಬಸ್ ನಿಲ್ದಾಣ ನಿರ್ಮಾಣಕ್ಕೆ ಅನುದಾನ ಒದಗಿಸಲಾಗಿದೆಯೇ ; (ವಿವರ ನೀಡುವುದು)

(ಆ) ಕೆ.ಎಸ್.ಆರ್.ಟಿ.ಸಿ ಬಸ್ ಡಿಪೋಗೆ ಹೊಂದಿಕೊಂಡಂತೆ ಇರುವ ಜಾಗವನ್ನು ಬಿ.ಎಂ.ಟಿ.ಸಿ ಯವರಿಗೆ ಸುಸಜ್ಜಿತವಾದ ಬಿ.ಎಮ್.ಟಿ.ಸಿ

ಬಸ್ ನಿಲ್ದಾಣ ಮತ್ತು ವಾಣಿಜ್ಯ ಕಟ್ಟಡವನ್ನು ನಿರ್ಮಿಸಲು ಜಾಗವನ್ನು ಹಸ್ತಾಂತರಿಸಲು ಪ್ರಸ್ತಾವನೆ ಇದ್ದರೂ ಸಹ ಇದುವರೆಗೂ ಹಸ್ತಾಂತರಿಸದೇ ಇರಲು ಕಾರಣಗಳೇನು ;

(ಇ) ಬಿ.ಎಂ.ಟಿ.ಸಿ ವತಿಯಿಂದ ತಾಲ್ಲೂಕಿನಲ್ಲಿ ಸಂಚರಿಸುತ್ತಿರುವ ಬಸ್ಸುಗಳು ಯಾವುವು ; ತಾಲ್ಲೂಕಿನಾದ್ಯಂತ ಬಿ.ಎಂ.ಟಿ.ಸಿ ಬಸ್ಸುಗಳು ಸಂಚರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಎಲ್ಲಾ ಬಸ್ಸುಗಳ ರೂಟ್ ಸಂಖ್ಯೆ ಹಾಗೂ ಸಮಯದ ವಿವರ ನೀಡುವುದು)

## ತಾಲ್ಲೂಕು ಕಛೇರಿಯ ನಿರ್ಮಾಣ

**ಶ್ರೀ ಧೀರಜ್ ಮುನಿರಾಜು (ದೊಡ್ಡಬಳ್ಳಾಪುರ) :–**

೯೧ (೩೬೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೊಡ್ಡಬಳ್ಳಾಪುರ ತಾಲ್ಲೂಕು ಕಛೇರಿಯು ನಿರ್ಮಾಣಗೊಂಡಿದ್ದು ಯಾವಾಗ ; ೨೦೨೩ ಜೂನ್ ನಿಂದ ಈವರೆಗೂ ತಾಲ್ಲೂಕು ಕಛೇರಿಗೆ ನೀಡಿರುವ ಅನುದಾನವೆಷ್ಟು ; (ಅನುದಾನವಾರು ಸಂಪೂರ್ಣ ವಿವರ ನೀಡುವುದು)

(ಆ) ತಾಲ್ಲೂಕಿನ ಉಪ ವಿಭಾಗಾಧಿಕಾರಿಗಳ ಕಛೇರಿಗೆ ಹಾಗೂ ಕೋರ್ಟಿಗೆ ಅಂಗವಿಕಲರು ಮತ್ತು ವಯೋವೃದ್ದರು ತೆರಳಲು ಲಿಫ್ಟ್ ವ್ಯವಸ್ಥೆ ಇದೆಯೇ ; ಇಲ್ಲದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳದಿರಲು ಕಾರಣವೇನು ;

(ಇ) ಕಂದಾಯ ಇಲಾಖೆಯ ತಾಲ್ಲೂಕು ಮಟ್ಟದ ಎಲ್ಲಾ ಸರ್ಕಾರಿ

ಕಛೇರಿಗಳನ್ನು ಒಂದೇ ಕಟ್ಟಡದಲ್ಲಿ ನಿರ್ವಹಿಸಲು ಅನುಕೂಲವಾಗುವ ಉದ್ದೇಶದಿಂದ ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಮಿನಿ ವಿಧಾನಸೌಧ ಕಟ್ಟಡ ನಿರ್ಮಿಸುವ ಬಗ್ಗೆ ಸರ್ಕಾರದಲ್ಲಿ ಪ್ರಸ್ತಾವನೆ ಇದೆಯೇ ;

(ಈ) ಇಲ್ಲದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಮಿನಿ ವಿಧಾನಸೌಧ ಕಟ್ಟಡ ನಿರ್ಮಿಸಲು ಆದೇಶವನ್ನು ಮಾಡಲಾಗುವುದು ;

(ಉ) ತಾಲ್ಲೂಕಿಗೆ ಹೊಸ ಉಪ ವಿಭಾಗಾಧಿಕಾರಿಗಳ ಕಛೇರಿ ಕಟ್ಟಡ ನಿರ್ಮಾಣ ಮಾಡಲು ಈಗಾಗಲೇ ಪ್ರಸ್ತಾವನೆ ಇದ್ದರೂ ಸಹ ಇದುವರೆಗೂ ಸದರಿ ಪ್ರಸ್ತಾವನೆಗೆ ಅನುಮೋದನೆ ದೊರಕದಿರಲು ಕಾರಣಗಳೇನು ;

(ಊ) ತಾಲ್ಲೂಕಿನ ಎಷ್ಟು ಸರ್ಕಾರಿ ಕಛೇರಿಗಳು ಖಾಸಗಿ ಕಟ್ಟಡದಲ್ಲಿ ಬಾಡಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿವೆ ;

(ಋ) ಈ ಎಲ್ಲಾ ಕಛೇರಿಗಳಿಂದ ಪ್ರತೀ ತಿಂಗಳಿಗೆ ಎಷ್ಟು ಖಾಸಗಿ ಕಟ್ಟಡಕ್ಕೆ ಬಾಡಿಗೆಯನ್ನು ಪಾವತಿಸಲಾಗುತ್ತಿದೆ ? (ಕಛೇರಿವಾರು ಸಂಪೂರ್ಣ ವಿವರ ನೀಡುವುದು)

## ಟೋಲ್ ನಿರ್ವಹಣೆ

**ಶ್ರೀ ಧೀರಜ್ ಮುನಿರಾಜು (ದೊಡ್ಡಬಳ್ಳಾಪುರ) :–**

೯೨ (೩೬೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಕೆ.ಆರ್.ಡಿ.ಸಿ.ಎಲ್ ವತಿಯಿಂದ ಯಲಹಂಕ ಮತ್ತು ಹಿಂದೂಪುರ ಸಂಪರ್ಕಿಸುವ ರಸ್ತೆಯಲ್ಲಿನ ಪ್ರದೇಶದಲ್ಲಿ ಈವರೆಗೂ ಎಷ್ಟು ಎಕರೆ ಭೂಮಿಯನ್ನು ಭೂ ಸ್ವಾಧೀನ ಪ್ರಕ್ರಿಯೆಯಡಿ ಭೂ ಸ್ವಾಧೀನಪಡಿಸಿಕೊಳ್ಳಲಾಗಿದೆ ;

(ಆ) ಹಾಗಿದ್ದಲ್ಲಿ, ಸ್ವಾಧೀನಪಡಿಸಿಕೊಂಡ ಎಷ್ಟು ಜನರಿಗೆ ಭೂ ಪರಿಹಾರ ನೀಡಲಾಗಿದೆ ; ಬಾಕಿಯಿರುವ ಭೂ ಪರಿಹಾರವನ್ನು ಯಾವ

ಕಾಲಮಿತಿಯೊಳಗೆ ನೀಡಲಾಗುವುದು ; (ಹೋಬಳಿವಾರು/ಸರ್ವೆ ನಂಬರ್‌ವಾರು ಸಂಪೂರ್ಣ ವಿವರ ನೀಡುವುದು)

(ಇ) ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಕೆ.ಆರ್.ಡಿ.ಸಿ.ಎಲ್ ವತಿಯಿಂದ ನಿರ್ಮಾಣವಾಗಿರುವ ಟೋಲ್ ಕೇಂದ್ರವನ್ನು ಸಮರ್ಪಕವಾಗಿ ನಿರ್ವಹಣೆ ಮಾಡದಿರುವುದರ ಬಗ್ಗೆ ಈ ಹಿಂದೆ ಸಾಕಷ್ಟು ಬಾರಿ ಸರ್ಕಾರದ ಗಮನ ಸೆಳೆದಿದ್ದರೂ ಸಹ ಟೋಲ್ ಏಜೆನ್ಸಿಯ ವಿರುದ್ಧ ಸರ್ಕಾರ ಈವರೆಗೆ ಕ್ರಮ ಕೈಗೊಳ್ಳದಿರಲು ಕಾರಣಗಳೇನು ;

(ಈ) ಕೆ.ಆರ್.ಡಿ.ಸಿ.ಎಲ್ ವತಿಯಿಂದ ನಿರ್ಮಾಣವಾಗಿರುವ ಟೋಲ್‌ನ ನಿರ್ವಹಣೆಗೆ ವಿಧಿಸಿರುವ ಷರತ್ತು ಮತ್ತು ನಿಬಂಧನೆಗಳೇನು ; (ವಿವರ ಒದಗಿಸುವುದು)

(ಉ) ಟೋಲ್ ನಿರ್ವಹಣೆಯನ್ನು ಮಾಡುತ್ತಿರುವ ಏಜೆನ್ಸಿಯ ಎಲ್ಲಾ ಷರತ್ತುಗಳನ್ನು ಉಲ್ಲಂಘಿಸಿರುವುದರಿಂದ ಅವರ ವಿರುದ್ಧ ಯಾವ ಕ್ರಮಗಳನ್ನು ಯಾವ ಕಾಲಮಿತಿಯಲ್ಲಿ ಕೈಗೊಳ್ಳಲಾಗುವುದು ?

## ಅನುಷ್ಠಾನಗೊಂಡ ಕಾಮಗಾರಿಗಳು

**ಶ್ರೀ ಧೀರಜ್ ಮುನಿರಾಜು (ದೊಡ್ಡಬಳ್ಳಾಪುರ) :-**

೯೩ (೩೬೩) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ೨೦೨೩ ಜೂನ್‌ನಿಂದ ೨೦೨೫ ಜುಲೈ ತಿಂಗಳಿನವರೆಗೂ ವಸತಿ ಇಲಾಖೆಯಿಂದ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ನಿರ್ವಹಿಸಿರುವ/ಅನುಷ್ಠಾನಗೊಳಿಸಿರುವ ಯೋಜನೆಗಳು ಎಷ್ಟು ಮತ್ತು ಯಾವುವು ; (ವಿಧಾನಸಭಾವಾರು ಪ್ರತೀ ಯೋಜನೆಗಳ ಸಂಪೂರ್ಣ ವಿವರವನ್ನು ನೀಡುವುದು)

(ಆ) ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ನಿರ್ವಹಿಸಿರುವ ಸದರಿ ಯೋಜನೆಗಳ ಫಲಾನುಭವಿಗಳೆಷ್ಟು ; ಯೋಜನೆಗಳಿಗೆ ವೆಚ್ಚವಾದ ಹಣ ಎಷ್ಟು ; ಪೂರ್ಣಗೊಂಡಿರುವ, ಪ್ರಗತಿಯಲ್ಲಿರುವ ಮತ್ತು ಪ್ರಾರಂಭವಾಗದಿರುವ ಯೋಜನೆಗಳು ಯಾವುವು ; (ತಾಲ್ಲೂಕುವಾರು ಪ್ರತೀ ಯೋಜನೆಗಳ ಪ್ರತ್ಯೇಕ ಫಲಾನುಭವಿಗಳ ಸಂಪೂರ್ಣ ವಿವರವನ್ನು ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ದೊಡ್ಡಬಳ್ಳಾಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವಸತಿ ಇಲಾಖೆಯಿಂದ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ನಿರ್ವಹಿಸಿರುವ/ಅನುಷ್ಠಾನಗೊಳಿಸಿರುವ ಯೋಜನೆಗಳು ಎಷ್ಟು ಮತ್ತು ಯಾವುವು ? (ಫಲಾನುಭವಿಗಳ ಯೋಜನೆವಾರು ಸಂಪೂರ್ಣ ವಿವರ ನೀಡುವುದು)

## ಕಾಮಗಾರಿಗಳು

**ಶ್ರೀ ಧೀರಜ್ ಮುನಿರಾಜು (ದೊಡ್ಡಬಳ್ಳಾಪುರ) :–**

೯೪ (೩೬೪) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩ ಜೂನ್‌ನಿಂದ ೨೦೨೫ ಜುಲೈ ತಿಂಗಳಿನವರೆಗೆ ದೊಡ್ಡಬಳ್ಳಾಪುರ ವಿಧಾನಸಭಾ ಕ್ಷೇತ್ರದಲ್ಲಿ ಕೊಳಗೇರಿ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಅನುಷ್ಠಾನಗೊಂಡ ಕಾಮಗಾರಿಗಳು ಯಾವುವು ; ಇದುವರೆಗೂ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಪ್ರಗತಿಯಲ್ಲಿರುವ, ಪೂರ್ಣಗೊಂಡಿರುವ, ಅಪೂರ್ಣಗೊಂಡಿರುವ ಹಾಗೂ ಪ್ರಾರಂಭಗೊಳ್ಳಬೇಕಾಗಿರುವ ಕಾಮಗಾರಿಗಳೆಷ್ಟು ವಿವರ ನೀಡುವುದು ;

(ಆ) ದೊಡ್ಡಬಳ್ಳಾಪುರ ನಗರದಲ್ಲಿ ನೂತನವಾಗಿ ಘೋಷಣೆಯಾಗಿರುವ ಕೊಳಗೇರಿ ಪ್ರದೇಶಗಳೆಷ್ಟು ;

(ಇ) ಕೊಳಗೇರಿ ಮಂಡಳಿಗೆ ಜಾಗ ಮೀಸಲಿಡಲಾಗಿದೆಯೇ ; ಅವುಗಳ ಅಭಿವೃದ್ಧಿ ಹಾಗೂ ಮೂಲಭೂತ ಸೌಕರ್ಯಗಳಿಗಾಗಿ ಸರ್ಕಾರದಿಂದ ಮಂಜೂರಾದ ಅನುದಾನ ಎಷ್ಟು; ಕಾಮಗಾರಿಗಳು ಯಾವುವು ಮತ್ತು ಕಾಮಗಾರಿಗಳ ಪ್ರಸ್ತುತ ಮಂಜೂರಾದ ಪ್ರಗತಿಯೇನು ; (ವಿವರ ನೀಡುವುದು)

(ಈ) ದೊಡ್ಡಬಳ್ಳಾಪುರ ನಗರದಲ್ಲಿ ಕೊಳಗೇರಿ ಪ್ರದೇಶದ ನಿವಾಸಿಗಳಿಗೆ ಜಿ+೪ ಮನೆಗಳ ಮೂಲಕ ವಸತಿ ಕಲ್ಪಿಸುವ ಯೋಜನೆ ಇದೆಯೇ ;

(ಉ) ಇದ್ದಲ್ಲಿ, ಸದರಿ ಯೋಜನೆಯ ಅಂದಾಜು ಮೊತ್ತ ಎಷ್ಟು ; ಪ್ರಸ್ತುತ ಎಷ್ಟು ಜಿ+೪ ಮನೆಗಳ ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ ;

(ಊ) ಇಲ್ಲದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಜಿ+೪ ಮನೆಗಳನ್ನು ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದು ? (ವಿವರ ನೀಡುವುದು)

## ಯೋಜನೆಯ ಬಗ್ಗೆ

**ಶ್ರೀ ನರೇಂದ್ರ ಸ್ವಾಮಿ ಪಿ.ಎಂ. (ಮಳವಳ್ಳಿ) :–**

೯೫ (೪೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ವರ್ಷ ಲೋಕೋಪಯೋಗಿ ಇಲಾಖೆಯಿಂದ ಮಳವಳ್ಳಿ ತಾಲ್ಲೂಕಿಗೆ ನೀಡುವ ಅನುದಾನವೆಷ್ಟು, ಅಪೆಂಡಿಕ್ಸ್–ಇ ಯೋಜನೆಯಲ್ಲಿ ಕೈಗೊಳ್ಳಲು ಉದ್ದೇಶಿಸಿರುವ ಕಾಮಗಾರಿಗಳು ಯಾವುವು ;

(ಆ) ಡಾ॥ ನಂಜುಂಡಪ್ಪ ವರದಿಯ ಪ್ರಕಾರ ಅತೀ ಹಿಂದುಳಿದ ತಾಲ್ಲೂಕಾಗಿರುವ ಮಳವಳ್ಳಿಗೆ ಲೋಕೋಪಯೋಗಿ ಇಲಾಖೆಯಿಂದ ಹೆಚ್ಚುವರಿ ಅನುದಾನ ನೀಡಲು ಸರ್ಕಾರ ಬದ್ಧವಿದೆಯೇ ;

(ಇ) ತಾಲ್ಲೂಕಿನ ರಸ್ತೆ ಮತ್ತು ಸೇತುವೆಗಳು ಹಾಳಾಗಿರುವುದು ಸರ್ಕಾರದ ಗಮನದಲ್ಲಿದೆಯೇ, ಇದ್ದರೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ದೇವಸ್ಥಾನಗಳ ಅಭಿವೃದ್ಧಿ

**ಶ್ರೀ ನರೇಂದ್ರ ಸ್ವಾಮಿ ಪಿ.ಎಂ. (ಮಳವಳ್ಳಿ) :–**

೯೬ (೪೮) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಳವಳ್ಳಿ ತಾಲ್ಲೂಕಿಗೆ ಕಳೆದ ೨ ವರ್ಷದಲ್ಲಿ ದೇವಸ್ಥಾನಗಳ ಅಭಿವೃದ್ಧಿಗಾಗಿ ನೀಡಿರುವ ಅನುದಾನವೆಷ್ಟು ; ಪ್ರಸಕ್ತ ವರ್ಷ ಈ ತಾಲ್ಲೂಕಿನ ದೇವಸ್ಥಾನ ಅಭಿವೃದ್ಧಿಗಾಗಿ ನೀಡುವ ಅನುದಾನವೆಷ್ಟು ;

(ಆ) ಈ ತಾಲ್ಲೂಕಿನ ಯಾವ ಯಾವ ಅಭಿವೃದ್ಧಿ ಕಾರ್ಯಕ್ರಮಗಳನ್ನು ಈ ವರ್ಷದ ಮುಜರಾಯಿ ಇಲಾಖೆಯ ಕ್ರಿಯಾ ಯೋಜನೆಯಲ್ಲಿ ಕೈಗೆತ್ತಿಕೊಳ್ಳಲಾಗಿದೆ ; ಇದ್ದಕ್ಕಾಗಿ ನೀಡುವ ಅನುದಾನವೆಷ್ಟು ?

## ವೋಲ್ವೊ ಬಸ್ ಸಂಚಾರ ಪ್ರಾರಂಭಿಸುವುದು

**ಶ್ರೀ ಪಾಟೀಲ್ ಜೆ.ಟಿ. (ಬೀಳಗಿ) :–**

೯೭ (೩೯೫) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆಯಿಂದ ಬೆಂಗಳೂರಿಗೆ ಹವಾನಿಯಂತ್ರಿತ ವೋಲ್ವೋ ಬಸ್ ಸಂಚಾರ ಪ್ರಾರಂಭಿಸಲು ಸುಮಾರು ೨ ವರ್ಷದಿಂದ ಒತ್ತಾಯಿಸುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ಹಾಗಿದ್ದಲ್ಲಿ, ಬೇಡಿಕೆ ಇದ್ದಾಗಲೂ ನಿರ್ಲಕ್ಷಿಸುವುದಕ್ಕೆ ಕಾರಣವೇನು ;

(ಇ) ಬೀಳಗಿ ಸಾರಿಗೆ ಡಿಪೋದಲ್ಲಿ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕಿದೆಯೇ ;

(ಈ) ಸುಮಾರು ೨೦ ಚಾಲಕ ಮತ್ತು ನಿರ್ವಾಹಕ ಹುದ್ದೆಗಳು ಖಾಲಿ ಇರುವುದರಿಂದ ಬಹಳಷ್ಟು ತೊಂದರೆಯಾಗಿದ್ದು, ಯಾವಾಗ ಸಿಬ್ಬಂದಿ ಕೊರತೆ ಪರಿಹರಿಸಲಾಗುವುದು ? (ವಿವರಣೆ ನೀಡುವುದು)

## ದೇವಸ್ಥಾನಗಳ ಜೀರ್ಣೋದ್ಧಾರ

**ಶ್ರೀ ಪಾಟೀಲ್ ಜೆ.ಟಿ. (ಬೀಳಗಿ) :–**

೯೮ (೩೯೬) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀಳಗಿ ಮತಕ್ಷೇತ್ರ ವ್ಯಾಪ್ತಿಯಲ್ಲಿ ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ಅನುದಾನಕ್ಕೆ ಬಹಳಷ್ಟು ಬೇಡಿಕೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ೨೦೨೫–೨೬ ನೇ ಸಾಲಿನಲ್ಲಿ ದೇವಸ್ಥಾನಗಳ ಜೀರ್ಣೋದ್ಧಾರಕ್ಕಾಗಿ ಯಾವ ಯೋಜನೆ ಹಮ್ಮಿಕೊಳ್ಳಲಾಗಿದೆ ;

(ಇ) ಹಾಗಿದ್ದಲ್ಲಿ, ಇವುಗಳಿಗೆ ಅನುದಾನ ಯಾವಾಗ ಬಿಡುಗಡೆ ಮಾಡಲಾಗುವುದು ? (ವಿವರ ನೀಡುವುದು)

## ಪೋಡಿ ಮುಕ್ತ ಗ್ರಾಮ ಯೋಜನೆ

**ಶ್ರೀ ಪಾಟೀಲ್ ಜೆ.ಟಿ. (ಬೀಳಗಿ) :–**

೯೯ (೩೯೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪೋಡಿ ಮುಕ್ತ ಗ್ರಾಮ ಯೋಜನೆ ಮಂದಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕಿದೆಯೇ ;

(ಆ) ಹಾಗಿದ್ದಲ್ಲಿ, ಪೋಡಿ ಮುಕ್ತ ಗ್ರಾಮ ಯಾವ ಕಾಲಮಿತಿಯೊಳಗೆ ಆಗುತ್ತದೆ ? (ವಿವರ ನೀಡುವುದು)

## ಆಶ್ರಯ ಯೋಜನೆ ಮನೆಗಳ ಹಂಚಿಕೆ

**ಶ್ರೀ ಪಾಟೀಲ್ ಜೆ.ಟಿ. (ಬೀಳಗಿ) :–**

೧೦೦ (೩೯೮) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨ ವರ್ಷಗಳಿಂದ ಆಶ್ರಯ ಯೋಜನೆ ಮನೆಗಳ ಹಂಚಿಕೆ ಮಾಡದೆ ಇರುವುದರಿಂದ ವಸತಿ ರಹಿತ ಫಲಾನುಭವಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕಿದೆಯೇ ;

(ಆ) ಹಾಗಿದ್ದಲ್ಲಿ, ಡಾ॥ ನಂಜುಂಡಪ್ಪ ವರದಿ ಪ್ರಕಾರ ಬೀಳಗಿ ತಾಲ್ಲೂಕು ಅತ್ಯಂತ ಹಿಂದುಳಿದ ತಾಲ್ಲೂಕಾಗಿದ್ದು, ೨೦೨೫–೨೬ನೇ ಸಾಲಿನಲ್ಲಿ ಹೆಚ್ಚಿಗೆ ಆಶ್ರಯ ಮನೆಗಳನ್ನು ಹಂಚಿಕೆ ಮಾಡಲಾಗುವುದೇ ;

(ಇ) ಹಾಗಿದ್ದಲ್ಲಿ, ಯಾವಾಗ ಆಶ್ರಯ ಮನೆಗಳನ್ನು ಹಂಚಿಕೆ ಮಾಡಲಾಗುವುದು ?

## ವಕ್ಫ್ ಆಸ್ತಿಗಳು

**ಶ್ರೀ ಪಾಟೀಲ್ ಜೆ.ಟಿ. (ಬೀಳಗಿ) :–**

೧೦೧ (೩೯೯) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫-೨೬ ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ; (ವಿವರ ನೀಡುವುದು)

(ಆ) ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ವಕ್ಫ್ ಆಸ್ತಿಗಳನ್ನು ಸರ್ಕಾರ ಸ್ವಯಂ ನೋಂದಣಿ ಮಾಡಿಕೊಂಡು ಅಭಿವೃದ್ಧಿಪಡಿಸುವುದು ಅವಶ್ಯವಿರುವ ದಿಸೆಯಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ೨೦೨೫-೨೬ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಯಾವ ಯೋಜನೆಗಳನ್ನು ಹಾಕಿಕೊಳ್ಳಲಾಗಿದೆ ? (ವಿವರ ನೀಡುವುದು)

## ಅನುದಾನ ಬಿಡುಗಡೆ

**ಶ್ರೀ ಪುಟ್ಟರಂಗಶೆಟ್ಟಿ ಸಿ. (ಚಾಮರಾಜನಗರ) :–**

೧೦೨ (೭೦) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬರುವ ಮುಜರಾಯಿ ಮತ್ತು ಮುಜರಾಯಿಯೇತರ ದೇವಾಲಯಗಳ ಸಂಖ್ಯೆ ಎಷ್ಟು ; (ದೇವಾಲಯಗಳವಾರು ಸ್ಥಳವಾರು, ಗ್ರಾಮವಾರು, ಹೆಸರುವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಮುಜರಾಯಿ ಅಧೀನದಲ್ಲಿ ಬರುವ ದೇವಾಲಯಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ; (ಗ್ರಾಮವಾರು, ಕ್ಷೇತ್ರವಾರು ಸಂಪೂರ್ಣ ವಿವರ ನೀಡುವುದು)

(ಇ) ಕಳೆದ ನಾಲ್ಕು ವರ್ಷಗಳಿಂದ ಚಾಮರಾಜನಗರ ವಿಧಾನಸಭಾ ಕ್ಷೇತ್ರದಲ್ಲಿರುವ ದೇವಾಲಯಗಳ ಜೀರ್ಣೋದ್ಧಾರಕ್ಕೆ ಯಾವುದೇ ಅನುದಾನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ದೇವಾಲಯಗಳ ಜೀರ್ಣೋದ್ಧಾರಕ್ಕೆ ಅನುದಾನ ನೀಡುವಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಮೀನುಗಾರಿಕೆ

**ಶ್ರೀ ಪುಟ್ಟರಂಗಶೆಟ್ಟಿ ಸಿ. (ಚಾಮರಾಜನಗರ) :–**

೧೦೩ (೭೧) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರ ವಿಧಾನಸಭಾ ಕ್ಷೇತ್ರದಲ್ಲಿ ಇರುವ ಕೆರೆಗಳ ಸಂಖ್ಯೆ ಎಷ್ಟು ;

(ಆ) ಈ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಯಾವ ಯಾವ ಕೆರೆಗಳಲ್ಲಿ ಮೀನುಗಾರಿಕೆ ನಡೆಸಲಾಗುತ್ತಿದೆ ; (ವಿವರ ನೀಡುವುದು)

(ಇ) ಈ ವಿಧಾನಸಭಾ ಕ್ಷೇತ್ರದಲ್ಲಿ ಕಳೆದ ಎರಡು ವರ್ಷಗಳಲ್ಲಿ ಮತ್ಸ್ಯಾಶ್ರಯ ಯೋಜನೆಯಡಿ ಎಷ್ಟು ಮನೆಗಳನ್ನು ನಿರ್ಮಾಣ ಮಾಡಲಾಗಿದೆ ; (ವಿವರ ನೀಡುವುದು)

(ಈ) ೨೦೨೪–೨೦೨೫ನೇ ಸಾಲಿನಲ್ಲಿ ಚಾಮರಾಜನಗರ ವಿಧಾನಸಭಾ ಕ್ಷೇತ್ರಕ್ಕೆ ಮೀನುಗಾರಿಕೆ ಇಲಾಖೆಯಿಂದ ನೀಡಲಾದ ಅನುದಾನ ಎಷ್ಟು ; ಯಾವ ಯಾವ ಕಾರ್ಯಕ್ರಮಗಳಿಗೆ ವ್ಯಯಿಸಲಾಗಿದೆ ? (ವಿವರ ನೀಡುವುದು)

## ನೂತನ ಬಸ್ ಘಟಕ ಸ್ಥಾಪನೆ

**ಶ್ರೀ ಪುಟ್ಟರಂಗಶೆಟ್ಟಿ ಸಿ. (ಚಾಮರಾಜನಗರ) :–**

೧೦೪ (೭೨) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರ ಜಿಲ್ಲಾಮಟ್ಟದ KSRTC ಬಸ್ ನಿಲ್ದಾಣದ ಘಟಕ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಚಾಮರಾಜನಗರ ಪಟ್ಟಣದಲ್ಲಿ ನೂತನ ಬಸ್ ಘಟಕ ಸ್ಥಾಪಿಸಲು ಭೂಮಿ ಮಂಜೂರಾತಿ ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಈ ಘಟಕಕ್ಕೆ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ ;

(ಇ) ಈ ಟೌನ್‌ನಲ್ಲಿ ನೂತನ ಬಸ್ ನಿಲ್ದಾಣ ಕಾಮಗಾರಿ ಪ್ರಾರಂಭಿಸಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಬಸ್ ನಿಲ್ದಾಣದ ಕಾಮಗಾರಿಯನ್ನು ಪ್ರಾರಂಭಿಸಲು ಇರುವ ಸಮಸ್ಯೆಗಳೇನು; ಯಾವಾಗ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು ? (ವಿವರ ನೀಡುವುದು)

## ಹಸು, ಕುರಿ, ಮೇಕೆಗಳು

**ಶ್ರೀ ಪುಟ್ಟರಂಗಶೆಟ್ಟಿ ಸಿ. (ಚಾಮರಾಜನಗರ) :–**

೧೦೫ (೭೩) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಹಸು, ಕುರಿ, ಮೇಕೆಗಳ ಸಂಖ್ಯೆ ಎಷ್ಟು; ಕಳೆದ ಮೂರು ವರ್ಷಗಳಲ್ಲಿ ಮೃತಪಟ್ಟ ಹಸು, ಕುರಿ, ಮೇಕೆಗಳ ಸಂಖ್ಯೆ ಎಷ್ಟು ;

(ಆ) ಹಸು, ಕುರಿ, ಮೇಕೆಗಳು ಮೃತಪಟ್ಟಲ್ಲಿ ಸಕಾಣಿಕೆದಾರರಿಗೆ ಸರ್ಕಾರ ನೀಡುತ್ತಿರುವ ಪರಿಹಾರಗಳೇನು; ಯಾವ ಮಾನದಂಡಗಳ ಆಧಾರದ ಮೇಲೆ ಪರಿಹಾರ ನೀಡಲಾಗುತ್ತಿದೆ ;

(ಇ) ಸರ್ಕಾರದಿಂದ ಹಸು, ಕುರಿ, ಮೇಕೆಗಳ ಸಾಕಾಣಿಕೆಗೆ ನೀಡಲಾಗುತ್ತಿರುವ ಸಹಾಯಧನ ಎಷ್ಟು; ಅವುಗಳನ್ನು ಪಡೆಯಲು ಅನುಸರಿಸುತ್ತಿರುವ ಮಾನದಂಡಗಳೇನು ? (ಆದೇಶದ ಪ್ರತಿಯೊಂದಿಗೆ ವಿವರ ನೀಡುವುದು)

## ಹಿಂದೂ ಧಾರ್ಮಿಕ ದೇವಾಲಯ

**ಶ್ರೀ ಬಸನಗೌಡ ಆರ್ ಪಾಟೀಲ್ (ಯತ್ನಾಳ್) (ವಿಜಯಪುರ ನಗರ) :–**

೧೦೬ (೧೧೦) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪುರಾತನ ಕಾಲದ ಹಿಂದೂ ಧಾರ್ಮಿಕ ದೇವಾಲಯಗಳನ್ನು ಧಾರ್ಮಿಕ ದತ್ತಿ ಇಲಾಖೆಗೆ ಒಳಪಡಿಸಲಾಗಿದೆಯೇ ; (ಧಾರ್ಮಿಕ ದೇವಾಲಯಗಳ ಹೆಸರು, ಕ್ಷೇತ್ರ ಸಹಿತ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೊಪ್ಪಳ ಜಿಲ್ಲೆಯ ಕೂಕನೂರು ಗ್ರಾಮದ ಪುರಾತನ ಶ್ರೀ ಗುದ್ನೇಶ್ವರ ದೇವಾಸ್ಥಾನಕ್ಕೆ ಸೇರಿದ ೧೨೯ ಎಕರೆ ಜಮೀನನ್ನು ವಿವಿಧ ಉದ್ದೇಶಗಳಿಗೆ ಹಂಚಿಕೆ ಮಾಡಿ, ದೇವಾಲಯಕ್ಕೆ ಪ್ರಸ್ತುತ ಉಳಿದಿರುವ ೫೬ ಎಕರೆಯಲ್ಲಿ ಮತ್ತೆ ನ್ಯಾಯಾಲಯ, ಮಿನಿ ವಿಧಾನಸೌಧ, ಭವನ ನಿರ್ಮಾಣಕ್ಕೆ ೨೬.೩೦ ಎಕರೆ ಜಮೀನನ್ನು ಗುತ್ತಿಗೆ ಆಧಾರದ ಮೇಲೆ ಮಂಜೂರಾತಿ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ಧಾರ್ಮಿಕ ದತ್ತಿ ಇಲಾಖೆಯ ಅಧಿನಿಯಮದ ನೆಪದಲ್ಲಿ ಹಿಂದೂ ಧಾರ್ಮಿಕ ದೇವಸ್ಥಾನಗಳ ಆಸ್ತಿಗಳನ್ನು ಈ ರೀತಿ ಹಂಚಿಕೆ ಮಾಡುವುದರಿಂದ ಆ ದೇವಸ್ಥಾನಗಳ ಬೆಳವಣಿಗೆ, ಜಾತ್ರೆ ಇನ್ನಿತರ ಕಾರ್ಯಕ್ರಮಗಳನ್ನು ನಡೆಸಲು ಹಿನ್ನಡೆ ಆಗುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಿಲ್ಲವೇ ;

(ಈ) ಪರಿಗಣಿಸಿದ್ದರೆ, ಹಿಂದೂ ಧಾರ್ಮಿಕ ಸಂಸ್ಥೆಗಳು, ಧಾರ್ಮಿಕ ದತ್ತಿ ಇಲಾಖೆಯ ಅಧಿನಿಯಮವನ್ನು ತಿದ್ದುಪಡಿ ಮಾಡಿ, ಹಿಂದೂ ಧಾರ್ಮಿಕ ಭಾವನೆಗೆ ಧಕ್ಕೆ ಆಗುವುದನ್ನು ತಪ್ಪಿಸಲು ದೇವಸ್ಥಾನಗಳ ಆಸ್ತಿಗಳನ್ನು ಉಳಿಸಿಕೊಳ್ಳಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ; (ವಿವರ ನೀಡುವುದು)

(ಉ) ಬಹುಸಂಖ್ಯಾತ ಹಿಂದೂ ಧಾರ್ಮಿಕ ದೇವಸ್ಥಾನಗಳ ಆಸ್ತಿಯನ್ನು ಸರ್ಕಾರಿ ಉದ್ದೇಶಕ್ಕೆ ಬಳಸದಿರಲು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಅನುಕಂಪಕದ ಆಧಾರದ ನೇಮಕಾತಿ

**ಶ್ರೀ ಬಸನಗೌಡ ಆರ್ ಪಾಟೀಲ್ (ಯತ್ನಾಳ್) (ವಿಜಯಪುರ ನಗರ) :–**

೧೦೭ (೧೧೧) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ೪ ಸಾರಿಗೆ ನಿಗಮಗಳಾದ ಕೆ.ಎಸ್.ಆರ್.ಟಿ.ಸಿ, ಕೆ.ಕೆ.ಆರ್.ಟಿ.ಸಿ, ಎನ್.ಡಬ್ಲ್ಯು.ಕೆ.ಆರ್.ಟಿ.ಸಿ, ಬಿ.ಎಂ.ಟಿ.ಸಿ ಗಳಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿ ಆದೇಶ ನೀಡಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ, ಸದರಿ ನಾಲ್ಕು ನಿಗಮಗಳಲ್ಲಿ ಅನುಕಂಪದ ಆಧಾರದ ಮೇಲೆ ಯಾವ ಯಾವ ಹುದ್ದೆಗಳಿಗಾಗಿ ಒಟ್ಟು ಎಷ್ಟು ಅರ್ಜಿಗಳು ಸಲ್ಲಿಕೆಯಾಗಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಯಾವ ಕಾಲಮಿತಿ ಒಳಗೆ ಅನುಕಂಪದ ಆಧಾರಿತ ವಿವಿಧ ಹುದ್ದೆಗಳಿಗೆ ನೇಮಕ ಪ್ರಕ್ರಿಯೆ ಪೂರ್ಣಗೊಳಿಸಿ, ನೇಮಕಾತಿ ಆದೇಶ ಪತ್ರ ನೀಡಲಾಗುವುದು ?

## ಮನೆಗಳ ನಿರ್ಮಾಣ

**ಶ್ರೀ ಬಸನಗೌಡ ಆರ್ ಪಾಟೀಲ್ (ಯತ್ನಾಳ್) (ವಿಜಯಪುರ ನಗರ) :–**

೧೦೮ (೧೧೨) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ವಿವಿಧ ವಸತಿ ಯೋಜನೆ ಮತ್ತು ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ ನಿರ್ಮಿಸಲಾಗುತ್ತಿರುವ ಮನೆಗಳೆಷ್ಟು ; ಇವುಗಳ ಮಂಜೂರಾತಿಗಾಗಿ ಕರೆಯಲಾದ ಟೆಂಡರ್ ಮೊತ್ತವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈವರೆಗೆ ಸದರಿ ವಸತಿ ಕಾಮಗಾರಿಗಳನ್ನು ನಡೆಸುತ್ತಿರುವ ಗುತ್ತಿಗೆದಾರರು ಎಷ್ಟು ; ಎಷ್ಟು ಮೊತ್ತದ ಬಿಲ್ ಗಳನ್ನು ಸರ್ಕಾರಕ್ಕೆ ಸಲ್ಲಿಸಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಗುತ್ತಿಗೆದಾರರ ಬಿಲ್ ಗಳಿಗೆ ಎಷ್ಟು ಮೊತ್ತ ಬಿಡುಗಡೆ ಮಾಡಲಾಗಿದೆ; ಇನ್ನೂ ಎಷ್ಟು ಮೊತ್ತ ಬಾಕಿ ಇರುತ್ತದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಮನೆಗಳ ನಿರ್ಮಾಣ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರವು ಯಾವ ಕಾಲಮಿತಿಯೊಳಗೆ ಸದರಿ ಬಿಲ್ ಗಳನ್ನು ಸಂಪೂರ್ಣ ಸಂದಾಯ ಮಾಡಲಾಗುವುದು ? (ವಿವರ ನೀಡುವುದು)

## ಹಕ್ಕು ಪತ್ರ ವಿತರಣೆ

**ಶ್ರೀ ಬಸನಗೌಡ ಆರ್ ಪಾಟೀಲ್ (ಯತ್ನಾಳ್) (ವಿಜಯಪುರ ನಗರ) :–**

೧೦೯ (೧೧೩) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿವಿಧ ಜಿಲ್ಲೆಗಳಲ್ಲಿರುವ ಕಂದಾಯ, ಮಹಾನಗರ ಪಾಲಿಕೆ ಒಡೆತನದ ಆಸ್ತಿಗಳು/ಜಮೀನುಗಳಲ್ಲಿ ನಿರ್ಮಾಣವಾಗಿರುವ ಸ್ಲಂ ಮನೆಗಳ ಸಹಿತ ಪ್ರದೇಶಗಳನ್ನು ಸ್ಲಂ ಬೋರ್ಡ್‌ಗೆ ಹಸ್ತಾಂತರಿಸುವ ಉದ್ದೇಶ ಸರ್ಕಾರ ಹೊಂದಿದೆಯೇ ;

(ಆ) ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸದರಿ ಪ್ರದೇಶಗಳನ್ನು ಸ್ಲಂ ಬೋರ್ಡ್‌ಗೆ ಹಸ್ತಾಂತರಿಸಿ, ಅಲ್ಲಿನ ನಿವಾಸಿಗಳಿಗೆ ಹಕ್ಕು ಪತ್ರಗಳನ್ನು ಶೀಘ್ರವಾಗಿ ವಿತರಿಸಲು ಸರ್ಕಾರದ ನಿರ್ದೇಶನಗಳೇನು ? (ವಿವರ ನೀಡುವುದು)

## ಹುದ್ದೆಗಳ ಭರ್ತಿ

**ಶ್ರೀ ಬಸನಗೌಡ ಆರ್ ಪಾಟೀಲ್ (ಯತ್ನಾಳ್) (ವಿಜಯಪುರ ನಗರ) :–**

೧೧೦ (೨೨೧) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯ರಲ್ಲಿ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಚಾಲಕ, ಚಾಲಕ ಕಮ್ ನಿರ್ವಾಹಕ ಹುದ್ದೆಗಳ ನೇಮಕಾತಿಗೆ ಅಧಿಸೂಚನೆ ಹೊರಡಿಸಿದ ಹುದ್ದೆಗಳಿಗೆ ಪೂರ್ಣ ಪ್ರಮಾಣದಲ್ಲಿ ದಾಖಲಾತಿ ಪರಿಶೀಲಿಸಿ, ವೃತ್ತಿ ಪರೀಕ್ಷೆ ಪೂರ್ಣಗೊಳಿಸಿ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸಿದರಲ್ಲಿ ಕಡಿಮೆ ಸಂಖ್ಯೆಯ ಹುದ್ದೆಗಳಿಗೆ ಮಾತ್ರ ಅಂತಿಮ ನೇಮಕಾತಿ ಪಟ್ಟಿ ಪ್ರಕಟಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಬಂದಿದ್ದಲ್ಲಿ, ಕಡಿಮೆ ಹುದ್ದೆಗಳ ನೇಮಕಾತಿಗೆ ಆಯ್ಕೆ ಪಟ್ಟಿ ಪ್ರಕಟಿಸಿದ್ದರಿಂದ, ವಯೋಮಿತಿ ಮೀರಿರುವ ಅಭ್ಯರ್ಥಿಗಳಿಗೆ ಅನ್ಯಾಯ ಆಗುವುದನ್ನು ಸರ್ಕಾರ ಗಂಭೀರವಾಗಿ ಯೋಚಿಸಿದೆಯೇ ;

(ಇ) ಹಾಗಿದ್ದಲ್ಲಿ, ಅನ್ಯಾಯಕ್ಕೆ ಒಳಗಾಗಿರುವ ಅಭ್ಯರ್ಥಿಗಳ ನೇಮಕಾತಿಗೆ ಸರ್ಕಾರದ ಕ್ರಮವೇನು ? (ವಿವರ ನೀಡುವುದು)

## ಜಮೀನು ಹಸ್ತಾಂತರ

**ಶ್ರೀ ಬಸನಗೌಡ ತುರುವಿಹಾಳ್ (ಮಸ್ಕಿ) :–**

೧೧೧ (೧೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಸ್ಕಿ ಪಟ್ಟಣದ ನೀರಾವರಿ ಇಲಾಖೆಯ ತುಂಗಭಧ್ರಾ ಯೋಜನೆ (TBP) ಹೆಸರಿನಲ್ಲಿರುವ ಸರ್ವೆ ನಂ: ೨೨೩–೨೨೪ ರ ೧೦ ಎಕರೆ ೧೮ ಗುಂಟೆ ಸೋಮನಾಥ ನಗರದ ಜಮೀನನ್ನು ಕಂದಾಯ ಇಲಾಖೆಗೆ ಹಸ್ತಾಂತರಿಸಿ ಸದರಿ ಇಲಾಖೆಯಲ್ಲಿರುವ ಸರ್ವೆ ನಂ: ೩೨ ರಲ್ಲಿ ೩೬೭ ಎಕರೆ ಸರ್ಕಾರಿ ಪಾರಂಪೋಕ ಜಮೀನನ್ನು ಪರಸ್ಪರ ಹಸ್ತಾಂತರಿಸುವ ಬಗ್ಗೆ ಜಿಲ್ಲಾಧಿಕಾರಿಗಳಿಂದ ಸೂಕ್ತ ಪ್ರಸ್ತಾವನೆ ಸರ್ಕಾರಕ್ಕೆ ಸಲ್ಲಿಸುವ ಬಗ್ಗೆ ಯಾವ ಹಂತದಲ್ಲಿದೆ ;

(ಆ) ಹಾಗಿದ್ದಲ್ಲಿ, ಈ ಬಗ್ಗೆ ಪರಸ್ಪರ ಇಲಾಖೆಗಳಿಂದ ಅನುಮೋದನೆ ಪಡೆದು ಸೋಮನಾಥ ನಗರದ ನಿವಾಸಿಗಳಿಗೆ ಹಕ್ಕು ಪತ್ರ ನೀಡಲು ಜಿಲ್ಲಾಧಿಕಾರಿಗಳಿಂದ ಸೂಕ್ತ ಪ್ರಸ್ತಾವನೆಯನ್ನು ತರಿಸಿಕೊಂಡು ಸಂಬಂಧಪಟ್ಟ ಇಲಾಖೆಗೆ ಯಾವ ಕಾಲಮಿತಿಯೊಳಗೆ ಹಸ್ತಾಂತರಿಸಲಾಗುವುದು ?

## ಕಛೇರಿಗಳ ಪ್ರಾರಂಭ

**ಶ್ರೀ ಬಸನಗೌಡ ತುರುವಿಹಾಳ್ (ಮಸ್ಕಿ) :–**

೧೧೨ (೧೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರತಿನಿತ್ಯ ಇಲ್ಲಿನ ಸಾರ್ವಜನಿಕರು, ಅಧಿಕಾರಿಗಳು ೩೦ ರಿಂದ ೫೦ ಕಿ.ಮೀ ಅಂತರದಲ್ಲಿರುವ ಸಿಂಧನೂರು, ಮಾನ್ವಿ, ಲಿಂಗಸುಗೂರು ವಿಭಾಗಗಳಿಗೆ ಹೋಗಿ ಬರಲು ತುಂಬಾ ತೊಂದರೆಯಾಗುತ್ತಿರುವುದರಿಂದ ಮಸ್ಕಿ ತಾಲ್ಲೂಕಿನಲ್ಲಿ ವಿವಿಧ ಇಲಾಖೆಗಳ ತಾಲ್ಲೂಕು ಕಛೇರಿಗಳನ್ನು ಪ್ರಾರಂಭಿಸಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು ?

## ಹೋಬಳಿ ಕೇಂದ್ರಗಳು

**ಶ್ರೀ ಬಸನಗೌಡ ತುರುವಿಹಾಳ್ (ಮಸ್ಕಿ) :–**

೧೧೩ (೧೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಸ್ಕಿ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಮೆದಕಿನಾಳ, ಸಂತೇಕಲ್ಲೂರು ಹಾಗೂ ಗುಂಡಾ ಗ್ರಾಮಗಳನ್ನು ಹೋಬಳಿ ಕೇಂದ್ರಗಳನ್ನಾಗಿ ಮಾಡುವ ಪ್ರಸ್ತಾವನೆಯು ಪ್ರಸ್ತುತ ಯಾವ ಹಂತದಲ್ಲಿದೆ ; (ವಿವರ ಒದಗಿಸುವುದು)

(ಆ) ಈ ಬಗ್ಗೆ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಉಪ ನೋಂದಣಿ ಕಛೇರಿ ಸ್ಥಾಪನೆ

**ಶ್ರೀ ಬಸನಗೌಡ ತುರುವಿಹಾಳ್ (ಮಸ್ಕಿ) :–**

೧೧೪ (೧೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಸ್ಕಿ ನಗರವನ್ನು ತಾಲ್ಲೂಕು ಕೇಂದ್ರವನ್ನಾಗಿ ಘೋಷಣೆ ಮಾಡಿ ಸುಮಾರು ಮೂರು ವರ್ಷಗಳು ಕಳೆದರು ತಾಲ್ಲೂಕಿನಲ್ಲಿ ಸಾರ್ವನಿಕರಿಗೆ ಮತ್ತು ರೈತರಿಗೆ ಉಪಯುಕ್ತವಾದ ಉಪ ನೋಂದಣಿ ಕಛೇರಿ ಸ್ಥಾಪನೆ ಮಾಡುವ ಬಗ್ಗೆ ಪ್ರಸ್ತಾವನೆಯು ಯಾವ ಹಂತದಲ್ಲಿದೆ ;

(ಆ) ಹಾಗಿದ್ದಲ್ಲಿ, ಎಷ್ಟು ದಿನಗಳಲ್ಲಿ ಈ ಉಪ ನೋಂದಣಿ ಕಛೇರಿಯನ್ನು ಮಂಜೂರು ಮಾಡಲಾಗುವುದು ? (ವಿವರ ನೀಡುವುದು)

## ಕಂದಾಯ ಗ್ರಾಮಗಳ ಘೋಷಣೆ

**ಶ್ರೀ ಬಸನಗೌಡ ದದ್ದಲ್ (ರಾಯಚೂರು ಗ್ರಾಮಾಂತರ) :–**

೧೧೫ (೪೨೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಎಷ್ಟು ತಾಂಡಾಗಳನ್ನು ಕಂದಾಯ ಗ್ರಾಮಗಳನ್ನಾಗಿ ಘೋಷಣೆ ಮಾಡಲಾಗಿದೆ ; (ತಾಲ್ಲೂಕುವಾರು ವಿವರಣೆ ನೀಡುವುದು)

(ಆ) ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ಬರುವ ಸಿಂಗನೋಡಿ ತಾಂಡಾ, ಬಾಪೂರು ತಾಂಡಾ, ಜುಲ್ಮಗೇರಾ ತಾಂಡಾ ಹಾಗೂ ಸುಂಕೇಶ್ವರ್ ತಾಂಡಾಗಳಲ್ಲಿ ಸುಮಾರು ಮೂರು–ನಾಲ್ಕು

ತಲೆಮಾರಿನಿಂದ ವಾಸಿಸುತ್ತಿರುವ ಜನವಸತಿ ಪ್ರದೇಶವನ್ನು ಅರಣ್ಯ ಇಲಾಖೆ ಭೂಮಿ ಹಾಗೂ ಇತರೆ ಕಾರಣಗಳಿಂದ ಕಂದಾಯ ಗ್ರಾಮವೆಂದು ಘೋಷಣೆಯಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಕಂದಾಯ ಗ್ರಾಮವೆಂದು ಘೋಷಣೆ ಮಾಡಲು ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸರ್ಕಾರವು ಯಾವಾಗ ಕಂದಾಯ ಗ್ರಾಮಗಳೆಂದು ಘೋಷಣೆ ಮಾಡುತ್ತದೆ ? (ವಿವರ ನೀಡುವುದು)

## ಗ್ರಾಮವನ್ನು ಹೋಬಳಿ ಮಾಡುವುದು

**ಶ್ರೀ ಬಾಬಾಸಾಹೇಬ್ ಪಾಟೀಲ್ (ಕಿತ್ತೂರು) :–**

೧೧೬ (೧೮೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಂಪಗಾಂವ ಗ್ರಾಮವನ್ನು ಹೋಬಳಿಯನ್ನಾಗಿ ಘೋಷಣೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

(ಆ) ಹಾಗಿದ್ದಲ್ಲಿ, ಸಂಪಗಾಂವ ಗ್ರಾಮವನ್ನು ಹೋಬಳಿಯಾಗಿ ಯಾವಾಗ ಮಾಡಲಾಗುವುದು ?

## A.D.L.R. ಕಛೇರಿ ಪ್ರಾರಂಭ

**ಶ್ರೀ ಬಾಬಾಸಾಹೇಬ್ ಪಾಟೀಲ್ (ಕಿತ್ತೂರು) :–**

೧೧೭ (೧೮೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚೆನ್ನಮ್ಮನ ಕಿತ್ತೂರು ವಿಧಾನಸಭಾ ಕ್ಷೇತ್ರಕ್ಕೆ ಹೊಸ A.D.L.R. ಕಛೇರಿ ಪ್ರಾರಂಭ ಮಾಡಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಯಾವಾಗ ಪ್ರಾರಂಭ ಮಾಡಲಾಗುವುದು ?

## ಮನೆಗಳ ಅನುದಾನ ಹೆಚ್ಚಳ

**ಶ್ರೀ ಬಾಬಾಸಾಹೇಬ್ ಪಾಟೀಲ್ (ಕಿತ್ತೂರು) :–**

೧೧೮ (೧೮೯) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಚೆನ್ನಮ್ಮನ ಕಿತ್ತೂರು ವಿಧಾನಸಭಾ ಕ್ಷೇತ್ರಕ್ಕೆ ಎಷ್ಟು ಮನೆಗಳನ್ನು ನೀಡಲಾಗಿದೆ ;

(ಆ) ವಸತಿ ಯೋಜನೆಗೆ ಪ್ರಸ್ತುತ ರೂ. ೧,೨೦,೦೦೦/–ಗಳನ್ನು ನೀಡುತ್ತಿದ್ದು, ಈ ಅನುದಾನದಿಂದ ಯಾವುದೇ ಮನೆ ನಿರ್ಮಾಣ ಮಾಡಲು ಸಾಧ್ಯವಾಗುತ್ತಿಲ್ಲದಿರುವುದರಿಂದ ಮೂರು ಲಕ್ಷಗಳಿಗೆ ಅನುದಾನವನ್ನು ಯಾವಾಗ ಹೆಚ್ಚಿಸಲಾಗುವುದು ;

(ಇ) ಶಾಸಕರ ಅಧ್ಯಕ್ಷತೆಯಲ್ಲಿ ಮನೆ ಹಂಚಿಕೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ಮನೆ ಹಂಚಿಕೆಯಲ್ಲಿ ತಾರತಮ್ಯ ಮಾಡುತ್ತಿರುವುದಕ್ಕೆ ಕಾರಣಗಳೇನು ?

## ಮನೆಗಳ ಹಂಚಿಕೆ

**ಶ್ರೀ ಬಾಬಾಸಾಹೇಬ್ ಪಾಟೀಲ್ (ಕಿತ್ತೂರು) :–**

೧೧೯ (೧೯೦) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಚೆನ್ನಮ್ಮನ ಕಿತ್ತೂರು ವಿಧಾನಸಭಾ ಕ್ಷೇತ್ರಕ್ಕೆ ಎಷ್ಟು ಮನೆಗಳ ಹಂಚಿಕೆ ಮಾಡಲಾಗಿದೆ ;

(ಆ) ಯಾವ ಮಾನದಂಡಗಳನ್ನು ಪಾಲನೆ ಮಾಡಲು ಆಯ್ಕೆ ಮಾಡಲಾಗುತ್ತಿದೆ ;

(ಇ) ಮೀನುಗಾರಿಕೆ ಇಲಾಖೆಗೆ ಎಷ್ಟು ಕೆರೆಗಳು ಒಳಪಡುತ್ತವೆ ? (ಚೆನ್ನಮ್ಮನ ಕಿತ್ತೂರು ವಿಧಾನಸಭಾ ಕ್ಷೇತ್ರದ ವಿವರ ನೀಡುವುದು)

## ಬಡಾವಣೆ ನಿರ್ಮಾಣ

**ಶ್ರೀ ಬಾಲಕೃಷ್ಣ ಸಿ. ಎನ್ (ಶ್ರವಣಬೆಳಗೊಳ) :–**

೧೨೦ (೧೪೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ತಾ. ಕಸಬಾ ಹೋಬಳಿ ಚಿಕ್ಕಕೊಂಡಗುಳ ಗ್ರಾಮದ ಸರ್ವೆ ನಂಬರ್ ೭,೧೦,೨೫,೧೦೬,೧೦೭ ಮತ್ತು ೧೩೭ ರಲ್ಲಿ ದಿ.೦೪.೦೧.೨೦೨೩ ರಂದು ೯೭ ಜನರಿಗೆ ಒಟ್ಟು ೭೩–೦೩ ಎಕರೆಯಷ್ಟು ಜಮೀನುಗಳನ್ನು ಕಾನೂನುಬಾಹಿರವಾಗಿ ಖಾಯಂ ಸಾಗುವಳಿ ಚೀಟಿ ನೀಡಿರುವ ವಿಚಾರದಲ್ಲಿ ದೂರು ಅರ್ಜಿಗಳು ಸ್ವೀಕೃತವಾಗಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರದಿಂದ ದಿನಾಂಕ:೦೩.೦೧.೨೦೨೫ ರಂದು ಉನ್ನತ ಮಟ್ಟದ ತನಿಖಾ ತಂಡವನ್ನು ರಚಿಸಿರುವುದು ಸರ್ಕಾರದ ಗಮನದಲ್ಲಿದೆಯೇ ; ತನಿಖಾ ತಂಡದವರು ವರದಿ ನೀಡಲು ಸರ್ಕಾರವು ಕಾಲಮಿತಿಯನ್ನು ನಿಗದಿಪಡಿಸಲಾಗಿದೆಯೇ ; ನಿಗದಿಪಡಿಸಿದ ಕಾಲಮಿತಿಯೊಳಗೆ ಸಮಿತಿಯು ಸರ್ಕಾರಕ್ಕೆ ವರದಿ ನೀಡಲಾಗಿದೆಯೇ ; ಪ್ರಸ್ತುತ ತನಿಖೆ ಯಾವ ಹಂತದಲ್ಲಿದೆ ; (ಸಂಪೂರ್ಣ ಮಾಹಿತಿಗಳನ್ನು ಒದಗಿಸುವುದು)

(ಇ) ದೊಡ್ಡಕೊಂಡಗುಳ ಗ್ರಾಮದ ಸರ್ವೆ ನಂಬರ್ ೩೨, ೩೩, ೩೪, ೫೪, ೦೭ ಗಳಲ್ಲಿನ ಸುಮಾರು ೯೭ ಎಕರೆ ಸರ್ಕಾರಿ ಜಮೀನುಗಳಲ್ಲಿ ಅನಧಿಕೃತವಾಗಿ ಬಡಾವಣೆ ನಿರ್ಮಿಸಲು ಯಾವುದೇ ಮೂಲ ದಾಖಲಾತಿಗಳಿಲ್ಲದಿದ್ದರೂ ಸಹ ದುರಸ್ತಿಗೆ ನಕಲಿ ದಾಖಲೆಗಳನ್ನು ಸೃಷ್ಟಿಸಿ, ಭೂ ಮಾಫಿಯಾದೊಂದಿಗೆ ಶಾಮೀಲಾಗಿ ಕಾನೂನುಬಾಹಿರವಾಗಿ ದುರಸ್ತಿ ಮಾಡಿ ಬಡಾವಣೆಗಳನ್ನು ನಿರ್ಮಿಸಿ ಸರ್ಕಾರಕ್ಕೆ ಕೋಟ್ಯಾಂತರ ರೂಪಾಯಿಗಳ ನಷ್ಟವುಂಟು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದಿಂದ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿಗಳನ್ನು ನೀಡುವುದು)

(ಈ) ಹಾಸನ ನಗರಸಭಾ ವ್ಯಾಪ್ತಿ ಹಾಗೂ ಹಾಸನ ನಗರದಿಂದ ೧೦ ಕಿ.ಮೀ. ವ್ಯಾಪ್ತಿಯಲ್ಲಿ ಬರುವ ಚಿಕ್ಕಕೊಂಡಗೊಳ, ಯರೆಬರೆಕಾವಲು, ಲಕ್ಷ್ಮೀಪುರ, ದೊಡ್ಡಕೊಂಡಗುಳ, ಹಂದಿನಕೆರೆ, ಉದ್ದೂರು, ಸಮುದ್ರವಳ್ಳಿ, ಬೂವನಹಳ್ಳಿ, ಹಾಗೂ ವಿಮಾನ ನಿಲ್ದಾಣಕ್ಕೆ ಹೊಂದಿಕೊಂಡಂತಿರುವ ಇನ್ನಿತರೆ ಗ್ರಾಮಗಳಲ್ಲಿನ ಸಾವಿರಾರು ಎಕರೆಗೂ ಅಧಿಕ ಸರ್ಕಾರಿ ಗೋಮಾಳ, ಖರಾಬು ಮತ್ತು ಕೆರೆ–ಕಟ್ಟೆಗಳನ್ನು ಮತ್ತು ಮಂಜೂರಿ ಜಮೀನುಗಳನ್ನು ಭೂ ಮಾಫಿಯಾದವರು ಕಂದಾಯ ಮತ್ತು ಭೂ ಮಾಪನ ಇಲಾಖೆಯ ಅಧಿಕಾರಿಗಳನ್ನು ಶಾಮೀಲು ಮಾಡಿಕೊಂಡು ಜೆ.ವಿ ಆಧಾರದ ಮೇಲೆ ಅನಧಿಕೃತವಾಗಿ ಬಡಾವಣೆಗಳನ್ನು/ ನಿವೇಶನಗಳನ್ನು ರಚಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ರೈತರಿಗೆ/ಸಾರ್ವಜನಕರಿಗೆ ವಂಚಿಸಿ ಸರ್ಕಾರದ ಬೊಕ್ಕಸಕ್ಕೆ ಸಾವಿರಾರು ಕೋಟಿಗಳಷ್ಟು ಆರ್ಥಿಕ ನಷ್ಟವುಂಟು ಮಾಡುತ್ತಿರುವ ಬಗ್ಗೆ ಸಮಗ್ರವಾಗಿ ತನಿಖೆ ನಡೆಸಿ, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಕೇಸನ್ನು ದಾಖಲಿಸಿ, ಜಮೀನುಗಳನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ನೈಜವಾಗಿ ಸ್ವಾಧೀನ ಹೊಂದಿ ಸಾಗುವಳಿ ಮಾಡುತ್ತಿರುವ ಅರ್ಹ ಬಡ ರೈತರಿಗೆ ಮಂಜೂರು ಮಾಡುವ ಬಗ್ಗೆ ಅಥವಾ ಸರ್ಕಾರದ ಸಾರ್ವಜನಿಕ ಉದ್ದೇಶದ ಯೋಜನೆಗಳಿಗೆ ಕಾಯ್ದಿರಿಸಲು ಕ್ರಮ ಕೈಗೊಳ್ಳುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಬಡಾವಣೆ ನಿರ್ಮಾಣ

**ಶ್ರೀ ಬಾಲಕೃಷ್ಣ ಸಿ.ಎನ್ (ಶ್ರವಣಬೆಳಗೊಳ) :–**

೧೨೧ (೧೫೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನದ ತಾಲ್ಲೂಕು ಕಛೇರಿಯಲ್ಲಿ ರಾಜಕೀಯ ಪಟ್ಟಭದ್ರ ಹಿತಾಸಕ್ತಿಗಳೊಂದಿಗೆ ಹಾಸನದ ಹಿಂದಿನ ಉಪ ವಿಭಾಗಾಧಿಕಾರಿಗಳು, ಹಿಂದಿನ ಭೂ ದಾಖಲೆಗಳ ಉಪ ನಿರ್ದೇಶಕರು, ಹಿಂದಿನ ಭೂ ದಾಖಲೆಗಳ ಸಹಾಯಕ ನಿರ್ದೇಶಕರುಗಳು, ಸರ್ವೆ ಸೂಪರ್ ವೈಸರ್‌ಗಳ ವಿರುದ್ಧ ಹಲವಾರು ಪ್ರಕರಣಗಳಲ್ಲಿ ಜಿಲ್ಲಾಧಿಕಾರಿಗಳಿಂದ ನೋಟೀಸ್ ಜಾರಿಯಾಗಿರುವುದು ಮತ್ತು ತನಿಖೆ ನಡೆಯುತ್ತಿರುವುದು ನಿಜವೇ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಹಾಸನ ಜಿಲ್ಲೆಯಲ್ಲಿ ಪಟ್ಟಭದ್ರ ಹಿತಾಸಕ್ತಿಗಳು ಹಾಗೂ ಭೂ ಮಾಫಿಯಾದೊಂದಿಗೆ ಶಾಮೀಲಾಗಿ ಸಂಬಂಧಪಟ್ಟ ಮಂಡಳಿ ಪ್ರಾಧಿಕಾರದಿಂದ ಅನುಮತಿ ಪತ್ರ ಮತ್ತಿತರ ಮೂಲಭೂತ ಸೌಕರ್ಯಗಳಿಲ್ಲದೆ ಕಾನೂನುಬಾಹಿರವಾಗಿ ಸರ್ಕಾರದ ಅನುಮತಿ ಪಡೆಯದೆ ಹಾಲಿ ನಗರಸಭೆಯಿಂದ ೧೦ ಕಿ.ಮೀ. ವ್ಯಾಪ್ತಿಯಲ್ಲಿರುವ ಜಮೀನುಗಳನ್ನು ಮಂಜೂರು ಮಾಡಬಾರದೆಂದು ಸ್ಪಷ್ಟ ಆದೇಶಗಳಿದ್ದರೂ ನಿಯಮಬಾಹಿರವಾಗಿ ಖಾಯಂ ಸಾಗುವಳಿ ಚೀಟಿ ವಿತರಣೆ ಮಾಡಿ, ಸರ್ವೆ ಇಲಾಖೆಯಿಂದ ದುರಸ್ತಿ ಮಾಡಿ ಕಾನೂನುಬಾಹಿರವಾಗಿ ಅನ್ಯಸಂಕ್ರಮಣ ಆದೇಶ ಮಾಡಿಸಿ ರೈತರಿಂದ ಜೆ.ಪಿ ಮಾಡಿಸಿಕೊಂಡು ಬಡಾವಣೆ ನಿರ್ಮಿಸುವ ಮೂಲಕ ಭೂ ಮಾಫಿಯಾದವರಿಗೆ ಹಾಗೂ ಪಟ್ಟಭದ್ರ ಹಿತಾಸಕ್ತಿಗಳಿಗೆ ಸಹಕರಿಸಿ ಕೋಟ್ಯಾಂತರ ರೂಪಾಯಿಗಳ ಗಳಿಕೆಗೆ ಸಹಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಹಾಗಿದ್ದಲ್ಲಿ, ೧೯೭೮ನೇ ಸಾಲಿನಿಂದ ಈ ದಿನಾಂಕದವರೆಗೆ ಹಾಸನದ ತಾಲ್ಲೂಕು ಕಛೇರಿಯ ರೆಕಾರ್ಡ್ ರೂಂನಲ್ಲಿ/ ಆರ್.ಆರ್.ಟಿ ಶಾಖೆಯಲ್ಲಿನ ಎಲ್ಲಾ ದಾಖಲಾತಿಗಳನ್ನು ಪರಿಶೀಲಿಸಿ ಅಂದಿನ ಅವಧಿಯಲ್ಲಿ ಡಿ.ಡಿ.ಎಲ್.ಆರ್. ಮತ್ತು ಎ.ಡಿ.ಎಲ್.ಆರ್ ಸರ್ವೆ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ನೌಕರರು/ ಅಧಿಕಾರಿಗಳ ವಿರುದ್ಧ ಸಮಗ್ರವಾಗಿ ತನಿಖೆ ನಡೆಸಿ ತಪ್ಪಿತಸ್ಥ ನೌಕರರು/ಅಧಿಕಾರಿಗಳನ್ನು ಕೂಡಲೇ ಸೇವೆಯಿಂದ ವಜಾಗೊಳಿಸಿ, ಅವರುಗಳ ವಿರುದ್ಧ ಕಾನೂನುರೀತ್ಯಾ ಕ್ರಮ ಜರುಗಿಸುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಅನುದಾನ ಬಿಡುಗಡೆ

**ಶ್ರೀ ಬಾಲಕೃಷ್ಣ ಸಿ.ಎನ್ (ಶ್ರವಣಬೆಳಗೊಳ) :–**

೧೨೨ (೧೫೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ಲೋಕೋಪಯೋಗಿ ಇಲಾಖೆಯಲ್ಲಿ ರಸ್ತೆಗಳ ಅಭಿವೃದ್ಧಿ ಮತ್ತು ಸುಧಾರಣೆಗೆ ನೀಡಿರುವ ಅನುದಾನ ಎಷ್ಟು ; ಯಾವ ಯಾವ ಲೆಕ್ಕ ಶೀರ್ಷಿಕೆ ಅಡಿಯಲ್ಲಿ ಅನುದಾನ ನೀಡಲಾಗಿದೆ ;

(ಆ) ರಸ್ತೆಗಳ ಅಭಿವೃದ್ಧಿ ಮತ್ತು ಸುಧಾರಣೆಗೆ ಇಲಾಖೆಯಿಂದ ಹಂಚಿಕೆ ಮಾಡಲಾಗಿರುವ ಅನುದಾನವೆಷ್ಟು ; (ಕ್ಷೇತ್ರವಾರು ಸಂಪೂರ್ಣ ವಿವರ ನೀಡುವುದು)

(ಇ) ಇತ್ತೀಚಿನ ದಿನಗಳಲ್ಲಿ ಸುರಿಯುತ್ತಿರುವ ಭಾರಿ ಮಳೆಯಿಂದ ರಸ್ತೆಗಳು ಹಾಳಾಗಿದ್ದು ಸಾರ್ವಜನಿಕರಿಗೆ ಮತ್ತು ವಾಹನ ಸವಾರರಿಗೆ ಸಂಚಾರ ಮಾಡಲು ತುಂಬಾ ತೊಂದರೆಯಾಗುತ್ತಿದ್ದು ಈ ರಸ್ತೆಗಳ ಸುಧಾರಣೆಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಈ) ಪ್ರಸಕ್ತ ಸಾಲಿನಲ್ಲಿ ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರದ ರಸ್ತೆಗಳ ಅಭಿವೃದ್ಧಿ ಮತ್ತು ಸುಧಾರಣೆಗೆ ಅನುದಾನ ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಮನೆಗಳನ್ನು ನೀಡಿರುವುದು

**ಶ್ರೀ ಬಾಲಕೃಷ್ಣ ಸಿ.ಎನ್ (ಶ್ರವಣಬೆಳಗೊಳ) :–**

೧೨೩ (೧೫೨) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಿಂದ ರಾಜ್ಯದಲ್ಲಿ ಹಂಚಿಕೆ ಮಾಡಿರುವ ಮನೆಗಳ ಸಂಖ್ಯೆ ಎಷ್ಟು; ಯಾವ ಯಾವ ಯೋಜನೆಯಡಿಯಲ್ಲಿ ಮನೆಗಳನ್ನು ಹಂಚಿಕೆ ಮಾಡಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ೨ ವರ್ಷಗಳಿಂದ ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರದ ಜನರಿಗೆ ವಸತಿ ಇಲಾಖೆವತಿಯಿಂದ ವಸತಿ ರಹಿತರಿಗೆ ಹಂಚಿಕೆಯಾಗಿರುವ ಮನೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಈ ಕ್ಷೇತ್ರಕ್ಕೆ ಮನೆಗಳನ್ನು ನೀಡಬೇಕೆಂದು ಮನವಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಮನೆಗಳನ್ನು ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

(ಈ) ಪ್ರಸಕ್ತ ಸಾಲಿನಲ್ಲಿ ವಸತಿ ರಹಿತರಿಗೆ ಮನೆಗಳನ್ನು ನೀಡಲು ಸರ್ಕಾರ ಉದ್ದೇಶಿಸಲಾಗಿದೆಯೇ? (ಮಾಹಿತಿ ನೀಡುವುದು)

## SCSP/TSP ಯೋಜನೆಯಡಿ ಸೌಲಭ್ಯಗಳು

**ಶ್ರೀ ಬಾಲಕೃಷ್ಣ ಸಿ.ಎನ್ (ಶ್ರವಣಬೆಳಗೊಳ) :–**

೧೨೪ (೨೧೨) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಶುಸಂಗೋಪನಾ ಇಲಾಖೆಯಲ್ಲಿ ಎಸ್.ಸಿ.ಎಸ್.ಪಿ ಮತ್ತು ಟಿ.ಎಸ್.ಪಿ ಯೋಜನೆಯಡಿಯಲ್ಲಿ ನೀಡುತ್ತಿರುವ ಸೌಲಭ್ಯಗಳು ಯಾವುವು;

(ಆ) ಕಳೆದ ಎರಡು ವರ್ಷಗಳಿಂದ ಸದರಿ ಯೋಜನೆಯಡಿಯಲ್ಲಿ ನೀಡಿರುವ ಸೌಲಭ್ಯಗಳು ಯಾವುವು; (ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು)

(ಇ) ಕಳೆದ ಎರಡು ವರ್ಷಗಳಿಂದ ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರಕ್ಕೆ ನೀಡಿರುವ ಎಸ್.ಸಿ.ಎಸ್.ಪಿ ಮತ್ತು ಟಿ.ಎಸ್.ಪಿ ಕಾರ್ಯಕ್ರಮಗಳಾವುವು ;

(ಈ) ಪ್ರಸಕ್ತ ಸಾಲಿನಲ್ಲಿ ನೀಡಲು ಉದ್ದೇಶಿಸಿರುವ ಸೌಲಭ್ಯಗಳು ಯಾವುವು ?

## ಅಧಿಕಾರಿ/ಸಿಬ್ಬಂದಿಗಳ ಕೊರತೆ

**ಶ್ರೀ ಭರಮಗೌಡ ಅಲಗೌಡ ಕಾಗೆ (ಕಾಗವಾಡ) :–**

೧೨೫ (೪೪೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ವಿಶೇಷ ಭೂ ಸ್ವಾಧೀನ ಅಧಿಕಾರಿಗಳ ಕಛೇರಿಗೆ (ಹಿಪ್ಪರಗಿ) ಮಂಜೂರಾತಿ ನೀಡಿರುವ ಅಧಿಕಾರಿ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ವಿವರ ಒದಗಿಸುವುದು)

(ಆ) ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ ಹಾಗೂ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಈ ಕಛೇರಿಯಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಕೊರತೆಯಿಂದ ಬಸವೇಶ್ವರ ಏತ ನೀರಾವರಿ ಯೋಜನೆಯ ಹಾಗೂ ಇತರೆ ಯೋಜನೆಗಳು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ವಿಶೇಷ ಭೂ ಸ್ವಾಧೀನ ಅಧಿಕಾರಿಗಳ ಕಛೇರಿಗೆ ಸಿಬ್ಬಂದಿ ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ಒದಗಿಸುವುದು)

## ಮನೆಗಳ ವಿತರಣೆ

**ಶ್ರೀ ಭರಮಗೌಡ ಅಲಗೌಡ ಕಾಗೆ (ಕಾಗವಾಡ) :–**

೧೨೬ (೪೪೩) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೪–೨೫ ಹಾಗೂ ೨೦೨೫–೨೬ ನೇ ಸಾಲಿನಲ್ಲಿ ಕಾಗವಾಡ ಮತಕ್ಷೇತ್ರಕ್ಕೆ ಯಾವ ಯಾವ ಯೋಜನೆಯಡಿಯಲ್ಲಿ ಮನೆಗಳನ್ನು ವಿತರಿಸಲಾಗಿದೆ ;

(ಆ) ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ ? (ವಿವರ ಒದಗಿಸುವುದು)

## ವಸತಿ ಯೋಜನೆಯಡಿ ಮನೆಗಳು

**ಶ್ರೀಮತಿ ಭಾಗೀರಥಿ ಮುರುಳ್ಯ (ಸುಳ್ಯ) :–**

೧೨೭ (೪೩೦) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೨೨–೨೩ ನೇ ಸಾಲಿನಿಂದ ಪ್ರಸಕ್ತ ಸಾಲಿನವರೆಗೆ ರಾಜ್ಯ ವಸತಿ ಯೋಜನೆಗಳಡಿ, ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಮಂಜೂರು ಮಾಡಿದ ಮನೆಗಳು ಎಷ್ಟು ; (ಬಸವ/ ಅಂಬೇಡ್ಕರ್ ಯೋಜನೆಗಳ ವಿವರ ನೀಡುವುದು)

(ಆ) ಹಾಗಿದ್ದಲ್ಲಿ , ಸದರಿ ಸಾಲಿನಿಂದ ಸುಳ್ಯ ವಿಧಾನಸಭಾ ಕ್ಷೇತ್ರಕ್ಕೆ ಮನೆಗಳನ್ನು ಮಂಜೂರು ಮಾಡದಿರಲು ಕಾರಣಗಳೇನು ;

(ಇ) ಸುಳ್ಯ ವಿಧಾನ ಸಭಾ ಕ್ಷೇತ್ರಕ್ಕೆ ವಸತಿ ಯೋಜನೆಯಡಿ ಯಾವಾಗ ಮನೆಗಳನ್ನು ಮಂಜೂರು ಮಾಡಲಾಗುವುದು ? (ವಿವರ ನೀಡುವುದು)

## ತಾಲ್ಲೂಕು ನೋಡಲ್ ಅಧಿಕಾರಿಗಳು

**ಶ್ರೀಮತಿ ಭಾಗೀರಥಿ ಮುರುಳ್ಯ (ಸುಳ್ಯ) :–**

೧೨೮ (೪೩೧) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜೀವ್‌ಗಾಂಧಿ ವಸತಿ ನಿಗಮದ ಅಧೀನದಲ್ಲಿ ತಾಲ್ಲೂಕು ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ತಾಲ್ಲೂಕು ನೋಡಲ್ ಅಧಿಕಾರಿಗಳು ಕಳೆದ ೩–೪ ವರ್ಷಗಳಿಂದ ಹೊಸದಾಗಿ ರಚನೆಗೊಂಡ ತಾಲ್ಲೂಕುಗಳಲ್ಲಿ ಹೆಚ್ಚುವರಿಯಾಗಿ ಕರ್ತವ್ಯ ನಿರ್ವಹಿಸುತ್ತಿರುವುದು, ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಹೆಚ್ಚುವರಿಯಾಗಿ ಕರ್ತವ್ಯ ನಿರ್ವಹಿಸುತ್ತಿರುವ ತಾಲ್ಲೂಕು ನೋಡಲ್ ಅಧಿಕಾರಿಗಳಿಗೆ ಪ್ರಯಾಣ ೧ ದಿನ ಭತ್ಯೆ ನೀಡಲಾಗುತ್ತಿದೆಯೇ ;

(ಈ) ತಾಲ್ಲೂಕುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ತಾಲ್ಲೂಕು ನೋಡಲ್ ಅಧಿಕಾರಿಗಳಿಗೆ ನೀಡುತ್ತಿರುವ ವೇತನ ಹೆಚ್ಚಳವಾಗದೇ ಎಷ್ಟು ವರ್ಷಗಳಾಗಿದೆ ;

(ಉ) ಆಗದೇ ಇದ್ದಲ್ಲಿ, ಹೆಚ್ಚಳವಾಗದೇ ಇರುವ ಕಾರಣವೇನು ? (ವಿವರ ನೀಡುವುದು)

## ಅರ್ಜಿಗಳ ವಿಲೇವಾರಿ

**ಶ್ರೀ ಮಂಜು ಎ. (ಅರಕಲಗೂಡು) :–**

೧೨೯ (೧೮೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅರಕಲಗೂಡು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಹಾಸನ ಜಿಲ್ಲೆ ಹೊಳೆನರಸೀಪುರ ತಾಲ್ಲೂಕು ಹಳ್ಳಿಮೈಸೂರು ಹೋಬಳಿ ಕಲ್ಲೋಡೆಬೋರೆ ಕಾವಲು ಗ್ರಾಮದ ಅಮೃತ್ ಮಹಲ್ ಕಾವಲು ಸರ್ವೆ ನಂಬರ್ ೧ರಲ್ಲಿ ದುರಸ್ತಾಗಿ ಹಾಲಿ ರದ್ದಾಗಿ ಹಳೆ ಸರ್ವೆ ನಂಬರ್ ೧ರಲ್ಲೇ ಮುಂದುವರಿದಿರುವ ಜಮೀನಿನ ಪೈಕಿ ೬ ಎಕರೆ ೮ ಗುಂಟೆ ಪ್ರದೇಶದಲ್ಲಿ ಕಟ್ಟಡ ಕಲ್ಲುಗಣಿಗಾರಿಕೆಗೆ ಮತ್ತು ಎಂ.ಸ್ಯಾಂಡ್ ತಯಾರಿಸುವ ಉದ್ದೇಶಕ್ಕೆ ೨೦೨೫-೨೬ನೇ ಸಾಲಿನಲ್ಲಿ ೨೦೨೩ರ ನಿಯಮ ೩೧(ಚಅ) ರಡಿಯಲ್ಲಿ ಮಂಜೂರು ಮಾಡುವಂತೆ ಕೋರಿ ಅರ್ಜಿ ಸಲ್ಲಿಸಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ಹಾಗಿದ್ದಲ್ಲಿ, ಈ ಅರ್ಜಿ ವಿಚಾರದಲ್ಲಿ ಅರಕಲಗೂಡು ವಿಧಾನ ಸಭಾ ಸದಸ್ಯರು, ತಾತನಹಳ್ಳಿ ಮತ್ತು ದೊಡ್ಡಕಾಡನೂರು ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು ಮತ್ತು ಸ್ಥಳೀಯರು/ಸಾರ್ವಜನಿಕರು ತಕರಾರು ಅರ್ಜಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಚುನಾಯಿತ ಪ್ರತಿನಿಧಿಗಳು, ಸಾರ್ವಜನಿಕರು/ರೈತರು/ ಸಂಘ ಸಂಸ್ಥೆಗಳಿಂದ ಬಂದಿರುವ ತಕರಾರು ಅರ್ಜಿಗಳ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿಗಳನ್ನು ಒದಗಿಸುವುದು)

(ಈ) ಹಾಲಿ ಪ್ರಸ್ತಾವನೆ ಯಾವ ಹಂತದಲ್ಲಿದೆ ? (ಸಂಪೂರ್ಣ ಮಾಹಿತಿಗಳನ್ನು ಒದಗಿಸುವುದು)

## ಸರ್ಕಾರಿ ಖರಾಬು ಜಮೀನು

**ಶ್ರೀ ಮಂಜು ಎ. (ಅರಕಲಗೂಡು) :–**

೧೩೦ (೧೮೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ತಾಲ್ಲೂಕು ಕಟ್ಟಾಯ ಹೋಬಳಿ ಮಲ್ಲಪ್ಪನಹಳ್ಳಿ ಗ್ರಾಮದ ಸರ್ವೆ ನಂ ೭೭/೩ ರಲ್ಲಿ ಒಟ್ಟು ೧೫–೦೦ ಎಕರೆ ಜಮೀನುಗಳಲ್ಲಿ ೧೧–೩೫ ಎಕೆರೆ ಕಲ್ಲುಬಂಡೆಗಳಿಂದ ಆವೃತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಸರ್ಕಾರಿ ಖರಾಬು ಜಮೀನುಗಳ ಮೂಲ ದಾಖಲಾತಿಗಳಲ್ಲಿ ಕಲ್ಲುಬಂಡೆ ಬಗ್ಗೆ ಖರಾಬು ೧೧–೩೫ ಎಕೆರೆ ಎಂದು ಸ್ಪಷ್ಟವಾಗಿ ನಮೂದಿಸಿದ್ದರೂ ಹಿಂದಿನ ಭೂ ದಾಖಲೆಗಳ ಸಹಾಯಕ ನಿರ್ದೇಶಕರು ಹಾಗೂ ಕಂದಾಯ ಇಲಾಖೆಯ ಅಂದಿನ ಉಪ ತಹಶೀಲ್ದಾರ್, ರಾಜಸ್ವ ನಿರೀಕ್ಷಕರು, ಗ್ರಾಮ ಲೆಕ್ಕಿಗರು ಪಟ್ಟಬದ್ರ ಹಿತಾಸಕ್ತಿಗಳೊಂದಿಗೆ ಶಾಮೀಲಾಗಿ ಭೂ ಮಾಫಿಯಾದವರಿಗೆ ಅನುಕೂಲವಾಗುವಂತೆ ಸದರಿ ಕಲ್ಲುಬಂಡೆ ಜಮೀನುಗಳನ್ನು ಕಾನೂನುಬಾಹಿರವಾಗಿ ಪೋಡಿ ಮಾಡಿರುವ ಬಗ್ಗೆ ಸಾರ್ವಜನಿಕರಿಂದ ದೂರುಗಳು ಸ್ವೀಕೃತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿಗಳನ್ನು ನೀಡುವುದು)

(ಇ) ಮಲ್ಲಪ್ಪನಹಳ್ಳಿ ಗ್ರಾಮದ ಸರ್ವೆ ನಂ ೭೭/೩ ರಲ್ಲಿನ ೩–೦೫ ಎಕರೆ ಜಮೀನುಗಳನ್ನು ಪೋಡಿ ಮಾಡುವಾಗ ಉಳಿಕೆ ಬಿ. ಖರಾಬು ೧೧–೩೫ ಕಲ್ಲುಬಂಡೆ ಜಮೀನುಗಳನ್ನು ೦೮

ಜನ ಖಾಸಗಿ ವ್ಯಕ್ತಿಗಳಿಗೆ ತಲಾ ೧–೧೯ ೧/೨ ಮತ್ತು ಎಕರೆಯಂತೆ ಕಾನೂನುಬಾಹಿರವಾಗಿ ಸೇರಿಸಿಕೊಂಡು ೭೭/೩, ೭೭/೬, ೭೭/೭, ೭೭/೮, ೭೭/೯, ೭೭/೧೦, ೭೭/೧೧, ೭೭/೧೨ ರಲ್ಲಿ ಒಟ್ಟಾರೆ ೧೫–೦೦ ಎಕರೆ ಜಮೀನುಗಳಿಗೆ ಪೋಡಿ ಮಾಡಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಈ) ಹಾಗಿದ್ದಲ್ಲಿ, ಪೋಡಿ ದಾಖಲೆಗಳ ಆಧಾರದ ಮೇಲೆ ಸರ್ಕಾರಿ ಖರಾಬು ೧೧–೩೫ ಎಕರೆ ಜಮೀನು ಸೇರಿಸಿ ಒಟ್ಟಾರೆ ೧೫–೦೦ ಎಕರೆ ಜಮೀನುಗಳನ್ನು ಖಾಸಗಿಯವರಿಗೆ ಪರಭಾರೆ ಮಾಡಿಸಿಕೊಂಡು ಕಲ್ಲುಗಣಿಗಾರಿಕೆ ಮಾಡಲು ದಿನಾಂಕ:೨೦.೦೮.೨೦೨೨ರಂದು ಭೂ ಪರಿವರ್ತನೆ ಆದೇಶ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಇದು ಕಾನೂನುಬದ್ಧವಾಗಿದೆಯೇ ; ಇಲ್ಲದಿದ್ದಲ್ಲಿ, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ಕ್ರಮ ವಹಿಸಲಾಗಿದೆ ;

(ಊ) ಕಾನೂನುಬಾಹಿರವಾಗಿ ಮಂಜೂರಿ ಮಾಡಿರುವ ೧೧–೩೫ ಎಕರೆ ಸರ್ಕಾರಿ ಖರಾಬು ಜಮೀನುಗಳನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವ ವಿಷಯದ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಆಶ್ರಯ ಮನೆಗಳ ಹಂಚಿಕೆ

**ಶ್ರೀ ಮಂಜು ಎ. (ಅರಕಲಗೂಡು) :–**

೧೩೧ (೧೮೫) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಅರಕಲಗೂಡು ವಿಧಾನಸಭಾ ಕ್ಷೇತ್ರದ ವಿವಿಧ ಯೋಜನೆಗಳಲ್ಲಿ ಮಂಜೂರು ಮಾಡಿರುವ ಮನೆಗಳೆಷ್ಟು; ಸದರಿ ಯೋಜನೆಗಳ ಅನುದಾನ ಎಷ್ಟು; (ವರ್ಷವಾರು, ಯೋಜನೆವಾರು, ಪಂಚಾಯಿತಿವಾರು ಮಾಹಿತಿ ನೀಡುವುದು)

(ಆ) ೨೦೨೫-೨೬ನೇ ಸಾಲಿನಲ್ಲಿ ವಸತಿ ಇಲಾಖೆಯಿಂದ ವಿವಿಧ ಯೋಜನೆಗಳಲ್ಲಿ ರಾಜ್ಯದಲ್ಲಿ ಹಂಚಿಕೆ ಮಾಡಿರುವ ವಿಧಾನಸಭಾ ಕ್ಷೇತ್ರವಾರು ಮನೆಗಳ ಸಂಖ್ಯೆ ಎಷ್ಟು ; ಇದರಲ್ಲಿ ಅರಕಲಗೂಡು ವಿಧಾನಸಭಾ ಕ್ಷೇತ್ರಕ್ಕೆ ಹಂಚಿಕೆ ಮಾಡಿರುವ ಮನೆಗಳೆಷ್ಟು; (ಪಂಚಾಯಿತಿವಾರು ಮಾಹಿತಿ ಒದಗಿಸುವುದು)

(ಇ) ಹಂಚಿಕೆ ಮಾಡದಿದ್ದಲ್ಲಿ, ಯಾವಾಗ ಹಂಚಿಕೆ ಮಾಡಲಾಗುವುದು ?

## ಪಶು ವೈದ್ಯಕೀಯ ಆಸ್ಪತ್ರೆ

**ಶ್ರೀ ಮಂಜು ಎ. (ಅರಕಲಗೂಡು) :-**

೧೩೨ (೧೮೬) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅರಕಲಗೂಡು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿರುವ ಪಶು ವೈದ್ಯಕೀಯ ಆಸ್ಪತ್ರೆಗಳ ಸಂಖ್ಯೆ ಎಷ್ಟು;

(ಆ) ಈ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಪಶು ಆಸ್ಪತ್ರೆಗಳಲ್ಲಿ ಖಾಲಿಯಿರುವ ಹುದ್ದೆಗಳೆಷ್ಟು; (ಆಸ್ಪತ್ರೆವಾರು ಮಾಹಿತಿ ಒದಗಿಸುವುದು)

(ಇ) ಖಾಲಿಯಿರುವ ಹುದ್ದೆಗಳನ್ನು ಭರ್ತಿಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ಪಶು ವೈದ್ಯಾಧಿಕಾರಿ ಇಲ್ಲದ ಆಸ್ಪತ್ರೆಗಳಲ್ಲಿ ಪಶು ವೈದ್ಯಾಧಿಕಾರಿಗಳನ್ನು ನೇಮಿಸಿಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ದರಖಾಸ್ತು ಪೋಡಿ ಆಂದೋಲನ

**ಶ್ರೀ ಮಂಜು ಹೆಚ್.ಟಿ. (ಕೆ.ಆರ್.ಪೇಟೆ) :–**

೧೩೩ (೩೮೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರವು ರೈತರಿಗೆ ಆಂದೋಲನ ರೀತಿಯಲ್ಲಿ ದರಖಾಸ್ತು ಪೋಡಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಮಂಡ್ಯ ಜಿಲ್ಲೆ, ಕೆ.ಆರ್.ಪೇಟೆ ತಾಲ್ಲೂಕಿನಲ್ಲಿ ಎಷ್ಟು ಸರ್ಕಾರಿ ಸ.ನಂ.ಗಳನ್ನು "ದರಖಾಸ್ತು ಪೋಡಿ ಆಂದೋಲನ ಕಾರ್ಯಕ್ರಮ"ಕ್ಕೆ ಆಯ್ಕೆ ಮಾಡಿಕೊಳ್ಳಲಾಗಿದೆ ; (ಗ್ರಾಮವಾರು, ಸ.ನಂ.ವಾರು ವಿವರ ಒದಗಿಸುವುದು)

(ಆ) ಈ ಪೈಕಿ ಈಗಾಗಲೇ ೧ ರಿಂದ ೫ ನಮೂನೆಯನ್ನು ಭರ್ತಿ ಮಾಡಲಾದ ಸ.ನಂ. ಗಳು, ಸರ್ವೆ ಕಾರ್ಯ ಹಂತದಲ್ಲಿ ಬಾಕಿ ಇರುವ ಪ್ರಕರಣಗಳ ಸಂಖ್ಯೆ, ದುರಸ್ತಿ ನಂಬರ್ ನೀಡಿ ಆರ್.ಟಿ.ಸಿ ಇಂಡೀಕರಣ ಮಾಡಲಾದ ಪ್ರಕರಣಗಳ ಸಂಖ್ಯೆ ಎಷ್ಟು ; (ಸ.ನಂ. ವಾರು ವಿವರ ಒದಗಿಸುವುದು)

(ಇ) ಈವರೆಗೂ ಮೂಲ ಮಂಜೂರಾತಿ ದಾಖಲೆಗಳಿಲ್ಲದೆ ಪ್ರಕರಣಗಳ ಪೈಕಿ ಎಷ್ಟು ಪ್ರಕರಣಗಳಲ್ಲಿ ಮಿಸ್ಸಿಂಗ್ ಕಡತ ತಯಾರಿಸಲಾಗಿದೆ ; (ಅವುಗಳ ವಿವರ ಒದಗಿಸುವುದು)

(ಈ) ಪೋಡಿ ಆಂದೋಲನಕ್ಕೆ ಕಾಲಮಿತಿಯನ್ನು ನಿಗದಿಗೊಳಿಸಲಾಗಿದೆಯೇ ;

(ಉ) ಹಾಗಿದ್ದಲ್ಲಿ, ತ್ವರಿತಗತಿಯಲ್ಲಿ ವಿಲೇವಾರಿ ಮಾಡಲು ಕಾಲಮಿತಿಯನ್ನು ನಿಗದಿಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ನೇಮಕಾತಿ

**ಶ್ರೀ ಮಂಜು ಹೆಚ್.ಟಿ. (ಕೆ.ಆರ್.ಪೇಟೆ) :-**

೧೩೪ (೩೮೬) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೆ.ಎಸ್.ಆರ್.ಟಿ.ಸಿ ವತಿಯಿಂದ ಕರಾಸಾ/ಕೇಕ/ನೇಮಕ/ಸಿ೨/೧೦೮೮/೨೦೧೯-೨೦ ದಿನಾಂಕ: ೧೪.೦೨.೨೦೨೦ರಂದು ಒಟ್ಟು ೧೨೦೦ ಚಾಲಕರ ಹುದ್ದೆಗಳು ಹಾಗೂ ೨೫೪೫ ಚಾಲಕ-ಕಂ-ನಿರ್ವಾಹಕ ಹುದ್ದೆಗೆ ನೋಟಿಫಿಕೇಷನ್ ಹೊರಡಿಸಿದ್ದು, ಈ ನೇಮಕಾತಿ ಯಾವ ಹಂತದಲ್ಲಿದೆ ; (ವಿವರ ಒದಗಿಸುವುದು)

(ಆ) ೧೨೦೦ ಚಾಲಕ ಹುದ್ದೆಯ ಪೈಕಿ ಎಷ್ಟು ಅಭ್ಯರ್ಥಿಗಳ ಆಯ್ಕೆ ಮಾಡಿ ನೇಮಕಾತಿ ಆದೇಶ ನೀಡಲಾಗಿದೆ ; ಆದೇಶ ನೀಡದಿದ್ದಲ್ಲಿ, ನೇಮಕಾತಿ ಆದೇಶ ನೀಡಲು ಇರುವ ತೊಡಕುಗಳೇನು ;

(ಇ) ಚಾಲಕ-ಕಂ-ನಿರ್ವಾಹಕ ಪೈಕಿ ೨೦೦೦ ಚಾಲಕ-ಕಂ-ನಿರ್ವಾಹಕ ಹುದ್ದೆಗೆ ಮಾತ್ರ ಕೌನ್ಸಿಲಿಂಗೆ ಒಳಪಡಿಸಿ ನೇಮಕಾತಿ ಆದೇಶ ನೀಡಲಾಗಿದ್ದು ಉಳಿದ ಹುದ್ದೆಗಳನ್ನು ಕೈಬಿಟ್ಟಿರಲು ಕಾರಣಗಳೇನು ; (ವಿವರ ಒದಗಿಸುವುದು)

(ಈ) ಈಗಾಗಲೇ ಐದು ವರ್ಷಗಳ ಹಿಂದೆಯೇ ಅರ್ಜಿ ಹಾಕಿ ಅಭ್ಯರ್ಥಿಗಳು ನೇಮಕಾತಿ ಆದೇಶಕ್ಕಾಗಿ ಕಾಯುತ್ತಿದ್ದು ಸರ್ಕಾರ ಯಾವ ಕಾಲಮಿತಿಯೊಳಗೆ ಚಾಲಕ ಹುದ್ದೆಯ ಹಾಗೂ ಚಾಲಕ-ಕಂ-ನಿರ್ವಾಹಕ ಹುದ್ದೆಯ ಉಳಿಕೆ ವೃಂದ ನೇಮಕಾತಿ ಆದೇಶಗಳನ್ನು ವಿತರಣೆ ಮಾಡಲಾಗುವುದು ? (ವಿವರ ಒದಗಿಸುವುದು)

## ಮೂಲಭೂತ ಸೌಕರ್ಯಗಳು

**ಶ್ರೀ ಮಂಜು ಹೆಚ್.ಟಿ. (ಕೆ.ಆರ್.ಪೇಟೆ) :–**

೧೩೫ (೩೮೭) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಆರ್.ಪೇಟೆ ತಾಲ್ಲೂಕಿನ ಸಂತೆಬಾಚಹಳ್ಳಿ ಹೋಬಳಿ, ಅದ್ದಿಹಳ್ಳಿಯಲ್ಲಿ ಡಾ॥ ಎ.ಪಿ.ಜೆ.ಅಬ್ದುಲ್ ಕಲಾಂ, ಸಿ.ಬಿ.ಎಸ್.ಸಿ ವಸತಿ ಶಾಲೆ ಇದ್ದು ಈ ಶಾಲೆಯಲ್ಲಿ ಒದಗಿಸಲಾದ ಮೂಲಭೂತ ಸೌಕರ್ಯಗಳಾವುವು ; (ವಿವರ ನೀಡುವುದು)

(ಆ) ಶಾಲೆ ಮಂಜೂರಾತಿ ೮ ವರ್ಷವಾದರೂ ಬೋಧಕರ ವಸತಿ ಗೃಹ, ಸಭಾಂಗಣ, ಆಟದ ಮೈದಾನ ಆರ್.ಓ ಕುಡಿಯುವ ನೀರಿನ ಘಟಕ, ಪೂರ್ಣ ಪ್ರಮಾಣದ ಕಾಂಪೌಂಡ್ ಸಮರ್ಪಕ ರಸ್ತೆಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಮೇಲಿನ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ೨೦೨೩–೨೪, ೨೦೨೪–೨೫ನೇ ಸಾಲಿನಲ್ಲಿ ಈ ಶಾಲೆಯ ಮೂಲಭೂತ ಸೌಲಭ್ಯಗಳ ಅಭಿವೃದ್ಧಿಗಾಗಿ ಬಿಡುಗಡೆ ಮಾಡಲಾದ ಅನುದಾನ ಎಷ್ಟು? (ವರ್ಷವಾರು ವಿವರ ಒದಗಿಸುವುದು)

## ಕೆರೆಗಳ ಟೆಂಡರ್

**ಶ್ರೀ ಮಂಜು ಹೆಚ್.ಟಿ. (ಕೆ.ಆರ್.ಪೇಟೆ) :–**

೧೩೬ (೩೮೮) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೀನುಗಾರಿಕೆ ಇಲಾಖೆಯಲ್ಲಿ ಕೆರೆಗಳನ್ನು ಗುತ್ತಿಗೆ ನೀಡಲು ಅನುಸರಿಸಲಾಗುವ ನಿಯಮಗಳೇನು ;

(ಆ) ಈ ಇಲಾಖೆಯಲ್ಲಿ ಕರೆಯಲಾಗುವ ಕೆರೆಗಳ ಟೆಂಡರ್‌ನಲ್ಲಿ ಸ್ಥಳೀಯ ಮೀನುಗಾರರಿಗೆ ಅವಕಾಶ ನೀಡದೆ ಮೀನುಗಾರಿಕಾ ಸಂಘಗಳಿಗೆ ಮೊದಲ ಆದ್ಯತೆ ನೀಡಲು ಕಾರಣಗಳೇನು ;

(ಇ) ಸ್ಥಳೀಯ ಮೀನುಗಾರರಿಗೆ ಟೆಂಡರ್ ನೀಡಲು ಇರುವ ತೊಡಕುಗಳೇನು ;

(ಈ) ಟೆಂಡರ್‌ನಲ್ಲಿ ಭಾಗವಹಿಸಿದ ಟೆಂಡರ್‌ದಾರರ ಪೈಕಿ ಟೆಂಡರ್ ನೀಡದ ಗುತ್ತಿಗೆದಾರರಿಗೆ ಇ.ಎಂ.ಡಿ ಮೊತ್ತವನ್ನು ಯಾವ ಕಾಲಮಿತಿಯೊಳಗೆ ಹಿಂದಿರುಗಿಸಲಾಗುವುದು ;

(ಉ) ರಾಜ್ಯದಲ್ಲಿ ಕೆರೆಗಳ ಟೆಂಡರ್‌ಗೆ ಆಯ್ಕೆಯಾಗದ ಗುತ್ತಿಗೆದಾರರಿಗೆ ಇ.ಎಂ.ಡಿ ಮೊತ್ತವನ್ನು ವಾಪಸ್ಸು ನೀಡಲು ಸತಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ?

## SH 85 ರಸ್ತೆಯ ಕಾಮಗಾರಿ

**ಶ್ರೀ ಮಂಜು ಹೆಚ್.ಟಿ. (ಕೆ.ಆರ್.ಪೇಟೆ) :–**

೧೩೭ (೩೮೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯ ವ್ಯಾಪ್ತಿಯಲ್ಲಿ ರಾಜ್ಯ ಹೆದ್ದಾರಿ ಸಂಖ್ಯೆ : ೮೫ರ ಕಾಮಗಾರಿಯ ಪೈಕಿ ಅರಣ್ಯ ಪ್ರದೇಶದಲ್ಲಿ ಕಾಮಗಾರಿ ಸ್ಥಗಿತಗೊಂಡಿರಲು ಕಾರಣಗಳೇನು ;

(ಆ) ಅರಣ್ಯ ಪ್ರದೇಶಗಳಲ್ಲಿ ಕಾಮಗಾರಿಯನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಯಾವ ಕಾಲಮಿತಿಯೊಳಗೆ ಅರಣ್ಯ ಪ್ರದೇಶದ ವ್ಯಾಪ್ತಿಯಲ್ಲಿ ಕಾಮಗಾರಿಯನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು ;

(ಇ) ಇತ್ತೀಚೆಗೆ ಅರಣ್ಯ ಇಲಾಖೆಯವರು ಕೆಶಿಫ್ ಅಧಿಕಾರಿಗಳ ಮೇಲೆ ಮೊಕದ್ದಮೆಯನ್ನು ದಾಖಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಈ) ಯಾವ ಕಾರಣಕ್ಕಾಗಿ ಮೊಕ್ಕದ್ದಮೆ ದಾಖಲಾಗಿದೆ ಇದಕ್ಕೆ ಪ್ರತಿಯಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ರಾಜ್ಯ ಹೆದ್ದಾರಿ ಸಂಖ್ಯೆ: ೮೫ರ ಯಾವ ಸರಪಳಿ ಪ್ರದೇಶ(ಗ್ರಾಮ)ದಲ್ಲಿ ಟೋಲ್ ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆಯೇ ? (ಅವುಗಳ ವಿವರ ಒದಗಿಸುವುದು)

## ಅನುದಾನ

**ಶ್ರೀ ಮಹೇಶ್ ಟೆಂಗಿನಕಾಯಿ (ಹುಬ್ಬಳ್ಳಿ–ಧಾರವಾಡ ಸೆಂಟ್ರಲ್) :–**

೧೩೮ (೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹುಬ್ಬಳ್ಳಿ–ಧಾರವಾಡ ಸೆಂಟ್ರಲ್ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಮುಖ್ಯ ಹಾಗೂ ಒಳರಸ್ತೆಗಳು ಹದಗೆಟ್ಟಿರುವುದರಿಂದ ಸಾರ್ವಜನಿಕರು ಸಂಚಾರದಲ್ಲಿ ಭಾರಿ ತೊಂದರೆ ಅನುಭವಿಸುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ರಸ್ತೆಯನ್ನು ದುರಸ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಈ ಕ್ಷೇತ್ರದ ವ್ಯಾಪ್ತಿಯಲ್ಲಿನ ಪ್ರಮುಖ ರಸ್ತೆಗಳ ಅಗಲೀಕರಣ ಮತ್ತು ಡಿವೈಡರ್ ನಿರ್ಮಾಣಕ್ಕೆ ಸರ್ಕಾರದಿಂದ ಯೋಜನೆಗಳನ್ನು ರೂಪಿಸಲಾಗಿದೆಯೇ ; (ವಿವರ ನೀಡುವುದು)

(ಈ) ಈ ಕ್ಷೇತ್ರದ ವ್ಯಾಪ್ತಿಯಲ್ಲಿನ Bus stand ಹಾಗೂ Market ಪ್ರದೇಶಗಳಲ್ಲಿ ರಸ್ತೆ ಅಗಲೀಕರಣ ಮಾಡುವ ಮೂಲಕ ಜನದಟ್ಟಣೆಯ ನಿರ್ವಹಣೆಗೆ ಯೋಜನೆಗಳನ್ನು ರೂಪಿಸಲಾಗಿದೆಯೇ ; (ವಿವರ ನೀಡುವುದು)

(ಉ) ಕಳೆದ ೦೩ ವರ್ಷಗಳಲ್ಲಿ ಈ ಕ್ಷೇತ್ರದಲ್ಲಿ ರಸ್ತೆ ಕಾಮಗಾರಿಗಳಿಗೆ ಬಳಸಿದ ಅನುದಾನವೆಷ್ಟು ; ಈ ಪೈಕಿ ಪೂರ್ಣಗೊಂಡ ಕಾಮಗಾರಿಗಳಾವುವು ; (ವಿವರ ನೀಡುವುದು)

(ಊ) ಈ ಕ್ಷೇತ್ರದಲ್ಲಿ ಮಂಜೂರಾದ ಯೋಜನೆಗಳ ಅನುಷ್ಠಾನದ ವಿಳಂಬಕ್ಕೆ ಕಾರಣಗಳೇನು ;

(ಋ) ೨೦೨೨-೨೦೨೩ನೇ ಸಾಲಿನಲ್ಲಿ ಈ ಕ್ಷೇತ್ರಕ್ಕೆ ಮೀಸಲಾದ ನಿಗದಿತ ಅನುದಾನವನ್ನು ಪೂರ್ಣ ಪ್ರಮಾಣದಲ್ಲಿ ಬಳಸಿಕೊಳ್ಳಲಾಗಿದೆಯೇ ? (ವಿವರ ನೀಡುವುದು)

## ಸೌಲಭ್ಯಗಳ ಅನುಷ್ಠಾನದಲ್ಲಿ ವಿಳಂಬ

**ಶ್ರೀ ಮಹೇಶ್ ಟೆಂಗಿನಕಾಯಿ (ಹುಬ್ಬಳ್ಳಿ-ಧಾರವಾಡ ಸೆಂಟ್ರಲ್) :-**

೧೩೭ (೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹುಬ್ಬಳ್ಳಿ-ಧಾರವಾಡ ಸೆಂಟ್ರಲ್ ಕ್ಷೇತ್ರದಲ್ಲಿ ಹಲವು ನಿವೇಶನಗಳಲ್ಲಿ ಇನ್ನೂ ಸರಿಯಾದ ಭೂಮಾಪನ (Survey) ಆಗದೇ ಮರು ಸರ್ವೆಗಾಗಿ ಅರ್ಜಿಸಿದ ಪ್ರಕರಣಗಳ ವಿಳಂಬಕ್ಕೆ ಕಾರಣವೇನು ;

ಶೀಘ್ರಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಈ ಕ್ಷೇತ್ರದ ವ್ಯಾಪ್ತಿಯಲ್ಲಿನ ಸರ್ಕಾರಿ ಜಮೀನುಗಳ ಮೇಲೆ ಅಕ್ರಮ ಕಟ್ಟಡ ನಿರ್ಮಾಣ ಅಥವಾ ವ್ಯಾಪಾರ ನಡೆಯುತ್ತಿರುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಹುಬ್ಬಳ್ಳಿ ನಗರದಲ್ಲಿ ಅಂತಹ ಅಕ್ರಮ ಅತಿಕ್ರಮಣದ ಪಟ್ಟಿಯನ್ನು ಒದಗಿಸುವುದು)

(ಇ) ಇ–ಕಂದಾಯ (online RTC, mutation) ಸೇವೆಗಳ ಮೂಲಕ ಸಾರ್ವಜನಿಕರಿಗೆ ಸಿಗುವ ಸೇವೆಗಳಲ್ಲಿ ಸಾಕಷ್ಟು ತಾಂತ್ರಿಕ ಅಡಚಣೆಗಳು ಹಾಗೂ ಮಧ್ಯವರ್ತಿಗಳ ದೌರ್ಜನ್ಯವಿರುವ ಸಂಬಂಧ ಸಾರ್ವಜನಿಕ ದೂರುಗಳಿಗೆ ತ್ವರಿತ ಪರಿಹಾರ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಆದಾಯ ಪ್ರಮಾಣಪತ್ರ, ಜಾತಿ ಪ್ರಮಾಣಪತ್ರ, ವಾಸಸ್ಥಳ ಪ್ರಮಾಣಪತ್ರ, ಮುಂತಾದ ವಿವಿಧ ಪ್ರಮಾಣಪತ್ರಗಳನ್ನು ನೀಡುವುದು ಮತ್ತು ಇತರ ಸಾರ್ವಜನಿಕ ಸೇವೆಗಳನ್ನು ಒದಗಿಸುವುದು ವಿಳಂಬವಾಗುತ್ತಿದ್ದು, ಇದನ್ನು ಸುಧಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ವೃದ್ಧಾಪ್ಯ ವೇತನ, ವಿಧವಾ ವೇತನ ಮುಂತಾದ ಸಮಾಜ ಕಲ್ಯಾಣ ಯೋಜನೆಗಳ ಅನುಷ್ಠಾನದಲ್ಲಿ ವಿಳಂಬವಾಗುತ್ತಿದ್ದು, ಇದನ್ನು ಸುಧಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ವಸತಿ ಯೋಜನೆಗಳು

**ಶ್ರೀ ಮಹೇಶ್ ಟೆಂಗಿನಕಾಯಿ (ಹುಬ್ಬಳ್ಳಿ–ಧಾರವಾಡ ಸೆಂಟ್ರಲ್) :–**

೧೪೦ (೧೧) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹುಬ್ಬಳ್ಳಿ–ಧಾರವಾಡ ಸೆಂಟ್ರಲ್ ವಿಧಾನಸಭಾ ಕ್ಷೇತ್ರದಲ್ಲಿ ಬಿಪಿಎಲ್ ಹಾಗೂ ಇತರೆ ಬಡ ವರ್ಗದವರಿಗೆ ವಸತಿ ಕಲ್ಪಿಸುವ ನಿಟ್ಟಿನಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲು ಸರ್ಕಾರಿ ಭೂಮಿ ಲಭ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಕ್ಷೇತ್ರದಲ್ಲಿ ಸರ್ಕಾರದ ಮಾಲಿಕತ್ವದಲ್ಲಿರುವ ಖಾಲಿ ಜಾಗಗಳು ಎಷ್ಟು; (ವಿವರಗಳನ್ನು ನೀಡುವುದು)

(ಇ) ಸರ್ಕಾರಿ ಜಾಗದ ಕೊರತೆಯ ಕಾರಣದಿಂದ ಹೊಸ ವಸತಿ ಯೋಜನೆಗಳನ್ನು ಆರಂಭಿಸಲು ವಿಳಂಬವಾಗಿದೆಯೇ ; (ವಿವರಗಳನ್ನು ನೀಡುವುದು)

(ಈ) ಖಾಸಗಿ ಜಾಗವನ್ನು ಖರೀದಿಸಿ ಅಥವಾ ಕಬ್ಜಾದ ಭೂಮಿಯನ್ನು ಮಂಜೂರು ಮಾಡಿ ವಸತಿ ಯೋಜನೆ ಅನುಷ್ಠಾನಗೊಳಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ;

(ಉ) ಬಡ ಕುಟುಂಬಗಳಿಗೆ ಸಮರ್ಪಕವಾದ ಜಾಗದ ಮನೆ ನಿರ್ಮಿಸಲು ಸರ್ಕಾರ ಭೂಮಿಯ ಮರುಹಂಚಿಕೆ ಅಥವಾ ಮರು ಆಯೋಜನೆ ಕುರಿತು ಯಾವ ರೀತಿಯ ಯೋಜನೆಗಳನ್ನು ರೂಪಿಸಲಾಗಿದೆ ?

## ಹೊಸ ಬಸ್‌ಗಳು

**ಶ್ರೀ ಮಾನಪ್ಪ ಡಿ ವಜ್ಜಲ್ (ಲಿಂಗಸುಗೂರು) :–**

೧೪೧ (೩೪೨) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆ ಲಿಂಗಸುಗೂರು ತಾಲ್ಲೂಕಿನಲ್ಲಿ ಸಾರ್ವಜನಿಕರಿಗೆ ಅಂತರ ಜಿಲ್ಲೆ ಹಾಗೂ ರಾಜ್ಯಾದ್ಯಂತ ಸಕಾಲದಲ್ಲಿ ಪ್ರಯಾಣಿಸಲು

ಅನುಕೂಲವಾಗುವಂತೆ ಬಸ್ಸಿನ ಸೌಕರ್ಯವಿಲ್ಲದಿರುವುದು ಮತ್ತು ಬಸ್‌ಗಳು ರಸ್ತೆಯ ಮಧ್ಯದಲ್ಲಿ ಸ್ಥಗಿತಗೊಳ್ಳುತ್ತಿರುವುದುರಿಂದ ಪ್ರಯಾಣಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸಾರಿಗೆ ಸಂಸ್ಥೆಯು ಲಿಂಗಸುಗೂರು ತಾಲ್ಲೂಕಿನ ಘಟಕದಲ್ಲಿ ಅವಧಿ ಮೀರಿದ ಹಾಗೂ ನಿಗದಿಪಡಿಸಲಾದ ಸಾಮರ್ಥ್ಯ ಮೀರಿದ ವಾಹನಗಳನ್ನು ಹಿಂಪಡೆಯಲಾಗಿದೆಯೇ ;

(ಇ) ಹಿಂದಕ್ಕೆ ಪಡೆಯದೇ ಸಾರ್ವಜನಿಕರ ಸೇವೆಯಲ್ಲಿ ಇರುವ ವಾಹನಗಳೆಷ್ಟು ; ಹಿಂಪಡೆಯದೆ ಇರಲು ಕಾರಣಗಳೇನು ; ಅಸುರಕ್ಷಿತ ವಾಹನ ಸೇವೆಯನ್ನು ಒದಗಿಸಲು ಸಂಸ್ಥೆಯು ನಿರ್ಣಯಿಸಲಾಗಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಈ) ಹಾಗಿದ್ದಲ್ಲಿ, ಸರ್ಕಾರವು ಪ್ರಸಕ್ತ ಸಾಲಿನಲ್ಲಿ ಎಷ್ಟು ಬಸ್‌ಗಳನ್ನು ನಿಗಮಗಳಿಗೆ ಹಸ್ತಾಂತರಿಸಲಾಗಿದೆ ; ನಿಗಮವು ಯಾವ ಯಾವ ಘಟಕಗಳಿಗೆ ಸಾರ್ವಜನಿಕರ ಸೇವೆಗೆ ಒದಗಿಸಲು ಸರ್ಕಾರ ಕ್ರಮಕೈಗೊಳ್ಳಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಉ) ಹಾಗಿದ್ದಲ್ಲಿ, ಸರ್ಕಾರವು ಸಾರ್ವಜನಿಕರ ಪ್ರಯಾಣಿಕರ ಅನುಕೂಲಕ್ಕಾಗಿ ಹೊಸ ಬಸ್‌ಗಳನ್ನು ಖರೀದಿಸಿದರೂ ಹೊಸ ಸಾರಿಗೆ ಬಸ್ ವಾಹನಗಳನ್ನು ಒದಗಿಸಲು ವಿಳಂಬಕ್ಕೆ ಕಾರಣಗಳೇನು ;

(ಊ) ಸರ್ಕಾರದ ನಿರ್ದೇಶನದಂತೆ ಲಿಂಗಸುಗೂರು ಘಟಕಕ್ಕೆ ಆದ್ಯತೆಯಂತೆ ಕಲ್ಯಾಣರಥ ಬಸ್‌ಗಳನ್ನು ಸಾರ್ವಜನಿಕ ಸೇವೆಗೆ ಒದಗಿಸಲು ಸಮಯವನ್ನು ನಿಗದಿಪಡಿಸಲಾಗಿದೆಯೇ ; ( ವಿವರ ನೀಡುವುದು)

(ಋ) ಹೊಸ ಸಾರಿಗೆ ಬಸ್‌ಗಳು ಹಾಗೂ ಕಲ್ಯಾಣರಥ ಬಸ್ಸುಗಳ ಸೇವೆಗಳನ್ನು ಸಾರ್ವಜನಿಕರ ಸೇವೆಗೆ ಒದಗಿಸಲು ಕಾಲಾವಧಿಯನ್ನು ನಿಗದಿಪಡಿಸಲಾಗಿದೆಯೇ ? (ಸಂಪೂರ್ಣ ವಿವರ ನೀಡುವುದು)

## ವಸತಿ ಗೃಹಗಳು

**ಶ್ರೀ ಮಾನಪ್ಪ ಡಿ ವಜ್ಜಲ್ (ಲಿಂಗಸುಗೂರು) :–**

೧೪೨ (೩೪೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆ ಲಿಂಗಸುಗೂರು ತಾಲ್ಲೂಕಿನಲ್ಲಿ ಅಧಿಕಾರಿಗಳು/ ನೌಕರರುಗಳಿಗೆ ವಸತಿ ಗೃಹಗಳು ಅತ್ಯಂತ ಹಳೆಯದಾಗಿ ಮೇಲ್ಛಾವಣಿಯು ಬೀಳುವ ಸ್ಥಿತಿಯಲ್ಲಿರುವುದು ಹಾಗೂ ಮೂಲಸೌಲಭ್ಯದ ಕೊರತೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ತಾಲ್ಲೂಕಿನಲ್ಲಿರುವ ವಸತಿ ಗೃಹಗಳ ಸಂಖ್ಯೆ ಎಷ್ಟು; (ವಸತಿ ಗೃಹ ಹೊಂದಿರುವವರ ಸಂಪೂರ್ಣ ವಿವರ ನೀಡುವುದು)

(ಇ) ಈ ತಾಲ್ಲೂಕಿನಲ್ಲಿರುವ ಪ್ರಸ್ತುತ ವಸತಿ ಗೃಹಗಳನ್ನು ತಪಾಸಣೆ ಮಾಡಿ, ಪರಿಶೀಲನೆ ಮಾಡಲಾಗಿದೆಯೇ ; ವಸತಿ ಗೃಹ ಕೊರತೆ ಉಂಟಾಗಿರುವುದರ ಕುರಿತು ವರದಿ ಪಡೆಯಲಾಗಿದೆಯೇ ;

(ಈ) ಹಾಗಿದ್ದಲ್ಲಿ, ನೂತನವಾಗಿ ವಸತಿ ಗೃಹಗಳನ್ನು ನಿರ್ಮಿಸಲು ಸರ್ಕಾರದ ನಿಲುವೇನು ? (ಪೂರ್ಣ ವಿವರ ನೀಡುವುದು)

## ಬಂಗಲೆಯ ನಿರ್ಮಾಣ

**ಶ್ರೀ ಮಾನಪ್ಪ ಡಿ ವಜ್ಜಲ್ (ಲಿಂಗಸುಗೂರು) :–**

೧೪೩ (೩೪೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಲಿಂಗಸುಗೂರು ಕ್ಷೇತ್ರದಲ್ಲಿನ ಅತ್ಯಂತ ಪುರಾತನ ಐತಿಹಾಸಿಕ ಬ್ರಿಟೀಷರ ಆಳ್ವಿಕೆಯಿಂದ ನಿರ್ಮಾಣಗೊಂಡಿರುವ ೧೦೧

ಬಾಗಿಲುಗಳ ಬಂಗಲೆಯಲ್ಲಿ ಸಹಾಯಕ ಆಯುಕ್ತರ ಕಛೇರಿ ಹಿಂಭಾಗ ಮೇಲ್ಛಾವಣಿಯು ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಬಂಗಲೆಯ ನಿರ್ವಹಣೆ ನಿರ್ಲಕ್ಷಿಸಿರುವುದರಿಂದ ಸಂಪೂರ್ಣ ನಶಿಸಿಹೋಗುವ ಹಂತದಲ್ಲಿರುವುದನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಹಾಗಿದ್ದಲ್ಲಿ, ಸರ್ಕಾರವು ಕೂಡಲೇ ಹೊಸ ಸ್ಪರ್ಷ ನೀಡಲು ಯೋಜನೆಗಳನ್ನು ಕೈಗೊಂಡಿದೆಯೇ ;

(ಈ) ಹಾಗಿದ್ದಲ್ಲಿ, ಯೋಜನೆಯ ರೂಪುರೇಷಗಳೇನು ; ಯೋಜನೆಗೆ ನಿಗದಿಪಡಿಸಲಾದ ಅನುದಾನ ಎಷ್ಟು ? (ಸಂಪೂರ್ಣ ವಿವರ ನೀಡುವುದು)

## ತಾಂತ್ರಿಕ ತರಬೇತಿ ಸಂಸ್ಥೆ ಪ್ರಾರಂಭ

**ಶ್ರೀ ಮಾನಪ್ಪ ಡಿ ವಜ್ಜಲ್ (ಲಿಂಗಸುಗೂರು) :–**

೧೪೪ (೩೪೫) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯ ಲಿಂಗಸುಗೂರು ರೈತರಿಗೆ ರೇಷ್ಮೆ ಉತ್ತಮ ಗುಣಮಟ್ಟದ ಬಿತ್ತನೆ ಗೂಡು ಉತ್ಪಾದನೆಗಳ ತಾಂತ್ರಿಕ ಮಾಹಿತಿಗಳ ಕೊರತೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ತಾಲ್ಲೂಕಿನ ರೈತರು ತಾಂತ್ರಿಕತೆಗಾಗಿ ದೂರದ ಜಿಲ್ಲೆಯನ್ನು ಅವಲಂಭಿಸಿರುವುದರಿಂದ ರೈತರಿಗೆ ತೊಂದರೆಯಾಗುತ್ತಿರುವ ಕುರಿತು ಸರ್ಕಾರವು ಕ್ರಮ ಕೈಗೊಂಡಿದೆಯೇ ;

(ಇ) ಹಾಗಿದ್ದಲ್ಲಿ, ಇಲಾಖೆವತಿಯಿಂದ ಪ್ರಸಕ್ತ ಸಾಲಿನಲ್ಲಿ ರೈತರ ತಾಂತ್ರಿಕತೆಯನ್ನು ಉತ್ತೇಜಿಸಲು ಕಾರ್ಯಗಾರ ಕೈಗೊಂಡಿದೆಯೇ ; (ವಿವರಗಳನ್ನು ನೀಡುವುದು)

(ಈ) ಈ ತಾಲ್ಲೂಕಿನಲ್ಲಿ ರೇಷ್ಮೆ ತಾಂತ್ರಿಕ ತರಬೇತಿ ಸಂಸ್ಥೆ ಆರಂಭಿಸಲು ಸರ್ಕಾರವು ಸ್ಥಳವನ್ನು ನಿಗದಿಪಡಿಸಲಾಗಿದೆಯೇ ; ಹಾಗಿದ್ದಲ್ಲಿ, ತಾಲ್ಲೂಕಿನಲ್ಲಿ ಯಾವ ಸ್ಥಳದಲ್ಲಿ ಸಂಸ್ಥೆಯನ್ನು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳಲಾಗಿದೆ ; (ಸಂಪೂರ್ಣ ವಿವರ ಒದಗಿಸುವುದು)

(ಉ) ಪ್ರಸ್ತುತ ಸಾಲಿನಲ್ಲಿ ರೇಷ್ಮೆ ಇಲಾಖೆಗೆ ಒದಗಿಸಿರುವ ಅನುದಾನದಲ್ಲಿ ಲಿಂಗಸುಗೂರು ತಾಲ್ಲೂಕಿನಲ್ಲಿ ತರಬೇತಿ ಸಂಸ್ಥೆಯುನ್ನು ಪ್ರಾರಂಭಿಸಲು ಎಷ್ಟು ಅನುದಾನವನ್ನು ನಿಗದಿಪಡಿಸಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಹಕ್ಕು ಪತ್ರ ವಿತರಣೆ

**ಶ್ರೀ ಮುನಿರಾಜು ಎಸ್ (ದಾಸರಹಳ್ಳಿ ) :–**

೧೪೫ (೫೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಾಸರಹಳ್ಳಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ೯೪ ಸಿಸಿ ಅಡಿಯಲ್ಲಿ ಸಲ್ಲಿಸಿರುವ ಒಟ್ಟು ಅರ್ಜಿಗಳ ಸಂಖ್ಯೆ ಎಷ್ಟು ; (ವಾರ್ಡ್‌ವಾರು ಮತ್ತು ಪ್ರದೇಶವಾರು ವಿವರ ನೀಡುವುದು)

(ಆ) ಇದುವರೆಗೆ ೯೪ ಸಿಸಿ ಅಡಿಯಲ್ಲಿ ವಾರ್ಡ್‌ವಾರು ಮತ್ತು ಪ್ರದೇಶವಾರು ಎಷ್ಟು ಜನರಿಗೆ ಹಕ್ಕು ಪತ್ರಗಳನ್ನು ನೀಡಲಾಗಿದೆ ; (ವಿವರ ನೀಡುವುದು)

(ಇ) ೯೪ ಸಿಸಿ ಅಡಿಯಲ್ಲಿ ವಿತರಿಸದೆ ಬಾಕಿ ಇರುವ ಹಕ್ಕುಪತ್ರಗಳ ಸಂಖ್ಯೆ ಎಷ್ಟು ; (ವಾರ್ಡ್‌ವಾರು ಮತ್ತು ಪ್ರದೇಶವಾರು ವಿವರ ನೀಡುವುದು)

(ಈ) ೯೪ ಸಿಸಿ ಅಡಿಂಯಲ್ಲಿ ಹಕ್ಕುಪತ್ರಗಳನ್ನು ನೀಡಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಸದರಿ ಫಲಾನುಭವಿಗಳಿಗೆ ೯೪ ಸಿಸಿ ಅಡಿಯಲ್ಲಿ ಹಕ್ಕುಪತ್ರಗಳನ್ನು ವಿತರಿಸಲಾಗುವುದು ? (ವಿವರ ನೀಡುವುದು)

## ಅನುದಾನ

**ಶ್ರೀ ಮುನಿರಾಜು ಎಸ್ (ದಾಸರಹಳ್ಳಿ ) :–**

೧೪೬ (೫೯) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಾಸರಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿನ ಮುಜರಾಯಿ ಇಲಾಖೆಯ ದೇವಸ್ಥಾನಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಕಳೆದ ೨ ವರ್ಷಗಳಿಂದ ಮುಜುರಾಯಿ ಇಲಾಖೆ ವ್ಯಾಪ್ತಿಗೆ ಒಳಪಡುವ ದೇವಸ್ಥಾನಗಳ ಜೀರ್ಣೋದ್ಧಾರ ಮತ್ತು ಅಭಿವೃದ್ಧಿ ಕಾಮಗಾರಿಗಳಿಗೆ ಸರ್ಕಾರ ಮೀಸಲಿಟ್ಟಿರುವ ಅನುದಾನವೆಷ್ಟು ;

(ಇ) ಈ ದೇವಸ್ಥಾನಗಳ ಅಭಿವೃದ್ಧಿ ಕಾಮಗಾರಿಗಳಿಗೆ ಕಳೆದ ೨ ವರ್ಷಗಳಿಂದ ಅನುದಾನ ಬಿಡುಗಡೆ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಈ ದೇವಾಲಯಗಳ ಅಭಿವೃದ್ಧಿಗೆ ಅನುದಾನ ಬಿಡುಗಡೆ ಮಾಡಲಾಗುವುದು ? (ವಿವರ ನೀಡುವುದು)

## ೧೧ಇ ನಕ್ಷೆ/ಆಕಾರ್ ಬಂದ್

**ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ್ (ಇಂಡಿ) :–**

೧೪೭ (೩೭೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಾವಣಗೆರೆ ಜಿಲ್ಲೆಯ ನ್ಯಾಮತಿ ತಾಲ್ಲೂಕಿನ ಬೆಳಗುತ್ತಿ ಹೋಬಳಿಯ ವಡೆಯಹತ್ತೂರು ಗ್ರಾಮದ ರಿ.ಸ.ನಂ–೫೯/*/೭ರಲ್ಲಿ ಬರುವ ೪ ಎಕರೆ ೩೨ ಗುಂಟೆ ಪೈಕಿ ಒಂದು ಎಕರೆ ಜಮೀನನ್ನು ಮಾನ್ಯ ನ್ಯಾಯಾಲಯದ ( ಕೋರ್ಟ್ ಕಾಂಪ್ರಮೈಸ್) ಆದೇಶದ ಪ್ರಕಾರ ನೋಂದಾಯಿಸಿಕೊಳ್ಳಲು ೧೧ಇ ಮ್ಯುಟೇಶನ್ ಪೂರ್ವ ನಕ್ಷೆ ಹಾಗೂ ಟಿಪ್ಪಣಿಗಾಗಿ (ಅರ್ಜಿ ಸಂಖ್ಯೆ–೧೪೦೭೦೪೨೫೨೦೧೫೮೮೨) ಅರ್ಜಿ ಸಲ್ಲಿಸಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಅರ್ಜಿ ಸಲ್ಲಿಸಿದ್ದು ಯಾವಾಗ ; ಇದುವರೆಗೂ ೧೧ಇ ಮ್ಯುಟೇಶನ್ ಪೂರ್ವ ನಕ್ಷೆ/ಆಕಾರ್ ಬಂದ್ ಹಾಗೂ ಟಿಪ್ಪಣಿಯನ್ನು ಸಕಾಲದಲ್ಲಿ ನೀಡದಿರಲು ಕಾರಣಗಳೇನು ;

(ಇ) ಸದರಿ ಗ್ರಾಮದ ರಿ.ಸ.ನಂ–೫೯/*/೬ ಹಾಗೂ ೫೯/*/೭ರ ಜಮೀನುಗಳನ್ನು ಯಾವ ಮೂಲ ಅಥವಾ ದಾಖಲೆಗಳ ಆಧಾರದ ಮೇಲೆ ಆರ್.ಟಿ.ಸಿ/ಪಹಣಿ ಹಾಗೂ ಮ್ಯುಟೇಶನ್ ರಿಜಿಸ್ಟಾರ್ ಪ್ರತಿ/ ರೆಕಾರ್ಡ್ ತಯಾರಿಸಲಾಗಿದೆ ; ಇದರಲ್ಲಿ ಯಾರು ತಪ್ಪಿತಸ್ಥರು ; (ಈ ಜಮೀನುಗಳ ಆಕಾರ್ ಬಂದ್ ಹಾಗೂ ಟಿಪ್ಪಣಿ ಒದಗಿಸುವುದು)

(ಈ) ೧೧ಇ ಮ್ಯುಟೇಶನ್ ಪೂರ್ವ ನಕ್ಷೆ ಹಾಗೂ ಟಿಪ್ಪಣಿಗಾಗಿ ಈಗಾಗಲೇ ಸಲ್ಲಿಸಿರುವ ಅರ್ಜಿ ಸಂಖ್ಯೆ–೧೪೦೭೦೪೨೫೨೦೧೫೮೮೨ಗೆ ಯಾವಾಗ ಮತ್ತು ಯಾವ ಕಾಲಮಿತಿಯೊಳಗೆ ಆಕಾರ್ ಬಂದ್ ಹಾಗೂ ಟಿಪ್ಪಣಿ ಒದಗಿಸಲಾಗುವುದು ; ಅದಕ್ಕಾಗಿ ಸರ್ಕಾರ ಕೈಗೊಳ್ಳುವ ಕ್ರಮಗಳೇನು ;

(ಉ) ಸದರಿ ಜಮೀನಿಗೆ ಶ್ರೀ ರುದ್ರೇಶ ಎಸ್.ಸಿ ಬಿನ್ ದಿ: ಚನ್ನಪ್ಪ ಎನ್. ಎಸ್. ವಡೆಯರಹತ್ತೂರು, ಇವರು ಸದರಿ ಗ್ರಾಮದ ರಿ.ಸ.ನಂ–೫೯/*/೭ರವರೆಗೆ ಬರುವ ಎಲ್ಲಾ ಹಿಸ್ಸಾಗಳನ್ನು ಒಟ್ಟುಗೂಡಿಸಿ ಅಥವಾ ಇಂಡೀಕರಣ ಮಾಡಿ, ಹಳೆ ರಿ.ಸ.ನಂ ೫೯/*/೫ ಅಥವಾ ಹೊಸ ರಿ.ಸ.ನಂ ೫೯/*/೭ ರಲ್ಲಿ ನ್ಯಾಯಾಲಯದ ಆದೇಶದಂತೆ ೧ ಎಕರೆ ಜಮೀನಿಗೆ ಆಕಾರ್ ಬಂದ್ ಹಾಗೂ ಟಿಪ್ಪಣಿ ಒದಗಿಸುವಂತೆ ಈಗಾಗಲೇ ತಹಶೀಲ್ದಾರ್ ನ್ಯಾಮತಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರಿಗೆ ಅರ್ಜಿ ಸಲ್ಲಿಸಿರುವುದು ನಿಜವೇ ; ಸದರಿ ಅರ್ಜಿಯು ಪ್ರಸ್ತುತ ಯಾವ ಹಂತದಲ್ಲಿದೆ ; ಯಾವ ಕಾಲಮಿತಿಯೊಳಗೆ ಇಂಡೀಕರಣ ಮಾಡಿಕೊಡಲಾಗುವುದು ; (ವಿವರ ನೀಡುವುದು)

(ಊ) ಮಾನ್ಯ ನ್ಯಾಯಾಲಯದ ಆದೇಶದಂತೆ ನಿಗಧಿತ ಸಮಯದೊಳಗೆ ನೋಂದಾಯಿಸಿಕೊಳ್ಳಲು ಯಾವಾಗ ಮತ್ತು ಯಾವ ಕಾಲಮಿತಿಯೊಳಗೆ ಸದರಿ ಅರ್ಜಿದಾರರಿಗೆ ೧೧ಇ ಮ್ಯುಟೇಶನ್ ಪೂರ್ವ ನಕ್ಷೆ /ಆಕಾರ್ ಬಂದ್ ಹಾಗೂ ಟಿಪ್ಪಣಿ ತಯಾರಿಸಿಕೊಡಲಾಗುವುದು ? (ವಿವರ ನೀಡುವುದು)

## ಹೈಟೆಕ್ ಬಸ್ ನಿಲ್ದಾಣ ನಿರ್ಮಾಣ

**ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ್ (ಇಂಡಿ) :–**

೧೪೮ (೩೭೧) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯ ತಾಲ್ಲೂಕು ಕೇಂದ್ರ ಹಾಗೂ ಗಡಿಭಾಗದಲ್ಲಿ ಬರುವ ಅಂತರ್ ರಾಜ್ಯ ಸಾರಿಗೆ ಸಂಪರ್ಕ ಕಲ್ಪಿಸುವ ಇಂಡಿ

ಪಟ್ಟಣವು ಸುಮಾರು ೫೦ ಸಾವಿರಕ್ಕಿಂತಲೂ ಹೆಚ್ಚಿನ ಜನಸಂಖ್ಯೆಯನ್ನು ಹೊಂದಿರುವ ಹಾಗೂ ವಿಜಯಪುರ ಜಿಲ್ಲೆಯಲ್ಲಿಯೇ ಅತ್ಯಂತ ದೊಡ್ಡ ಪಟ್ಟಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇಂಡಿ ತಾಲ್ಲೂಕು ಕೇಂದ್ರದಿಂದ ಅಂತರ್ ಜಿಲ್ಲೆ ಹಾಗೂ ಅಂತರ್ ರಾಜ್ಯಕ್ಕೆ ಪ್ರತಿನಿತ್ಯ ನೂರಾರೂ ಬಸ್ಸುಗಳು ಸಂಚರಿಸುತ್ತಿದ್ದು, ಇಂಡಿ ನಗರದಲ್ಲಿರುವ ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆಯ ಬಸ್ಸು ನಿಲ್ದಾಣದಲ್ಲಿ ಪ್ರಯಾಣಿಕರ ಅವಶ್ಯಕತೆಗೆ ತಕ್ಕಂತೆ ಮೂಲಭೂತ ಸೌಕರ್ಯಗಳು ಹಾಗೂ ಹೆಚ್ಚಿನ ಬಸ್ಸುಗಳ ನಿಲುಗಡೆಗೆ ಸ್ಥಳಾವಕಾಶ ದೊರೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಇಂಡಿ ನಗರದಲ್ಲಿ ಸಾರಿಗೆ ಸಂಸ್ಥೆಯ ಬಸ್ಸು ನಿಲ್ದಾಣವನ್ನು ಹೈಟೆಕ್ ಬಸ್ಸು ನಿಲ್ದಾಣವನ್ನಾಗಿ ಮೇಲ್ದರ್ಜೆಗೇರಿಸಲು ಅಥವಾ ಬೇರೆ ಕಡೆಗೆ ಸ್ಥಳಾಂತರ ಮಾಡಿ ; ಹೈಟೆಕ್ ಬಸ್ಸು ನಿಲ್ದಾಣವನ್ನಾಗಿಸುವ ಕುರಿತು ಸರ್ಕಾರ ಆಸಕ್ತಿ ಹೊಂದಿದೆಯೇ ;

(ಈ) ಹೊಂದಿದ್ದಲ್ಲಿ, ಇಂಡಿ ನಗರದಲ್ಲಿರುವ ಸಾರಿಗೆ ಸಂಸ್ಥೆಯ ಬಸ್ಸು ನಿಲ್ದಾಣವನ್ನು ಹೈಟೆಕ್ ಬಸ್ಸು ನಿಲ್ದಾಣವನ್ನಾಗಿ ನಿರ್ಮಾಣ ಮಾಡಲು ಬೇಕಾಗುವ ಅನುದಾನ ಎಷ್ಟು ;

(ಉ) ಸದರಿ ನಿಲ್ದಾಣವನ್ನು ಹೈಟೆಕ್ ಬಸ್ಸು ನಿಲ್ದಾಣವನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ? (ವಿವರ ನೀಡುವುದು)

## ವಸತಿ ಯೋಜನೆಗಳಡಿ ಮನೆಗಳು

**ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ್ (ಇಂಡಿ) :–**

೧೪೯ (೩೭೨) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯ ಇಂಡಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು ; ಅವು ಯಾವುವು ;

(ಆ) ಕಳೆದ ೨ ವರ್ಷಗಳಿಂದ ಸದರಿ ಗ್ರಾಮ ಪಂಚಾಯಿತಿಗಳಿಗೆ ವಿವಿಧ ವಸತಿ ಯೋಜನೆಗಳಡಿ ಹೊಸದಾಗಿ / ಮಾರ್ಪಡಿಸಿ / ಬೇರೆ ಕಡೆಯಿಂದ ಸ್ಥಳಾಂತರಗೊಳಿಸಿ ಹಂಚಿಕೆ ಮಾಡಿದ ಮನೆಗಳ ಸಂಖ್ಯೆ ಎಷ್ಟು ; (ಯೋಜನಾವಾರು ವಿವರ ನೀಡುವುದು)

(ಇ) ಯಾವ ಮಾನದಂಡಗಳ ಆಧಾರದ ಮೇಲೆ ಮನೆಗಳ ಮಂಜೂರಾತಿ / ಸ್ಥಳಾಂತರ / ಮಾರ್ಪಡಿಸಿ ಆದೇಶಿಸಲಾಗಿದೆ ;

(ಈ) ಉಳಿದ ಗ್ರಾಮ ಪಂಚಾಯಿತಿಗಳಿಗೆ ಮನೆಗಳನ್ನು ಹಂಚಿಕೆ ಮಾಡದಿರಲು ಕಾರಣಗಳೇನು ; (ವಿವರ ನೀಡುವುದು)

(ಉ) ಇದುವರೆಗೂ ಹಂಚಿಕೆ ಮಾಡದಿರುವ ಗ್ರಾಮ ಪಂಚಾಯಿತಿಗಳಿಗೆ ಯಾವಾಗ ಮತ್ತು ಎಷ್ಟು ಮನೆಗಳನ್ನು ಹಂಚಿಕೆ ಮಾಡಲಾಗುವುದು ? (ವಿವರ ನೀಡುವುದು)

## ಹೋಬಳಿ ಕೇಂದ್ರಗಳ ರಚನೆ

**ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ್ (ಇಂಡಿ) :–**

೧೫೦ (೩೭೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೊಸದಾಗಿ ಹೋಬಳಿ ಕೇಂದ್ರಗಳನ್ನು ಮಂಜೂರು ಮಾಡುವಾಗ ಸರ್ಕಾರ ಅನುಸರಿಸುವ ಮಾರ್ಗಸೂಚಿ / ಮಾನದಂಡಗಳೇನು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಹೊಸದಾಗಿ ಹೋಬಳಿ ಕೇಂದ್ರಗಳನ್ನು ಮಂಜೂರು ಮಾಡುವ ಬಗ್ಗೆ ಸರ್ಕಾರದಲ್ಲಿ ಎಷ್ಟು ಪ್ರಸ್ತಾವನೆಗಳು ಬಾಕಿ ಇವೆ ; ಅವು ಯಾವುವು ; ಪ್ರಸ್ತುತ ಯಾವ ಹಂತದಲ್ಲಿವೆ ;

(ಇ) ರಾಜ್ಯದಲ್ಲಿ ಹೊಸದಾಗಿ ಹೋಬಳಿ ಕೇಂದ್ರ ಮಂಜೂರು ಮಾಡಲು ಪ್ರತಿ ಕೇಂದ್ರಕ್ಕೆ ತಗಲುವ ವೆಚ್ಚವೆಷ್ಟು ; (ವಿವರ ನೀಡುವುದು)

(ಈ) ವಿಜಯಪುರ ಜಿಲ್ಲೆಯ ಇಂಡಿ ತಾಲ್ಲೂಕಿನ ಅಥರ್ಗಾ, ನಾದ, ಹೋರ್ತಿ ಹಾಗೂ ಅಗರಖೇಡ ಗ್ರಾಮಗಳ ಹಾಗೂ ಸುತ್ತ-ಮುತ್ತಲಿನ ಗ್ರಾಮಗಳ ಸಾರ್ವಜನಿಕರು ದೂರದ ಬಳ್ಳೊಳ್ಳಿ ಹಾಗೂ ಇಂಡಿ ಹೋಬಳಿ ಕೇಂದ್ರಗಳಿಗೆ ಹೋಗಿ ಬರಲು ತುಂಬಾ ದೂರ ಇರುವ ಕಾರಣ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ವಿಜಯಪುರ ಜಿಲ್ಲೆಯ ಇಂಡಿ ತಾಲ್ಲೂಕು ಭೌಗೋಳಿಕವಾಗಿ ಅತ್ಯಂತ ದೊಡ್ಡ ತಾಲ್ಲೂಕು ಆಗಿದ್ದು, ಈ ತಾಲ್ಲೂಕಿನ ಅಥರ್ಗಾ, ನಾದ, ಹೋರ್ತಿ ಹಾಗೂ ಅಗರಖೇಡ ಗ್ರಾಮಗಳು ಅತ್ಯಂತ ದೊಡ್ಡ ಗ್ರಾಮಗಳಾಗಿದ್ದು, ಹೋಬಳಿ ಕೇಂದ್ರಗಳು ಆಗಲು ಅರ್ಹತೆಯನ್ನು ಹೊಂದಿರುವುದು ನಿಜವೇ ;

(ಊ) ಸದರಿ ದೊಡ್ಡ ಗ್ರಾಮಗಳನ್ನು ಹೋಬಳಿ ಕೇಂದ್ರಗಳನ್ನಾಗಿ ಮಾಡುವ ಪ್ರಸ್ತಾವನೆಯು ಪ್ರಸ್ತುತ ಯಾವ ಹಂತದಲ್ಲಿವೆ ;

(ಋ) ಹಾಗಿದ್ದಲ್ಲಿ, ಅಥರ್ಗಾ, ನಾದ, ಹೋರ್ತಿ ಹಾಗೂ ಅಗರಖೇಡ ಗ್ರಾಮಗಳನ್ನು ಹೊಸದಾಗಿ ಹೋಬಳಿ ಕೇಂದ್ರಗಳನ್ನಾಗಿ ಮಾಡುವ

ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು ; ಯಾವಾಗ ಮಂಜೂರಾತಿ ನೀಡಲಾಗುವುದು ? (ವಿವರ ನೀಡುವುದು)

## ಮಹಿಳಾ ಕಾಲೇಜು ಮಂಜೂರಾತಿ

**ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ್ (ಇಂಡಿ) :–**

೧೫೧ (೩೭೪) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯ ಇಂಡಿ ತಾಲ್ಲೂಕು ಡಾ॥ ಡಿ ಎಂ ನಂಜುಂಡಪ್ಪರವರ ವರದಿಯಂತೆ ಶೈಕ್ಷಣಿಕವಾಗಿ ಅತ್ಯಂತ ಹಿಂದುಳಿದ ಪ್ರದೇಶವಾಗಿದ್ದು, ಇಂಡಿ ತಾಲ್ಲೂಕಿನಲ್ಲಿ ಹೆಚ್ಚಾಗಿ ಮುಸ್ಲಿಂ ಮತ್ತು ಜೈನರು ಸೇರಿದಂತೆ ಅಲ್ಪಸಂಖ್ಯಾತರು ವಾಸಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಸದರಿ ಜನಾಂಗದ ಮಹಿಳೆಯರಿಗೆ ಅಲ್ಪಸಂಖ್ಯಾತರ ಕಾಲೇಜುಗಳು ಇಲ್ಲದೆ ದೂರದ ಕಲಬುರ್ಗಿ, ವಿಜಯಪುರ, ಸೊಲ್ಲಾಪುರ್ ಮೊದಲಾದ ಗಡಿಭಾಗದ ಜಿಲ್ಲೆಗಳಿಗೆ ವಲಸೆ ಹೋಗಿ ವಿದ್ಯಾಭ್ಯಾಸ ಮಾಡಲು ತೀವ್ರ ಅನಾನುಕೂಲ ಉಂಟಾಗಿ ಕಾಲೇಜು ಶಿಕ್ಷಣದಿಂದ ವಂಚಿತರಾಗುತ್ತಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ ;

(ಇ) ಇಂಡಿ ನಗರದಲ್ಲಿ ಅಲ್ಪಸಂಖ್ಯಾತ ಮಹಿಳೆಯರಿಗಾಗಿ ಕಾಲೇಜು ಸ್ಥಾಪನೆಗೆ ಅವಶ್ಯವಿರುವ ಜಮೀನು ಹಾಗೂ ಮೂಲಭೂತ ಸೌಕರ್ಯಗಳು ಲಭ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಅಲ್ಪಸಂಖ್ಯಾತ ಮಹಿಳೆಯರಿಗಾಗಿ ತಾಲ್ಲೂಕು ಕೇಂದ್ರವಾದ ಇಂಡಿ ಪಟ್ಟಣದಲ್ಲಿ ಹೊಸದಾಗಿ ಅಲ್ಪಸಂಖ್ಯಾತ ಮಹಿಳಾ ಕಾಲೇಜು ಮಂಜೂರಾತಿಗೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು ? (ವಿವರ ನೀಡುವುದು)

## ಅನುದಾನ ಬಿಡುಗಡೆ

**ಶ್ರೀ ಯಶ್‌ಪಾಲ್ ಎ ಸುವರ್ಣ (ಉಡುಪಿ) :–**

೧೫೨ (೩೩೩) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ವಿಧಾನಸಭಾ ಕ್ಷೇತ್ರದ ನೆರೆ ಸಂತ್ರಸ್ಥರ ಪುನರ್ ವಸತಿ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ರಾಜೀವ್ ಗಾಂಧಿ ವಸತಿ ನಿಗಮದಿಂದ ಅನುದಾನ ಮಂಜೂರಾಗಿ ಈವರೆಗೆ ಸಂಪೂರ್ಣ ಅನುದಾನ ಬಿಡುಗಡೆಯಾಗದಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ವರ್ಷವಾರು ಹಾಗೂ ಫಲಾನುಭವಿವಾರು ಮಾಹಿತಿ ನೀಡುವುದು)

(ಆ) ಹಾನಿಗೊಳಗಾದ ಮನೆಯ ಕುಟುಂಬದವರು ಮನೆ ಪೂರ್ಣಗೊಳಿಸಲಾಗದೆ ಮತ್ತು ಪರಿಹಾರದ ನಿರೀಕ್ಷೆಯಲ್ಲಿ ಸಾಲ ಮಾಡಿ ಸಂಕಷ್ಟಕ್ಕೊಳಗಾಗಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಇ) ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ತುರ್ತಾಗಿ ಗಮನಹರಿಸಿ ಪರಿಹಾರ ಒದಗಿಸಲು ಕ್ರಮವಹಿಸುವುದೇ ?

## ಅನುದಾನ

**ಶ್ರೀ ಯು.ಬಿ. ಬಣಕಾರ್ (ಹಿರೇಕೆರೂರು) :–**

೧೫೩ (೪) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೦೨೪ ಹಾಗೂ ೨೦೨೪–೨೫ನೇ ಸಾಲಿನಲ್ಲಿ ಪಶುಸಂಗೋಪಪವೆ ಇಲಾಖೆಯಿಂದ ಒಟ್ಟು ಎಷ್ಟು ಮೊತ್ತದ ಅನುದಾನವನ್ನು ಹಂಚಿಕೆ ಮಾಡಿಲಾಗಿದೆ ; (ಯೋಜನೆವಾರು ಮತ್ತು ಯೋಜನೇತರ ಕಾಮಗಾರಿ ಸಹಿತ/ ಯೋಜನೆ ಸಹಿತ ವಿಧಾನ ಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ೨೦೨೫–೨೬ನೇ ಸಾಲಿನಲ್ಲಿ ಸರ್ಕಾರದಿಂದ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲು  ಮೀಸಲಿಟ್ಟ ಅನುದಾನ ಎಷ್ಟು ; (ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಹಾವೇರಿ ಜಿಲ್ಲೆ ಹಿರೇಕೆರೂರು ತಾಲ್ಲೂಕಿಗೆ ಒದಗಿಸಿರುವ ಪಶು ಚಿಕಿತ್ಸಾ ವಾಹನವು ೧೫ ವರ್ಷಗಳಷ್ಟು ಹಳೆಯದಾಗಿದ್ದು, ಹೊಸ ಪಶು ಚಿಕಿತ್ಸೆ ವಾಹನವನ್ನು ಯಾವಾಗ ನೀಡಲಾಗುವುದು ?

## ಬಸ್ಸುಗಳ ಖರೀದಿ

**ಶ್ರೀ ಯು.ಬಿ. ಬಣಕಾರ್ (ಹಿರೇಕೆರೂರು) :–**

೧೫೪ (೫) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪ ಮತ್ತು ೨೦೨೪–೨೫ನೇ ಸಾಲಿನಲ್ಲಿ ಸಾರಿಗೆ ಇಲಾಖೆಯಿಂದ ಎಷ್ಟು ಹೊಸ ಬಸ್ಸುಗಳನ್ನು ಖರೀದಿಸಲಾಗಿದೆ ; (ವಿವರ  ಒದಗಿಸುವುದು)

(ಆ) ಈ ಪೈಕಿ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗೆ ಎಷ್ಟು ಬಸ್ ಹಂಚಿಕೆ ಮಾಡಲಾಗಿದೆ ; ಹಾಗಿದ್ದಲ್ಲಿ, ವಿಭಾಗವಾರು, ಘಟಕವಾರು ಹಂಚಿಕೆ ಮಾಡಲಾಗಿದೆಯೇ ;

(ಇ) ಹಿರೇಕೆರೂರು ವಿಧಾನಸಭಾ ವ್ಯಾಪ್ತಿಯ ಹಿರೇಕೆರೂರು ಘಟಕದಲ್ಲಿ ಈಗಾಗಲೇ ಹಿರೇಕೆರೂರು ಬೆಂಗಳೂರು – ಅನುಸೂಚಿಯಲ್ಲಿರುವ ನಾನ್ ಎಸಿ ಸ್ಲೀಪರ್ ಬಸ್ ಪ್ರಯಾಣದ ಗರಿಷ್ಠ ಮಿತಿ ಮುಕ್ತಾಯಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಈ) ಬಂದಿದ್ದಲ್ಲಿ, ಸದರಿ ಮಾರ್ಗಕ್ಕೆ ಪ್ರಯಾಣಿಕರ ಸುರಕ್ಷತೆಯ ದೃಷ್ಟಿಯಿಂದ ಹೊಸ ಬಸ್ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಹಾಗಿದ್ದಲ್ಲಿ, ಯಾವಾಗ ಬಸ್ ಸೇವೆ ನೀಡಲಾಗುವುದು ?

## ಅನುದಾನ ಬಿಡುಗಡೆ

**ಶ್ರೀ ಯು.ಬಿ. ಬಣಕಾರ್ (ಹಿರೇಕೆರೂರು) :–**

೧೫೫ (೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೦೨೪ ಹಾಗೂ ೨೦೨೪–೨೫ನೇ ಸಾಲಿನಲ್ಲಿ ಇಲಾಖೆಯಿಂದ ಯಾವ ಯಾವ ಯೋಜನೆಗಳಿಗೆ ಎಷ್ಟು ಮೊತ್ತದ ಅನುದಾನ ಹಂಚಿಕೆ / ಬಿಡುಗಡೆ ಮಾಡಲಾಗಿದೆ ; (ಕಾಮಗಾರಿ ವಿವರ ಸಹಿತ ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಆ ಪೈಕಿ ಆಡಳಿತ ಇಲಾಖೆಯಿಂದ (ಲೋಕೋಪಯೋಗಿ ಇಲಾಖೆ) ಅನುಮೋದನೆ ನೀಡಿದ ಮೊತ್ತ ಎಷ್ಟು ; ಕಾಮಗಾರಿಗಳು ಎಷ್ಟು ;

(ಕಾಮಗಾರಿ ವಿವರ ಸಹಿತ ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು)

(ಇ) ೨೦೨೫–೨೬ನೇ ಸಾಲಿನಲ್ಲಿ ಲೋಕೋಪಯೋಗಿ ಇಲಾಖೆಯಿಂದ ೩೦.೦೬.೨೦೨೫ರ ಅಂತ್ಯಕ್ಕೆ ಬಿಡುಗಡೆಗೊಳಿಸಿರುವ ಒಟ್ಟು ಅನುದಾನ ಎಷ್ಟು ? (ಕಾಮಗಾರಿ ಸಹಿತ ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು)

## ಅನುದಾನ ಹಂಚಿಕೆ

**ಶ್ರೀ ಯು.ಬಿ. ಬಣಕಾರ್ (ಹಿರೇಕೆರೂರು) :–**

೧೫೬ (೭) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪ ಹಾಗೂ ೨೦೨೪–೨೫ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಹಂಚಿಕೆ ಮಾಡಲಾದ ಅನುದಾನವೆಷ್ಟು ; (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಆ ಪೈಕಿ ಯೋಜನೆವಾರು ಮತ್ತು ಯೋಜನೇತರ ಲೆಕ್ಕ ಶೀರ್ಷಿಕೆಗಳಡಿ ಹಂಚಿಕೆ ಮಾಡಲಾದ ಅನುದಾನವೆಷ್ಟು ; (ವಿವರ ನೀಡುವುದು)

(ಇ) ೨೦೨೫–೨೬ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲು ಮೀಸಲಿಟ್ಟ ಅನುದಾನ ಎಷ್ಟು ? (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

## ದೇವಸ್ಥಾನಗಳ ಅಭಿವೃದ್ಧಿ

**ಶ್ರೀ ಯು.ಬಿ. ಬಣಕಾರ್ (ಹಿರೇಕೆರೂರು) :–**

೧೫೭ (೨೨೭) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪ ಹಾಗೂ ೨೦೨೪–೨೫ನೇ ಸಾಲಿನಲ್ಲಿ ರಾಜ್ಯದಲ್ಲಿ ದೇವಸ್ಥಾನಗಳ ಅಭಿವೃದ್ಧಿ ಹಾಗೂ ಜೀರ್ಣೋದ್ಧಾರ ಕಾಮಗಾರಿ ಕೈಗೊಳ್ಳಲು ಒಟ್ಟು ಎಷ್ಟು ಮೊತ್ತದ ಅನುದಾನವನ್ನು ಹಂಚಿಕೆ ಮಾಡಲಾಗಿದೆ ; (ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು)

(ಆ) ಹಂಚಿಕೆ ಮಾಡಲಾದ ಅನುದಾನದಲ್ಲಿ ಆರ್ಥಿಕ ಇಲಾಖೆಯ ಸಹಮತಿ ಮೇರೆಗೆ ಹೆಚ್ಚುವರಿ ಎಷ್ಟು ಅನುದಾನ ಹಂಚಿಕೆ/ಬಿಡುಗಡೆ ಮಾಡಲಾಗಿದೆ ; (ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು)

(ಇ) ೨೦೨೪–೨೫ನೇ ಸಾಲಿನಲ್ಲಿ ಮುಜರಾಯಿ ಇಲಾಖೆ (ಆಡಳಿತ ಇಲಾಖೆ) ಒದಗಿಸಿರುವ ಅನುದಾನದಲ್ಲಿ ದೇವಸ್ಥಾನಗಳ ಅಭಿವೃದ್ಧಿಗೆ ಎಷ್ಟು ಅನುದಾನ ಹಂಚಿಕೆ/ಬಿಡುಗಡೆ ಮಾಡಲಾಗಿದೆ ; (ವಿಧಾನಸಭಾ ಕ್ಷೇತ್ರವಾರು ಕಾಮಗಾರಿ ಸಹಿತ ಮಾಹಿತಿ ನೀಡುವುದು)

(ಈ) ೨೦೨೪–೨೫ನೇ ಸಾಲಿನಲ್ಲಿ ಆಡಳಿತ ಇಲಾಖೆ (ಮುಜರಾಯಿ ಇಲಾಖೆ) ದೇವಸ್ಥಾನಗಳ ಅಭಿವೃದ್ಧಿಗೆ ಮೀಸಲಿಟ್ಟ ಅನುದಾನ ಎಷ್ಟು ; ಈಗಾಗಲೇ ಹಂಚಿಕೆ ಮಾಡಿರುವ ಅನುದಾನ ಎಷ್ಟು; ಹಿರೇಕೆರೂರು ವಿಧಾನಸಭಾ ಕ್ಷೇತ್ರಕ್ಕೆ ಎಷ್ಟು ಅನುದಾನ ಹಂಚಿಕೆ ಮಾಡಲಾಗಿದೆ ? (ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು)

## ಅನುದಾನ ಬಿಡುಗಡೆ

**ಶ್ರೀ ರಾಜಾ ವೇಣುಗೋಪಾಲ್ ನಾಯಕ್ (ಶೋರಾಪುರ) :–**

೧೫೮ (೯೧) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಕ್ಫ್ ಇಲಾಖೆಯಡಿಯಲ್ಲಿ ಶೋರಾಪುರ ವಿಧಾನಸಭಾ ಕ್ಷೇತ್ರಕ್ಕೆ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆಗೊಳಿಸಿದ ಅನುದಾನವೆಷ್ಟು ; (ಕಾಮಗಾರಿಯ ವಿವರ ನೀಡುವುದು)

(ಆ) ಬಳಕೆಯಾದ ಅನುದಾನವೆಷ್ಟು ? (ಕಾಮಗಾರಿವಾರು ವಿವರ ನೀಡುವುದು)

## ಕಟ್ಟಡ ನಿರ್ಮಾಣ

**ಶ್ರೀ ರಾಜಾ ವೇಣುಗೋಪಾಲ್ ನಾಯಕ್ (ಶೋರಾಪುರ) :–**

೧೫೯ (೯೨) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಹುಣಸಗಿ ಪಟ್ಟಣದಲ್ಲಿ ನೂತನ ಬಸ್ಸು ನಿಲ್ದಾಣ ಮತ್ತು ಘಟಕದ ಕಟ್ಟಡ ನಿರ್ಮಾಣಕ್ಕೆ ಸ್ವಂತ ನಿವೇಶನ ಒದಗಿಸಿದ್ದು, ಕಟ್ಟಡ ನಿರ್ಮಿಸಲು ಅನುದಾನ ಒದಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ?

## ಕಛೇರಿ ಕಟ್ಟಡ ನಿರ್ಮಾಣ

**ಶ್ರೀ ರಾಜಾ ವೇಣುಗೋಪಾಲ್ ನಾಯಕ್ (ಶೋರಾಪುರ) :–**

೧೬೦ (೯೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶೋರಾಪುರ ವಿಧಾನಸಭಾ ಕ್ಷೇತ್ರದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಲೋಕೋಪಯೋಗಿ ಕಛೇರಿಯ ಕಟ್ಟಡವು ಹಳೆಯ ಕಟ್ಟಡವಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರವು ನೂತನ ಕಟ್ಟಡ ನಿರ್ಮಿಸಲು ಯಾವ ಕ್ರಮ ಕೈಗೊಂಡಿದೆ ?

## ಕಟ್ಟಡ ನಿರ್ಮಾಣ

**ಶ್ರೀ ರಾಜಾ ವೇಣುಗೋಪಾಲ್ ನಾಯಕ್ (ಶೋರಾಪುರ) :–**

೧೬೧ (೧೯೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶೋರಾಪುರ ಪಟ್ಟಣದ ತಾಲ್ಲೂಕು ಉಪ ನೋಂದಣಾಧಿಕಾರಿ ಕಛೇರಿಯು ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರ ಕಟ್ಟಡ ನಿರ್ಮಿಸಲು ಯಾವ ಕ್ರಮಕೈಗೊಂಡಿದೆ ?

## ನೂತನ ತಾಲ್ಲೂಕು ಘೋಷಣೆ

**ಶ್ರೀ ರೇವಣ್ಣ ಹೆಚ್ ಡಿ (ಹೊಳೆನರಸೀಪುರ) :–**

೧೬೨ (೧೬೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಪತ್ರ ಸಂಖ್ಯೆ:ಕಂ.ಇ ೮ ಎಲ್.ಆರ್.ಡಿ ೨೦೨೪, ದಿನಾಂಕ:೨೦.೦೩.೨೦೨೪ರ ಸರ್ಕಾರದ ಆದೇಶದಲ್ಲಿ ಹಾಸನ ಜಿಲ್ಲೆ ಹಾಸನ ತಾಲ್ಲೂಕಿನ ಶಾಂತಿಗ್ರಾಮ ಹೋಬಳಿಯನ್ನು ಪ್ರತ್ಯೇಕಿಸಿ

ನೂತನ ತಾಲ್ಲೂಕನ್ನಾಗಿ ಘೋಷಿಸಿರುವುದು ಸರ್ಕಾರದ ಗಮನದಲ್ಲಿದೆಯೇ ; (ಮಾಹಿತಿ ನೀಡುವುದು)

(ಆ) ಮಾನ್ಯ ಜಿಲ್ಲಾಧಿಕಾರಿಗಳ ಪತ್ರ ಸಂಖ್ಯೆ: ಆರ್.ಆರ್.ಟಿ ೨೯/೨೦೨೪-೨೫/ದಿ.೧೪.೧೧.೨೦೨೪ರಲ್ಲಿ ಹೊಸದಾಗಿ ಶಾಂತಿಗ್ರಾಮ ತಾಲ್ಲೂಕನ್ನಾಗಿ ಮಾಡುವ ಸಂಬಂಧ ಅಭಿಪ್ರಾಯ ನೀಡುವಂತೆ ಪತ್ರ ಬರೆದಿರುವ ಮೇರೆಗೆ ದಿನಾಂಕ:೧೬.೦೧.೨೦೨೫ರಂದು ಹೊಸ ಶಾಂತಿಗ್ರಾಮ ತಾಲ್ಲೂಕನ್ನಾಗಿ ಮಾಡುವ ಸಂಬಂಧ ಹಾಸನ ತಾಲ್ಲೂಕಿನ ದುದ್ದ ಮತ್ತು ಶಾಂತಿಗ್ರಾಮ ಹೋಬಳಿ ವ್ಯಾಪ್ತಿಯಲ್ಲಿ ಬರುವ ೦೬ ಹೊಸ ಹೋಬಳಿಗಳನ್ನು ರಚಿಸಿ, ಸ್ಕೆಚ್ ಮತ್ತಿತರ ದಾಖಲಾತಿಗಳೊಂದಿಗೆ ಮಾನ್ಯ ಜಿಲ್ಲಾಧಿಕಾರಿಗಳಿಗೆ ಪ್ರಸ್ತಾವನೆ ನೀಡಿದ್ದು, ಪ್ರಸ್ತುತ ಯಾವ ಹಂತದಲ್ಲಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಶಾಂತಿಗ್ರಾಮ ತಾಲ್ಲೂಕನ್ನಾಗಿ ಘೋಷಿಸಲು ಅನುಸರಿಸಲಾಗುವ ಮಾನದಂಡಗಳೇನು ; ಈ ಬಗ್ಗೆ ಸಮಿತಿ ರಚನೆಯಾಗಿದೆಯೇ ; (ಸಮಿತಿಯ ಸದಸ್ಯರ ಮಾಹಿತಿಯನ್ನು ನೀಡುವುದು)

(ಈ) ಶಾಂತಿಗ್ರಾಮ ಹೊಸ ತಾಲ್ಲೂಕು ಆಗಿ ರಚಿಸಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ಸರ್ಕಾರದಿಂದ ಹಲವಾರು ಪತ್ರ ಮುಖೇನ ನಿರ್ದೇಶನ ನೀಡಿದ್ದರೂ ಸಹ ಇದುವರೆಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸದೆ ಇರಲು ಕಾರಣಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

# ದೇವಸ್ಥಾನಗಳ ಜೀರ್ಣೋದ್ಧಾರ

**ಶ್ರೀ ರೇವಣ್ಣ ಹೆಚ್ ಡಿ (ಹೊಳೆನರಸೀಪುರ) :–**

೧೬೩ (೧೬೨) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೩ ವರ್ಷಗಳಲ್ಲಿ ರಾಜ್ಯದಲ್ಲಿರುವ ಮುಜರಾಯಿ ಇಲಾಖೆ ವ್ಯಾಪ್ತಿಯ ದೇವಸ್ಥಾನಗಳ ಜೀರ್ಣೋದ್ಧಾರಕ್ಕಾಗಿ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನ ಮೊತ್ತವೆಷ್ಟು ; (ವಿಧಾನಸಭಾ ಕ್ಷೇತ್ರವಾರು, ವರ್ಷಾವಾರು ದೇವಸ್ಥಾನಗಳ ವಿಳಾಸವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ೨೦೨೪–೨೫ನೇ ಸಾಲಿನಲ್ಲಿ ಹೊಳೆನರಸೀಪುರ ವಿಧಾನಸಭಾ ಕ್ಷೇತ್ರಕ್ಕೆ ಮುಜರಾಯಿ ಇಲಾಖೆ ವ್ಯಾಪ್ತಿಯ ದೇವಸ್ಥಾನಗಳ ಜೀರ್ಣೋದ್ಧಾರಕ್ಕಾಗಿ ಯಾವುದೇ ಅನುದಾನ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಕ್ಷೇತ್ರ ವ್ಯಾಪ್ತಿಯ ಮುಜರಾಯಿ ದೇವಸ್ಥಾನಗಳ ಜೀರ್ಣೋದ್ಧಾರ ಕಾಮಗಾರಿಗೆ ಕೂಡಲೇ ಅನುದಾನ ಬಿಡುಗಡೆಗೊಳಿಸುವುದೇ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಹೊಳೆನರಸೀಪುರ ಪಟ್ಟಣದ ಕೋಟೆ ಬೀದಿಯಲ್ಲಿ ಶ್ರೀ ರಘುಪತಿ ದೇವಸ್ಥಾನದ ಆವರಣದಲ್ಲಿ ವಿಶ್ರಾಂತಿಗೃಹ ನಿರ್ಮಾಣ ಕಾಮಗಾರಿಗೆ ರೂ. ೨೦೦.೦೦ ಲಕ್ಷಗಳ ಅನುದಾನ ಮಂಜೂರಾಗಿ ಲೋಕೋಪಯೋಗಿ ಇಲಾಖೆವತಿಯಿಂದ ಅನುಷ್ಠಾನಗೊಂಡು ಪೂರ್ಣಗೊಂಡು ತಳಮಹಡಿಯಲ್ಲಿರುವ ಮಳಿಗೆಗಳನ್ನು ತಹಶೀಲ್ದಾರ್, ಹೊಳೆನರಸೀಪುರ ತಾಲ್ಲೂಕು ರವರು ನಿಯಮಾನುಸಾರ ಟೆಂಡರ್ ಕರೆದು ಬಾಡಿಗೆ ನೀಡಿರುವುದು ನಿಜವೇ ;

(ಈ) ಹಾಗಿದ್ದಲ್ಲಿ, ಮಾಹೆಯಾನ ಬರುತ್ತಿರುವ ಬಾಡಿಗೆ ಎಷ್ಟು ; ಹಾಗಿದ್ದರೂ ಸಹ ರೂ. ೨೦೦.೦೦ ಲಕ್ಷಗಳ ಅನುದಾನ ಬಿಡುಗಡೆಗೊಳಿಸದಿರಲು ಕಾರಣಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಮನೆಗಳ ನಿರ್ಮಾಣ

**ಶ್ರೀ ರೇವಣ್ಣ ಹೆಚ್ ಡಿ (ಹೊಳೆನರಸೀಪುರ) :–**

೧೬೪ (೧೬೩) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿವತಿಯಿಂದ ಹೊಳೆನರಸೀಪುರ ಪಟ್ಟಣದಲ್ಲಿ ಕಳೆದ ೩ ವರ್ಷಗಳಿಂದ ಈ ದಿನಾಂಕದವರೆಗೆ ಕೈಗೊಂಡಿರುವ ಮನೆ ನಿರ್ಮಾಣ ಕಾಮಗಾರಿಗಳೆಷ್ಟು ; ಸರ್ಕಾರದ ಮತ್ತು ಫಲಾನುಭವಿಗಳ ವಂತಿಕೆ ಎಷ್ಟು ; (ಸಾಮಾನ್ಯ ವರ್ಗವಾರು ಮತ್ತು ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡವಾರು ಹಾಗೂ ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಅಭಿವೃದ್ಧಿ ಮಂಡಳಿವತಿಯಿಂದ ಹೊಳೆನರಸೀಪುರ ಪಟ್ಟಣದಲ್ಲಿ ನಿರ್ಮಿಸುತ್ತಿರುವ ಮನೆಗಳ ನಿರ್ಮಾಣ ಕಾಮಗಾರಿಗಳನ್ನು ಎಷ್ಟು ಗುತ್ತಿಗೆದಾರರಿಗೆ ವಹಿಸಲಾಗಿದೆ ; (ಅವರ ಹೆಸರು ವಿಳಾಸಸಹಿತ ಸಾಮಾನ್ಯ ವರ್ಗವಾರು ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಅಭಿವೃದ್ಧಿ ಮಂಡಳಿವತಿಯಿಂದ ಹೊಳೆನರಸೀಪುರ ಪಟ್ಟಣದಲ್ಲಿ ನಿರ್ಮಿಸುತ್ತಿರುವ ಮನೆಗಳಿಗಾಗಿ ವಂತಿಕೆ ಪಾವತಿಸಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ಸಾಮಾನ್ಯ ವರ್ಗವಾರು

ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡವಾರು ಹಾಗೂ ಹೆಸರು ಮತ್ತು ವಿಳಾಸವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಪೂರ್ಣಗೊಂಡಿರುವ ಮತ್ತು ಅಪೂರ್ಣವಾಗಿರುವ ಮನೆಗಳ ಸಂಖ್ಯೆ ಎಷ್ಟು ; (ಸಾಮಾನ್ಯ ವರ್ಗವಾರು ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡವಾರು ಹಾಗೂ ವರ್ಷಾವಾರು ಮಾಹಿತಿಯನ್ನು ನೀಡುವುದು

(ಉ) ಈ ಮನೆಗಳ ನಿರ್ಮಾಣದ ಕಾಮಗಾರಿ ವಿಳಂಬವಾಗಲು ಕಾರಣಗಳೇನು; ವಿಳಂಬ ಮಾಡಿದ ಗುತ್ತಿಗೆದಾರರನ್ನು ಬ್ಲಾಕ್ ಲಿಸ್ಟ್ ಸೇರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಯಾವ ಕಾಲಮಿತಿಯೊಳಗೆ ಉಳಿದಿರುವ ಮನೆಗಳ ನಿರ್ಮಾಣ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಅಭಿವೃದ್ಧಿ ಯೋಜನೆಗಳು

**ಶ್ರೀ ರೇವಣ್ಣ ಹೆಚ್ ಡಿ (ಹೊಳೆನರಸೀಪುರ) :–**

೧೬೫ (೧೬೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೇಮಾವತಿ ಜಲಾಶಯ ಯೋಜನೆ ವ್ಯಾಪ್ತಿಯ ಹೇಮಾವತಿ ಮತ್ತು ಯಗಚಿ ಜಲಾಶಯ ಯೋಜನೆ ಅಡಿಯಲ್ಲಿ ವಿವಿಧ ನಾಲಾ ಅಭಿವೃದ್ಧಿ ಯೋಜನೆಗಳಿಗೆ ಮತ್ತು ಏತನೀರಾವರಿ ಯೋಜನೆಗಳ ಭೂಸ್ವಾಧೀನ ಪ್ರಕ್ರಿಯೆಯು ೧೯(೧) ನೋಟಿಫಿಕೇಷನ್ ಹೊರಡಿಸಲು ಬಾಕಿ ಇರುವ ಪ್ರಕರಣಗಳೆಷ್ಟು ; (ವಿಧಾನಸಭಾ ಕ್ಷೇತ್ರವಾರು, ಯೋಜನೆಗಳವಾರು, ಗ್ರಾಮಗಳವಾರು ಜಮೀನಿನ ವಿಸ್ತೀರ್ಣವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆ ವ್ಯಾಪ್ತಿಯ ಹೇಮಾವತಿ ಮತ್ತು ಯಗಚಿ ಜಲಾಶಯ ಯೋಜನೆ ಅಡಿಯಲ್ಲಿ ವಿವಿಧ ನಾಲಾ ಅಭಿವೃದ್ಧಿ ಯೋಜನೆಗಳಿಗೆ ಮತ್ತು ಏತನೀರಾವರಿ ಯೋಜನೆಗಳ ಭೂಸ್ವಾಧೀನ ಪ್ರಕ್ರಿಯೆಯ ೧೯(೧) ನೋಟಿಫಿಕೇಷನ್ ಹೊರಡಿಸಿ ಅವಾರ್ಡ ಮಾಡದಿರಲು ಕಾರಣಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ವಿವಿಧ ನಾಲಾ ಅಭಿವೃದ್ಧಿ ಯೋಜನೆಗಳಿಗೆ ಮತ್ತು ಏತನೀರಾವರಿ ಯೋಜನೆಗಳ ಭೂಸ್ವಾಧೀನ ಪ್ರಕ್ರಿಯೆಯ ೧೯(೧) ನೋಟಿಫಿಕೇಷನ್ ಹೊರಡಿಸಿ ಅವಾರ್ಡ ಮಾಡುವಲ್ಲಿ ವಿಳಂಬನೀತಿ ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಜಲಾಶಯದ ವಿಶೇಷ ಭೂಸ್ವಾಧೀನಾಧಿಕಾರಿಗಳ ಕಛೇರಿಯಲ್ಲಿ ಅಧಿಕಾರಿಗಳು ಶಾಮೀಲಾಗಿ ಹೇಮಾವತಿ ಜಲಾಶಯ ಯೋಜನೆ ವ್ಯಾಪ್ತಿಯ ಹೇಮಾವತಿ ಮತ್ತು ಯಗಚಿ ಜಲಾಶಯ ಯೋಜನೆ ಅಡಿಯಲ್ಲಿ ವಿವಿಧ ನಾಲಾ ಅಭಿವೃದ್ಧಿ ಯೋಜನೆಗಳಿಗೆ ಮತ್ತು ಏತನೀರಾವರಿ ಯೋಜನೆಗಳಲ್ಲಿ ಭೂಸ್ವಾಧೀನವಾಗುವ ಗಾಣಿಗರಹೊಸಳ್ಳಿ ಮತ್ತು ಇತರೆ ಕೆಲವು ಗ್ರಾಮಗಳು ಹಾಸನ ನಗರದಿಂದ ಸುಮಾರು ೯–೧೦ ಕಿ.ಮೀ ಅಂತರದ ದೂರವಿದ್ದರೂ ಸಹ ಪ್ರತೀ ಎಕರೆಗೂ ರೂ. ೩.೦೦ ಕೋಟಿಗಳಿಗೂ ಹೆಚ್ಚಿನ ಭೂ ಪರಿಹಾರ ನಿಗದಿಗೊಳಿಸಿ, ಸರ್ಕಾರದ ಬೊಕ್ಕಸಕ್ಕೆ ಕೋಟ್ಯಾಂತರ ರೂಪಾಯಿಗಳ ನಷ್ಟವುಂಟು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಈ ಬಗ್ಗೆ ಸಮಗ್ರವಾಗಿ ತನಿಖೆ ನಡೆಸಿ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳುವುದೇ ? (ಸಂಪೂರ್ಣ ಮಾಹಿತಿ ನೀಡುವುದು)

## ಬಡಾವಣೆ ನಿರ್ಮಾಣ

**ಶ್ರೀ ರೇವಣ್ಣ ಹೆಚ್ ಡಿ (ಹೊಳೆನರಸೀಪುರ) :-**

೧೬೬ (೨೧೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾಸನ ನಗರಸಭಾ ವ್ಯಾಪ್ತಿಯಲ್ಲಿನ ೧೦ ಕಿ.ಮೀ. ಪರಿಮಿತಿಯಲ್ಲಿ ಬರುವ ಗ್ರಾಮಗಳು ಯಾವುವು ; ಸದರಿ ಗ್ರಾಮಗಳಲ್ಲಿ ಇದುವರೆಗೂ ೧ ಎಕರೆಗೂ ಮೀರಿ ಬಡಾವಣೆಗಳನ್ನಾಗಿ ನಿರ್ಮಿಸಲು ಭೂ ಪರಿವರ್ತನೆ ಮಾಡಲಾಗಿರುವ ಪ್ರಕರಣಗಳೆಷ್ಟು ; (ಗ್ರಾಮಗಳವಾರು, ಸರ್ವೆ ನಂಬರ್‌ಗಳವಾರು ಬಡಾವಣೆಗಳ ವಿಳಾಸವಾರು ಸಂಪೂರ್ಣ ಮಾಹಿತಿಗಳನ್ನು ಒದಗಿಸುವುದು)

(ಆ) ಬಡಾವಣೆಗಳನ್ನು ನಿರ್ಮಿಸಲು ಸರ್ಕಾರವು ನಿಗದಿಪಡಿಸಿರುವಂತೆ ಹಾಸನ ನಗರಾಭಿವೃದ್ಧಿ ಪ್ರಾಧಿಕಾರದ ನಕ್ಷೆ & ಅನುಮತಿ ಪತ್ರ, ಪರಿಸರ ಮಾಲಿನ್ಯ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ, ಎಸ್.ಟಿ.ಪಿ ಅನುಮತಿ ಪತ್ರ, ಉದ್ಯಾನವನ, ಮಕ್ಕಳ ಆಟದ ಮೈದಾನ, ಸಿ.ಎ. ನಿವೇಶನ, ಕುಡಿಯುವ ನೀರಿನ ಟ್ಯಾಂಕ್ & ಪೈಪ್‌ಲೈನ್, ಒಳಚರಂಡಿ ಮಂಡಳಿಯಿಂದ ನಿರಾಕ್ಷೇಪಣಾ ಪತ್ರ, ಬೀದಿದೀಪ, ರಾಜ್ಯದ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಿಂದ ಅನುಮತಿ ಪತ್ರ ಮತ್ತಿತರ ಮೂಲಭೂತ ಸೌಕರ್ಯಗಳಿಲ್ಲದೆ ಕಾನೂನುಬಾಹಿರವಾಗಿ ನಿರ್ಮಿಸಿರುವ ಬಡಾವಣೆಗಳೆಷ್ಟು (ವರ್ಷಾವಾರು, ಗ್ರಾಮಗಳವಾರು, ಸರ್ವೆ ನಂಬರ್‌ಗಳವಾರು ಬಡಾವಣೆಗಳ ವಿಳಾಸವಾರು ಸಂಪೂರ್ಣ ಮಾಹಿತಿಗಳನ್ನು ಒದಗಿಸುವುದು)

(ಇ) ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ ನಿರ್ಮಿಸಿರುವ ನೂತನ ಬಡಾವಣೆಗಳಲ್ಲಿರುವ ಸಿ.ಎ. ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆಯೇ ; ಹಾಗಿದ್ದಲ್ಲಿ ಯಾರು ಯಾರಿಗೆ ಎಷ್ಟು ವಿಸ್ತೀರ್ಣ ಹಂಚಿಕೆ ಮಾಡಲಾಗಿದೆ ; ಹಂಚಿಕೆ ಮಾಡಲು ಅನುಸರಿಸಲಾಗಿರುವ ಮಾನದಂಡಗಳೇನು ; (ಬಡಾವಣೆಗಳ ವಿಳಾಸಸಹಿತ ಸಂಪೂರ್ಣ ಮಾಹಿತಿಗಳನ್ನು ನೀಡುವುದು)

(ಈ) ಹಾಗಿದ್ದಲ್ಲಿ, ಹಾಸನ ನಗರಸಭಾ ವ್ಯಾಪ್ತಿಯಲ್ಲಿನ ೧೦ ಕಿ.ಮೀ. ಪರಿಮಿತಿಯಲ್ಲಿನ ಗ್ರಾಮಗಳಲ್ಲಿ ಈ ದಿನಾಂಕದವರೆಗೆ ಮೇಲ್ಕಂಡ ಸರ್ಕಾರದ ನಿಯಮಗಳನ್ನು ಪಾಲಿಸದೆ ಕಾನೂನುಬಾಹಿರವಾಗಿ ಬಡಾವಣೆಗಳನ್ನು ನಿರ್ಮಿಸಿದ ಭೂ ಮಾಫಿಯಾದ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿಗಳನ್ನು ನೀಡುವುದು)

## ಬಾರ್ಜ್(ನಾವೆ)ಯನ್ನು ಒದಗಿಸುವುದು

**ಶ್ರೀ ಲಕ್ಷ್ಮಣ ಸಂಗಪ್ಪ ಸವದಿ (ಅಥಣಿ) :–**

೧೬೭ (೪೨೧) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನಲ್ಲಿ ಮಳೆಯಿಂದ ಕೃಷ್ಣ ನದಿಯಲ್ಲಿ ಉಂಟಾಗುವ ಪ್ರವಾಹದಿಂದ ಜನ–ಜಾನುವಾರುಗಳು ಮನುಷ್ಯರು ಹಾಗೂ ಸರಕುಗಳನ್ನು ಬೇರೆ ಕಡೆಗೆ ಸಾಗಿಸುವಲ್ಲಿ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಹುಲಗಬಾಳಿ–ನದಿ ಇಂಗಳಗಾವ್ ಹಾಗೂ ಸಪ್ತ ಸಾಗರ ಕೃಷ್ಣ ಕಿತ್ತೂರು ಗ್ರಾಮಗಳಿಗೆ ಒಂದು ಹೊಸ ಬಾರ್ಜ್

(ಹೊಸ ಮರದ ಫೈಬರ್ ಕೋಟಿಂಗ್ ಯಾಂತ್ರಿಕ ನಾವೆ) ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಹಾಗಿದ್ದಲ್ಲಿ, ಪ್ರವಾಹ ಸಂದರ್ಭದಲ್ಲಿ ಜನ–ಜಾನುವಾರುಗಳು ಮನುಷ್ಯರು ಹಾಗೂ ಸರಕುಗಳನ್ನು ಬೇರೆ ಕಡೆಗೆ ಸಾಗಿಸುವಲ್ಲಿ ಆಗುತ್ತಿರುವ ತೊಂದರೆಗಳನ್ನು ತಪ್ಪಿಸಲು ಹೊಸ ಬಾರ್ಜ್‌ಗಳನ್ನು ಯಾವಾಗ ಒದಗಿಸಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಮನೆಗಳ ಮಂಜೂರಾತಿ

**ಶ್ರೀ ಲಕ್ಷ್ಮಣ ಸಂಗಪ್ಪ ಸವದಿ (ಅಥಣಿ) :–**

೧೬೮ (೪೨೨) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ಅಥಣಿ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ ಇದುವರೆಗೂ ವಿವಿಧ ವಸತಿ ಯೋಜನೆಯಡಿ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ ; (ವಿವರವಾದ ಮಾಹಿತಿ ಒದಗಿಸುವುದು)

(ಆ) ಹಾಗಿದ್ದಲ್ಲಿ, ವಿವಿಧ ವಸತಿ ಯೋಜನೆಗಳಡಿ ಇನ್ನು ಹೆಚ್ಚಿನ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಬೇಡಿಕೆ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; (ಮಾಹಿತಿ ಒದಗಿಸುವುದು)

(ಈ) ಹಾಗಿದ್ದಲ್ಲಿ, ಯಾವಾಗ ಮನೆಗಳನ್ನು ಮಂಜೂರು ಮಾಡಲಾಗುವುದು ; ಹಾಗೂ ಇದುವರೆಗೂ ಮಂಜೂರು ಮಾಡದೇ ಇರಲು ಕಾರಣಗಳೇನು ? (ವಿವರ ನೀಡುವುದು)

## ದೇವಸ್ಥಾನಗಳಿಗೆ ಅನುದಾನ

**ಶ್ರೀ ಲಕ್ಷ್ಮಣ ಸಂಗಪ್ಪ ಸವದಿ (ಅಥಣಿ) :–**

೧೬೯ (೪೨೩) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಬೆಳಗಾವಿ ಜಿಲ್ಲೆಯ ಅಥಣಿ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ ದೇವಸ್ಥಾನಗಳ ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನ ಎಷ್ಟು ; (ವಿವರವಾದ ಮಾಹಿತಿ ಒದಗಿಸುವುದು)

(ಆ) ಮಂಜೂರಾದ ಅನುದಾನದಲ್ಲಿ ಎಷ್ಟು ದೇವಸ್ಥಾನಗಳಿಗೆ ಪೂರ್ಣ ಪ್ರಮಾಣದಲ್ಲಿ ಹಣ ಬಿಡುಗಡೆಯಾಗಿದೆ ಹಾಗೂ ಇನ್ನು ಬಿಡುಗಡೆಗೆ ಬಾಕಿ ಇರುವ ಅನುದಾನವೆಷ್ಟು ;

(ಇ) ಮಂಜೂರಾದ ಅನುದಾನದ ಪೈಕಿ ೨ನೇ ಕಂತಿನ ಹಣ ಬಿಡುಗಡೆಗಾಗಿ ಯಾವ ಯಾವ ಮತ್ತು ಎಷ್ಟು ದೇವಸ್ಥಾನಗಳು ಬಾಕಿ ಇವೆ ; (ವಿವರ ಒದಗಿಸುವುದು)

(ಈ) ಹಾಗಿದ್ದಲ್ಲಿ, ಯಾವಾಗ ೨ನೇ ಕಂತಿನ ಹಣ ಬಿಡುಗಡೆ ಮಾಡಲಾಗುವುದು ?

## ಅನುದಾನ ಹಂಚಿಕೆ

**ಶ್ರೀ ವೆಂಕಟಶಿವಾರೆಡ್ಡಿ ಜಿ ಕೆ (ಶ್ರೀನಿವಾಸಪುರ) :–**

೧೭೦ (೧೦೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ಶ್ರೀನಿವಾಸಪುರ ವಿಧಾನಸಭಾ ಕ್ಷೇತ್ರಕ್ಕೆ ಲೋಕೋಪಯೋಗಿ ಇಲಾಖೆಯಿಂದ ಮಂಜೂರು

ಮಾಡಿದ ಒಟ್ಟು ಅನುದಾನವೆಷ್ಟು ; (ಯೋಜನಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಕ್ಷೇತ್ರಕ್ಕೆ ಮಂಜೂರು ಮಾಡಿರುವ ಅನುದಾನದಲ್ಲಿ ಎಷ್ಟು ಕಾಮಗಾರಿಗಳನ್ನು ಇದುವರೆಗೂ ಪೂರ್ಣಗೊಳಿಸಲಾಗಿದೆ ; ಪ್ರಾರಂಭಿಕ ಹಂತದಲ್ಲಿರುವ ಕಾಮಗಾರಿಗಳು ಎಷ್ಟು ; ಟೆಂಡರ್ ಹಂತದಲ್ಲಿರುವ ಕಾಮಗಾರಿಗಳೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಕ್ಷೇತ್ರಕ್ಕೆ ಕಳೆದ ಮೂರು ವರ್ಷಗಳಿಂದ PRAMC, SHDP, NHAI ರವರಿಂದ ಅನುಷ್ಠಾನಗೊಂಡಿರುವ ಯೋಜನೆಗಳು ಯಾವ್ಯಾವು ; ಸದರಿ ಯೋಜನೆಗಳಿಂದ ಈ ಕ್ಷೇತ್ರಕ್ಕೆ ಮಂಜೂರಾಗಿರುವ ಒಟ್ಟು ಅನುದಾನವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಪ್ರಸಕ್ತ ಆಯವ್ಯಯದಲ್ಲಿ ಈ ಸಾಲಿನಲ್ಲಿ ೧೮೫೦ ಕಿಲೋಮೀಟರ್ ಉದ್ದದ ರಾಜ್ಯ ಹೆದ್ದಾರಿಗಳನ್ನು ಹಾಗೂ ೨೫೭೦ ಕಿಲೋಮೀಟರ್ ಉದ್ದದ ಜಿಲ್ಲಾ ರಸ್ತೆಗಳನ್ನು ೪೮೪೮ ಕೋಟಿಗಳ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದೆಂದು ಘೋಷಣೆ ಮಾಡಿದ್ದು ಅದರಂತೆ ಪ್ರತಿಕ್ಷೇತ್ರಕ್ಕೆ ಎಷ್ಟೆಷ್ಟು ಕಿ.ಮೀ ಉದ್ದ ಹಾಗೂ ಅನುದಾನವನ್ನು ಹಂಚಿಕೆ ಮಾಡಲಾಗುವುದು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಪ್ರಸಕ್ತ ಸಾಲಿನಲ್ಲಿ SHDP ಹಂತ–೫ ರಡಿ 'ಕೋರ್ ರೋಡ್ ನೆಟ್ ವರ್ಕ್' ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ೧,೩೧೭ ಕಿ.ಮೀ ಉದ್ದದ ರಸ್ತೆಯನ್ನು ನಿರ್ಮಿಸಲು ಯೋಜನೆ ರೂಪಿಸಿದ್ದು ಸದರಿ ಯೋಜನೆಯಡಿ ಶ್ರೀನಿವಾಸಪುರ ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಕಿ.ಮೀ ಉದ್ದದ ರಸ್ತೆ ಅಭಿವೃದ್ಧಿಗೊಳಿಸುವುದು ?

## ಮನೆಗಳ ಹಂಚಿಕೆ

**ಶ್ರೀ ವೆಂಕಟಶಿವಾರೆಡ್ಡಿ ಜಿ ಕೆ (ಶ್ರೀನಿವಾಸಪುರ) :–**

೧೭೧ (೧೦೭) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ಶ್ರೀನಿವಾಸಪುರ ವಿಧಾನಸಭಾ ಕ್ಷೇತ್ರಕ್ಕೆ ವಿವಿಧ ವಸತಿ ಯೋಜನೆಯಡಿ ಯಾವುದೇ ಮನೆಗಳನ್ನು ಮಂಜೂರು ಮಾಡದಿರಲು ಕಾರನವೇನು ;

(ಆ) ಈ ಕ್ಷೇತ್ರದಲ್ಲಿರುವ ವಸತಿ ರಹಿತರಿಗೆ ಮನೆಗಳನ್ನು ನಿರ್ಮಾಣ ಮಾಡಲು ಹಲವಾರು ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸಿದ್ದು ಇದುವರೆಗೂ ಇದರ ಬಗ್ಗೆ ಯಾವುದೇ ಕ್ರಮ ಕೈಗೊಳ್ಳದೇ ಇರುವುದಕ್ಕೆ ಕಾರಣವೇನು ;

(ಇ) ಪ್ರಸಕ್ತ ಸಾಲಿನಲ್ಲಿ ವಸತಿ ರಹಿತರಿಗೆ ಮನೆಗಳನ್ನು ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಈ) ಈ ಕ್ಷೇತ್ರದಲ್ಲಿ ಎಷ್ಟು ಜನ ವಸತಿ ರಹಿತರಿದ್ದಾರೆ ; (ಗ್ರಾಮ ಪಂಚಾಯಿತಿವಾರು ಮತ್ತು ವರ್ಗವಾರು ಮಾಹಿತಿ ನೀಡುವುದು)

(ಉ) ಕಳೆದ ಮೂರು ವರ್ಷಗಳಿಂದ ಈ ಕ್ಷೇತ್ರದಲ್ಲಿ ವಸತಿ ರಹಿತರ ಮನೆಗಳನ್ನು ಪಡೆಯಲು ಸರ್ಕಾರಕ್ಕೆ ಸಲ್ಲಿಸಿರುವ ಅರ್ಜಿಗಳೆಷ್ಟು; ಎಷ್ಟು ಫಲಾನುಭವಿಗಳಿಗೆ ಮನೆಗಳನ್ನು ಮಂಜೂರು ಮಾಡಲಾಗಿದೆ ; ಬಾಕಿ ಇರುವ ಫಲಾನುಭವಿಗಳಿಗೆ ಯಾವಾಗ ಮನೆಗಳನ್ನು ಮಂಜೂರು ಮಾಡಲಾಗುವುದು ? (ಗ್ರಾಮವಾರು ಸಂಪೂರ್ಣ ಮಾಹಿತಿ ನೀಡುವುದು)

## ಅನುದಾನ ಹಂಚಿಕೆ

**ಶ್ರೀ ವೆಂಕಟಶಿವಾರೆಡ್ಡಿ ಜಿ ಕೆ (ಶ್ರೀನಿವಾಸಪುರ) :-**

೧೭೨ (೧೦೮) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಿಂದ ಶ್ರೀನಿವಾಸಪುರ ವಿಧಾನಸಭಾ ಕ್ಷೇತ್ರಕ್ಕೆ ಮುಜರಾಯಿ ಹಾಗೂ ಖಾಸಗಿ ದೇವಾಲಯಗಳ ಅಭಿವೃದ್ಧಿಗಾಗಿ ಮಂಜೂರು ಮಾಡಿದ ಒಟ್ಟು ಅನುದಾನವೆಷ್ಟು; (ಆದೇಶವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಕ್ಷೇತ್ರದಲ್ಲಿರುವ ದೇವಾಲಯಗಳ ಅಭಿವೃದ್ಧಿಗಾಗಿ ಅನುದಾನ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಗಳು ಸಲ್ಲಿಕೆಯಾಗಿದ್ದು ಇದರ ಬಗ್ಗೆ ಸರ್ಕಾರ ಇದುವರೆಗೂ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಕಳೆದ ಮೂರು ವರ್ಷಗಳಿಂದ ಈ ಕ್ಷೇತ್ರದಲ್ಲಿ ಎಷ್ಟು ದೇವಾಲಯಗಳನ್ನು ಅಭಿವೃದ್ಧಿಪಡಿಲಾಗಿದೆ ; ಸದರಿ ದೇವಾಲಯಗಳಿಗೆ ಹಂಚಿಕೆ ಮಾಡಿದ ಅನುದಾನವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಶ್ರೀನಿವಾಸಪುರ ಪುರಸಭೆ ವ್ಯಾಪ್ತಿಯಲ್ಲಿರುವ ಶ್ರೀ ಲಕ್ಷ್ಮಿನರಸಿಂಹಸ್ವಾಮಿ ದೇವಾಲಯದ ಆವರಣದಲ್ಲಿ ವಾಣಿಜ್ಯ ಸಂಕಿರ್ಣ ಕಟ್ಟಡ ನಿರ್ಮಾಣ ಮಾಡಲು ಅನುದಾನ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು ಇದರ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಉ) ಈ ವಿಧಾನಸಭಾ ಕ್ಷೇತ್ರಕ್ಕೆ ಕಳೆದು ಹತ್ತು ವರ್ಷಗಳಿಂದ ಹಲವು ದೇವಾಲಯಗಳ ಅಭಿವೃದ್ಧಿಗಾಗಿ ಸರ್ಕಾರದಿಂದ ಅನುದಾನ ಹಂಚಿಕೆಯಾಗಿದ್ದು ಹಂಚಿಕೆಯಾಗಿರುವ ಅನುದಾನದಲ್ಲಿ ಇದುವರೆಗೂ ದೇವಾಲಯದ ಅಭಿವೃದ್ಧಿ ಕಾಮಗಾರಿಗಳನ್ನು

ಕೈಗೊಳ್ಳದೆ ಇರುವ ದೇವಾಲಯಗಳ ಸಂಖ್ಯೆ ಎಷ್ಟು ; ಸದರಿ ದೇವಾಲಯಗಳಿಗೆ ಹಂಚಿಕೆಯಾಗಿರುವ ಅನುದಾನವೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಪ್ರಜಾಸೌಧ ನಿರ್ಮಾಣ

**ಶ್ರೀ ವೆಂಕಟಶಿವಾರೆಡ್ಡಿ ಜಿ ಕೆ (ಶ್ರೀನಿವಾಸಪುರ) :–**

೧೭೩ (೧೦೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶ್ರೀನಿವಾಸಪುರ ತಾಲ್ಲೂಕಿನಲ್ಲಿ ಪ್ರಜಾಸೌಧ Type-c ಮಾದರಿಯ ಕಟ್ಟಡ ನಿರ್ಮಾಣ ಮಾಡಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು ಸದರಿ ಪ್ರಸ್ತಾವನೆಗೆ ಯಾವಾಗ ಅನುಮೋದನೆ ನೀಡಲಾಗುವುದು ;

(ಆ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಪ್ರಜಾಸೌಧಗಳಿಗೆ ಆಡಳಿತ ಅನುಮೋದನೆ ನಿಡಿ ಅನುದಾನ ಬಿಡುಗಡೆ ಮಾಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಶ್ರೀನಿವಾಸಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹೋಳೂರು ಮತ್ತು ಸುಗಟೂರು ಹೋಬಳಿ ಕೇಂದ್ರಗಳಲ್ಲಿ ನಾಡಕಛೇರಿ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಈ) ಪ್ರಸಕ್ತ ಸಾಲಿನಲ್ಲಿ ಎಷ್ಟು ನಾಡಕಛೇರಿಗಳನ್ನು ನಿರ್ಮಾಣ ಮಾಡಲು ಯೋಜನೆ ರೂಪಸಿದೆ ; ಪ್ರತಿ ನಾಡಕಛೇರಿ ನಿರ್ಮಾಣಕ್ಕೆ ತಗಲುವ ವೆಚ್ಚವೆಷ್ಟು ?

## ವಸತಿ ಶಾಲೆ ಮಂಜೂರಾತಿ

**ಶ್ರೀ ವೆಂಕಟಶಿವಾರೆಡ್ಡಿ ಜಿ ಕೆ (ಶ್ರೀನಿವಾಸಪುರ) :–**

೧೭೪ (೨೨೦) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶ್ರೀನಿವಾಸಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ೨೨ ಸಾವಿರಕ್ಕೂ ಹೆಚ್ಚು ಅಲ್ಪಸಂಖ್ಯಾತರು ವಾಸ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಕ್ಷೇತ್ರದ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಕ್ಷೇತ್ರಕ್ಕೆ ಪ್ರಸಕ್ತ ಆರ್ಥಿಕ ವರ್ಷದಲ್ಲಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯನ್ನು ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದೇ ;

(ಈ) ಈ ಕ್ಷೇತ್ರದಲ್ಲಿ ಮೌಲಾನಾ ಆಜಾದ್ ಮಾದರಿ ಶಾಲೆ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ಮೌಲಾನಾ ಆಜಾದ್ ಮಾದರಿ ಶಾಲೆ ಮಂಜೂರು ಮಾಡಿ ಅನುದಾನ ಬಿಡುಗಡೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದೇ ?

## ಮರಳು ತೆರವು

**ಶ್ರೀ ವೇದವ್ಯಾಸ್ ಕಾಮತ್ ಡಿ (ಮಂಗಳೂರು ನಗರ ದಕ್ಷಿಣ) :–**

೧೭೫ (೪೨೪) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನ ಅಳಿವೆ ಬಾಗಿಲಿನ ನೇತ್ರಾವತಿ ಮತ್ತು ಗುರುಪುರ ನದಿಯ ಸಂಗಮ ಸ್ಥಳದಲ್ಲಿ ಮರಳು ತುಂಬಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಮರಳು ತೆಗೆಯಲು ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ಒದಗಿಸುವುದು)

(ಇ) ಈ ಸ್ಥಳದಲ್ಲಿ ಮೀನುಗಾರರ ನಾಡದೋಣಿಗಳು ಹಾಗೂ ಇತರೆ ದೋಣಿಗಳಿಗೆ ಮೀನುಗಾರಿಕೆ ಮಾಡಲು ಅಡಚಣೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಸಮಸ್ಯೆ ಪರಿಹಾರಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಸದರಿ ಸ್ಥಳದಲ್ಲಿ ಡ್ರೆಜ್ಜಿಂಗ್ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಊ) ಹಾಗಿದ್ದಲ್ಲಿ, ಡ್ರೆಜ್ಜಿಂಗ್ ಮಾಡಲು ಅನುಮೋದನೆ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ಒದಗಿಸುವುದು)

## ಇ–ಖಾತೆಯ ಸಮಸ್ಯೆಗಳು

**ಶ್ರೀ ವೇದವ್ಯಾಸ್ ಕಾಮತ್ ಡಿ (ಮಂಗಳೂರು ನಗರ ದಕ್ಷಿಣ) :–**

೧೭೬ (೪೨೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇ–ಖಾತೆ ಜಾರಿಗೆ ತರಲು ಕಾರಣಗಳೇನು ; (ವಿವರ ಒದಗಿಸುವುದು)

(ಆ) ಇ–ಖಾತೆಯಿಂದ ನಾಗರೀಕರಲ್ಲಿ ಗೊಂದಲ ಸೃಷ್ಟಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದರೇ, ಸಮಸ್ಯೆ ಬಗೆಹರಿಸಲು ಸರ್ಕಾರ ಕೈಗೊಂಡ ನಿಲುವುಗಳೇನು ;

(ಇ) ಇ–ಖಾತದ ತಂತ್ರಾಂಶ ಹಾಗೂ ಇತರೆ ತಾಂತ್ರಿಕ ಕಾರ್ಯಗಳ ನಿರ್ವಹಣೆ ಮಾಡುತ್ತಿರುವ ಸಂಸ್ಥೆ ಯಾವುದು ; ಈ ಸಂಸ್ಥೆಗೆ ಈವರೆಗೂ ಬಿಡುಗಡೆಯಾದ ಅನುದಾನ ಎಷ್ಟು ;

(ಈ) ಇ–ಖಾತೆಯಿಂದ ಮಂಗಳೂರು ಹಾಗೂ ಇತರೆ ಮಹಾನಗರ ಪಾಲಿಕೆಗಳಲ್ಲಿ ಆಗಾಗ್ಗೆ ಸರ್ವರ್ ಡೌನ್ ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಮಾಹಿತಿ ತಂತ್ರಜ್ಞಾನದ ಮೂಲಭೂತ ಸೌಕರ್ಯವನ್ನು ಅಭಿವೃದ್ಧಿ ಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಊ) ಸರ್ವರ್ ಡೌನ್ ಸಮಸ್ಯೆ ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ಒದಗಿಸುವುದು)

## ಪರಿಹಾರ ವಿತರಣೆ

**ಶ್ರೀ ವೇದವ್ಯಾಸ್ ಕಾಮತ್ ಡಿ (ಮಂಗಳೂರು ನಗರ ದಕ್ಷಿಣ) :–**

೧೭೭ (೪೨೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪, ೨೦೨೪–೨೫ನೇ ಸಾಲಿನಲ್ಲಿ ರಾಜ್ಯದ ಎಷ್ಟು ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳನ್ನಾಗಿ ಘೋಷಣೆ ಮಾಡಲಾಗಿರುತ್ತದೆ ;

(ಆ) ಹಾಗಿದ್ದಲ್ಲಿ, ಬರಪೀಡಿತ ಪ್ರದೇಶಗಳಿಗೆ ತುರ್ತು ಪರಿಹಾರ ವಿತರಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಬರಪೀಡಿತ ಪ್ರದೇಶಗಳಿಗೆ ರಾಜ್ಯ ಸರ್ಕಾರ ಘೋಷಣೆ ಮಾಡಿದ ಅನುದಾನ ಎಷ್ಟು ; ಘೋಷಣೆಯಾದ ಅನುದಾನದಲ್ಲಿ ಯಾವ ಯಾವ ಪ್ರದೇಶಗಳಿಗೆ ಎಷ್ಟೆಷ್ಟು ಬೆಳೆ ಪರಿಹಾರ ಮೊತ್ತವನ್ನು ಬಿಡುಗಡೆ ಮಾಡಲಾಗಿದೆ ;

(ಈ) ಬಾಕಿ ಇರುವ ಬೆಳೆಹಾನಿ ಪರಿಹಾರ ಮೊತ್ತ ಎಷ್ಟು ; ಯಾವಾಗ ಬಿಡುಗಡೆ ಮಾಡಲಾಗುವುದು ? (ಸಂಪೂರ್ಣ ವಿವರ ಒದಗಿಸುವುದು)

# ಯೋಜನೆ

**ಶ್ರೀ ವೇದವ್ಯಾಸ್ ಕಾಮತ್ ಡಿ (ಮಂಗಳೂರು ನಗರ ದಕ್ಷಿಣ) :–**

೧೭೮ (೪೨೭) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಮೀನುಗಾರರಿಗಾಗಿ ಪ್ರಧಾನ ಮಂತ್ರಿ ಮತ್ಸ್ಯ ಸಂಪದಾ ಯೋಜನೆ (PMMSY) ಹಾಗೂ ರಾಷ್ಟ್ರೀಯ ಮೀನುಗಾರಿಕೆ ಅಭಿವೃದ್ಧಿ ಮಂಡಳಿ (NFDB) ಯಿಂದ ಗಂಭೀರ ಸಮುದ್ರ ಮೀನುಗಾರಿಕಾ ನೌಕೆಗಳ ಖರೀದಿಗೆ ಸರ್ಕಾರ ನೀಡುತ್ತಿರುವ ಅನುದಾನ ಮತ್ತು ಸಹಾಯಧನ ಎಷ್ಟು ; (ಸಮಗ್ರ ಮಾಹಿತಿ ಒದಗಿಸುವುದು)

(ಆ) ಈ ಯೋಜನೆಗಳ ಲಾಭಗಳನ್ನು ಪಡೆಯಲು ಮೀನುಗಾರರು ಅನುಸರಿಸಬೇಕಾದ ವಿಧಾನ ಹಾಗೂ ಅರ್ಹತಾ ಷರತ್ತುಗಳು ಯಾವುವು ;

(ಇ) ಕರ್ನಾಟಕದಲ್ಲಿ "ಮತ್ಸ್ಯಸಿರಿ" ಯೋಜನೆಯಡಿಯಲ್ಲಿ ಈವರೆಗೆ ಎಷ್ಟು ಗಂಭೀರ ಸಮುದ್ರ ನೌಕೆಗಳಿಗೆ ಸಹಾಯಧನ ನೀಡಲಾಗಿದೆ ; (ವಿವರ ಒದಗಿಸುವುದು)

(ಈ) PMMSY ಯಡಿಯಲ್ಲಿ ಕರ್ನಾಟಕದ ಮೀನುಗಾರರಿಗೆ NFDB ಮೂಲಕ ನೌಕೆ ಖರೀದಿಗೆ ನೀಡಲಾದ ಕೇಂದ್ರದ ಅನುದಾನದ ಪ್ರಮಾಣ ಎಷ್ಟು;

(ಉ) ಟ್ಯೂನಾ ಮೀನುಗಾರಿಕೆಗೆ ಸಂಬಂಧಿಸಿದ NFDB ಯೋಜನೆಗೆ ಅರ್ಜಿ ಸಲ್ಲಿಸಲು ಮೀನುಗಾರರು ಯಾವ ಪ್ರಕ್ರಿಯೆ ಅನುಸರಿಸಬೇಕು ; ಈ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಹಾಗೂ ಅನುಮೋದನೆ ಪಡೆಯಲು ಲಭ್ಯವಿರುವ ಜಿಲ್ಲಾವಾರು ಸಂಪರ್ಕ ಕಛೇರಿಗಳಾವುವು ; (ವಿವರ ಒದಗಿಸುವುದು)

(ಊ) ಈ ಯೋಜನೆಗಳ ಲಾಭ ಪಡೆಯುವಲ್ಲಿ ಮೀನುಗಾರರಿಗೆ ಎದುರಾಗುತ್ತಿರುವ ಪ್ರಮುಖ ಸಮಸ್ಯೆಗಳು ಅಥವಾ ತಾಂತ್ರಿಕ ಅಡೆತಡೆಗಳು ಯಾವುವು ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## SH–೧೨೬ ರಸ್ತೆ ಸುಧಾರಣೆ

**ಶ್ರೀ ಶರಣಗೌಡ ಕಂದಕೂರ್ (ಗುರ್‌ಮಿಠ್‌ಕಲ್) :–**

೧೭೯ (೩೭೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಿನಾಂಕ:೧೮.೦೨.೨೦೧೩ ರಂದು Improvements to SH-126 A.P Border phutpak- Gurmitkal- Handriki cross- Bheemanahalli Chittapur Dhandoti via Gulbarga towards Hyderabad connecting to SH. (Selected stretches) (job No.CRF-KNT-2013-1367) ಕಾಮಗಾರಿಗೆ ಸಂಬಂಧಿಸಿದಂತೆ ಮೆ:ರಾಜದೀಪ್ ಬಿಲ್ಡ್ ಕಾನ್ ಪ್ರೈ.ಲಿ., ಅಹಮದ್‌ನಗರ ಇವರ ಬಾಕಿ ಉಳಿದ ಕಾಮಗಾರಿಯನ್ನು ಪೂರ್ಣಗೊಳಿಸಲು ವಿಫಲರಾಗಿರುವ ಕಾರಣ ಗುತ್ತಿಗೆಯನ್ನು ರದ್ದುಪಡಿಸಲಾಗಿದೆಯೇ ;

(ಆ) ರದ್ದುಪಡಿಸಿದ್ದಲ್ಲಿ, ಈ ಗುತ್ತಿಗೆದಾರರ ಮೇಲೆ ಸರ್ಕಾರ ಕೈಗೊಂಡ ಕಾನೂನು ಕ್ರಮಗಳೇನು ; (ವಿವರ ನೀಡುವುದು)

(ಇ) ಈ ಬಗ್ಗೆ ಸಂಬಂಧಪಟ್ಟ ಸ್ಥಳೀಯ ಜನಪ್ರತಿನಿಧಿಗಳಿಂದ ಸಾರ್ವಜನಿಕರಿಂದ ಹಲವಾರು ಬಾರಿ ಮನವಿ ಮಾಡಿದ್ದರೂ ಕೂಡ ಕಾಮಗಾರಿಯನ್ನು ಪೂರ್ಣಗೊಳಿಸದೇ ಇರುವುದರಿಂದ

ಉಳಿಕೆ ಕಾಮಗಾರಿಯನ್ನು ನಿರ್ವಹಿಸಲು ಟೆಂಡರ್ ಪ್ರಕ್ರಿಯೆ ಮಾಡಲಾಗಿದೆಯೇ ; (ಟೆಂಡರ್ ಪ್ರಕ್ರಿಯೆ ಮಾಡಿದ್ದಲ್ಲಿ ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ರಸ್ತೆ ಸುಧಾರಣೆಗೆ ಇಲ್ಲಿಯವರೆಗೂ ಬಿಡುಗಡೆಯಾದ ಅನುದಾನ ಎಷ್ಟು ಬಾಕಿ ಉಳಿದ ಅನುದಾನ ಎಷ್ಟು ; ಈ ಟೆಂಡರ್ ಪ್ರಕ್ರಿಯ ನಂತರ ಮೊದಲನೆ ಹಂತದಲ್ಲಿ ಬಿಡುಗಡೆಯಾಗುವ ಅನುದಾನವೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಶಕ್ತಿ ಯೋಜನೆ

**ಶ್ರೀ ಶರಣಗೌಡ ಕಂದಕೂರ್ (ಗುರ್‌ಮಿಠ್‌ಕಲ್) :–**

೧೮೦ (೩೭೯) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜಾರಿಗೆ ತಂದಿರುವ ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಉಚಿತ ಬಸ್ ಸೇವೆಯಿಂದ ವಿದ್ಯಾರ್ಥಿಗಳಿಗೆ ಮತ್ತು ವಯೋ ವೃದ್ಧರಿಗೆ ಬಸ್‌ಗಳಲ್ಲಿ ಸ್ಥಳಾವಕಾಶ ಲಭ್ಯವಾಗದೇ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ತೊಂದರೆಯನ್ನು ಸರಿದೂಗಿಸಲು ಶಾಲಾ–ಕಾಲೇಜು ವಿದ್ಯಾರ್ಥಿಗಳಿಗೆ ಮತ್ತು ವಯೋ ವೃದ್ಧರಿಗೆ ಅನುಕೂಲವಾಗುವಂತೆ ಹೆಚ್ಚುವರಿ ಬಸ್‌ಗಳನ್ನು ಸಂಚರಿಸಲು ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆಯೇ ;

(ಇ) ಹಾಗಿದ್ದಲ್ಲಿ, ವಿದ್ಯಾರ್ಥಿಗಳ ಹಾಗೂ ವಯೋ ವೃದ್ಧರ ಸಮಸ್ಯೆಯನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಪ್ರಸ್ತುತ ಈ ಸಾಲಿನಲ್ಲಿ ಯಾದಗಿರಿ ಜಿಲ್ಲೆಯ ಗುರುಮಿಠಕಲ್ ತಾಲ್ಲೂಕು ಘಟಕಕ್ಕೆ ಹೊಸ ಬಸ್‌ಗಳನ್ನು ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಉ) ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಬಸ್ಸುಗಳನ್ನು ನೀಡಲಾಗುತ್ತದೆ ?

## ಜಿ–೨ ವಸತಿ ನಿಲಯಗಳು

**ಶ್ರೀ ಶರಣಗೌಡ ಕಂದಕೂರ್ (ಗುರ್‌ಮಿಠ್‌ಕಲ್) :–**

೧೮೧ (೩೮೦) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುರ್‌ಮಿಠ್‌ಕಲ್ ಪುರಸಭೆ ವ್ಯಾಪ್ತಿಯಲ್ಲಿ ಬರುವ ಅಲೆಮಾರಿ ಭಿಕ್ಷುಕ ಜನಾಂಗದ ಬಡಾವಣೆಯಲ್ಲಿರುವ ವಸತಿ ನಿಲಯಗಳು ಸುಮಾರು ವರ್ಷಗಳಿಂದ ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಅವುಗಳ ದುರಸ್ತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಬಡಾವಣೆಯು ವಾಸಿಸಲು ಯೋಗ್ಯವಿಲ್ಲವೆಂದು ತಾಲ್ಲೂಕಿನ ದಂಡಾಧಿಕಾರಿ/ಪುರಸಭೆ ಮುಖ್ಯಾಧಿಕಾರಿಗಳು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುವುದು ನಿಜವೇ ;

(ಈ) ಜಿ–೨ ಗೃಹಗಳ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಉ) ಹಾಗಿದ್ದಲ್ಲಿ, ಸರ್ಕಾರವು ಜಿ–೨ ಗೃಹಗಳ ನಿರ್ಮಾಣ ಮಾಡಲು ಮೀಸಲಿಟ್ಟಿರುವ ಅನುದಾನವೆಷ್ಟು ;

(ಊ) ಯಾವ ಕಾಲಮಿತಿಯಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಜಂಕ್ಷನ್ ನಿರ್ಮಿಸುವುದು

**ಶ್ರೀ ಶರಣಗೌಡ ಕಂದಕೂರ್ (ಗುರ್‌ಮಿಠ್‌ಕಲ್) :–**

೧೮೨ (೩೮೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಾದಗಿರಿಯಿಂದ ಹೈದ್ರಾಬಾದ್‌ಗೆ ಹೋಗುವ ಎನ್.ಎಚ್ ೧೫೦ ರಸ್ತೆಯಲ್ಲಿ ಯಾದಗಿರಿಯಿಂದ ಸುಮಾರು ೮೬ ಕಿ.ಮೀ ದೂರದಲ್ಲಿ ರಾಮಸಮುದ್ರ ಗ್ರಾಮದಲ್ಲಿ ಜಂಕ್ಷನ್ ಸುಧಾರಣೆಯ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಈ ಜಂಕ್ಷನ್ ಸುಧಾರಣೆಯಿಂದ ಗುರ್‌ಮಿಠಕಲ್ ತಾಲ್ಲೂಕು ಸಂಪರ್ಕ ಮಾಡುವ ವಾಹನಗಳ ಸುಗಮ ಮತ್ತು ಸುರಕ್ಷಿತ ಸಂಚಾರ ಚಾಲನೆಗಾಗಿ ರಸ್ತೆ ಬಳಕೆದಾರರ ಸುರಕ್ಷತೆಯ ಹಂತದಿಂದ ಜಂಕ್ಷನ್ ಸುಧಾರಣೆ ಅಗತ್ಯವಾಗಿರುವುದರಿಂದ ಯಾವ ಕಾಲಮಿತಿಯಲ್ಲಿ ಈ ಜಂಕ್ಷನ್ ಸುಧಾರಣೆ ಮಾಡಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಅನುದಾನ ಬಿಡುಗಡೆ

**ಶ್ರೀ ಶಿವಲಿಂಗೇಗೌಡ ಕೆ .ಎಂ (ಅರಸೀಕೆರೆ) :–**

೧೮೩ (೩೩೦) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅರಸೀಕೆರೆ ವಿಧಾನಸಭಾ ಕ್ಷೇತ್ರದಲ್ಲಿನ ಮುಜರಾಯಿ ವ್ಯಾಪ್ತಿಗೆ ಬರುವ ದೇವಸ್ಥಾನಗಳೆಷ್ಟು ; (ಗ್ರೇಡ್‌ವಾರು, ಹೆಸರು, ವಿಳಾಸ ಸಮೇತ ವಿವರ ನೀಡುವುದು)

(ಆ) ಈ ದೇವಸ್ಥಾನಗಳಲ್ಲಿ ಶಿಥಿಲಾವಸ್ಥೆಯಲ್ಲಿರುವ ದೇವಸ್ಥಾನಗಳು ಯಾವುವು ;

(ಇ) ಹಾಗಿದ್ದಲ್ಲಿ, ಅವುಗಳ ಜೀರ್ಣೋದ್ಧಾರಕ್ಕೆ ಸರ್ಕಾರ ಅನುದಾನ ಬಿಡುಗಡೆ ಮಾಡುವ ಉದ್ದೇಶ ಇದೆಯೇ ;

(ಈ) ಇದ್ದಲ್ಲಿ, ಯಾವಾಗ ಬಿಡುಗಡೆ ಮಾಡಲಾಗುವುದು ? (ಮಾಹಿತಿ ನೀಡುವುದು)

## ವಸತಿ ಯೋಜನೆ

**ಶ್ರೀ ಶಿವಲಿಂಗೇಗೌಡ ಕೆ .ಎಂ (ಅರಸೀಕೆರೆ) :-**

೧೮೪ (೩೩೧) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೌಸಿಂಗ್ ಫಾರ್ ಆಲ್ ಯೋಜನೆಯಡಿ ಅರಸೀಕೆರೆ ನಗರದಲ್ಲಿ ಎಷ್ಟು ಮನೆಗಳನ್ನು ನಿರ್ಮಿಸಲಾಗುತ್ತಿದೆ ;

(ಆ) ಮನೆ ನಿರ್ಮಾಣ ಕಾಮಗಾರಿ ಯಾವಾಗ ಪ್ರಾರಂಭವಾಯಿತು ; ಪ್ರಸ್ತುತ ಎಷ್ಟು ಮನೆಗಳು ವಿತರಣೆಗೆ ಸಿದ್ಧವಿದೆ ; (ವಿವರ ನೀಡುವುದು)

(ಇ) ಮನೆ ನಿರ್ಮಾಣ ಕಾಮಾಗಾರಿ ಕುಂಠಿತಗೊಳ್ಳಲು ಕಾರಣವೇನು ; ಯಾವಾಗ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು ? (ಸಂಪುರ್ಣ ಮಾಹಿತಿ ನೀಡುವುದು)

## ಬಸ್ ಒದಗಿಸುವುದು

**ಶ್ರೀ ಶಿವಲಿಂಗೇಗೌಡ ಕೆ .ಎಂ (ಅರಸೀಕೆರೆ) :–**

೧೮೫ (೩೩೨) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ಎಷ್ಟು ಹೊಸ ಬಸಗಳನ್ನು ಖರೀದಿ ಮಾಡಲು ಉದ್ದೇಶಿಸಲಾಗಿದೆ, ಅವುಗಳನ್ನು ಯಾವಾಗ ಡಿಪೋಗಳಿಗೆ ನೀಡಲಾಗುವುದು ;

(ಆ) ಯಾವ–ಯಾವ ವಿಭಾಗಗಳಿಗೆ ಎಷ್ಟು ಬಸ್ ನೀಡಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## 'ಡಿ' ದರ್ಜೆ ಸಿಬ್ಬಂದಿಗಳು ಮತ್ತು ಔಷಧಗಳ ಕೊರತೆ

**ಶ್ರೀ ಶ್ರೀನಿವಾಸ ಜಿ .ಹೆಚ್ (ತರೀಕೆರೆ) :–**

೧೮೬ (೧೭೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತರೀಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ಕೆಲವು ಪಶು ಆಸ್ಪತ್ರೆ/ ಪಶು ಚಿಕಿತ್ಸಾ ಕೇಂದ್ರಗಳಲ್ಲಿ 'ಡಿ' ದರ್ಜೆ ಸಿಬ್ಬಂದಿಗಳು ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಗ್ರಾಮೀಣ ಭಾಗದ ಪಶು ಆಸ್ಪತ್ರೆ/ಪಶು ಚಿಕಿತ್ಸಾ ಕೇಂದ್ರಗಳಲ್ಲಿ ಕುರಿ, ಮೇಕೆ ಸೇರಿದಂತೆ ಇನ್ನಿತರ ಜಾನುವಾರುಗಳಿಗೆ ಅಗತ್ಯವಾದ/ ಚಿಕಿತ್ಸೆಗೆ ಬೇಡಿಕೆಗಳಿಗನುಗುಣವಾಗಿ ಔಷಧಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ಬೇಡಿಕೆಗಳಿಗನುಗುಣವಾಗಿ ಔಷಧಗಳನ್ನು ಪೂರೈಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ವಸತಿ ಯೋಜನೆ

**ಶ್ರೀ ಶ್ರೀನಿವಾಸ ಜಿ .ಹೆಚ್ (ತರೀಕೆರೆ) :–**

೧೮೭ (೧೮೦) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತರೀಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ಗ್ರಾಮ ಪಂಚಾಯತಿಗಳು ಹಾಗೂ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ವಸತಿ ರಹಿತರು ಮತ್ತು ನಿವೇಶನ ರಹಿತರ ಶಾಶ್ವತ ಪಟ್ಟಿಯನ್ನು ತಯಾರಿಸಲಾಗಿದೆಯೇ ; ನಿವೇಶನ ರಹಿತರ ಪಟ್ಟಿಗನುಗುಣವಾಗಿ ವಸತಿ ಯೋಜನೆಗೆ ಸರ್ಕಾರಿ ಜಮೀನನ್ನು ಕಾಯ್ದಿರಿಸಿ ನಿವೇಶನಗಳನ್ನು ಹಂಚಿಕೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಕಳೆದ ೩ ವರ್ಷಗಳಲ್ಲಿ ತರೀಕೆರೆ ವಿಧಾನಸಭಾ ಕ್ಷೇತ್ರಕ್ಕೆ ವಿವಿಧ ವಸತಿ ಯೋಜನೆಗಳಡಿ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ ; (ಯೋಜನಾವಾರು ವಿವರ ಒದಗಿಸುವುದು)

(ಇ) ಮನೆ ನಿರ್ಮಾಣಕ್ಕೆ ಬಳಸುವ ಸಾಮಗ್ರಿಗಳ ದರ ದಿನೇ–ದಿನೇ ಏರಿಕೆಯಾಗುತ್ತಿದ್ದು, ಪ್ರಸ್ತುತ ವಿವಿಧ ಯೋಜನೆಗಳಡಿ ಮನೆ ನಿರ್ಮಾಣಕ್ಕೆ ನೀಡುತ್ತಿರುವ ಸಹಾಯಧನ ತೀರಾ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಹಾಯಧನದ ಮೊತ್ತವನ್ನು ಹೆಚ್ಚಿಸಲು ಸರ್ಕಾರ ಕ್ರಮಕೈಗೊಳ್ಳುವುದೇ ?

## ಹಕ್ಕು ಪತ್ರಗಳ ವಿತರಣೆ

**ಶ್ರೀ ಶ್ರೀನಿವಾಸ ಜಿ .ಹೆಚ್ (ತರೀಕೆರೆ) :-**

೧೮೮ (೧೮೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸರ್ಕಾರಿ/ಖಾಸಗಿ ಜಮೀನುಗಳಲ್ಲಿ ನಿರ್ಮಾಣಗೊಂಡಿರುವ ದಾಖಲೆ ರಹಿತ ಜನವಸತಿ ಪ್ರದೇಶಗಳನ್ನು ಕಂದಾಯ ಗ್ರಾಮ/ಗ್ರಾಮದ ಭಾಗವಾಗಿ ಪರಿವರ್ತಿಸಿ ಅಲ್ಲಿಯ ನಿವಾಸಿಗಳಿಗೆ ವಾಸದ ಹಕ್ಕು ಪತ್ರ ನೀಡುವ ಕಾರ್ಯಕ್ರಮದಡಿ ಇದುವರೆವಿಗೂ ಎಷ್ಟು ಹಕ್ಕು ಪತ್ರಗಳನ್ನು ವಿತರಿಸಲಾಗಿದೆ ;

(ಆ) ತರೀಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ತರೀಕೆರೆ ಮತ್ತು ಅಜ್ಜಂಪುರ ತಾಲ್ಲೂಕುಗಳಲ್ಲಿ ಈಗಾಗಲೇ ಗುರುತಿಸಲಾಗಿರುವ ದಾಖಲೆ ರಹಿತ ಜನವಸತಿ ಪ್ರದೇಶಗಳನ್ನು ಯಾವ ಕಾಲಮಿತಿಯಲ್ಲಿ ಕಂದಾಯ ಗ್ರಾಮ/ಉಪ ಗ್ರಾಮಗಳನ್ನಾಗಿ ರಚಿಸಿ ಅಲ್ಲಿಯ ನಿವಾಸಿಗಳಿಗೆ ಹಕ್ಕು ಪತ್ರಗಳನ್ನು ವಿತರಿಸಲಾಗುವುದು ?

## ಸೇತುವೆಗಳ ನಿರ್ಮಾಣ

**ಶ್ರೀ ಶ್ರೀನಿವಾಸ ಜಿ .ಹೆಚ್ (ತರೀಕೆರೆ) :-**

೧೮೯ (೧೮೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತರೀಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹಾದು ಹೋಗಿರುವ ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಹೆದ್ದಾರಿಗಳಲ್ಲಿ ಕಂಡು ಬರುವ ಸೇತುವೆಗಳು ಎಷ್ಟು ; ಸದರಿ ಸೇತುವೆಗಳಲ್ಲಿ ಈಗಾಗಲೇ ಶಿಥಿಲಗೊಂಡು ಅಪಾಯದ ಅಂಚಿನಲ್ಲಿರುವ ಸೇತುವೆಗಳೆಷ್ಟು; (ವಿವರ ಒದಗಿಸುವುದು)

(ಆ) ಶಿಥಿಲಗೊಂಡು ಅಪಾಯದ ಅಂಚಿನಲ್ಲಿರುವ ಸೇತುವೆಗಳನ್ನು ಮರು ನಿರ್ಮಾಣ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಪಶುಪಾಲನೆ

**ಶ್ರೀ ಶ್ರೀನಿವಾಸ ಎನ್ .ಟಿ (ಕೂಡ್ಲಿಗಿ) :–**

೧೯೦ (೫೩) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೂಡ್ಲಿಗಿ ವಿಧಾನಸಭಾ ಕ್ಷೇತ್ರದಲ್ಲಿ ಪಶುಪಾಲನೆಯನ್ನೆ ಹೆಚ್ಚಾಗಿ ಅವಲಂಭಿಸಿದ್ದು ಈ ಬುಡಕಟ್ಟು ಜನಗಳಿಗೆ ಪಶುಸಂಗೋಪನೆ ಇಲಾಖೆಯಿಂದ ಕಳೆದ ಎರಡು ವರ್ಷಗಳಲ್ಲಿ ಕೈಗೊಂಡಿರುವ ಕಾರ್ಯಕ್ರಮಗಳಾವುವು ; (ಅಂಕಿ–ಅಂಶಗಳ ವಿವರ ನೀಡುವುದು)

(ಆ) ಈ ಭಾಗದ ಬುಡಕಟ್ಟು ಸಂಸ್ಕೃತಿಯ ದೇಶಿಯ ಕಿಲಾರಿ ಇತರೆ ತಳಿಯ ಎತ್ತುಗಳಿರುವ ಕೂಡ್ಲಿಗಿ ಕ್ಷೇತ್ರದಲ್ಲಿ “ದೇಸಿ ತಳಿ ಸಂವರ್ಧನ ಕೇಂದ್ರ” ವನ್ನು ಸ್ಥಾಪಿಸಲು ಸರ್ಕಾರ ಚಿಂತಿಸಿದೆಯೇ ? (ವಿವರ ನೀಡುವುದು)

## ಬಸ್ ಡಿಪೋ ಘಟಕ

**ಶ್ರೀ ಶ್ರೀನಿವಾಸ ಎನ್ .ಟಿ (ಕೂಡ್ಲಿಗಿ) :–**

೧೯೧ (೫೪) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯನಗರ ಜಿಲ್ಲೆಯ ಕೂಡ್ಲಿಗಿ ಬಸ್ ಡಿಪೋ ಕಛೇರಿ ಮತ್ತು ಇತರೆ ಕಟ್ಟಡವು ಅತ್ಯಂತ ಹಳೆಯದಾಗಿದ್ದಲ್ಲದೆ, ರಾಜಧಾನಿ

ಬೆಂಗಳೂರಿಗೆ ರಾಷ್ಟ್ರೀಯ ಹೆದ್ದಾರಿ–೫೦ರಲ್ಲಿ ಬರುವ ಈ ಘಟಕಕ್ಕೆ ಬಸ್‌ಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದಯೇ ;

(ಆ) ಬಂದಿದ್ದಲ್ಲಿ, ಕೂಡ್ಲಿಗಿ ಪಟ್ಟಣದ ಬಸ್ ನಿಲ್ದಾಣವನ್ನು ಮೇಲ್ದರ್ಜೆಗೇರಿಸಿ ಅಭಿವೃದ್ಧಿಪಡಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವ ಯಾವ ಕಾಲಮಿತಿಯಲ್ಲಿ ಈ ಕಟ್ಟಡವನ್ನು ಮೇಲ್ದರ್ಜೆಗೇರಿಸಲು ಕಾಮಗಾರಿಯನ್ನು ಕೈಗೊಳ್ಳಲಾಗುವುದು ; (ವಿವರ ನೀಡುವುದು)

(ಇ) ಈ ಘಟಕದ ವ್ಯಾಪ್ತಿಯಲ್ಲಿ ಬಸ್‌ಗಳ ಕೊರತೆಯಿದ್ದು, ಯಾವ ಕಾಲಮಿತಿಯಲ್ಲಿ ಹೆಚ್ಚಿನ ಬಸ್‌ಗಳನ್ನು ಒದಗಿಸಲಾಗುವುದು ?

## ದೇವಸ್ಥಾನಗಳ ಜೀರ್ಣೋದ್ಧಾರ

**ಶ್ರೀ ಶ್ರೀನಿವಾಸ ಎನ್ .ಟಿ (ಕೂಡ್ಲಿಗಿ) :–**

೧೯೨ (೫೫) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯನಗರ ಜಿಲ್ಲೆಯ ಕೂಡ್ಲಿಗಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿರುವ ಇತಿಹಾಸ ಪ್ರಸಿದ್ಧ ದೇವಸ್ಥಾನಗಳು ಎಷ್ಟು; ಅವು ಯಾವುವು ; ಈ ದೇವಸ್ಥಾನಗಳಲ್ಲಿ ಇದುವರೆಗೂ ಎಷ್ಟು ದೇವಸ್ಥಾನಗಳನ್ನು ಜೀರ್ಣೋದ್ಧಾರ ಮಾಡಲಾಗಿದೆ ; ಅವು ಯಾವುವು ; (ವಿವರ ನೀಡುವುದು)

(ಆ) ಉಳಿದ ದೇವಸ್ಥಾನಗಳನ್ನು ಜೀರ್ಣೋದ್ಧಾರ ಮಾಡುವ ಪ್ರಸ್ತಾವನೆ ಇದೆಯೇ ; ಇದ್ದಲ್ಲಿ, ಯಾವ ಯಾವ ದೇವಸ್ಥಾನಗಳನ್ನು ಮಾಡಲು ನಿರ್ಧರಿಸಲಾಗಿದೆ ; ಯಾವ ಕಾಲಮಿತಿಯಲ್ಲಿ ಉಳಿದ ದೇವಸ್ಥಾನಗಳನ್ನು ಜೀರ್ಣೋದ್ಧಾರ ಮಾಡಲಾಗುವುದು ;

(ಇ) ಕೂಡ್ಲಿಗಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಬರುವ ಬುಡಕಟ್ಟು ಪರಂಪರೆಯ ದೇವರ ಎತ್ತುಗಳನ್ನು ಕಾಯುವ, ಬರಿಗಾಲಲ್ಲಿ ನಡೆಯುವ ಪೂಜಾರಿಗಳಿಗೂ ಕೂಡ ಮುಜರಾಯಿ ದೇವಸ್ಥಾನದ ಪುರೋಹಿತರಿಗೆ ನೀಡುವ ಸಹಾಯಧನದ ಮಾದರಿಯಲ್ಲಿ ದೇವರ ಎತ್ತುಗಳನ್ನು ಪೋಷಿಸುವ ಕಿಲಾರಿಗಳಿಗೂ ಮುಜರಾಯಿ ಇಲಾಖೆಯಿಂದ ಸಹಾಯಧನವನ್ನು ನೀಡಲು ಸರ್ಕಾರಕ್ಕಿರುವ ತೊಂದರೆಗಳೇನು ? ( ಈ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು)

## ಸರ್ವಿಸ್ ರಸ್ತೆಯ ಕಾಮಗಾರಿ

**ಶ್ರೀ ಶ್ರೀನಿವಾಸ ಎನ್ .ಟಿ (ಕೂಡ್ಲಿಗಿ) :–**

೧೯೩ (೫೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೂಡ್ಲಿಗಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕಾನಾಹೊಸಹಳ್ಳಿ ಬಳಿಯ ರಾ.ಹೆ.೫೦ರ ಸರ್ವಿಸ್ ರಸ್ತೆಯ ಅವೈಜ್ಞಾನಿಕ ಕಾಮಗಾರಿಯಿಂದ ಪಕ್ಕದ ಪರಿಶಿಷ್ಟ ಜಾತಿ ಕಾಲೋನಿ ಹತ್ತಿರ ಕೊಳಚೆ ನೀರು ಸಂಗ್ರಹಗೊಂಡು ಕಾಲೋನಿಯು ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರವು ಈ ತೊಂದರೆಯನ್ನು ಸರಿಪಡಿಸಲು ಕೈಗೊಂಡ ಕ್ರಮವೇನು ; ಯಾವ ಕಾಲಮಿತಿಯಲ್ಲಿ ಈ ಸಮಸ್ಯೆಯನ್ನು ಇತ್ಯರ್ಥಪಡಿಸಲಾಗುವುದು ?

## ವಸತಿ ಯೋಜನೆ

**ಶ್ರೀ ಶ್ರೀನಿವಾಸ ಎನ್ .ಟಿ (ಕೂಡ್ಲಿಗಿ) :–**

೧೯೪ (೨೨೩) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯನಗರ ಜಿಲ್ಲೆಯ ಕೂಡ್ಲಿಗಿ ವಿಧಾನಸಭಾ ಕ್ಷೇತ್ರದಲ್ಲಿ ವಸತಿ ರಹಿತ ಹೊಸ ಕುಟುಂಬಗಳ ಸಂಖ್ಯೆ ಎಷ್ಟು ; ವಸತಿ ರಹಿತರಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗಗಳ ಸಂಖ್ಯೆ ಹೆಚ್ಚಾಗಿದ್ದು ವಸತಿ ಇಲಾಖೆಯಿಂದ ಸದರಿ ಕುಟುಂಬಗಳಿಗೆ ನಿವೇಶನ ಹಾಗೂ ಮನೆಗಳನ್ನು ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಈ ಕ್ಷೇತ್ರದ ವ್ಯಾಪ್ತಿಯಲ್ಲಿ ವಿವಿಧ ವಸತಿ ಯೋಜನೆಗಳಡಿ ಮಂಜೂರಾದ ಆಶ್ರಯ ಮನೆಗಳು ತಾಂತ್ರಿಕ ತೊಂದರೆ (NOT OK)ಗಳಿಂದಾಗಿ ಫಲಾನುಭವಿಗಳು ಈ ಮನೆಗಳನ್ನು ಪೂರ್ಣಗೊಳಿಸದೇ ಇರುವುದರಿಂದ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಈ ಮನೆಗಳ ತಾಂತ್ರಿಕ ದೋಷಗಳು ಹಾಗೂ ದುರಸ್ತಿಗಳನ್ನು ಸರಿಪಡಿಸಿ ಫಲಾನುಭವಿಗಳಿಗೆ ವಿತರಿಸಲಾಗುವುದು ?

## ನಾಡ ಕಛೇರಿಗಳ ಮಂಜೂರಾತಿ

**ಶ್ರೀ ಸಮೃದ್ಧಿ ವಿ ಮಂಜುನಾಥ್ (ಮುಳಬಾಗಿಲು) :–**

೧೯೫ (೪೪೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ: ೪೨೨ ರಲ್ಲಿ ರೈತರ ಮತ್ತು ಸಾರ್ವಜನಿಕರ ಅನುಕೂಲಕ್ಕಾಗಿ

ಸಮರ್ಪಕ ಸೌಲಭ್ಯಗಳನ್ನೊಳಗೊಂಡ ಹೊಸ ೧೦೦ ನಾಡ ಕಛೇರಿಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆಯೆಂದು ಸನ್ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಮುಳಬಾಗಿಲು ತಾಲ್ಲೂಕು ಶ್ರೀ ನಂಜುಂಡಪ್ಪ ವರದಿ ಪ್ರಕಾರ ಅತಿ ಹಿಂದುಳಿದ ತಾಲ್ಲೂಕಾಗಿದ್ದು , ತಾಲ್ಲೂಕಿನ ವ್ಯಾಪ್ತಿಗೆ ಬರುವ ದುಗ್ಗಸಂದ್ರ ಹಾಗೂ ಅವಣಿ ಹೋಬಳಿಯ ನಾಡ ಕಛೇರಿಗಳಿಗೆ ಸ್ವಂತ ಕಟ್ಟಡ ಇಲ್ಲದೇ ಬೇರೊಂದು ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಈ ಕಟ್ಟಡದಲ್ಲಿ ಸ್ಥಳಾವಕಾಶದ ಕೊರತೆಯಿರುವುದು ಸಾರ್ವಜನಿಕರು ರೈತರು ಹಾಗೂ ಇಲ್ಲಿನ ಸಿಬ್ಬಂದಿಗಳಿಗೆ ತೀರಾ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ದುಗ್ಗಸಂದ್ರ ಹಾಗೂ ಅವಣೆ ಹೋಬಳಿಗಳಿಗೆ ಹೊಸ ನಾಡ ಕಛೇರಿಗಳನ್ನು ನಿರ್ಮಾಣ ಮಾಡಲು ರೂ.೨೦೦.೦೦ ಲಕ್ಷ ಅನುದಾನ ನೀಡುವಂತೆ ಕೋರಿ ದಿನಾಂಕ:೨೮.೦೫.೨೦೨೫ರಂದು ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ , ನಾಡ ಕಛೇರಿಗಳನ್ನು ಮಂಜೂರು ಮಾಡುವ ಪ್ರಸ್ತಾವನೆಗೆ ಸರ್ಕಾರ ಕ್ರಮ ಕೈಗೊಳ್ಳಲಾಗಿದೆಯೇ ; ಹಾಗಿದ್ದಲ್ಲಿ, ಯಾವ ಕಾಲ ಮಿತಿಯೊಳಗೆ ಮಂಜೂರು ಮಾಡಲಾಗುವುದು ?

(ಮಾಹಿತಿ ನೀಡುವುದು)

## ಉಪ ನೋಂದಣಾಧಿಕಾರಿಗಳ ಕಛೇರಿ ನಿರ್ಮಾಣ

**ಶ್ರೀ ಸಮೃದ್ಧಿ ವಿ ಮಂಜುನಾಥ್ (ಮುಳಬಾಗಿಲು) :–**

೧೯೬ (೪೪೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲೆ , ಮುಳಬಾಗಿಲು ತಾಲ್ಲೂಕಿನಲ್ಲಿರುವ ಉಪ ನೋಂದಣಾಧಿಕಾರಿಗಳ ಕಛೇರಿಯು ೧೨೫ ವರ್ಷಗಳ ಹಳೆಯ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಕಟ್ಟಡದಲ್ಲಿ ಸಿಬ್ಬಂದಿಗಳು ಕಾರ್ಯನಿರ್ವಹಿಸಲು ಹಾಗೂ ಕಛೇರಿಗೆ ಬರುವ ಸಾರ್ವಜನಿಕರುಗಳಿಗೆ ತೀರಾ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಹೊಸ ಕಟ್ಟಡ ನಿರ್ಮಾಣ ಮಾಡಲು ಅಗತ್ಯ ನಿವೇಶನವನ್ನು ಗುರುತಿಸಿ ಹೊಸ ಕಟ್ಟಡ ನಿರ್ಮಾಣ ಮಾಡಲು ಅಗತ್ಯ ಅನುದಾನ ನೀಡಲು ಕ್ರಮ ಕೈಗೊಳ್ಳಲಾಗಿದೆಯೇ ;

(ಈ) ಕ್ರಮ ಕೈಗೊಂಡಿದ್ದಲ್ಲಿ, ಅದು ಯಾವ ಹಂತದಲ್ಲಿದೆ ; ಯಾವ ಕಾಲಮಿತಿಯೊಳಗೆ ಅನುದಾನ ಬಿಡುಗಡೆ ಮಾಡಿ ಕಾಮಗಾರಿಯನ್ನು ಕೈಗೊಳ್ಳಲಾಗುವುದು ?

## ಕಟ್ಟಡ ನಿರ್ಮಿಸುವುದು

**ಶ್ರೀ ಸಿದ್ದು ಸವದಿ (ತೇರದಾಳ) :–**

೧೯೭ (೧೭೨) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೇರದಾಳ ಮತಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಆಸಂಗಿ ಮತ್ತು ನಾವಲಗೆ ಗ್ರಾಮಗಳಲ್ಲಿ ಪಶುಚಿಕಿತ್ಸಾಲಯ ಕೇಂದ್ರಗಳಿಗೆ ಕಟ್ಟಡ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಪಶುಚಿಕಿತ್ಸಾಲಯ ಕೇಂದ್ರಗಳಿಗೆ ಯಾವಾಗ ಕಟ್ಟಡ ಕಾಮಗಾರಿ ಪ್ರಾರಂಭಿಸಲು ಅನುಮೋದನೆ ನೀಡಲಾಗುವುದು ; (ವಿವರ ಒದಗಿಸುವುದು)

(ಆ) ಹಾಗಿದ್ದಲ್ಲಿ, ಯಾವಾಗ ಪಶುಚಿಕಿತ್ಸಾಲಯ ಕೇಂದ್ರದ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು ? (ಸಂಪೂರ್ಣ ವಿವರ ಒದಗಿಸುವುದು)

## ಅರ್ಜಿಗಳ ವಿಲೇವಾರಿ

**ಶ್ರೀ ಸಿಮೆಂಟ್ ಮಂಜು (ಸಕಲೇಶಪುರ) :-**

೧೯೮ (೩೩೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಕಲೇಶಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಒಟ್ಟು ಬಾಕಿಯಿರುವ ೫೦,೫೩,೫೭,೯೪- c ಹಾಗೂ ೯೪-cc ಅರ್ಜಿಗಳ ಸಂಖ್ಯೆ ಎಷ್ಟು ; (ಪಂಚಾಯತ್ ವಾರು ಮಾಹಿತಿ ನೀಡುವುದು)

(ಆ) ಈ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಒಟ್ಟು ಮಂಜೂರಾಗಿರುವ ೫೦,೫೩,೫೭,೯೪-c ಹಾಗೂ ೯೪-cc ಅರ್ಜಿಗಳು ಎಷ್ಟು; (ಪಂಚಾಯತ್ ವಾರು ಮಾಹಿತಿ ನೀಡುವುದು)

(ಇ) ನಮೂನೆ ೫೦,೫೩,೫೭,೯೪-c ಹಾಗೂ ೯೪-cc ಅರ್ಜಿಗಳು ಇನ್ನೂ ವಿಲೇವಾರಿಯಾಗದೆ ಬಾಕಿಯಿರಲು ಕಾರಣವೇನು ; ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಅನುದಾನ

**ಶ್ರೀ ಸಿಮೆಂಟ್ ಮಂಜು (ಸಕಲೇಶಪುರ) :–**

೧೯೯ (೩೩೫) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಕಲೇಶಪುರ ವಿಧಾನಸಭಾ ಕ್ಷೇತ್ರದಲ್ಲಿರುವ ಒಟ್ಟು ಮುಜರಾಯಿ ಹಾಗೂ ಮುಜರಾಯೇತರ ದೇವಾಲಯಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಕಳೆದ ೨ ವರ್ಷಗಳಿಂದ ಈ ದೇವಾಲಯಗಳ ಜೀರ್ಣೋದ್ಧಾರ ಮತ್ತು ಅಭಿವೃದ್ಧಿ ಕಾಮಗಾರಿಗಳಿಗೆ ಸರ್ಕಾರ ಮೀಸಲಿಟ್ಟಿರುವ ಅನುದಾನವೆಷ್ಟು ;

(ಇ) ಕಳೆದ ೨ ವರ್ಷಗಳಿಂದ ಈ ದೇವಸ್ಥಾನಗಳ ಜೀರ್ಣೋದ್ಧಾರ ಮತ್ತು ಅಭಿವೃದ್ಧಿ ಕಾಮಗಾರಿಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ;

(ಈ) ಸಕಲೇಶಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಒಳಪಟ್ಟು ಶಿಥಿಲಾವಸ್ಥೆಯಲ್ಲಿರುವ ದೇವಾಲಯಗಳ ಅಭಿವೃದ್ಧಿಗೆ ಅನುದಾನ ಬಿಡುಗಡೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಉ) ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಶಿಥಿಲಾವಸ್ಥೆಯಲ್ಲಿರುವ ದೇವಸ್ಥಾನಗಳ ಅಭಿವೃದ್ಧಿಗೆ ಅನುದಾನ ಬಿಡುಗಡೆ ಮಾಡಲಾಗುವುದು ? (ವಿವರ ನೀಡುವುದು)

## ಪಶು ವೈದ್ಯಾಧಿಕಾರಿಗಳ ಮತ್ತು ಸಿಬ್ಬಂದಿಗಳ ಕೊರತೆ

**ಶ್ರೀ ಸಿಮೆಂಟ್ ಮಂಜು (ಸಕಲೇಶಪುರ) :–**

೨೦೦ (೩೩೭) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯ ವ್ಯಾಪ್ತಿಯಲ್ಲಿ ಎಷ್ಟು ಪಶುವೈದ್ಯಕೀಯ ಆಸ್ಪತ್ರೆಗಳಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಪಶು ವೈದ್ಯಕೀಯ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಶು ವೈದ್ಯಾಧಿಕಾರಿ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸಕಲೇಶಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಪಶು ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿ ಹಾಗೂ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಈ ಕ್ಷೇತ್ರ ವ್ಯಾಪ್ತಿಯಲ್ಲಿ ಜಾನುವಾರು ಗಣತೆಗೆ ಅನುಗುಣವಾಗಿ ಪಶುಚಿಕಿತ್ಸಾಲಯ ಹಾಗೂ ಪಶು ಆಸ್ಪತ್ರೆಗಳಿವೆಯೇ ; ಇಲ್ಲದಿದ್ದಲ್ಲಿ, ಹೊಸ ಪಶು ಆಸ್ಪತ್ರೆ/ಪಶು ಚಿಕಿತ್ಸಾಲಯ ಕೇಂದ್ರ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಉ) ಜಾನುವಾರು ಸಾಕಾಣೆಗಾರರಿಗೆ ಸರ್ಕಾರ ಇಲಾಖಾ ವತಿಯಿಂದ ಸಿಗುವ ಸೌಲಭ್ಯಗಳೇನು ;

(ಊ) ಕೇಂದ್ರ ಸರ್ಕಾರದಿಂದ ಪಶು ಇಲಾಖೆಗೆ ವಾರ್ಷಿಕವಾಗಿ ಸಿಗುವ ಅನುದಾನವೆಷ್ಟು ; ಯಾವ ಯಾವ ಸೌಲಭ್ಯಗಳಿಗೆ ಬಳಸಲಾಗುತ್ತಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಸೇತುವೆ ದುರಸ್ತಿ

**ಶ್ರೀ ಸಿಮೆಂಟ್ ಮಂಜು (ಸಕಲೇಶಪುರ) :–**

೨೦೧ (೩೩೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಕಲೇಶಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಲೋಕೋಪಯೋಗಿ ಇಲಾಖೆಗೆ ಒಳಪಡುವ ರಸ್ತೆಗಳಾವುವು ; (ಉದ್ದ–ಅಗಲಗಳೊಂದಿಗೆ ಗ್ರಾಮವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಕ್ಷೇತ್ರ ವ್ಯಾಪ್ತಿಯಲ್ಲಿ ಜಿಲ್ಲಾ ಮುಖ್ಯ ರಸ್ತೆ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸೇರಿದ ರಸ್ತೆಗಳಾವುವು ; (ಸಂಪೂರ್ಣ ವಿವರ ನೀಡುವುದು)

(ಇ) ಕಳೆದ ೨ ವರ್ಷಗಳಲ್ಲಿ ಮೇಲ್ದರ್ಜೆಗೇರಿಸುವ ಲೋಕೋಪಯೋಗಿ ರಸ್ತೆಗಳಾವುವು ;

(ಈ) ಈ ಕ್ಷೇತ್ರದ ಸಕಲೇಶಪುರ ಮತ್ತು ಆಲೂರು ತಾಲ್ಲೂಕಿನ ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಮುಖ್ಯ ರಸ್ತೆಗಳಲ್ಲಿ ಸೇತುವೆಗಳು ಶಿಥಿಲಗೊಂಡು ಸಾರ್ವಜನಿಕರ ಸುಗಮ ಸಂಚಾರಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ದುರಸ್ತಿಗೊಳಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಕಳೆದ ೨ ವರ್ಷಗಳಲ್ಲಿ ಈ ಕ್ಷೇತ್ರದಲ್ಲಿ ಹೊಸ ಸೇತುವೆ ನಿರ್ಮಾಣ ಕಾಮಗಾರಿ ಹಾಗೂ ಸೇತುವೆ ದುರಸ್ತಿಗಳಿಗೆ ಸರ್ಕಾರದಿಂದ ಒದಗಿಸಿದ ಅನುದಾನವೆಷ್ಟು ;

(ಊ) ಯಾವ ಯಾವ ಲೆಕ್ಕ ಶೀರ್ಷಿಕೆಯಡಿಯಲ್ಲಿ ಪ್ರಸ್ತುತ ಕಾಮಗಾರಿ ಕೈಗೊಳ್ಳಲಾಗುತ್ತಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಕುಮ್ಕಿ ಜಮೀನು ಮಂಜೂರಾತಿ

**ಶ್ರೀ ಸುನೀಲ್ ಕುಮಾರ್. ವಿ (ಕಾರ್ಕಳ) :–**

೨೦೨ (೩೫೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ಉಡುಪಿ ಜಿಲ್ಲೆಯಲ್ಲಿ ಲಭ್ಯವಿರುವ ಕುಮ್ಕಿ ಜಮೀನು ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಕುಮ್ಕಿ ಜಮೀನಿನ ವ್ಯಾಪ್ತಿಯಲ್ಲಿ ಎಷ್ಟು ಅಕ್ರಮ ಸಕ್ರಮ ನಮೂನೆ ೫೦/೫೩/೫೭ ಹಾಗೂ ೯೪ಸಿ,೯೪ಸಿಸಿ ಅರ್ಜಿಗಳಿರುತ್ತವೆ ; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಕುಮ್ಕಿದಾರರಿಗೆ ಅವರದೇ ಹಕ್ಕಿನ ಕುಮ್ಕಿ ಜಮೀನು ಮಂಜೂರಾತಿ ಮಾಡಲು ಅವಕಾಶ ಇದೆಯೇ ;

(ಈ) ಕುಮ್ಕಿ ಜಮೀನು ಮಂಜೂರಾತಿ ಕುರಿತು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ೯೪ ಸಿ, ೯೪ ಸಿಸಿ ಅರ್ಜಿಗಳು

**ಶ್ರೀ ಸುನೀಲ್ ಕುಮಾರ್. ವಿ (ಕಾರ್ಕಳ) :–**

೨೦೩ (೩೫೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ ಸಲ್ಲಿಸಿರುವ ನಮೂನೆ–೯೪ ಸಿ ಹಾಗೂ ೯೪ ಸಿಸಿ ಅರ್ಜಿಗಳು ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಈ ಪೈಕಿ ಎಷ್ಟು ಅರ್ಜಿಗಳಿಗೆ ಮಂಜೂರಾತಿ ನೀಡಲಾಗಿದೆ ; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ತನಿಖೆಗೆ ಬಾಕಿ ಇರುವ ಹಾಗೂ ತಿರಸ್ಕೃತಗೊಂಡಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು)

(ಈ) ಮಂಜೂರಾತಿಗೆ ಬಾಕಿ ಇರುವ ಹಾಗೂ ವಿವಿಧ ಕಾರಣಗಳಿಗೆ ತಿರಸ್ಕೃತಗೊಂಡಿರುವ ಅರ್ಜಿಗಳನ್ನು ಮತ್ತೊಮ್ಮೆ ಮರು ತನಿಖೆ ನಡೆಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ?

## ದೇವಸ್ಥಾನಗಳ ಆದಾಯ

**ಶ್ರೀ ಸುನೀಲ್ ಕುಮಾರ್. ವಿ (ಕಾರ್ಕಳ) :–**

೨೦೪ (೩೫೩) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಿಂದ ರಾಜ್ಯದ ಎಲ್ಲಾ ದೇವಾಲಯಗಳಿಂದ ಸಂಗ್ರಹವಾದ ಮೊತ್ತ ಎಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ದೇವಾಲಯಗಳಿಂದ ಸಂಗ್ರಹವಾದ ಮೊತ್ತವನ್ನು ಯಾವ ನಿಯಮದಡಿ ಯಾವ ಯಾವ ಕಾರ್ಯಕ್ರಮಗಳಿಗೆ ಬಳಸಿಕೊಳ್ಳಲಾಗುತ್ತಿದೆ ;

(ಇ) ದೇವಾಲಯದಲ್ಲಿ ಸಂಗ್ರಹವಾದ ಆದಾಯವನ್ನು ಆಯಾ ದೇವಸ್ಥಾನಗಳನ್ನು ಹೊರತುಪಡಿಸಿ ಅನ್ಯ ಕಾರ್ಯಕ್ರಮಗಳಿಗೆ ಬಳಸಿಕೊಳ್ಳಲಾಗಿದೆಯೇ ; ಬಳಸಿಕೊಂಡಿದ್ದಲ್ಲಿ, ವಿವರ ಒದಗಿಸುವುದು ?

## ಅನುದಾನ

**ಶ್ರೀ ಸುನೀಲ್ ಕುಮಾರ್ ವಿ (ಕಾರ್ಕಳ) :–**

೨೦೫ (೩೫೪) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಿಂದ ರಾಜೀವ್‌ಗಾಂಧಿ ವಸತಿ ನಿಗಮದಿಂದ ವಿವಿಧ ವಸತಿ ಯೋಜನೆಗಳಿಂದ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಮಂಜೂರಾದ ಮನೆಗಳ ಪೈಕಿ ಎಷ್ಟು ಮನೆಗಳನ್ನು ಪೂರ್ಣಗೊಳಿಸಲಾಗಿದೆ ; ಮಂಜೂರಾಗಿ ಬಿಡುಗಡೆಗೊಂಡ ಅನುದಾವೆಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಮಂಜೂರಾದ ಎಲ್ಲಾ ಮನೆಗಳಿಗೆ ಸಕಾಲದಲ್ಲಿ ಅನುದಾನ ಬಿಡುಗಡೆ ಮಾಡಲಾಗುತ್ತಿದೆಯೆ ; ಅನುದಾನ ಬಿಡುಗಡೆ ವಿಳಂಬಕ್ಕೆ ಕಾರಣಗಳೇನು ?

## ಯೋಜನೆ

**ಶ್ರೀ ಸುನೀಲ್ ಕುಮಾರ್ ವಿ (ಕಾರ್ಕಳ) :–**

೨೦೬ (೩೫೫) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ಪಶುಭಾಗ್ಯ ಮುಖ್ಯಮಂತ್ರಿ ಅಮೃತ ಯೋಜನೆಯಡಿ ಯೋಜನೆ ಪಡೆದುಕೊಂಡ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರವನ್ನು ಒದಗಿಸುವುದು)

(ಆ) ಈ ಯೋಜನೆಗಳು ಸಮರ್ಪಕವಾಗಿ ಅನುಷ್ಠಾನಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಇ) ಬಂದಿದ್ದಲ್ಲಿ, ಈ ಯೋಜನೆಯ ಸಮರ್ಪಕ ಅನುಷ್ಠಾನಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಸಾರಿಗೆ ಡಿಪೋ ಸ್ಥಾಪನೆ

**ಶ್ರೀ ಸುಬ್ಬಾರೆಡ್ಡಿ ಎಸ್.ಎನ್ (ಬಾಗೇಪಲ್ಲಿ) :–**

೨೦೭ (೧೧೯) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಡಿಬಂಡೆ ತಾಲ್ಲೂಕು ಕೇಂದ್ರದಲ್ಲಿ ಸಾರಿಗೆ ಘಟಕ ಪ್ರಾರಂಭ ಮಾಡುವ ಪ್ರಸ್ತಾವನೆ ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಆ) ಘಟಕ ಸ್ಥಾಪನೆಗೆ ಬೇಕಾಗಿರುವ ಅನುದಾನವೆಷ್ಟು ?

## ಸಾಗುವಳಿ ಚೀಟಿ

**ಶ್ರೀ ಸುಬ್ಬಾರೆಡ್ಡಿ ಎಸ್.ಎನ್ (ಬಾಗೇಪಲ್ಲಿ) :–**

೨೦೮ (೧೨೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಮೂನೆ–೫೦, ೫೩ ರಲ್ಲಿ ಈಗಾಗಲೇ ನೀಡಿರುವ ಸಾಗುವಳಿ ಚೀಟಿಗಳಿಗೆ ಅರಣ್ಯ ಇಲಾಖೆಯ ನಿರಾಪೇಕ್ಷಣ ಪ್ರಮಾಣ ಪತ್ರ ಪಡೆದು ಖಾತೆ ಮಾಡಬೇಕೆಂಬ ಕಾನೂನು ಇದೆಯೇ ; (ವಿವರ ನೀಡುವುದು)

(ಆ) ನಮೂನೆ–೫೩ರಡಿಯಲ್ಲಿ ಹೊಸದಾಗಿ ಕಡತವನ್ನು ಸಮಿತಿ ಸಭೆಗೆ ಮಂಡಿಸಬೇಕಾದಲ್ಲಿ ಅರಣ್ಯ ಇಲಾಖೆಯ ನಿರಾಪೇಕ್ಷಣ ಪತ್ರ (NOC) ಪಡೆಯುವುದು ಕಡ್ಡಾಯವೇ ? (ವಿವರ ನೀಡುವುದು)

## ಪ್ರವಾಸಿ ಮಂದಿರ ನಿರ್ಮಾಣ

**ಶ್ರೀ ಸುಬ್ಬಾರೆಡ್ಡಿ ಎಸ್.ಎನ್ (ಬಾಗೇಪಲ್ಲಿ) :–**

೨೦೯ (೧೨೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಹೊಸದಾಗಿ ಪ್ರವಾಸಿ ಮಂದಿರ ನಿರ್ಮಾಣಕ್ಕೆ ಸರ್ಕಾರಕ್ಕೆ ಸಲ್ಲಿಕೆಯಾದ ಪ್ರಸ್ತಾವನೆಗಳೆಷ್ಟು ; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಪ್ರವಾಸಿ ಮಂದಿರ ನಿರ್ಮಾಣಕ್ಕೆ ಅನುಮೋದನೆ ನೀಡಲಾಗಿದೆ ; (ವಿವರ ನೀಡುವುದು)

(ಇ) ಬಾಕಿ ಇರುವ ಪ್ರಸ್ತಾವನೆಗಳಿಗೆ ಯಾವಾಗ ಅನುಮೋದನೆ ನೀಡಲಾಗುವುದು ?

## ಬೈಕ್ ಟ್ಯಾಕ್ಸಿಗಳಿಗೆ ನಿಯಮ ರೂಪಿಸುವುದು

**ಶ್ರೀ ಸುರೇಶ್ ಕುಮಾರ್ ಎಸ್. (ರಾಜಾಜಿನಗರ) :–**

೨೧೦ (೧೬೫) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೈಕ್ ಟ್ಯಾಕ್ಸಿಗಳಿಗೆ ನಿಯಮಗಳನ್ನು ರೂಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಬೈಕ್ ಟ್ಯಾಕ್ಸಿ ಸೇವೆಗಳ ನಿಷೇಧದಿಂದ ನಿರುದ್ಯೋಗಕ್ಕೆ ಸಿಲುಕಿರುವ ಯುವಕರನ್ನು ಪುನರ್‌ವಸತಿ ಮಾಡುವ ಯೋಜನೆ ಇದೆಯೇ ;

(ಇ) ಇತರ ರಾಜ್ಯಗಳಲ್ಲಿ ಬೈಕ್ ಟ್ಯಾಕ್ಸಿಗಳು ಇದ್ದಾಗ ರಾಜ್ಯದಲ್ಲಿ ಅವುಗಳನ್ನು ನಿಷೇಧಿಸಲು ಕಾರಣಗಳೇನು ;

(ಈ) ಆಟೋ ಮತ್ತು ಕ್ಯಾಬ್ ಚಾಲಕರಿಗಾಗಿ ಸರ್ಕಾರವು ಯೋಜಿಸಿರುವ ಕಲ್ಯಾಣ ಯೋಜನೆಗಳು ಯಾವುವು ?

## ರೇರಾ ಕಾಯ್ದೆ ಜಾರಿಗೊಳಿಸುವುದು

**ಶ್ರೀ ಸುರೇಶ್ ಕುಮಾರ್ ಎಸ್. (ರಾಜಾಜಿನಗರ) :–**

೨೧೧ (೧೬೬) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೇರಾ ಕಾಯ್ದೆ ರಾಜ್ಯದಲ್ಲಿ ಜಾರಿಗೆ ಬಂದಿದ್ದು ಯಾವಾಗ ; ಕಾಯ್ದೆಯ ಮೂಲ ಉದ್ದೇಶವೇನು ;

(ಆ) ಕಾಯ್ದೆ ಸಮರ್ಪಕವಾಗಿ ಜಾರಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕಾರಣಗಳೇನು ; ಕಾಯ್ದೆಯನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ರೇರಾ ಕಾಯ್ದೆಯಡಿ ಈವರೆಗೆ ಎಷ್ಟು ದೂರುಗಳು ದಾಖಲಾಗಿವೆ ; ಈ ದೂರುಗಳ ಪೈಕಿ ಎಷ್ಟು ದೂರುಗಳಿಗೆ ಪರಿಹಾರ ಒದಗಿಸಲಾಗಿದೆ ; ಬಾಕಿ ಇರುವ ದೂರುಗಳೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಈ) ಕಾಯ್ದೆ ಉಲ್ಲಂಘಿಸುವ ಬಿಲ್ಡರ್‌ಗಳಿಗೆ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ ಬಿಲ್ಡರ್‌ಗಳಿಗೆ ವಿಧಿಸಿರುವ ದಂಡದ ಮೊತ್ತ ಎಷ್ಟು ; ದಂಡದ ಮೊತ್ತ ಪೂರ್ಣ ಪ್ರಮಾಣದಲ್ಲಿ ವಸೂಲಿ ಆಗಿದೆಯೇ ;

(ಉ) ಬಿಲ್ಡರ್‌ಗಳಿಂದ ದಂಡದ ಮೊತ್ತವನ್ನು ಪೂರ್ಣ ಪ್ರಮಾಣದಲ್ಲಿ ವಸೂಲಿ ಮಾಡದಿರಲು ಕಾರಣಗಳೇನು ; ಬಾಕಿ ಇರುವ ದಂಡದ ಮೊತ್ತವನ್ನು ವಸೂಲಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸಹಾಯ ಧನ ನೀಡುವುದು

**ಶ್ರೀ ಸ್ವರೂಪ್ ಪ್ರಕಾಶ್ (ಹಾಸನ) :–**

೨೧೨ (೧೭೭) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೨–೨೩ನೇ ಸಾಲಿನಲ್ಲಿ ರಾಜೀವ್ ಗಾಂಧಿ ವಸತಿ ನಿಗಮದಿಂದ ನೆರೆ ಸಂತ್ರಸ್ತರ ಪುನರ್ವಸತಿಗೆ ಗ್ರಾಮೀಣ ಯೋಜನೆಯಡಿಯಲ್ಲಿ ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಆ) ಈ ಯೋಜನೆಯ ೧ನೇ, ೨ನೇ ಹಂತದವರೆಗೆ ಫಲಾನುಭವಿಗಳಿಗೆ ಸರ್ಕಾರದಿಂದ ಅನುದಾನವನ್ನು ಬಿಡುಗಡೆ ಮಾಡಲಾಗಿದ್ದು, ೩ನೇ ಹಂತದ ಫಲಾನುಭವಿಗಳಿಗೆ ಸರ್ಕಾರದ ಸಹಾಯ ಧನವನ್ನು ಬಿಡುಗಡೆ ಮಾಡದಿರಲು ಕಾರಣವೇನು ;

(ಇ) ಈ ಯೋಜನೆಯ ೩ನೇ ಹಂತದ ಸಹಾಯಧನಕ್ಕಾಗಿ ಉಳಿದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; ಈ ಸಹಾಯಧನಕ್ಕಾಗಿ ಆಯ್ಕೆಯಾಗಿ ಉಳಿದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಈ) ಹಾಗಿದ್ದಲ್ಲಿ, ಉಳಿದ ಫಲಾನುಭವಿಗಳಿಗೆ ಯಾವಾಗ ಸಹಾಯಧನ ಬಿಡುಗಡೆ ಮಾಡಲಾಗುವುದು ?

## ಆಡಳಿತ ಸೌಧ ನಿರ್ಮಾಣ

**ಶ್ರೀ ಹಂಪನಗೌಡ ಬಾದರ್ಲಿ (ಸಿಂಧನೂರು) :–**

೨೧೩ (೩೪೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ನೂತನವಾಗಿ ರಚನೆಯಾದ ತಾಲ್ಲೂಕುಗಳೆಷ್ಟು ; ರಚನೆಯಾದ ತಾಲ್ಲೂಕುಗಳಿಗೆ ಆಡಳಿತ ಸೌಧ ನಿರ್ಮಾಣ ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಯಾವ ಯಾವ ನೂತನ ತಾಲ್ಲೂಕುಗಳಿಗೆ ಆಡಳಿತ ಸೌಧ ಮಂಜೂರು ಮಾಡಲಾಗಿದೆ ; (ವಿವರ ನೀಡುವುದು)

(ಆ) ನೂತನ ತಾಲ್ಲೂಕುಗಳಿಗೆ ಎಷ್ಟು ಆಡಳಿತ ಸೌಧ ನಿರ್ಮಾಣ ಮಾಡಲಾಗಿದೆ ; ಉಳಿದ ತಾಲ್ಲೂಕುಗಳಿಗೆ ಯಾವಾಗ ಆಡಳಿತ ಸೌಧ ಕಟ್ಟಡ ನಿರ್ಮಾಣ ಮಾಡಲಾಗುವುದು ; (ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ರಾಯಚೂರು ಜಿಲ್ಲೆ ಸಿಂಧನೂರು ನಗರದಲ್ಲಿ ಆಡಳಿತ ಸೌಧ ನಿರ್ಮಾಣ ಮಾಡುವ ಪ್ರಕ್ರಿಯೆ ಸರ್ಕಾರದ ಗಮನದಲ್ಲಿದೆಯೇ ;

(ಈ) ಕಳೆದ ೩ ವರ್ಷಗಳಿಂದ ಇಲ್ಲಿಯವರೆಗೆ ವಿವಿಧ ಲೆಕ್ಕ ಶೀರ್ಷಿಕೆಯಡಿ ಮಂಜೂರಾಗಿರುವ ಒಟ್ಟು ಅನುದಾನವೆಷ್ಟು ; ಸದರಿ ಅನುದಾನದಲ್ಲಿ ಬಳಕೆಯಾಗಿರುವ ಹಾಗೂ ಉಳಿದಿರುವ ಅನುದಾನವೆಷ್ಟು ; ಪ್ರಗತಿಯಲ್ಲಿರುವ ಹಾಗೂ ಪೂರ್ಣಗೊಂಡಿರುವ ಕಾಮಗಾರಿಗಳೆಷ್ಟು ;

(ಉ) ಪ್ರತಿ ತಾಲ್ಲೂಕುಗಳಲ್ಲಿ ಹೊಸದಾಗಿ ಹೊಸ ಕಂದಾಯ ಗ್ರಾಮಗಳನ್ನು ರಚಿಸಿದ್ದು, ಸದರಿ ಗ್ರಾಮಗಳ ವಿಸ್ತರಣೆ ಮತ್ತು ಹೊಸದಾಗಿ ರಚಿಸಿರುವ ಕಂದಾಯ ಗ್ರಾಮಗಳೆಷ್ಟು ;

(ಊ) ಉಳಿದ ಕಂದಾಯ ಗ್ರಾಮಗಳನ್ನು ರಚನೆ ಮಾಡುವ ಪ್ರಸ್ತಾವನೆ ಸರ್ಕಾರದ ಯಾವ ಹಂತದಲ್ಲಿದೆ ? (ವಿವರ ನೀಡುವುದು)

## ಹೊಸದಾಗಿ ಕಟ್ಟಡ ನಿರ್ಮಾಣ

**ಶ್ರೀ ಹರೀಶ್ ಗೌಡ ಕೆ. (ಚಾಮರಾಜ) :–**

೨೧೪ (೧೫೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ನಗರದ ಸರಸ್ವತಿಪುರಂ ಅಗ್ನಿಶಾಮಕ ಠಾಣೆ ಮತ್ತು ಆವರಣದಲ್ಲಿರುವ ಕಟ್ಟಡಗಳು ಭಾಗಶಃ ಕುಸಿದಿದ್ದು ಇನ್ನುಳಿದ ಭಾಗವು ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸರ್ಕಾರ ಚಾಮರಾಜ ಮತ ಕ್ಷೇತ್ರದ ಸರಸ್ವತಿಪುರಂ ಅಗ್ನಿಶಾಮಕ ಠಾಣೆಯನ್ನು ಕೆಡವಿ ಹೊಸದಾಗಿ ಅಗ್ನಿಶಾಮಕ ಠಾಣೆ ಹಾಗೂ ಅವರಣದಲ್ಲಿ ಅಧಿಕಾರಿಗಳಿಗೆ, ಸಿಬ್ಬಂದಿಗಳಿಗೆ ವಸತಿ ಗೃಹ ನಿರ್ಮಾಣ ಮಾಡಲು ರೂ.೩೦.೦೦ ಕೋಟಿಗಳ ಅನುದಾನ ಮಂಜೂರು ಮಾಡುವ ಬಗ್ಗೆ ಸರ್ಕಾರದ ಕ್ರಮವೇನು ?

## ಅನುದಾನ ಬಿಡುಗಡೆ

**ಶ್ರೀ ಹರೀಶ್ ಗೌಡ ಕೆ. (ಚಾಮರಾಜ) :–**

೨೧೫ (೧೫೪) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ನಗರದ ಚಾಮರಾಜ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ದೇವಸ್ಥಾನಗಳ ಅಭಿವೃದ್ಧಿಗಾಗಿ ಸರ್ಕಾರಕ್ಕೆ ಪ್ರಸ್ತಾವನೆಗಳು ಸಲ್ಲಿಕೆಯಾಗಿವೆಯೇ ; ಇವುಗಳಿಗೆ ಸರ್ಕಾರ ಯಾವಾಗ ಅನುದಾನ ಬಿಡುಗಡೆ ಮಾಡಲಾಗುವುದು ;

(ಆ) ಈ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಮುಜರಾಯಿ ಇಲಾಖೆಯ ದೇವಸ್ಥಾನಗಳು ಯಾವುವು ; ಅಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಚಕರು ಯಾರು ; ಅವರಿಗೆ ಸರ್ಕಾರವು ನೀಡುತ್ತಿರುವ ವೇತನ ಎಷ್ಟು ? (ವಿವರ ನೀಡುವುದು)

## ಶಾಸಕರು ಮತ್ತು ಸಂಸದರ ಭವನ ನಿರ್ಮಾಣ

**ಶ್ರೀ ಹರೀಶ್ ಗೌಡ ಕೆ. (ಚಾಮರಾಜ) :–**

೨೧೬ (೧೫೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ನಗರದಲ್ಲಿ ಶಾಸಕರು ಹಾಗೂ ಸಂಸದರ ಭವನ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಮೈಸೂರಿನಲ್ಲಿ ಶಾಸಕರು ಹಾಗೂ ಸಂಸದರ ಕಛೇರಿಗಳ ಕೊರತೆ ಇರುವುದರಿಂದ ಸರ್ಕಾರಿ ಗೆಸ್ಟ್ ಹೌಸ್ ಹಿಂಭಾಗದ ಖಾಲಿ ನಿವೇಶನದಲ್ಲಿ ಹೊಸದಾಗಿ ಶಾಸಕರು ಹಾಗೂ ಸಂಸದರು ಭವನ ನಿರ್ಮಾಣ ಮಾಡಲು ಸರ್ಕಾರಕ್ಕೆ ಸಲ್ಲಿಸಲಾಗಿರುವ ಪ್ರಸ್ತಾವನೆಯ

ರೂ.೧೫.೦೦ ಕೋಟಿಗಳ ಅನುದಾನ ಮಂಜೂರು ಮಾಡುವ ಬಗ್ಗೆ ಸರ್ಕಾರದ ಕ್ರಮವೇನು ?

## ಆಶ್ರಯ ಯೋಜನೆ

**ಶ್ರೀ ಹರೀಶ್ ಪೂಂಜ (ಬೆಳ್ತಂಗಡಿ) :-**

೨೧೭ (೪೦೫) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩-೨೪, ೨೦೨೪-೨೫, ೨೦೨೫-೨೬ನೇ ಸಾಲಿನಲ್ಲಿ ರಾಜ್ಯದಲ್ಲಿ ಮಂಜೂರು ಮಾಡಿರುವ ಹೊಸ ಮನೆಗಳ ಸಂಖ್ಯೆ ಎಷ್ಟು ; (ವಿಧಾನಸಭಾ ಕ್ಷೇತ್ರವಾರು ಮಾಹಿತಿ ಒದಗಿಸುವುದು)

(ಆ) ಬೆಳ್ತಂಗಡಿ ಕ್ಷೇತ್ರದಲ್ಲಿ ವಸತಿ ರಹಿತರು ಹೆಚ್ಚು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಜನ ವಸತಿ ರಹಿತರಿದ್ದಾರೆ ; (ಗ್ರಾಮ ಪಂಚಾಯಿತಿವಾರು ಮತ್ತು ವರ್ಗಾವಾರು ಮಾಹಿತಿ ನೀಡುವುದು)

(ಈ) ಬೆಳ್ತಂಗಡಿ ವಿಧಾನಸಭಾ ಕ್ಷೇತ್ರದ ವಸತಿ ರಹಿತರಿಗೆ ವಿವಿಧ ಆಶ್ರಯ ಯೋಜನೆಗಳಡಿ ಮನೆ ಮಂಜೂರು ಮಾಡುವ ಉದ್ದೇಶ ಸರ್ಕಾರಕ್ಕಿದೆಯೇ ;

(ಉ) ಇದ್ದಲ್ಲಿ ಪ್ರಸಕ್ತ ಸಾಲಿನಲ್ಲಿ ಎಷ್ಟು ಮನೆಗಳನ್ನು ಯಾವ ಕಾಲಮಿತಿಯಲ್ಲಿ ಮಂಜೂರು ಮಾಡಲಾಗುವುದು ; ಈ ಬಗ್ಗೆ ಯಾವಾಗ ಕ್ರಮ ಕೈಗೊಳ್ಳಲಾಗುವುದು ? (ವಿವರ ನೀಡುವುದು)

## ಕುಮ್ಕಿ ರೈಟ್ಸ್ ಪರಭಾರೆ

**ಶ್ರೀ ಹರೀಶ್ ಪೂಂಜ (ಬೆಳ್ತಂಗಡಿ) :–**

೨೧೮ (೪೦೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಕುಮ್ಕಿ ರೈಟ್ಸ್ ಪರಭಾರೆ ಮಾಡಿದ ನಂತರ ಅದರ ಮುಂದಿನ ವಾರಸುದಾರರಿಗೆ ಕುಮ್ಕಿ ರೈಟ್ಸ್‌ನಲ್ಲಿರುವ ಮಾನದಂಡಗಳೇನು ;

(ಆ) ಕುಮ್ಕಿ ಜಮೀನನ್ನು ಫಲಾನುಭವಿಗಳಿಗೆ ಪರಭಾರೆ ಮಾಡಿದ ನಂತರ ಅದರ ಮುಂದಿನ ವಾರಸುದಾರರಿಗೆ ಹಕ್ಕು ಇದೆಯೇ ;

(ಇ) ಹಕ್ಕು ಇಲ್ಲದಿದ್ದರೆ ಇದರಿಂದ ರೈತರಿಗೆ ಆಗುವ ತೊಂದರೆ ಸರ್ಕಾರದ ಗಮನದಲ್ಲಿದೆಯೇ ;

(ಈ) ಹಾಗಿದ್ದಲ್ಲಿ ರೈತರಿಗೆ ತೊಂದರೆಯಾಗದ ರೀತಿಯಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ದೇವಸ್ಥಾನದ ಜೀರ್ಣೋದ್ಧಾರ

**ಶ್ರೀ ಹರೀಶ್ ಪೂಂಜ (ಬೆಳ್ತಂಗಡಿ) :–**

೨೧೯ (೪೦೭) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪, ೨೦೨೪–೨೫, ೨೦೨೫–೨೬ನೇ ಸಾಲಿನಲ್ಲಿ ರಾಜ್ಯದಲ್ಲಿರುವ ಮುಜರಾಯಿ ಇಲಾಖೆಯಿಂದ ದೇವಸ್ಥಾನಗಳ ಜೀರ್ಣೋದ್ಧಾರಕ್ಕಾಗಿ ಬಿಡುಗಡೆಯಾಗಿರುವ ಅನುದಾನ ಎಷ್ಟು; (ವಿಧಾನಸಭಾ ಕ್ಷೇತ್ರವಾರು ಹಾಗೂ ಎಲ್ಲಾ ದೇವಾಲಯಗಳ ವಿವರ ಒದಗಿಸುವುದು)

(ಆ) ೨೦೨೩–೨೪, ೨೦೨೪–೨೫, ೨೦೨೫–೨೬ನೇ ಸಾಲಿನಲ್ಲಿ ಬೆಳ್ತಂಗಡಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಎಷ್ಟು ದೇವಾಲಯಗಳಿಗೆ ಅನುದಾನ ಬಿಡುಗಡೆಗೊಳಿಸಲಾಗಿದೆ ; (ಮಾಹಿತಿ ಒದಗಿಸುವುದು)

(ಇ) ಯಾವ ಯಾವ ದೇವಸ್ಥಾನಗಳಿಗೆ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಹೊಸ ಹೋಬಳಿ ಪ್ರಸ್ತಾವ

**ಶ್ರೀ ಹರೀಶ್ ಪೂಂಜ (ಬೆಳ್ತಂಗಡಿ) :–**

೨೨೦ (೪೦೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳ್ತಂಗಡಿ ತಾಲ್ಲೂಕಿನಲ್ಲಿ ಕಣಿಯೂರು ಹೊಸ ಹೋಬಳಿ ರಚನೆ ಪ್ರಸ್ತಾವವು ಸರ್ಕಾರದ ಗಮನದಲ್ಲಿದೆಯೇ ;

(ಆ) ಇದರಿಂದಾಗಿ ಈ ಭಾಗದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಮಾಹಿತಿ ಒದಗಿಸುವುದು)

(ಇ) ಕಣಿಯೂರು ಹೊಸ ಹೋಬಳಿ ರಚನೆಗೆ ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ? (ಕ್ರಮಗಳ ಕುರಿತು ಸಂಪೂರ್ಣ ವಿವರ ಒದಗಿಸುವುದು)

## ಅರ್ಜಿಗಳು

**ಶ್ರೀ ಹರೀಶ್ ಪೂಂಜ (ಬೆಳ್ತಂಗಡಿ) :–**

೨೨೧ (೪೦೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩-೨೪, ೨೦೨೪-೨೫ ಹಾಗೂ ೨೦೨೫-೨೬ನೇ ಸಾಲಿನಲ್ಲಿ ಬೆಳ್ತಂಗಡಿ ತಾಲ್ಲೂಕು ಕಛೇರಿಯಲ್ಲಿ ಎಲ್ಲಾ ವಿಭಾಗಗಳಲ್ಲಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಈ ಅರ್ಜಿಗಳಲ್ಲಿ ಎಷ್ಟು ಅರ್ಜಿಗಳನ್ನು ಪೂರ್ಣಗೊಳಿಸಲಾಗಿದೆ; ಬಾಕಿ ಇರುವ ಅರ್ಜಿಗಳನ್ನು ಪೂರ್ಣಗೊಳಿಸದೇ ಇರಲು ಕಾರಣವೇನು ; (ಅರ್ಜಿವಾರು ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಹಾಗಿದ್ದಲ್ಲಿ, ಬಾಕಿ ಇರುವ ಅರ್ಜಿಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ರಾಜ್ಯ ಹೆದ್ದಾರಿ ಅನ್ನು ಮೇಲ್ದರ್ಜೆಗೇರಿಸುವುದು

**ಶ್ರೀ ಹರೀಶ್ ಬಿ.ಪಿ (ಹರಿಹರ) :-**

೨೨೨ (೪೦೦) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಹೆದ್ದಾರಿ-೨೫ ಅನ್ನು ಮೇಲ್ದರ್ಜೆಗೇರಿಸಿ ರಾಷ್ಟ್ರೀಯ ಹೆದ್ದಾರಿಯನ್ನಾಗಿಸುವ ಯೋಜನೆಯು ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ರಾಜ್ಯ ಹೆದ್ದಾರಿ-೨೫ ಅನ್ನು NH ಆಗಿ ಮೇಲ್ದರ್ಜೆಗೇರಿಸುವಲ್ಲಿ ರಾಜ್ಯ ಸರ್ಕಾರ ಇದುವರೆಗೂ ಕೈಗೊಂಡ ಕ್ರಮಗಳೇನು;

(ಇ) ಕೇಂದ್ರ ರಸ್ತೆ ಸಾರಿಗೆ ಮತ್ತು ಮಂತ್ರಾಲಯ, ಸದರಿ ವಿಷಯದ ಕುರಿತು ಯಾವ ಸೂಚನೆಗಳನ್ನು ನೀಡಿದೆ ;

(ಈ) ಸದರಿ ಹೆದ್ದಾರಿಯುನ್ನು ಮೇಲ್ದರ್ಜೆಗೇರಿಸಿ NH ಆಗಿ ಪರಿವರ್ತಿಸಲು ಕೇಂದ್ರ ಸರ್ಕಾರವು PM-Gatishat Portal ನಲ್ಲಿ ಈ ಹೆದ್ದಾರಿಯ ಪ್ರಾಮುಖ್ಯತೆಯನ್ನು Upload ಮಾಡಲು ನಿರ್ದೇಶಿಸಿದೆಯೇ ;

(ಉ) ಹಾಗಿದ್ದಲ್ಲಿ, ರಾಜ್ಯ ಸರ್ಕಾರದ ಲೋಕೋಪಯೋಗಿ ಇಲಾಖೆಯು ಇದುವರೆಗೆ ಕೈಗೊಂಡ ಕ್ರಮಗಳೇನು ಹಾಗೂ ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ? (ವಿವರ ನೀಡುವುದು)

## KIADB ವಶಪಡಿಸಿಕೊಂಡ ಜಮೀನು

**ಶ್ರೀ ಹರೀಶ್ ಬಿ.ಪಿ (ಹರಿಹರ) :–**

೨೨೩ (೪೦೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಾವಣಗೆರೆ ಜಿಲ್ಲೆ ಹರಿಹರ ತಾಲ್ಲೂಕು ಚಿಕ್ಕಬಿದರಿ ಗ್ರಾಮದ ಸರ್ವೆ ನಂಬರ್ ೩೦ ಹಾಗೂ ೬೭ರಲ್ಲಿ ಒಟ್ಟು ೯ ಎಕ್ಕರೆ ೩೮ ಗುಂಟೆ ಜಮೀನನ್ನು KIADB ವತಿಯಿಂದ ಸ್ವಾಧೀನಪಡಿಸಿಕೊಂಡು SS-Biofertilizers ರವರಿಗೆ ಹಸ್ತಾಂತರಿಸುವ ಯೋಜನೆ ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ಸದರಿ ಸರ್ವೆ ನಂಬರ್ ನಲ್ಲಿನ ಅಧಿಸೂಚಿಸಲಾದ ಜಮೀನಿನಲ್ಲಿ ಪ್ರಸ್ತುತ ಉಳುಮೆ ಮಾಡುತ್ತಿರುವ ರೈತರು ಆಕ್ಷೇಪಣೆ ವ್ಯಕ್ತಪಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಇದುವರೆಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; ಸದರಿ ಅಧಿಸೂಚಿತ ಜಮೀನನ್ನು ಉದ್ದೇಶಿತ ಯೋಜನೆಗೆ ಬಳಕೆ

ಮಾಡದಿದ್ದಲ್ಲಿ ಅಧಿಸೂಚನೆಯನ್ನು ರದ್ದುಪಡಿಸಿ, ಸರ್ಕಾರಿ ಜಮೀನನ್ನು ಮರಳಿ ಕಂದಾಯ ಇಲಾಖೆಗೆ ಪಡೆಯದಿರಲು ಕಾರಣವೇನು ? (ವಿವರ ನೀಡುವುದು)

## ಮುಚ್ಚಲಾಗಿರುವ ಹಳ್ಳವನ್ನು ತೆರವುಗೊಳಿಸುವುದು

**ಶ್ರೀ ಹರೀಶ್ ಬಿ.ಪಿ (ಹರಿಹರ) :–**

೨೨೪ (೪೦೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹರಿಹರ ತಾಲ್ಲೂಕಿನ ಕಸಬಾ ಹೋಬಳಿ ಚಿಕ್ಕಬಿದರಿ ಗ್ರಾಮದ ಸರ್ವೆ ನಂಬರ್ ೧೫,೧೪,೧೩ ಹಾಗೂ ೧೨ ಕ್ಕೆ ಹೊಂದಿಕೊಂಡಿರುವ ಹಳ್ಳವನ್ನು ಸಂಪೂರ್ಣವಾಗಿ ಮುಚ್ಚಿರುವುದರ ಕುರಿತು ದಿನಾಂಕ ೨೧/೦೪/೨೦೨೫ ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಯವರಿಗೆ ಮನವಿ ಪತ್ರ ಸಲ್ಲಿಸಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಮನವಿ ಪತ್ರ ಸಲ್ಲಿಸಿದ್ದರೂ ಇದುವರೆಗೆ ತಹಶೀಲ್ದಾರರು ಸದರಿ ಹಳ್ಳ ನೈಜತೆಯನ್ನು ಮರುಸ್ಥಾಪಿಸಲು ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣವೇನು ;

(ಇ) ಸದರಿ ವಿಷಯದ ಕುರಿತು ಕ್ರಮ ಕೈಗೊಳ್ಳದ ತಹಶೀಲ್ದಾರರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗುವುದು ;

(ಈ) ಈ ಕುರಿತು ೨೧/೦೪/೨೦೨೫ ರಂದು ಸಲ್ಲಿಸಿದ ಮನವಿ ಪತ್ರದ ಅನುಸಾರ ಸರ್ಕಾರ ಸಾರ್ವಜನಿಕರ ಆಸ್ತಿಗಳನ್ನು ಸಂರಕ್ಷಿಸುವ ಉದ್ದೇಶದಿಂದ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ದೇವಸ್ಥಾನಗಳು

**ಶ್ರೀ ಹರೀಶ್ ಬಿ.ಪಿ (ಹರಿಹರ) :–**

೨೨೫ (೪೦೩) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಾವಣಗೆರೆ ಜಿಲ್ಲೆಯಲ್ಲಿರುವ ಮುಜರಾಯಿ ಇಲಾಖೆಗೆ ಸೇರಿದ ದೇವಸ್ಥಾನಗಳ ಸಂಖ್ಯೆ ಎಷ್ಟು ; ಅವು ಯಾವುವು ; (ವಿಧಾನಸಭಾ ಕ್ಷೇತ್ರವಾರು, ಗ್ರಾಮವಾರು ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ಎರಡು ವರ್ಷಗಳಲ್ಲಿ ಜಿಲ್ಲೆಯಲ್ಲಿನ ಮುಜರಾಯಿ ದೇವಸ್ಥಾನಗಳಿಗೆ ಜೀರ್ಣೋದ್ಧಾರ/ಅಭಿವೃದ್ಧಿ ಕಾಮಗಾರಿಗಳಿಗೆ ಮಂಜೂರಾದ ಅನುದಾನ ಎಷ್ಟು ಹಾಗೂ ಬಳಕೆಯಾಗದೇ ಉಳಿದಿರುವ ಅನುದಾನ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಜಿಲ್ಲೆಯ ಎಲ್ಲಾ ವಿಧಾನಸಭೆ ಕ್ಷೇತ್ರಗಳಲ್ಲಿ ದೇವಸ್ಥಾನಗಳ ಅಭಿವೃದ್ಧಿಗೆ ಶಾಸಕರ ಅನುದಾನ, ಸರ್ಕಾರದ ವಿವಿಧ ಇಲಾಖೆಗಳಿಂದ, ವಿವಿಧ ನಿಗಮಗಳಿಂದ ಅಭಿವೃದ್ಧಿ ಕಾಮಗಾರಿಗಳಿಗೆ ಮಂಜೂರಾಗಿರುವ ಅನುದಾನ ಎಷ್ಟು ;

(ಈ) ಹಾಗಿದ್ದಲ್ಲಿ, ಯಾವ ಯಾವ ಕ್ಷೇತ್ರ ದೇವಸ್ಥಾನಗಳಿಗೆ ಮಂಜೂರು ಮಾಡಲಾಗಿದೆ ? (ವಿವರ ನೀಡುವುದು)

## ವಿದ್ಯಾರ್ಥಿಗಳಿಗೆ ವಿಶೇಷ ಬಸ್ಸು

**ಶ್ರೀ ಹರೀಶ್ ಬಿ.ಪಿ (ಹರಿಹರ) :–**

೨೨೬ (೪೦೪) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹರಿಹರ ನಗರದಿಂದ–ದಾವಣಗೆರೆಗೆ ಪ್ರತಿದಿನ ಬೆಳಗ್ಗೆ ಹಾಗೂ ಸಂಜೆ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಪ್ರಯಾಣಿಸಲು ಬಸ್ಸುಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ ಸದರಿ ನಗರಗಳ ನಡುವೆ Peak Hours ಗಳಲ್ಲಿ ಪ್ರಯಾಣಿಸಲು ಬಸ್ಸುಗಳ ಕೊರತೆಯಿಂದಾಗಿ ವಿದ್ಯಾರ್ಥಿಗಳಿಗೆ ಶಾಲಾ ಕಾಲೇಜುಗಳಿಗೆ ಹೋಗಲು ತೊಂದರೆಯಾಗುತ್ತಿದ್ದು ಕೂಡಲೇ ಕ್ರಮ ಕೈಗೊಳ್ಳಲು ಸರ್ಕಾರ ಯಾವ ಯೋಜನೆ ರೂಪಿಸಿದೆ ;

(ಇ) ವಿದ್ಯಾರ್ಥಿಗಳಿಗಾಗಿ ವಿಶೇಷ ಬಸ್ಸುಗಳನ್ನು ವ್ಯವಸ್ಥೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಹರಿಹರ–ಮಲೆಬೆನ್ನೂರು–ದಾವಣಗೆರೆ ಮಾರ್ಗದಲ್ಲಿಯೂ ಸಹ ಬೆಳಗ್ಗೆ ಮತ್ತು ಸಂಜೆ ವಿದ್ಯಾರ್ಥಿಗಳು ಶಾಲಾ–ಕಾಲೇಜುಗಳಿಗೆ ಹೋಗಲು ಬಸ್ಸುಗಳಿಲ್ಲದೆ ಕಷ್ಟಪಡುತ್ತಿರುವುದನ್ನು ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಹೆದ್ದಾರಿಗಳ ಅಗಲೀಕರಣ ಹಾಗೂ ಅಭಿವೃದ್ಧಿ

**ಶ್ರೀ ಹ್ಯಾರಿಸ್ ಎನ್.ಎ (ಶಾಂತಿನಗರ) :–**

೨೨೭ (೩೫೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಹೆದ್ದಾರಿಗಳ ಅಗಲೀಕರಣ ಮತ್ತು ಅಭಿವೃದ್ಧಿ ಕುರಿತು ಸರ್ಕಾರದ ಹೆದ್ದಾರಿ ಸುಧಾರಣಾ ಯೋಜನೆ–೦೪ (ಕೆಶಿಪ್) ಅಡಿ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಯೋಜಿತ ಯೋಜನಾನುಷ್ಠಾನಗೊಳಿಸಲಾಗುವುದು ; ಈ ಕುರಿತು ಜನಪ್ರಿಯ ಸರ್ಕಾರದ ಕ್ರಮಗಳು ಯಾವುವು ;

(ಇ) ಹೆದ್ದಾರಿಗಳ ಅಭಿವೃದ್ಧಿ ಯೋಜನಾನುಷ್ಠಾನಗಳನ್ನು ಈಗಾಗಲೇ ಜಾರಿಗೊಳಿಸಿರುವ ಹಾಗೂ ಅಭಿವೃದ್ಧಿಗೊಳಿಸಲಿರುವ ಜಿಲ್ಲೆಗಳು ಯಾವುವು ; (ವಿವರ ನೀಡುವುದು)

(ಈ) ಸರ್ಕಾರ ಹೆದ್ದಾರಿಗಳ ಸುಧಾರಣೆಗೆ ಕೈಗೊಂಡ ಕ್ರಮಗಳು ರಾಜ್ಯದ ಅಭಿವೃದ್ಧಿಗೆ ಪೂರಕವಾಗಿದ್ದು ಅಗತ್ಯತೆ ಇರುವಲ್ಲಿನ ರಾಜ್ಯ ಹೆದ್ದಾರಿಗಳನ್ನು ಗುರುತಿಸಿ ಅವುಗಳ ಅಗಲೀಕರಣ ಮತ್ತು ಅಭಿವೃದ್ಧಿಗೆ ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಯೋಜನೆಗಳನ್ನು ರೂಪಿಸುವ ಮೂಲಕ ಹೆದ್ದಾರಿಗಳ ಸುವ್ಯವಸ್ಥಿತ ಸಂಚಾರಕ್ಕೆ ಅನುಕೂಲ ಮಾಡಿಕೊಡುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ?

## ಕಾರ್ಗೋ ಸೇವೆ

**ಶ್ರೀ ಹ್ಯಾರಿಸ್ ಎನ್.ಎ (ಶಾಂತಿನಗರ) :–**

೨೨೮ (೩೫೭) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರಿಗೆ ನಿಗಮಗಳ ವ್ಯಾಪ್ತಿಯಲ್ಲಿ ಕಾರ್ಗೋ ಸೇವೆಯನ್ನು ಯಾವ ರೀತಿ ಒದಗಿಸಿಕೊಡಲಾಗುತ್ತಿದೆ ; ಈ ಕುರಿತು ಪ್ರಗತಿಪರ ಕಾರ್ಯಗಳು ಯಾವುವು ; (ವಿವರ ನೀಡುವುದು)

(ಆ) ಈ ನಿಗಮಗಳಿಗೆ ಆರ್ಥಿಕ ಚೇತನ ನೀಡುವಲ್ಲಿ ಈ ಯೋಜನೆಯ ಉಪಯುಕ್ತತೆ ಮತ್ತು ಸಾರ್ವಜನಿಕರಿಗೂ ಇಲಾಖೆಯ ಈ ಸುವ್ಯವಸ್ಥೆಯ ಸೌಲಭ್ಯಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಒದಗಿಸಿಕೊಡುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ; ಪ್ರಗತಿ ಕಾರ್ಯಗಳು ಯಾವುವು ; (ವಿವರ ನೀಡುವುದು)

(ಇ) ಕಾರ್ಗೋ ಸೇವೆ ನೀಡಿಕೆ ಮೂಲಕ ಸಂಸ್ಥೆಗೆ ಆದಾಯ ಗಳಿಸಿಕೊಳ್ಳುವ ಸುಲಭ ಸಾಧ್ಯ ಯೋಜನೆಯ ಉಪಯುಕ್ತತೆ ಮತ್ತು ಕಾರ್ಗೋ ಸೇವೆಯ ರೀತಿ ನೀತಿಗಳಿಂದ ಸಾರ್ವಜನಿಕರಿಗೆ

ಹೆಚ್ಚಿನ ಸುಲಭ, ಸಾಧ್ಯ, ಸೌಲಭ್ಯ, ಸೌಕರ್ಯಗಳನ್ನು ಒದಗಿಸಿಕೊಡುವ ದಿಶೆಯಲ್ಲಿ ಸರ್ಕಾರದ ಕ್ರಮಗಳೇನು ?

## ಯೋಜನೆಗಳ ಅನುಷ್ಠಾನ

**ಶ್ರೀ ಹ್ಯಾರಿಸ್ ಎನ್.ಎ (ಶಾಂತಿನಗರ) :–**

೨೨೯ (೩೫೮) ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಅಭಿವೃದ್ಧಿಗಾಗಿ ರೂಪಿಸುವ ಯೋಜನೆಗಳಿಗಾಗಿ ಸರ್ಕಾರವು ಒದಗಿಸಿಕೊಟ್ಟ ವಾರ್ಷಿಕ ಅನುದಾನವೆಷ್ಟು ಅದರಲ್ಲಿನ ಅನುದಾನದ ಉಳಿಕೆ ಅಥವಾ ಕೊರತೆಯ ಕುರಿತದ ವಿವರ ನೀಡುವುದು ;

(ಆ) ಅಲ್ಪಸಂಖ್ಯಾತರ ಅಭಿವೃದ್ಧಿ ಕುರಿತಾದ ವಿವಿಧ ಯೋಜನಾನುಷ್ಠಾನಗಳಿಗೆ ಮಾಡಿದ ವೆಚ್ಚವೆಷ್ಟು ; (ಜಿಲ್ಲಾವಾರು ಫಲಾನುಭವಿಗಳ ಸಂಖ್ಯಾ ವಿವರ ನೀಡುವುದು)

(ಇ) ಫಲಾನುಭವಿಗಳಿಗೆ ಸರ್ಕಾರದ ಸೌಲಭ್ಯಗಳ ಕುರಿತು ಅರಿವು ನೀಡುವಲ್ಲಿನ ಕ್ರಮಗಳೇನು ;

(ಈ) ಅಲ್ಪಸಂಖ್ಯಾತರ ಶೈಕ್ಷಣಿಕ ಅಭಿವೃದ್ಧಿ ಮತ್ತು ಅವರುಗಳಿಗೆ ಹೆಚ್ಚಿನ ಪ್ರಮಾಣದಲ್ಲಿ ಶೈಕ್ಷಣಿಕ ಅಗತ್ಯತೆಯ ಕುರಿತು ಅರಿವು ಮೂಡಿಸುವ ಹಾಗೂ ಬಡ ವಿದ್ಯಾರ್ಥಿಗಳಿಗೆ ಯೋಜನಾ ಸೌಲಭ್ಯಗಳನ್ನು ತಲುಪಿಸುವ ಕುರಿತಾದ ಸರ್ಕಾರದ ಪರಿಣಾಮಕಾರಿ ಕ್ರಮಗಳೇನು ;

(ಉ) ಕಳೆದ ಮೂರು ವರ್ಷಗಳಲ್ಲಿ ಉನ್ನತ ಶಿಕ್ಷಣ ಮತ್ತು ವಿದೇಶಗಳಲ್ಲೂ ಶೈಕ್ಷಣಿಕ ಸೌಲಭ್ಯವನ್ನು ಎಷ್ಟು ಜನ ಫಲಾನುಭವಿಗಳಿಗೆ ಒದಗಿಸಿಕೊಡಲಾಗಿದೆ ?

# ನಗರ ಸಾರಿಗೆ ಸೌಲಭ್ಯ

**ಶ್ರೀ ಹ್ಯಾರಿಸ್ ಎನ್.ಎ (ಶಾಂತಿನಗರ) :–**

೨೩೦ (೩೫೯) ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಬಿಎಂಟಿಸಿ ಇಂದ ಅನುಷ್ಠಾನಗೊಳಿಸಿರುವ ಸಾರಿಗೆ ಸೌಲಭ್ಯಗಳು ಯಾವುವು ;

(ಆ) ಪ್ರಯಾಣಿಕರ ಸಂಖ್ಯಾ ಹೆಚ್ಚಳ ಮತ್ತು ನಗರ ಸಾರಿಗೆಯನ್ನು ಜನಪ್ರಿಯಗೊಳಿಸುವಲ್ಲಿ ಸರ್ಕಾರದ ಕ್ರಮಗಳೇನು ;

(ಇ) ವಿದ್ಯುತ್ ಚಾಲಿತ ಬಸ್‌ಗಳ ಸಂಖ್ಯೆಯನ್ನು ಹೆಚ್ಚಿಸಲು ಮತ್ತು ಇನ್ನಷ್ಟು ಜನಪ್ರಿಯ ಮತ್ತು ಜನೋಪಯೋಗಿ ವ್ಯವಸ್ಥೆಗಾಗಿ ಮಹಾನಗರ ಸಾರಿಗೆಯನ್ನು ಸುವ್ಯವಸ್ಥಿತಗೊಳಿಸುವ ಕುರಿತು ಸರ್ಕಾರದ ಪ್ರಶಂಶನೀಯ ಸೌಲಭ್ಯಾನುಷ್ಠಾನಗಳು ಯಾವುವು ;

(ಈ) ಬಿಎಂಟಿಸಿ ವ್ಯಾಪ್ತಿಯಲ್ಲಿ ಕೊರತೆ ಇರುವ ಸಿಬ್ಬಂದಿ ವರ್ಗಗಳನ್ನು ಭರ್ತಿಗೊಳಿಸುವ ಮೂಲಕ ಉದ್ಯೋಗಾವಕಾಶ ನೀಡಿಕೆ ಮತ್ತು ಉತ್ತಮ ಸಾರಿಗೆ ಸುವ್ಯವಸ್ಥೆ ಸಾರ್ವಜನಿಕರಿಗೆ ಒದಗಿಸಿಕೊಡುವಲ್ಲಿನ ಸರ್ಕಾರದ ಅನುಕರಣೀಯ ಕ್ರಮಗಳೇನು ? (ವಿವರ ನೀಡುವುದು)

**ಎಂ.ಕೆ. ವಿಶಾಲಾಕ್ಷಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಸಭೆ

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O 50/800 ಪ್ರತಿಗಳು/01–08–2025